ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 22, ಸಂಚಿಕೆ: 85, ಪುಟಗಳು: 8, ಶನಿವಾರ, 4 ಜನವರಿ 2025 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3


ನೇಣು ಸಾರಥ್ಯದಲ್ಲಿ...




### ಸುಭಾಷಿತ

ಭೂತಕಾಲವನ್ನು ಬದಿಗಿಡಿ, ಭವಿಷ್ಯಕ್ಕಾಗಿ ಬದುಕಿ. ಆಯಸ್ಸಿರುವುದು ಮಡಿಯಲೇ ಹೊರತು ಚಿಂತಿಸುವುದಕ್ಕಲ್ಲ.

### ಪಂಚಾಂಗ

(ಶನಿವಾರ 4, ಜನವರಿ-2025)

- ಸಂವತ್ಸರ: ಕ್ರೋಧಿನಾಮ
- ಋತು: ಹೇಮಂತ, ಅಯನ: ದಕ್ಷಿಣಾಯನ
- ಮಾಸ: ಪುಷ್ಯ, ಪಕ್ಷ: ಶುಕ್ಲ
- ತಿಥಿ: ಪಂಚಮಿ, ನಕ್ಷತ್ರ: ಶತಭಿಷಾ
- ರಾಹುಕಾಲ: 09:33 - 10:59
- ಗುಳಿಕಕಾಲ: 06:42 - 08:08
- ಯಮಗಂಡಕಾಲ: 01:50 - 03:15

## ಸಂಕ್ಷಿಪ್ತ ಸುದ್ದಿ

### ಹೈಸ್ಕೂಲ್ ವಿದ್ಯಾರ್ಥಿಗಳು ಚಲಾಯಿಸುತ್ತಿದ್ದ ಕಾರು ಅಪಘಾತ ಇಬ್ಬರ ಸಾವು



**ಗದಗ:** ಹೈಸ್ಕೂಲ್ ವಿದ್ಯಾರ್ಥಿಗಳು ಚಲಾಯಿಸುತ್ತಿದ್ದ ಕಾರು ಅಪಘಾತವಾಗಿ ಇಬ್ಬರು ವಿದ್ಯಾರ್ಥಿಗಳು ಸಾವಿಗೀಡಾಗಿದ್ದು, ಮತ್ತಿಬ್ಬರು ಗಾಯಗೊಂಡಿದ್ದಾರೆ. ಗದಗ ತಾಲೂಕಿನ ಹುಲಕೋಟಿ ರೂರಲ್ ಇಂಜಿನಿಯರಿಂಗ್ ಕಾಲೇಜ್ ಬಳಿ ಘಟನೆ ನಡೆದಿದೆ. ವೇಗವಾಗಿ ಬಂದ ಕಾರು, ರಸ್ತೆ ಪಕ್ಕದ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದಿದೆ. ಮಹಮ್ಮದ್ ಮುಜಾವರ್ (16), ಸಂಜೀವ್ ಗಿರಡ್ಡಿ (16) ಮೃತಪಟ್ಟಿದ್ದಾರೆ. ಆಶಿಸ್ ಗುಂಡುರ್ (16) ಸೇರಿದಂತೆ ಮತ್ತೋರ್ವ ವಿದ್ಯಾರ್ಥಿಗೆ ಗಂಭೀರ ಗಾಯಗಳಾಗಿವೆ. ಹುಲಕೋಟಿ ರಾಜೇಶ್ವರಿ ವಿದ್ಯಾನಿಕೇತನ ಶಾಲೆಯಲ್ಲಿ ವಿದ್ಯಾರ್ಥಿಗಳು 10ನೇ ತರಗತಿ ವ್ಯಾಸಂಗ ಮಾಡುತ್ತಿದ್ದರು. ಪುಟ 2

» **ಮತ್ತಿಬ್ಬರಿಗೆ ಗಾಯ**

### ಲೇಖಕ ಪ್ರೊ. ಮುಜಾಫರ್ ಅಸ್ಸಾದಿ ನಿಧನ



**ಬೆಂಗಳೂರು:** ಚಿಂತಕ, ಲೇಖಕ ಪ್ರೊ. ಮುಜಾಫರ್ ಅಸ್ಸಾದಿ (63) ಅವರು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಶನಿವಾರ ನಿಧನರಾದರು. ಮೃತರ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಮೈಸೂರಿನ ಸರಸ್ವತಿಪುರಂನ ಮುಸ್ಲಿಂ ವಿದ್ಯಾರ್ಥಿನಿಲಯದಲ್ಲಿ ವ್ಯವಸ್ಥೆ ಮಾಡಲಾಗಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಅಸ್ಸಾದಿ ಅವರ ನಿಧನಕ್ಕೆ ಸಿಎಂ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ. ಮೈಸೂರು ವಿಶ್ವವಿದ್ಯಾಲಯದಲ್ಲಿ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕರಾಗಿ, ಮುಖ್ಯಸ್ಥರಾಗಿ ಅಸ್ಸಾದಿ ಅವರು ಸೇವೆ ಸಲ್ಲಿಸಿದ್ದರು. ಪುಟ 2

» **ಸಿಎಂ ಸಿದ್ದರಾಮಯ್ಯ ಸಂತಾಪ**

# ಪ್ರಜ್ವಲ್‌ಗೆ ಸಂಕಷ್ಟ; ಟ್ರಯಲ್ ಪ್ರಾರಂಭಿಸಲು ಮುಂದಾದ ಎಸ್‌ಐಟಿ!

**ಬೆಂಗಳೂರು:** ಲೈಂಗಿಕ ದೌರ್ಜನ್ಯ ಆರೋಪದ ಮೇಲೆ ಜೈಲು ಸೇರಿರುವ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಮತ್ತೊಂದು ಶಾಕ್ ಎದುರಾಗಿದೆ. ಆರೋಪಿ ಪ್ರಜ್ವಲ್ ರೇವಣ್ಣ ವಿರುದ್ಧ ಟ್ರಯಲ್ ಪ್ರಾರಂಭಿಸಲು ಎಸ್‌ಐಟಿ ಮುಂದಾಗಿದೆ ಎಂದು ತಿಳಿದುಬಂದಿದ್ದು, ಜಾಮೀನು ಸಿಗದೇ ಜೈಲಿನಲ್ಲಿ ಇರೋ ಪ್ರಜ್ವಲ್‌ಗೆ ಸಂಕಷ್ಟ ಶುರುವಾಗಿದೆ.

ಎಸ್‌ಐಟಿ ತಂಡ ಇಂದು ಪ್ರಜ್ವಲ್ ರೇವಣ್ಣ ವಿರುದ್ಧ ಚಾರ್ಜ್ ಫ್ರೇಮ್ ಮಾಡಲಿದ್ದು, ಟ್ರಯಲ್ ಪ್ರಾರಂಭಿಸಲು ಮುಂದಾದಗಿದೆ. ಆರು ತಿಂಗಳ ಹಿಂದೆ ಬಂಧನವಾಗಿದ್ದ ಪ್ರಜ್ವಲ್ ರೇವಣ್ಣ ಅಂದಿನಿಂದ ಜೈಲಿನಲ್ಲಿ ಇದ್ದಾರೆ.

**ನ್ಯಾಯಾಲಯದ ಮುಂದೆ ಹಾಜರು:** ಜಾಮೀನು ಅರ್ಜಿ ಸುಪ್ರೀಂ ಕೋರ್ಟ್‌ನಲ್ಲಿ ವಜಾ ಆಗಿದ್ದು, ಇಂದು ಚಾರ್ಜ್ ಫ್ರೇಮ್ ಮಾಡಿ ಟ್ರಯಲ್ ಪ್ರಾರಂಭ ಆಗಲಿದೆ. ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ಪ್ರಜ್ವಲ್ ರೇವಣ್ಣ ಅವರನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಯಲದ ಮುಂದೆ ಹಾಜರುಪಡಿಸಲಿದ್ದಾರೆ. ನ್ಯಾಯಾಲಯದ ಮುಂದೆ ಹಾಜರುಪಡಿಸಿ ದೋಷಾರೋಪ ಪಟ್ಟಿಯ ಮೇಲೆ ಟ್ರಯಲ್ ಪ್ರಾರಂಭವಾಗಲಿದ್ದು, ಜಾಮೀನು ಸಿಗುವ ಮುನ್ನ ಟ್ರಯಲ್ ಪಾರಂಭಿಸಲು ಎಸ್‌ಐಟಿ ಸಿದ್ಧತೆ ನಡೆಸಿದೆ.



**ಪ್ರಭಾವಿ ಎಂದು ಜಾಮೀನು ಅರ್ಜಿ ವಜಾ:** ಅತ್ಯಾಚಾರ ಪ್ರಕರಣದಲ್ಲಿ ನ್ಯಾಯಾಂಗ ಬಂಧನದಲ್ಲಿರುವ ಪ್ರಜ್ವಲ್ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿತ್ತು. ಪ್ರಜ್ವಲ್ ಪರ ಹಿರಿಯ ವಕೀಲ ಮುಕುಲ್ ರೋಹಟ್ಗಿ ವಾದ ಮಂಡಿಸಿದರು. ಚುನಾವಣೆಗೆ ಆರೋಪಿ ಸ್ಪರ್ಧೆ ಮಾಡಿದ್ದು, ಈ ವೇಳೆ ಆರೋಪ ಮಾಡಲಾಗಿದೆ. ಡ್ಯಾಮೇಜ್ ಮಾಡಲು ಆರೋಪ ಮಾಡಲಾಗಿದೆ. ಹಾಗಾಗಿ ಜಾಮೀನು ನೀಡುವಂತೆ ರೋಹಟ್ಗಿ ವಾದ ಮಂಡಿಸಿದರು. ಆದರೆ ಸುಪ್ರೀಂ ಕೋರ್ಟ್ ಮಾತ್ರ, ಆರೋಪಿ ಪ್ರಭಾವಿಯಾಗಿದ್ದಾನೆ ಎಂದು ಜಾಮೀನು ಅರ್ಜಿ ವಜಾಗೊಳಿಸಿತು. 6 ತಿಂಗಳ ನಂತರ ಮತ್ತೆ ಜಾಮೀನು ಸಲ್ಲಿಸಬಹುದೇ..? ಎಂದು ರೋಹ್ಟಗಿ ಪ್ರಶ್ನೆ ಮಾಡಿದರು. ಅದಕ್ಕೆ ಸುಪ್ರೀಂ, ಇದಕ್ಕೆ ನಾವೇನು ಹೇಳುವುದಿಲ್ಲ ಎಂದು ಹೇಳಿದೆ.

**ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂ ಮೆಟ್ಟಲೇರಿದ್ದ ಪ್ರಜ್ವಲ್!:** ಕಳೆದ ಅಕ್ಟೋಬರ್ 21ರಂದು ಪ್ರಜ್ವಲ್ ರೇವಣ್ಣ ಪರ ವಕೀಲರು ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿತ್ತು. ಕರ್ನಾಟಕ ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಪುಟ 2

## 60 ಕೋಟಿ ರೂ. ಮೌಲ್ಯದ ಸೈಟ್ ಕೇವಲ 2 ಕೋಟಿಗೆ ಮಾರಾಟ!

# ಬಿಡಿಎ ಅಕ್ರಮದ ತನಿಖೆಗೆ ಆಗ್ರಹ

**ಬೆಂಗಳೂರು:** ಬೆಂಗಳೂರಿನ ಜಯನಗರದ ಎಂಟನೇ ಬ್ಲಾಕ್ ನಲ್ಲಿರುವ ಸುಮಾರು 60 ಕೋಟಿ ರೂಪಾಯಿ ಮೌಲ್ಯದ ಸಿಎ (ಸಿವಿಕ್ ಅಮೆನಿಟಿ) ಸೈಟ್ ಅನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕೇವಲ 2 ಕೋಟಿ ರೂಪಾಯಿಗೆ ಮಾರಾಟ ಮಾಡಿರುವ ಬಗ್ಗೆ ವರದಿಯಾಗಿದೆ. ಇದೀಗ ಈ ವಿಚಾರವಾಗಿ ಸಂಸದ ತೇಜಸ್ವಿ ಸೂರ್ಯ ಬಿಡಿಎಯನ್ನು ತರಾಟೆಗೆ ತೆಗೆದುಕೊಂಡಿದ್ದು, ಇದೊಂಥರ ಹಗಲು ದರೋಡೆ ಎಂದು ಟೀಕಿಸಿದ್ದಾರೆ.

ಅಕ್ರಮದ ಬಗ್ಗೆ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಸಂದೇಶ ಪ್ರಕಟಿಸಿ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿರುವ ಅವರು, ಜಯನಗರದ ಪ್ರಮುಖ ಸೈಟ್ ಒಂದನ್ನು ತೀರಾ ಕಡಿಮೆ ಬೆಲೆಗೆ ಬಿಡಿಎ ಮಾರಾಟ ಮಾಡಿರುವ ಬಗ್ಗೆ ಡೆಕ್ಕನ್ ಹೆರಾಲ್ಡ್ ಪತ್ರಿಕೆ ವರದಿ ಮಾಡಿದೆ. ಜಯನಗರ 8ನೇ ಬ್ಲಾಕ್‌ನಲ್ಲಿರುವ ಈ 8,000 ಚದರ ಅಡಿ ಕಾರ್ನರ್ ಪ್ಲಾಟ್ ಅನ್ನು ಮೂಲತಃ ನಮ್ಮ ಸಮುದಾಯದ ಆರೋಗ್ಯ ಅಗತ್ಯಗಳನ್ನು ಪೂರೈಸುವ ನರ್ಸಿಂಗ್ ಹೋಮ್‌ಗಾಗಿ ಮಂಜೂರು ಮಾಡಲಾಗಿತ್ತು ಎಂದು ಹೇಳಿದ್ದಾರೆ.




45 ವರ್ಷಗಳ ಕಾಲ, ಅಂದರೆ 1973 ರಿಂದ 2018 ರವರೆಗೆ, ಬಿಡಿಎ ಇದನ್ನು ಸಿಎ ಸೈಟ್ ಎಂದು ಕಾಯ್ದುಕೊಂಡು ಬಂದಿತ್ತು. ಅಲ್ಲದೆ, ಆ ಸೈಟ್ ಅನ್ನು ಖಾಸಗಿ ಆಸ್ತಿಯಾಗಿ ಕನ್ವರ್ಟ್ ಮಾಡುವ ಪ್ರಯತ್ನಗಳನ್ನೂ ತಿರಸ್ಕರಿಸಿತ್ತು. ನಂತರ ಇದ್ದಕ್ಕಿದ್ದಂತೆ 2018 ರಲ್ಲಿ, ಬಿಡಿಎ ಯುಟರ್ನ್ ತೆಗೆದುಕೊಂಡು ಅದನ್ನು ಸಿಎ ಸೈಟ್ ಅಲ್ಲ ಎಂದು ಘೋಷಿಸಿತ್ತು ಎಂದು ತೇಜಸ್ವಿ ಸೂರ್ಯ ಹೇಳಿದ್ದಾರೆ.

ಈ ಸೈಟ್ ಮೌಲ್ಯ ಮಾರುಕಟ್ಟೆಯಲ್ಲಿ 60 ಕೋಟಿ ರೂ.ಗಳಾಗಿವೆ. ಖುದ್ದು ಸರ್ಕಾರದ ಮಾರ್ಗದರ್ಶನ ಪ್ರಕಾರ, ಅತಿ ಕಡಿಮೆ ಬೆಲೆಗೆ



ಮಾರಾಟ ಮಾಡಿದರೂ ಇದರ ಮೌಲ್ಯವು 23.2 ಕೋಟಿ ರೂ. ಆಗಿದೆ. ಬಿಡಿಎ ಅದನ್ನು ಕೇವಲ 2 ಕೋಟಿ ರೂ.ಗಳಿಗೆ ಮಾರಾಟ ಮಾಡಿದೆ. ಅಂದರೆ ಮಾರುಕಟ್ಟೆ ಮೌಲ್ಯದ ಕೇವಲ ಶೇ 10 ರಷ್ಟು ಮೌಲ್ಯ ಇದಾಗಿದೆ. ಇದು ಸಾರ್ವಜನಿಕ ಭೂಮಿ ಮತ್ತು ಸಮುದಾಯದ ಸಂಪನ್ಮೂಲಗಳ ಹಗಲು ದರೋಡೆಗೆ ಕಡಿಮೆಯಲ್ಲ ಎಂದು ಸೂರ್ಯ ಕಿಡಿ ಕಾರಿದ್ದಾರೆ. ಪುಟ 2

## ಯೋಗೀಶ್‌ಗೌಡರನ್ನು ಕೊಲೆ ಮಾಡಸಿದ್ದೇ ವಿನಯ್ ಕುಲಕರ್ಣಿ

# ಆರೋಪಿ ಮುತ್ತಗಿ ಹೇಳಿಕೆ

**ಧಾರವಾಡ:** ಧಾರವಾಡ ಜಿಲ್ಲಾ ಪಂಚಾಯತ್ ಸದಸ್ಯ, ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಕರ್ನಾಟಕದಲ್ಲಿ ತೀವ್ರ ಸಂಚಲನ ಉಂಟು ಮಾಡಿತ್ತು. ಯೋಗೀಶ್ ಗೌಡನನ್ನು ಕೊಲೆ ಮಾಡಿಸಿದ್ದೇ ಶಾಸಕ ವಿನಯ್ ಕುಲಕರ್ಣಿ ಎಂದು ಪ್ರಕರಣದ ಪ್ರಮುಖ ಆರೋಪಿ ಬಸವರಾಜ ಮುತ್ತಗಿ ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ತಪ್ಪೊಪ್ಪಿಕೊಂಡಿದ್ದಾನೆ. ಆಪ್ತನೂ ಆಗಿರುವ ಬಸವರಾಜ ಮುತ್ತಗಿ ತಪ್ಪೊಪ್ಪಿಗೆ ಹೇಳಿಕೆಯಿಂದ ಶಾಸಕ ವಿನಯ್ ಕುಲಕರ್ಣಿ ಮೇಲಿನ ಕಾನೂನು ಕುಣಿಕೆ ಮತ್ತಷ್ಟು ಬಿಗಿಯಾಗಿದೆ.



ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ನೀಡಿರುವ ತಪ್ಪೊಪ್ಪಿಗೆ ಹೇಳಿಕೆಯಲ್ಲಿ ವಿನಯ್ ಕುಲಕರ್ಣಿ ಪಾತ್ರದ ಕುರಿತು ಬಸವರಾಜ ಮುತ್ತಗಿ ವಿಸ್ತೃತವಾಗಿ ಮಾಹಿತಿ ನೀಡಿದ್ದಾರೆ. ಯೋಗೇಶ್ ಗೌಡ ಹತ್ಯೆಗೆ ಧಾರವಾಡದ ಯುವಕರು ಒಪ್ಪಿಗೆ ಸೂಚಿಸಲಿಲ್ಲ. ಪುಟ 2



# ಹೊಸ ವರ್ಷದಂದು ಉಳಿದಿದ್ದ ಕೇಕ್ ತಿಂದು ಮಕ್ಕಳು ಅಸ್ವಸ್ಥ

**ಮೈಸೂರು:** ಕೇಕ್ ತಿಂದು 30 ಕ್ಕೂ ಹೆಚ್ಚು ಮಕ್ಕಳು ಅಸ್ವಸ್ಥವಾದ ಘಟನೆ ಮೈಸೂರು ಜಿಲ್ಲೆಯ ಹುಣಸೂರಿನ ಬೋಳನಹಳ್ಳಿಯ ಶ್ರೀ ಮಂಜುನಾಥ ವಿದ್ಯಾಸಂಸ್ಥೆಯಲ್ಲಿ ನಡೆದಿದೆ.

ಹೊಸ ವರ್ಷದ ದಿನದಂದು ಕೇಕ್ ಕಟ್ ಮಾಡಿ ಉಳಿದಿದ್ದ ಕೇಕ್ ಅನ್ನು ಎರಡು ದಿನದ ನಂತರ ಮಕ್ಕಳು ತಿಂದಿದ್ದಾರೆಂದು ಹೇಳಲಾಗಿದೆ. ಕೇಕ್ ಸೇವಿಸಿದ ನಂತರ ಮಕ್ಕಳಲ್ಲಿ ವಾಂತಿ ಭೇದಿ ಕಾಣಿಸಿಕೊಂಡಿದ್ದು, ಬೋಳನಹಳ್ಳಿಯ ಆಯುಷ್ಮಾನ್ ಆರೋಗ್ಯ ಕೇಂದ್ರಕ್ಕೆ ಮಕ್ಕಳನ್ನು ದಾಖಲಿಸಲಾಗಿದೆ.

ಚಿಕಿತ್ಸೆ ನಂತರ ವಿದ್ಯಾರ್ಥಿಗಳು ಚೇತರಿಸಿಕೊಂಡಿದ್ದಾರೆ. ಕೇಕ್ ತಿಂದು ಅಸ್ವಸ್ಥರಾಗಿದ್ದ ಮಕ್ಕಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ.



ಆಸ್ಪತ್ರೆಗೆ ಭೇಟಿ ನೀಡಿ ಮಕ್ಕಳ ಆರೋಗ್ಯದ ಬಗ್ಗೆ ಮಾಹಿತಿ ಪಡೆದ ಕ್ಷೇತ್ರ ಶಿಕ್ಷಣಾಧಿಕಾರಿ ಮಹದೇವ್, ನಿರ್ಲಕ್ಷ್ಯತೆ ವಹಿಸಿದ ಶಾಲಾ ಮುಖ್ಯೋಪಾಧ್ಯಾಯ ಅಶ್ವತ್ಥ್‌ರಿಗೆ ಕ್ಲಾಸ್ ತೆಗೆದುಕೊಂಡಿದ್ದಾರೆ.

## ಜೆಡಿಎಸ್ ಮುಖಂಡನ ಭೀಕರ ಹತ್ಯೆ



**ಚಿಕ್ಕಬಳ್ಳಾಪುರ:** ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿಯವರ ಅಪ್ಪಟ ಅಭಿಮಾನಿ ಹಾಗೂ ಜೆಡಿಎಸ್ ಮುಖಂಡನನ್ನು ರಸ್ತೆ ಮಧ್ಯದಲ್ಲೆ ಲಾಂಗ್ ನಿಂದ ಕೊಚ್ಚಿ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಚಿಕ್ಕಬಳ್ಳಾಪುರದ ತಮ್ಮನಾಯಕನಹಳ್ಳಿ ಗ್ರಾಮದ ಬಳಿ ನಡೆದಿದೆ.

ಹತ್ಯೆಗೊಳಗಾದ ವ್ಯಕ್ತಿಯನ್ನು ಗ್ರಾಮದ ವೆಂಕಟೇಶ್ ಅಲಿಯಾಸ್ ಗೋಲ್ಡ್ ವೆಂಕಟೇಶ್ (50) ಎಂದು ಗುರುತಿಸಲಾಗಿದೆ. ಎಂದಿನಂತೆ ವೆಂಕಟೇಶ್ ರಾತ್ರಿ 9 ಗಂಟೆ ಸುಮಾರಿಗೆ ತಮ್ಮನಾಯಕನಹಳ್ಳಿ ಗೇಟ್ ನಲ್ಲಿರುವ ಮೆಡಿಕಲ್ ಸ್ಟೋರ್‌ನಿಂದ ಮನೆಗೆ ತೆರಳುತ್ತಿದ್ದರು. ಪುಟ 2

## ಬೀಡಿ ಉದ್ಯಮಿ ಮನೆಗೆ ನಕಲಿ ಇಡಿ ಅಧಿಕಾರಿಗಳ ರೇಡ್! ಬರೋಬ್ಬರಿ 30 ಲಕ್ಷ ದೋಚಿ ಪರಾರಿ!



**ಪುತ್ತೂರು:** ನಕಲಿ ಪೊಲೀಸ್ ಅಧಿಕಾರಿಗಳ ಹೆಸರಲ್ಲಿ ವಂಚನೆ ಮಾಡಿರುವ ಪ್ರಕರಣಗಳ ಬಗ್ಗೆ ಕೇಳಿರುತ್ತೀರಿ, ಆದರೆ ಇದೀಗ ದರೋಡೆಕೋರರು ಜಾರಿ ನಿರ್ದೇಶನಾಲಯ ಅಧಿಕಾರಿಗಳ ಸೋಗಿನಲ್ಲಿ ಬಂದು ಬರೋಬ್ಬರಿ 30 ಲಕ್ಷ ರೂ. ಲೂಟಿ ಮಾಡಿರುವ ಘಟನೆ ದ.ಕ ಜಿಲ್ಲೆಯ ಬಂಟ್ವಾಳ ತಾಲೂಕಿನ ಬೋಳಂತೂರು ಸಮೀಪದ ನಾರ್ಶ ಎಂಬಲ್ಲಿ ನಡೆದಿದೆ. ಪುಟ 2

## ಆಕ್ಸ್‌ಫರ್ಡ್ ಇಂಟರ್ ನ್ಯಾಷನಲ್ ಪಬ್ಲಿಕ್ ಶಾಲೆಯ ರಾಕ್ಷಸೀ ಕೃತ್ಯ

# ದಂಡಿಸುವ ನೆಪದಲ್ಲಿ ಹೆಣ್ಣು ಮಗುವಿಗೆ ಹಲ್ಲೆ

**ಚನ್ನಪಟ್ಟಣ:** ಶಿಕ್ಷಣ ಕ್ಷೇತ್ರ ಅಕ್ಷರಶಃ ಗಬ್ಬೆದ್ದು ಹೋಗಿದೆ. ಮಕ್ಕಳ ಪಾಲಿಗೆ ಮಾರ್ಗದರ್ಶಕರಾಗಿರಬೇಕಾದ ಶಿಕ್ಷಕರು, ಬೆದರು ಗೊಂಬೆಗಳಾಗುತ್ತಿದ್ದಾರೆ. ದಂಡಿಸುವ ನೆಪದಲ್ಲಿ ಗೂಂಡಾಗಳಂತೆ ವರ್ತಿಸುತ್ತಿದ್ದಾರೆ. ಮಕ್ಕಳು ಶಾಲೆ ಎಂದರೇನೆ ಬೆಚ್ಚಿಬೀಳುವಂತಹ ವಾತಾವರಣ ನಿರ್ಮಾಣವಾಗುತ್ತಿವೆ. ಮಕ್ಕಳೆನ್ನುವುದನ್ನೂ ನೋಡದೆ ರಕ್ಕಸರಂತೆ ದೈಹಿಕವಾಗಿ ಹಲ್ಲೆ ನಡೆಸುತ್ತಿದ್ದಾರೆ. ಕೋಮಲವಾದ ಮನಸ್ಸುಗಳಲ್ಲಿ ಭಯ ಮನೆ ಮಾಡಿದೆ. ಈ ಬಗ್ಗೆ ಪ್ರಶ್ನಿಸಿದರೆ ಶಿಕ್ಷಕರು ಧಿಮಾಕಿನ ಉತ್ತರ ನೀಡುತ್ತಿರುವುದು ನಿಜಕ್ಕೂ ದುರಂತ.

ಚನ್ನಪಟ್ಟಣದ ಯಲಚೀಪಾಳ್ಯದ ಆಕ್ಸ್‌ಫರ್ಡ್ ಇಂಟರ್‌ನ್ಯಾಷನಲ್ ಪಬ್ಲಿಕ್ ಶಾಲೆ ಮಕ್ಕಳ ಪಾಲಿಗೆ ನರಕ







ಸದೃಶವಾಗಿದೆ. 7ನೇ ತರಗತಿ ಓದುತ್ತಿರುವ ಹೆಣ್ಣು ಮಗು ಶಾಲೆಯಲ್ಲಿ ತೀಟೆ ಮಾಡಿದೆ ಎಂಬ ಸಣ್ಣ ಕಾರಣಕ್ಕೆ ಆ ಮಗುವಿನ ಕೈ ಊದಿಕೊಳ್ಳುವಂತೆ ಹೊಡೆಯುವ ಮೂಲಕ ಶಿಕ್ಷಕಿ ಅಖಿಲಾ ರಾಕ್ಷಸೀ ಕೃತ್ಯ ಎಸಗಿಸಿದ್ದಾರೆ.

ಈ ಶಾಲೆಯ ಅಡ್ಮಿನ್ ಸಿದ್ದರಾಜು ಎಂಬಾತ ಮಕ್ಕಳನ್ನು ದಂಡಿಸುವಂತೆ ಶಿಕ್ಷಕಿಗೆ ಫರ್ಮಾನು ಹೊರಡಿಸಿದ್ದಾನೆ. ಆತ ಹೇಳಿದ್ದೇ ತಡ ಎಂದು ಶಿಕ್ಷಕಿ ಅಖಿಲಾ ಮನಸೋಯಿಚ್ಛೆ ಥಳಿಸಿದ್ದಾರೆ.

ಈ ಬಗ್ಗೆ ಪೋಷಕರು ಪ್ರಶ್ನಿಸಿದರೆ ಅಡ್ಮಿನ್ ಸಿದ್ದರಾಜು ಸಮಾಧಾನದಿಂದ ಉತ್ತರಿಸುವುದು ಬಿಟ್ಟು ದುರಹಂಕಾರದ ಮಾತುಗಳನ್ನಾಡಿದ್ದಾರೆ. ಕಾನೂನಿನಲ್ಲಿ ಮಕ್ಕಳಿಗೆ ಹೊಡೆಯುವ ಅಧಿಕಾರ ಕೊಟ್ಟೋರು ಯಾರು? ಈ ಬಗ್ಗೆ ಕೇಳಿದರೆ 'ಹೌದು ಹೊಡಿತೀವಿ. ಏನೀಗ? ಏನು ಮಾಡ್ಕೋತೀರಿ' ಎಂಬಂತೆ ಉದಾಸೀನ ಧೋರಣೆಯಲ್ಲಿ ಉತ್ತರಿಸಿದ್ದಾರೆ. ತಮ್ಮ ಮನೆಯಲ್ಲೂ ಮಕ್ಕಳಿದ್ದಾರೆ ಅನ್ನೋದು ಮರೆತು ಹೀಗೆ ದುಂಡಾವರ್ತನೆ ತೋರುವುದು ಎಷ್ಟು ಸರಿ? ಶಿಕ್ಷಕರು ಮಕ್ಕಳನ್ನು ದಂಡಿಸಲಿ; ಆದರೆ ಈ ಪರಿಯ ರಾಕ್ಷಸೀ ಕೃತ್ಯ ಅಕ್ಷಮ್ಯ.

ಸೀಮೆಗಿಲ್ಲದ ಖಾಸಗಿ ಶಾಲೆ ಎಂಬಂತೆ ಫೋಸು ಕೊಡುತ್ತಿರುವ ಈ ತಾಲೂಕಿನ ಕೆಲವು ಶಾಲೆಗಳು ಮನಸೋಯಿಚ್ಛೆ ಡೊನೇಷನ್ ಪೀಕುವುದಷ್ಟೇ ಅಲ್ಲ; ಚನ್ನಪಟ್ಟಣ ಬಿಇಓ, ರಾಮನಗರ ಜಿಲ್ಲಾ ಡಿಡಿಪಿಐ ಅವರನ್ನು ಬುಟ್ಟಿಗೆ ಹಾಕಿಕೊಂಡು ತಮ್ಮದೇ ರಾಜ್ಯವೆಂಬಂತೆ ವರ್ತಿಸುತ್ತಿದ್ದಾರೆಂಬ ಆರೋಪ ಕೇಳಿಬರುತ್ತಿದೆ. ಬಿಇಓ, ಡಿಡಿಪಿಐಗೆ ಈ ತಾಲೂಕಿನ ಖಾಸಗಿ ಶಾಲೆಯ ಮೇಲೆ ಯಾವುದೇ ಲಂಗು ಲಗಾಮಿಲ್ಲದಂತಾಗಿದೆ.


GENERAL HOSPITAL CHANNAPATNA
J C ROAD NEAR INDIRA CANTEEN
CHANNAPATNA TOWN

OPD NO: 450 | OUT PATIENT ORDER DATE: 3/1/2025

ಹೆಣ್ಣು ಮಗುವಿನ ಪೋಷಕರು ಚನ್ನಪಟ್ಟಣ ಸರ್ಕಾರಿ ಆಸ್ಪತ್ರೆಯಲ್ಲಿ ಮೆಡಿಕಲ್ ರಿಪೋರ್ಟ್ ಪಡೆದುಕೊಂಡಿದ್ದು ಶಾಲೆಯ ವಿರುದ್ಧ ಕ್ರಮಕ್ಕೆ ಆಗ್ರಹಿಸಿದ್ದಾರೆ. ಕೂಡಲೇ ಡಿಡಿಪಿಐ, ಬಿಇಓ, ಶಿಕ್ಷಣ ಇಲಾಖೆ ಆಯುಕ್ತರು ಈ ಬಗ್ಗೆ ಗಮನಹರಿಸಿ ಶಾಲೆಯ ಆಡಳಿತ ಮಂಡಳಿಗೆ ಕಾನೂನು ಪಾಲನೆಯ ಅರಿವು ಮೂಡಿಸಬೇಕಿದೆ. ಅಷ್ಟೇ ಅಲ್ಲ; ಇವರ ವಿರುದ್ಧ ಕಠಿಣ ಕ್ರಮಕ್ಕೆ ಮುಂದಾಗಬೇಕಿದೆ.

# ಗ್ಯಾರಂಟಿಯಿಂದಾಗಿ ದರ ಹೆಚ್ಚಳ ಆರೋಪ ಸುಳ್ಳು

**ಕೊಪ್ಪಳ:** ಕಳ್ಳತನ ಮಾಡಿ ಹಣ ಕೊಡೋಕೆ ಆಗುತ್ತಾ, ಗ್ಯಾರಂಟಿ ಯೋಜನೆಗಳಿಂದಾಗಿ ಟಿಕೆಟ್ ದರ ಹೆಚ್ಚಳ ಆರೋಪ ಸುಳ್ಳು ಎಂದು ಸಚಿವ ಎನ್.ಎಸ್ ಬೋಸರಾಜು ವಾಗ್ದಾಳಿ ನಡೆಸಿದ್ದಾರೆ.



ಕೊಪ್ಪಳ ತಾಲೂಕಿನ ನಾರಾಯಣಪೇಟೆ ಜಾಕವೆಲ್‌ಗೆ ಕೆರೆ ತುಂಬಿಸುವ ಯೋಜನೆಯ ಕಾಮಗಾರಿ ವೀಕ್ಷಣೆ ಮಾಡಿದರು. ಈ ಯೋಜನೆ ಕೊಪ್ಪಳ ತಾಲೂಕಿನ 3, ಯಲಬುರ್ಗಾ ತಾಲೂಕಿನ 10 ಕೆರೆಗಳನ್ನು ತುಂಬಿಸುತ್ತದೆ. ಈ ಕುರಿತು ಅಧಿಕಾರಿಗಳು ಸರಿಯಾದ ಮಾಹಿತಿ ನೀಡದ ಹಿನ್ನೆಲೆ ಸಚಿವರು ಹಾಗೂ ಸಂಸದ ರಾಜಶೇಖರ ಹಿಟ್ನಾಳ್ ಜೊತೆಗೂಡಿ ಭೇಟಿ ನೀಡಿದರು. ಭೇಟಿ ಬಳಿಕ ಸುದ್ದಿಗಾರರೊಂದಿಗೆ ಬಸ್ ದರ ಹೆಚ್ಚಳ ವಿಚಾರವಾಗಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳಿಂದಾಗಿ ಬಸ್ ಟಿಕೆಟ್ ದರ ಹೆಚ್ಚಳ ಮಾಡಿರುವುದು ಸುಳ್ಳು ಆರೋಪ. ಗ್ಯಾರಂಟಿ ಯೋಜನೆಗಳಿಗೆ ಕೂಡಾ ಜನರ ತೆರಿಗೆ ಹಣವನ್ನೇ ನಾವು ಕೊಡುತ್ತಿದ್ದೇವೆ. ಕಳ್ಳತನ ಮಾಡಿ ಹಣ ಕೊಡೋಕೆ ಆಗುತ್ತಾ? ಡೀಸೆಲ್ ಬೆಲೆ ಹೆಚ್ಚಳವಾಗಿದೆ, ಖರ್ಚು ವೆಚ್ಚ ಹೆಚ್ಚಾಗಿದೆ. ಹೀಗಾಗಿ ಬಸ್ ದರ ಹೆಚ್ಚಳ ಮಾಡುತ್ತಿದ್ದಾರೆ ಎಂದು ಹೇಳಿದರು.

ನಿನ್ನೆ ಕ್ಯಾಬಿನೆಟ್ ನಂತರ ಎಲ್ಲರನ್ನು ಊಟಕ್ಕೆ ಕರೆದಿದ್ದರು. ಬೆಂಗಳೂರಿನಲ್ಲಿ ಇದ್ದವರು ಊಟ ಮಾಡಿ ಬಂದಿದ್ದಾರೆ. ಇನ್ನೂ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡುವ ಅವಶ್ಯಕತೆ ಇಲ್ಲ. ಪ್ರಹ್ಲಾದ್ ಜೋಶಿ ಸಹೋದರನ ಮೇಲೆ ಆರೋಪ ಬಂದಿತ್ತು. ಹಾಗಂತ ಪ್ರಹ್ಲಾದ್ ಜೋಶಿ ರಾಜೀನಾಮೆ ನೀಡಿದ್ರಾ? ಶೋಭಾ ಕರಂದ್ಲಾಜೆ ರಾಜೀನಾಮೆ ನೀಡಿದ್ರಾ? ಸರ್ಕಾರದ ಬಗ್ಗೆ ಮಾತನಾಡೋಕೆ ಬಿಜೆಪಿಯವರಿಗೆ ಏನು ಸಿಗ್ತಿಲ್ಲ. ಹೀಗಾಗಿ ಹೆಸರೇ ಇಲ್ಲದೇ ಇದ್ದರೂ ಪ್ರಿಯಾಂಕ್ ಖರ್ಗೆ ರಾಜೀನಾಮೆ ಕೇಳುತ್ತಿದ್ದಾರೆ ಎಂದು ಹೇಳಿದರು.

## ಡಿಕೆಶಿಗೂ ಶಾಕ್, ಪವರ್ ಶೇರ್ ಕುತೂಹಲಿಗಳಿಗೂ ಶಾಕ್

**ಬೆಂಗಳೂರು:** ಕಾಂಗ್ರೆಸ್ ಆಪ್ತರ ಜೊತೆಗಿನ ಡಿನ್ನರ್ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಅಧಿಕಾರ ಹಂಚಿಕೆಯ ವಿಚಾರದ ಬಗ್ಗೆ ಬಾಯಿ ಬಿಟ್ಟಿದ್ದಾರೆ ಎಂಬ ವಿಚಾರ ಮೂಲಗಳಿಂದ ತಿಳಿದು ಬಂದಿದೆ. ಹೌದು. ಕಾಂಗ್ರೆಸ್ ಹೈಕಮಾಂಡ್ ಮುಂದೆ ಪವರ್ ಶೇರ್ ಒಪ್ಪಂದ ಆಗಿಲ್ಲ. ಸಿಎಂ ಆಯ್ಕೆ ವೇಳೆ ಇಷ್ಟು ವರ್ಷ ಎಂಬ ಯಾವುದೇ ಒಪ್ಪಂದ ನಡೆದಿಲ್ಲ ಎಂಬ ವಿಚಾರವನ್ನು ಆಪ್ತರಿಗೆ ತಿಳಿಸಿದ್ದಾರೆ. ಅವತ್ತಿನ ಪರಿಸ್ಥಿತಿಗೆ ಅನುಗುಣವಾಗಿ ಅಳೆದು ತೂಗಿ ಆಯ್ಕೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ನಾವು ಹೇಳಿದಂತೆ ಕೇಳಿ ಅಂದಿದ್ದಾರೆ. ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಅಂದಿದ್ದೇನೆ. ಆದ್ರೆ ಇಷ್ಟು ವರ್ಷ ಅಂತಾ ಯಾರೂ ಏನೂ ಹೇಳಿಲ್ಲ ಎಂದಿದ್ದಾರೆ. ಮಾಧ್ಯಮಗಳಲ್ಲಿ, ಕಾಂಗ್ರೆಸ್ ಒಳಗೆ ಪವರ್ ಶೇರ್ ಅಂತಾ ಮಾತಾಡ್ತಾರೆ. ಅದಕ್ಕೆ ನಾನು ಏನ್ ಮಾಡಲಿ. ದೆಹಲಿ ಚುನಾವಣೆಯಿದೆ. ಬಜೆಟ್ ಮುಂದೆ ಮಂಡಿಸಬೇಕಿದೆ. ಅದಕ್ಕೂ ಮೊದಲು ಪುನಾರಚನೆಗೆ ಅವಕಾಶ ಕೇಳುತ್ತೇನೆ. ಹೈಕಮಾಂಡ್ ಅವರು ಏನ್ ಮಾಡ್ತಾರೆ ನೋಡೋಣ ಎಂದಿದ್ದಾರೆ. ಸಿದ್ದರಾಮಯ್ಯನವರ ಈ ಮಾತು ಕೇಳಿ ಆಪ್ತರು ಸಂತೋಷ ಪಟ್ಟಿದ್ದಾರೆ ಎಂಬ ವಿಚಾರ ಮೂಲಗಳಿಂದ ತಿಳಿದು ಬಂದಿದೆ. ಡಿಸಿಎಂ ಡಿಕೆ ಶಿವಕುಮಾರ್ ವಿದೇಶ ಪ್ರವಾಸಕ್ಕೆ ತೆರಳಿದ ಸಮಯದಲ್ಲೇ ಸಿಎಂ ಆಪ್ತರ ಜೊತೆಗೆ ಸಭೆ ನಡೆಸಿದ್ದು ಅಲ್ಲದೇ ಅಧಿಕಾರ ಹಂಚಿಕೆ ವಿಚಾರದ ಬಗ್ಗೆ ಚರ್ಚೆ ನಡೆಸುವ ಮೂಲಕ ಕುತೂಹಲ ಮೂಡಿಸಿದ್ದಾರೆ.

# ಪೀಣ್ಯ ಬಸವೇಶ್ವರ ಬಸ್ ನಿಲ್ದಾಣವಾಗುತ್ತಾ ಕಲ್ಯಾಣ ಮಂಟಪ, ಮಾಲ್?

**ಬೆಂಗಳೂರು:** ಪೀಣ್ಯ ಬಸವೇಶ್ವರ ಬಸ್ ನಿಲ್ದಾಣ ಸದ್ಯದಲ್ಲೇ ಕಲ್ಯಾಣ ಮಂಟಪ, ಮಾಲ್, ಆಸ್ಪತ್ರೆ, ಶೈಕ್ಷಣಿಕ ಸಂಸ್ಥೆಯಾಗಿ ಬದಲಾಗುವ ಸಾಧ್ಯತೆ ಇದೆ. ಬಸ್ ನಿಲ್ದಾಣವನ್ನು ಖಾಸಗಿ ವ್ಯವಹಾರಗಳಿಗೆ ನೀಡಲು ಟೆಂಡರ್ ಕರೆಯಲಾಗಿದೆ. ಸಂಪೂರ್ಣ 3 ಅಂತಸ್ತಿನ ಕಟ್ಟಡದ ಇ-ಟೆಂಡರ್ ಪ್ರಕ್ರಿಯೆಯನ್ನು ಕೆಎಸ್‌ಆರ್‌ಟಿಸಿ ಶುರು ಮಾಡಿದೆ.

ಉತ್ತರ ಕರ್ನಾಟಕ ಸೇರಿದಂತೆ ರಾಜ್ಯದ 20ಕ್ಕೂ ಹೆಚ್ಚು ಜಿಲ್ಲೆಗಳಿಗೆ ಸಂಪರ್ಕ ಕಲ್ಪಿಸುವ ಸಲುವಾಗಿ ನಿರ್ಮಾಣವಾಗಿರುವ ಪೀಣ್ಯ ಬಸ್ ನಿಲ್ದಾಣವನ್ನು ಖಾಸಗಿ ವ್ಯವಹಾರಗಳಿಗೆ ಬಿಟ್ಟು ಕೊಡಲು ಕೆಎಸ್ ಆರ್‌ಟಿಸಿ ನಿರ್ಧರಿಸಿದೆ. ಕೋಟಿ ಕೋಟಿ ಖರ್ಚು ಮಾಡಿದರೂ ಬಸವೇಶ್ವರ ಬಸ್ ನಿಲ್ದಾಣ ಖಾಲಿ ಬಿದ್ದ ಪರಿಣಾಮ ಸರ್ಕಾರಕ್ಕೆ ಆದಾಯವಿಲ್ಲ. ಈ ಕಟ್ಟಡದಿಂದ ಕೆಎಸ್‌ಆರ್‌ಟಿಸಿಗೆ ಲಾಭವೂ ಇಲ್ಲ. ಹೀಗಾಗಿ ಆದಾಯಕ್ಕಾಗಿ ಖಾಸಗಿಯವರ ಮೊರೆ ಹೋಗಲು ಕೆಎಸ್‌ಆರ್‌ಟಿಸಿ ಮುಂದಾಗಿದೆ.



ಕಳೆದ ಹನ್ನೊಂದು ವರ್ಷಗಳ ಹಿಂದೆ ಅಂದ್ರೆ 2014ರಲ್ಲಿ ಸುಮಾರು 44 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಾಣವಾಗಿತ್ತು. ಬಸ್ ನಿಲ್ದಾಣ ಉದ್ಘಾಟನೆಯಾಗಿ ಬಸ್ ಬಂದರೂ ಜನ ಮಾತ್ರ ಬಸ್ ಸ್ಟ್ಯಾಂಡ್‌ಗೆ ನಿರೀಕ್ಷಿತ ಮಟ್ಟದಲ್ಲಿ ಬರಲಿಲ್ಲ. ಹೀಗಾಗಿ ಇಲ್ಲಿಂದ ಶುರುವಾಗಿದ್ದ ಬಸ್ ಸಂಚಾರ ನಿಂತೇ ಹೋಯಿತು.

**ಪ್ರಕ್ರಿಯೆ ಶುರು:** ಶಕ್ತಿ ಯೋಜನೆಯಿಂದ ಸರ್ಕಾರದ ಖಜಾನೆ ಖಾಲಿಯಾಗಿದೆ ಎಂಬ ಗುಸು ಗುಸು ಕೇಳಿ ಬರುತ್ತಿರುವ ಬೆನ್ನಲ್ಲೇ ಕೆಎಸ್‌ಆರ್‌ಟಿಸಿ ಸದ್ಯ ಸಂಪೂರ್ಣ ಕಟ್ಟಡವನ್ನ ಖಾಸಗಿಯವರಿಗೆ ಲೀಸ್ ಅಥವಾ ಬಾಡಿಗೆ ಕೊಡಲು ತಯಾರಿ ಮಾಡಿಕೊಂಡಿದೆ. ಅದರಂತೆ ಟೆಂಡರ್‌ನಲ್ಲಿ ಭಾಗಿಯಾಗಿ ಯಾರು ಬೇಕಾದರೂ ಕಟ್ಟಡವನ್ನು ತೆಗೆದುಕೊಂಡು ಉಪಯೋಗ ಮಾಡಿಕೊಳ್ಳಿ. ನಮಗೆ ಮಾತ್ರ ಹಣ ನೀಡಿ ಎಂದು ಇದಕ್ಕೆ ಬೇಕಾದ ಪ್ರಕ್ರಿಯೆಯನ್ನು ಆರಂಭಿಸಿದೆ.

**ಏನೇನು ಮಾಡಬಹುದು..?:** ಈ ಕಟ್ಟಡ ನೆಲಮಹಡಿ ಸೇರಿ ಒಟ್ಟು ನಾಲ್ಕು ಅಂತಸ್ತಿದೆ. ಈ ಪೈಕಿ ನಾಲ್ಕೂ ಅಂತಸ್ತನ್ನು ಖಾಸಗಿಯ ವರಿಗೆ ಬಿಟ್ಟುಕೊಡಲು ಕೆಎಸ್‌ಆರ್‌ಟಿಸಿ ಮುಂದಾಗಿದೆ. ಖಾಸಗಿಯವರು ಬಸ್ ನಿಲ್ದಾಣವನ್ನು ಮಾಲ್, ಆಸ್ಪತ್ರೆ, ಕಲ್ಯಾಣ ಮಂಟಪ ಬೇಕಿದ್ರೆ, ಕಲ್ಯಾಣ ಮಂಟಪವಾಗಿ ಬದಲಾಯಿಸಿಕೊಳ್ಳಬಹುದು.

**ಬಹು ಆಯ್ಕೆ ಮುಂದಿಟ್ಟ ಕೆಎಸ್‌ಆರ್‌ಟಿಸಿ!:** ಜೊತೆಗೆ ಇದರಲ್ಲಿ ಲೀಸ್ ತೆಗೆದುಕೊಳ್ಳುವವರಿಗೆ ಆಯ್ಕೆಯನ್ನೂ ಕೂಡ ನೀಡಿದೆ ಆಡಳಿತ ಮಂಡಳಿ. ಸಂಪೂರ್ಣ ಕಟ್ಟಡ ಬೇಡದಿದ್ದರೆ, ಒಂದೊಂದೇ ಮಹಡಿಯನ್ನ ಕೂಡ ಪಡೆದು ಬೇಕಾದಂತೆ ತಮ್ಮ ವ್ಯಾಪಾರವನ್ನು ಮಾಡಬಹುದಾಗಿದೆ. ಆದರೆ ನಿಮಗೆ ಎಷ್ಟು ಬೇಕಾದ್ರು ತೆಗೆದುಕೊಳ್ಳಿ, ನಮಗೆ ಹಣ ನೀಡಿ ಅಂತ ಖಾಸಗಿಯವರಿಗೆ ಸರ್ಕಾರಿ ಕಟ್ಟಡವನ್ನು ಸಂಪೂರ್ಣವಾಗಿ ಬಿಟ್ಟುಕೊಡಲು ಮುಂದಾಗಿದೆ.

# ಹಾಲಿನ ದರ 10 ರೂ. ಹೆಚ್ಚಳಕ್ಕೆ ಬೇಡಿಕೆ ಇದೆ: ಸಚಿವ ವೆಂಕಟೇಶ್



**ಬೆಂಗಳೂರು:** ಬಸ್ ಟಿಕೆಟ್ ದರ ಏರಿಕೆ ಬಳಿಕ ಸರ್ಕಾರ ಜನರಿಗೆ ಮತ್ತೊಂದು ಶಾಕ್ ನೀಡಲು ಸಿದ್ಧತೆ ನಡೆಸುತ್ತಿದೆ. ಶೀಘ್ರವೇ ಹಾಲಿನ ದರ ಏರಿಕೆಗೆ ಸರ್ಕಾರ ಚಿಂತನೆ ನಡೆಸಿದೆ. ಈ ಬಗ್ಗೆ ಪಶು ಸಂಗೋಪನೆ ಸಚಿವ ಕೆ.ವೆಂಕಟೇಶ್ ಖುದ್ದು ಸುಳಿವು ನೀಡಿದ್ದಾರೆ.

ಹಾಲಿನ ದರ ಏರಿಕೆ ಬಗ್ಗೆ 'ಪಬ್ಲಿಕ್ ಟಿವಿ' ಜೊತೆ ಮಾತನಾಡಿದ ಅವರು, ಹಾಲಿನ ದರ ಹೆಚ್ಚಳ ಮಾಡಬೇಕು ಎಂದು ರೈತರ ಒತ್ತಾಯ ಇದೆ. ಯಾಕೆಂದರೆ ರೈತರು ಜಾನುವಾರುಗಳಿಗೆ ನೀಡುತ್ತಿರುವ ಆಹಾರ ಪದಾರ್ಥಗಳ ಬೆಲೆ ಏರಿಕೆ ಆಗಿದೆ. ಈ ಹಿನ್ನೆಲೆ ಹಾಲಿನ ದರ 10 ರೂ. ಏರಿಕೆ ಮಾಡಿ ಎಂದು ಬೇಡಿಕೆ ಇಟ್ಟಿದ್ದಾರೆ. ಈ ಬಗ್ಗೆ ನಾವಿನ್ನೂ ಚರ್ಚೆ ಮಾಡುತ್ತಿದ್ದೇವೆ. ಚರ್ಚೆ ಬಳಿಕ ಅಂತಿಮ ತೀರ್ಮಾನ ಮಾಡುತ್ತೇವೆ ಎಂದರು.

ರೈತರು ಹಾಲಿನ ಮೇಲೆ ಅವಲಂಬಿತರಾಗಿದ್ದಾರೆ. ದಿನೇ ದಿನೇ ಹಾಲಿನ ಉತ್ಪಾದನೆ ಹೆಚ್ಚಳ ಆಗುತ್ತಿದೆ. ರೈತರಿಗೆ ಅನ್ಯಾಯ ಆಗದಂತೆ ನೋಡಿಕೊಳ್ಳಬೇಕು. 5 ರೂ, 3 ರೂ, 10 ರೂ. ಮಾಡುತ್ತೇವೋ ಅದು ಇನ್ನೂ ತೀರ್ಮಾನ ಆಗಿಲ್ಲ ಎಂದು ತಿಳಿಸಿದರು. ಒಟ್ಟಾರೆ ಹಾಲಿನ ದರ ಏರಿಕೆ ಪ್ರಸ್ತಾಪ ಇರೋದು ಸತ್ಯ ಎಂದು ಸಚಿವರು ಒಪ್ಪಿಕೊಂಡಿದ್ದು, ಸಿಎಂ ಸಿದ್ದರಾಮಯ್ಯ ಗ್ರೀನ್ ಸಿಗ್ನಲ್ ಕೊಟ್ಟರೆ ಶೀಘ್ರವೇ ಹಾಲಿನ ದರ ಮತ್ತಷ್ಟು ದುಬಾರಿಯಾಗುವ ಸಾಧ್ಯತೆ ಇದೆ.

# ಅಂಬೇಡ್ಕರ್ ಸಂವಿಧಾನ ಕಲಬುರಗಿಯಲ್ಲಿ ಅನ್ವಯವಾಗುವುದಿಲ್ಲವೇ?

**ಬೆಂಗಳೂರು:** ಬಿಜೆಪಿ ನಾಯಕರ ಹಳೆಯ ಹೇಳಿಕೆಗಳು, ಅವುಗಳಿಗೆ ಸಂಬಂಧಿಸಿದ ವಿಡಿಯೋ ತುಣುಕಗಳನ್ನೇ ಮುಂದಿಟ್ಟುಕೊಂಡು ವಾಗ್ದಾಳಿ ನಡೆಸುತ್ತಿದ್ದ ಸಚಿವ ಪ್ರಿಯಾಂಕ್ ಖರ್ಗೆಗೆ ಅದೇ ಧಾಟಿಯಲ್ಲಿ ಪ್ರತಿಪಕ್ಷ ನಾಯಕ ಆರ್ ಅಶೋಕ್ ತಿರುಗೇಟು ನೀಡಿದ್ದಾರೆ. ಬಿಜೆಪಿ ಕಾರ್ಯಕರ್ತರು ಕಲಬುರಗಿ ಜಿಲ್ಲೆಗೆ ಕಾಲಿಡದಂತೆ ಮಾಡುತ್ತೇವೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದ ಹಳೆಯ ವಿಡಿಯೋ ತುಣುಕನ್ನು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅಶೋಕ್, ಅಂಬೇಡ್ಕರ್ ಸಂವಿಧಾನ ಕಲಬುರಗಿಯಲ್ಲಿ ಅನ್ವಯವಾಗುವುದಿಲ್ಲವೇ ಎಂದು ಪ್ರಶ್ನಿಸಿದ್ದಾರೆ.

ರಿಪಬ್ಲಿಕ್ ಆಫ್ ಕಲಬುರ್ಗಿಯ ನಿಜಾಮ ಜನಾಬ್ ಪ್ರಿಯಾಂಕ್ ಖರ್ಗೆ ಅವರು ಹೊರಡಿಸಿರುವ ಫತ್ವಾ ಏನು ಅಂತ ಒಮ್ಮೆ ಕೇಳಿ: ''ಖರ್ಗೆ ಕುಟುಂಬದವರು ಮನಸ್ಸು ಮಾಡಿದರೆ ಬಿಜೆಪಿ ಕಾರ್ಯಕರ್ತರು ಕಲಬುರ್ಗಿ ಜಿಲ್ಲೆಗೆ ಕಾಲು ಇಡುವುದಕ್ಕೂ ಬಿಡುವುದಿಲ್ಲವಂತೆ!'' ಜನಾಬ್ ಪ್ರಿಯಾಂಕ್ ಖರ್ಗೆ ಅವರೇ, ಎರಡು ಬಾರಿ ಸಚಿವರಾದ ಮಾತ್ರಕ್ಕೆ ತಾವು ಬಾಬಾಸಾಹೇಬ್ ಅಂಬೇಡ್ಕರ್ ಅವರಿಗಿಂತ ದೊಡ್ಡವರೂ ಅಂದುಕೊಂಡು ಬಿಟ್ಟಿದ್ದೀರಾ? ಅಂಬೇಡ್ಕರ್ ಅವರ ಸಂವಿಧಾನ ಕಲಬುರ್ಗಿಯಲ್ಲಿ ಅನ್ವಯ ಆಗುವುದಿಲ್ಲವೇ? ಅಲ್ಲಿ ಬಿಜೆಪಿ ಕಾರ್ಯಕರ್ತರಿಗೆ ಸಂವಿಧಾನ ನೀಡಿರುವ ಮೂಲಭೂತ ಹಕ್ಕುಗಳು ಸಿಗುವುದಿಲ್ಲವೇ ಎಂದು ಅಶೋಕ್ ಪ್ರಶ್ನಿಸಿದ್ದಾರೆ.



ತಾವೂ ನಿಜಾಮರೂ ಅಲ್ಲ, ತಮ್ಮ ಹಿಂಬಾಲಕರು ರಜಾಕರರೂ ಅಲ್ಲ. ಅಧಿಕಾರದ ಮದದಲ್ಲಿ ಮೈಮರೆತು ತಾವೊಬ್ಬ ಜನಪ್ರತಿನಿಧಿ, ಜನಸೇವಕ ಅನ್ನೋದನ್ನು ಮರೆಯಬೇಡಿ ಎಂದು ಅಶೋಕ್ ಕಿಡಿಕಾರಿದ್ದಾರೆ.

ಬಿಜೆಪಿ ನಾಯಕರು ಸಂವಿಧಾನದ ಬಗ್ಗೆ ಹಿಂದೆ ನೀಡಿದ್ದ ಹೇಳಿಕೆಗಳನ್ನೇ ಮುಂದಿಟ್ಟುಕೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ತೊಡಗಿ ಇತರ ಕಾಂಗ್ರೆಸ್ ನಾಯಕರು ಕೇಸರಿ ಪಡೆ ನಾಯಕರ ವಿರುದ್ಧ ವಾಗ್ದಾಳಿ ನಡೆಸುವುದು ಆಗಾಗ ವರದಿಯಾಗುತ್ತಿರುತ್ತದೆ. ಇದೀಗ ಅದೇ ರೀತಿಯಲ್ಲಿ ಅಶೋಕ್ ಕೂಡ ತಿರುಗೇಟು ನೀಡಿದ್ದಾರೆ.

ಬಿಜೆಪಿಯ ಮಾಜಿ ಸಂಸದ ಅನಂತಕುಮಾರ್ ಹೆಗಡೆ ಸಂವಿಧಾನದ ಬಗ್ಗೆ ನೀಡಿದ್ದ ಹೇಳಿಕೆಯನ್ನು ಪ್ರಿಯಾಂಕ್ ಖರ್ಗೆ ಹಲವು ಬಾರಿ ಉಲ್ಲೇಖಿಸಿ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದರು. ಬಿಜೆಪಿ ಸಂವಿಧಾನ ಬದಲಾವಣೆ ಮಾಡುತ್ತದೆ ಎಂದು ಆರೋಪಿಸಿದ್ದರು. ಈಗ ಅದೇ ಖರ್ಗೆಯವರು ಅವರ ಜಿಲ್ಲೆಯಲ್ಲೇ ಸಂವಿಧಾನ ಪಾಲನೆ ಮಾಡುವುದಿಲ್ಲವೇ ಎಂದು ಅಶೋಕ್ ಹಳೆಯ ವಿಡಿಯೋ ಪೋಸ್ಟ್ ಮಾಡಿ ಪ್ರಶ್ನಿಸಿದ್ದಾರೆ.

# ಕಾಂಗ್ರೆಸ್ ಸರ್ಕಾರದಲ್ಲಿ ಯಾರನ್ನು ಯಾವಾಗ ಏನ್ ಬೇಕಾದ್ರು ಮಾಡ್ತಾರೆ

**ಬೆಂಗಳೂರು:** ಐಶ್ವರ್ಯ ಗೌಡ ಕೇಸ್‌ನಲ್ಲಿ ನಿಖಿಲ್, ಅನಿತಾ ಕುಮಾರಸ್ವಾಮಿ ಹೆಸರು ಪ್ರಸ್ತಾಪ ಆಗುತ್ತಿರುವ ವಿಚಾರಕ್ಕೆ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.



ಬೆಂಗಳೂರಿನಲ್ಲಿ ಮಾತನಾಡಿದ ಅವರು, ಈಗ ರಾಜ್ಯದಲ್ಲಿ ಚಿನ್ನ, ಬೆಳ್ಳಿ ಕೇಸ್ ನಡೆಯುತ್ತಿದೆ. ನಿಖಿಲ್, ಅನಿತಾ ಕುಮಾರಸ್ವಾಮಿ ಪರಿಚಯ ಅಂತ ಹೇಳಿ ನಿನ್ನೆ ಮೊನ್ನೆಯಿಂದ ಸುದ್ದಿ ಬರುತ್ತಿದೆ. ಐಶ್ವರ್ಯ ಗೌಡ ನಿಖಿಲ್, ಅನಿತಾ ಅವರನ್ನ ಯಾವಾಗ ಭೇಟಿ ಮಾಡಿದ್ರು? ಈ ಸರ್ಕಾರದಲ್ಲಿ ಎಷ್ಟರ ಮಟ್ಟಿಗೆ ತನಿಖೆ ನಡೆಯುತ್ತಿದೆ ಅನ್ನೋದು ಗೊತ್ತಿದೆ. ಮಾಧ್ಯಮಗಳಲ್ಲಿ ಬಂದ ಮೇಲೆ ನಾನು ಮಾಹಿತಿ ಪಡೆದುಕೊಂಡಿದ್ದೇನೆ. ಕೇಸ್ ಹಿನ್ನೆಲೆ ತಿಳಿದಿಕೊಂಡಿದ್ದೇನೆ ಎಂದರು.

2016ರಲ್ಲಿ ದೂರು ಕೊಟ್ಟಿರೋದು, ವ್ಯವಹಾರ ನಡೆದಿರೋದು. ನಿಖಿಲ್, ಅನಿತಾ ಹೆಸರನ್ನು ಇದರಲ್ಲಿ ಎಳೆದಿದ್ದಾರೆ ಅಂತ ಮಾಹಿತಿ ತರಿಸಿದ್ದೇನೆ. ಈ ಸರ್ಕಾರ ಯಾರನ್ನು, ಯಾವಾಗ, ಏನು ಬೇಕಾದ್ರು ಮಾಡುತ್ತಾರೆ. ಸರ್ಕಾರದಲ್ಲಿ ಅಧಿಕಾರ ವರ್ಗವನ್ನು ಯಾವ ಮಟ್ಟಕ್ಕೆ ತೆಗೆದುಕೊಂಡು ಹೋಗಿದ್ದಾರೆ. 2016ರಲ್ಲಿ ಪ್ರಕರಣ ಆಗಿರೋದು. 2018ರಲ್ಲಿ ನಾನೇ ಸಿಎಂ ಇದ್ದೆ. ಆಗ ಯಾಕೆ ನನ್ನ ಬಳಿ ಅನ್ಯಾಯ ಅಂತ ಇವರು ಬರಲಿಲ್ಲ ದೂರು ಕೊಡಲಿಲ್ಲ ಎಂದು ಪ್ರಶ್ನಿಸಿದರು.

ನಿಖಿಲ್, ಅನಿತಾ ಕುಮಾರಸ್ವಾಮಿ ಅವರ ಮುಖಗಳನ್ನೇ ನೊಡಿಲ್ಲ. ಹೇಗೆ ಅವರ ಪರಿಚಯ ಅಂತ ಸುದ್ದಿ ಮಾಡಿಸುತ್ತಿದ್ದೀರಿ? ಇದರ ಹಿಂದೆ ಯಾರಿದ್ದಾರೆ? ನಿಖಿಲ್, ಅನಿತಾ ಕುಮಾರಸ್ವಾಮಿಯವರನ್ನ ಯಾಕೆ ಈ ಪ್ರಕರಣದಲ್ಲಿ ತಂದ್ರಿ? ಇದನ್ನ ಸರ್ಕಾರ ಅಂತ ಕರೆಯುತ್ತೀರಾ? ಎಂದು ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

## ಮುಂದಾದ ಎಸ್‌ಐಟಿ!

ಪ್ರಜ್ವಲ್ ರೇವಣ್ಣ ಒಂದು ಪ್ರಕರಣದಲ್ಲಿ ಜಾಮೀನು ಹಾಗೂ ಇನ್ನೆರಡು ಪ್ರಕರಣಗಳಲ್ಲಿ ನಿರೀಕ್ಷಣಾ ಜಾಮೀನು ಕೋರಿದ್ದರು. ಹೊಳೆನರಸೀಪುರ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಜಾಮೀನು ಕೋರಿದ್ದರೆ, ಸಿಐಡಿ ಸೈಬರ್ ಸೆಲ್‌ನಲ್ಲಿ ದಾಖಲಾಗಿದ್ದ 2 ಪ್ರಕರಣಗಳಲ್ಲಿ ನಿರೀಕ್ಷಣಾ ಜಾಮೀನು ಕೋರಿದ್ದರು. ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಮೂರು ಅರ್ಜಿಗಳನ್ನು ವಜಾಗೊಳಿಸಿತ್ತು.

ಪ್ರಜ್ವಲ್ ರೇವಣ್ಣ ತಂದೆ ಹಾಗೂ ಮಾಜಿ ಸಚಿವ ಹೆಚ್.ಡಿ.ರೇವಣ್ಣವಿರುದ್ಧ ಕಳೆದ ಏಪ್ರಿಲ್ 28ರಂದು ರೇವಣ್ಣ ಅವರ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಸಂತ್ರಸ್ತೆ ದೂರು ದಾಖಲಿಸಿದ್ದರು. ಹೊಳೆನರಸೀಪುರ ನಗರ ಪೊಲೀಸ್ ಠಾಣೆಯಲ್ಲಿ ಇಬ್ಬರ ವಿರುದ್ಧ ದೂರು ದಾಖಲಾಗಿತ್ತು. ಎಫ್ ಐಆರ್‌ನಲ್ಲಿ ಹೆಚ್.ಡಿ.ರೇವಣ್ಣ ಎ1 ಮತ್ತು ಪ್ರಜ್ವಲ್ ರೇವಣ್ಣ ಎ2 ಆರೋಪಿಯಾಗಿದ್ದಾರೆ. 354ಎ, 354 ಎ, 509 ಅಡಿ ಪ್ರಕರಣ ದಾಖಲಾಗಿತ್ತು. 2015 ರಲ್ಲಿ ಹೆಚ್.ಡಿ.ರೇವಣ್ಣ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಸಂತ್ರಸ್ತೆ ದೂರು ನೀಡಿದ್ದರು. ತಂದೆ ಮತ್ತು ಮಗನ ವಿರುದ್ಧ ಸಂತ್ರಸ್ತೆ ಗಂಭೀರ ಆರೋಪಗಳನ್ನು ಮಾಡಿದ್ದರು.

## ತನಿಖೆಗೆ ಆಗ್ರಹ

ಈ ಸೈಟ್ ಮಾರಾಟದ ಬಗ್ಗೆ ಕೂಡಲೇ ತನಿಖೆ ನಡೆಸಬೇಕು. ಖಾಸಗಿ ಹಿತಾಸಕ್ತಿಗಳಿಗೆ ಅನುಕೂಲವಾಗುವಂತೆ ಕಡಿಮೆ ಬೆಲೆಯಲ್ಲಿ ನಮ್ಮ ಸರ್ಕಾರಿ ಸ್ಥಳಗಳನ್ನು ಉಡುಗೊರೆಯಾಗಿ ನೀಡಲು ನಾವು ಅನುಮತಿಸುವುದಿಲ್ಲ ಎಂದು ಅವರು ಹೇಳಿದ್ದಾರೆ.

## ಆರೋಪಿ ಮುತ್ತಗಿ ಹೇಳಿಕೆ

ಹೀಗಾಗಿ, ಶಾಸಕ ವಿನಯ್ ಕುಲಕರ್ಣಿ ಸೂಚನೆ ಮೇರೆಗೆ ಬೆಂಗಳೂರಿನಿಂದ ಕರೆಸಿ ಸಂಚು ರೂಪಿಸಿ ಯೋಗೀಶ್ ಗೌಡನನ್ನು ಕೊಲೆ ಮಾಡಲಾಗಿದೆ ಎಂದು ಮುತ್ತಿಗೆ ಹೇಳಿಕೆ ನೀಡಿದ್ದಾರೆ.

ಯೋಗೇಶ್ ಗೌಡ ಹತ್ಯೆಗೆ ಮೊದಲು ಧಾರವಾಡದ ವಿಕಾಸ್ ಕಲಬುರಗಿ, ಕೀರ್ತಿ ಕುಮಾರ್ ಕುರಹಟ್ಟಿ, ವಿಕ್ರಂ ಬಳ್ಳಾರಿ, ಸಂದೀಪ್ ಸವದತ್ತಿ, ಮಹಾಬಲೇಶ್ವರ ಅವರಿಗೆ ಸುಪಾರಿ ನೀಡಲು ವಿನಯ್ ಕುಲಕರ್ಣಿ ನಿರ್ಧರಿಸಿದ್ದರು. ಅದರಂತೆ, ಈ ಹುಡುಗರು ಮುಂದೆ ವಿನಯ್ ಕುಲಕರ್ಣಿ ವಿಚಾರ ಪ್ರಸ್ತಾಪಿಸಲಾಯಿತು. ಆದರೆ, ಅವರು ತಿರಸ್ಕರಿಸಿದರು ಎಂದು ಮುತ್ತಗಿ ತಪ್ಪೊಪ್ಪಿಗೆಯಲ್ಲಿ ಹೇಳಿದ್ದಾರೆ.

ಅದನ್ನು ಶಾಸಕ ವಿನಯ್ ಕುಲಕರ್ಣಿ ಅವರಿಗೆ ತಿಳಿಸಲಾಯಿತು. ಆಗ, ವಿನಯ್ ಕುಲಕರ್ಣಿ ಬೆಂಗಳೂರಿನಿಂದ ಕೆಲವರನ್ನು ಕರೆಸಿ ಕೆಲಸ ಮಾಡಿಕೊಡುವಂತೆ ವಿನಯ ಕುಲಕರ್ಣಿ ಒತ್ತಾಯ ಮಾಡಿದ್ದರು. ಬಳಿಕ, ಬೆಂಗಳೂರಿನಲ್ಲಿ ಪ್ರಕರಣದ 8ನೇ ಆರೋಪಿ ದಿನೇಶ್ ನನ್ನು ಭೇಟಿಯಾಗಿ, ವಿನಯ್ ಕುಲಕರ್ಣಿ ಪ್ರಸ್ತಾಪ ಮುಂದಿಡಲಾಯಿತು. ಇದಕ್ಕೆ ದಿನೇಶ್ ಎರಡು ದಿನಗಳ ಕಾಲಾವಕಾಶ ಕೋರಿದನು ಎಂದು ಮುತ್ತಗಿ ಹೇಳಿದರು.

ಬಳಿಕ, ಮುತ್ತಗಿಯನ್ನು ಭೇಟಿಯಾದ ದಿನೇಶ್ ಹತ್ಯೆಗೆ ಒಪ್ಪಿಗೆ ಸೂಚಿಸಿ, 20 ಲಕ್ಷ ರೂ. ಬೇಡಿಕೆಯಿಟ್ಟನು. ಪ್ರಕರಣದಲ್ಲಿ ತನ್ನ

## ಮೊದಲನೇ ಪುಟದಿಂದ...

ಹೆಸರು ಬರಬಾರದು, ಬಂಧನವಾಗದಂತೆ ನೋಡಿಕೊಳ್ಳಬೇಕು, ಜತಗೆ ಶರಣಾಗುವುದಿಲ್ಲ ಎಂಬ ಷರತ್ತು ವಿಧಿಸಿದ. ಈ ಮಾಹಿತಿಯನ್ನು ವಿನಯ್ ಕುಲಕರ್ಣಿಗೆ ತಲುಪಿಸಲಾಯಿತು ಎಂಬ ಅಂಶ ತಪ್ಪೊಪ್ಪಿಗೆಯಲ್ಲಿದೆ.

ಬೆಂಗಳೂರು ಹುಡುಗುರ ಷರತ್ತಿಗೆ ಒಪ್ಪಿದ ವಿನಯ್ ಕುಲರ್ಣಿ, ಹತ್ಯೆ ಬಳಿಕ ಧಾರವಾಡದ ಹುಡುಗರನ್ನು ಶರಣಾಗಿಸುವ ಯೋಚನೆ ಹೇಳಿದನು. ಜೂನ್ ಮೊದಲ ವಾರ ಬೆಂಗಳೂರಿನಿಂದ ದಿನೇಶ್, ಅಶ್ವತ್ಥ್, ಸುನೀಲ್, ನಜೀರ್ ಸೇರಿ ಇತರರ ಗ್ಯಾಂಗ್ ಧಾರವಾಡಕ್ಕೆ ಬಂದಿತ್ತು. ಇದೇ ವೇಳೆ ವಿನಯ್ ಕುಲಕರ್ಣಿ ಮುತ್ತಗಿಗೆ ಮೂರು ಕಂಟ್ರಿ ಪಿಸ್ತೂಲು ನೀಡಿದ್ದರು. ಅವಶ್ಯಕತೆ ಬಿದ್ದರಷ್ಟೇ ಬಳಸಲು ಸೂಚನೆ ನೀಡಿದ್ದರು. ಯೋಗೀಶ್ ಗೌಡನನ್ನು ಕೊಲ್ಲೋವುದು ಅಷ್ಟು ಸುಲಭದ ಮಾತಲ್ಲ. ಹೀಗಾಗಿ, ಅವಶ್ಯಕತೆ ಎನ್ನಿಸಿದರಷ್ಟೇ ಪಿಸ್ತೂಲು ಬಳಸಲು ಸೂಚನೆ ನೀಡಿದರು ಎಂದು ಹೇಳಲಾಗಿದೆ.

ವಿನಯ್ ಕುಲಕರ್ಣಿ ಸೋದರ ಮಾವ ವಿಜಯಪುರ ಮೂಲದ ಚಂದ್ರಶೇಖರ್ ಇಂಡಿ ಪಿಸ್ತೂಲು ತಂದುಕೊಟ್ಟನು. ಪಿಸ್ತೂಲುಗಳನ್ನು ಮುತ್ತಗಿ ಕೈಗೆ ಕೊಡುವಾಗ ವಿನಯ್ ಕುಲಕರ್ಣಿ ಇದ್ದರು. ಬಳಿಕ, ಮೇ ಮತ್ತು ಜೂನ್ ತಿಂಗಳಲ್ಲಿ ಎರಡು ಬಾರಿ ಕೊಲೆಗೆ ಯತ್ನಿಸಲಾಯಿತಾದರೂ ವಿಫಲವಾಯಿತು. ಕೊನೆಗೆ, 2016ರ ಜೂನ್ 15ರಂದು ಜಿಮ್ ನಲ್ಲಿ ಯೋಗೀಶ್ ಗೌಡನನ್ನು ಹತ್ಯೆ ಮಾಡಲಾಯಿತು ಎಂಬ ಅಂಶ ತಪ್ಪೊಪ್ಪಿಗೆಯಲ್ಲಿದೆ.

## ಭೀಕರ ಹತ್ಯೆ

ಈ ವೇಳೆ ಸಂಚು ರೂಪಿಸಿ, ಮನೆಯತ್ತ ಸ್ಕೂಟಿ ಮೂಲಕ ಹೊರಟಿದ್ದ ವೆಂಕಟೇಶ್ ಅವರಿಗೆ ಅಡ್ಡ ಬಂದು ಲಾಂಗ್‌ನಿಂದ ಬಲವಾಗಿ ಬೀಸಲಾಗಿದೆ. ಪರಿಣಾಮ ಎಡಗೈ ತೋಳಿನ ಭಾಗ ಕಟ್ ಆಗಿ, ಗಾಡಿ ಸಮೇತ ವೆಂಕಟೇಶ್ ನೆಲಕ್ಕೆ ಬಿದ್ದಿದ್ದಾರೆ. ಕೂಡಲೇ ಮನಸ್ಸೋ ಇಚ್ಛೆ ಮುಖಕ್ಕೆ ಲಾಂಗ್ ನಿಂದ ಕೊಚ್ಚಲಾಗಿದೆ. ಹೊಟ್ಟೆಯ ಭಾಗಕ್ಕೆ ಬಲವಾಗಿ ಬೀಸಲಾಗಿದೆ. ಪರಿಣಾಮ ವೆಂಕಟೇಶ್ ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ.

ಹತ್ಯೆಯಾಗುವುದಕ್ಕೂ ಕೆಲವು ನಿಮಿಷಗಳ ಮುನ್ನ ವೆಂಕಟೇಶ್, ಮಗನಿಗೆ ಕರೆ ಮಾಡಿ ಮನೆಗೆ ಬರುತ್ತಿದ್ದು, ಮುದ್ದೆ ಮಾಡುವಂತೆ ತಿಳಿಸಿದ್ದರಂತೆ. ಆದರೆ ಅಷ್ಟರಲ್ಲೇ ದಾರಿ ಮಧ್ಯೆ ಕೊಚ್ಚಿ ಕೊಲೆ ಮಾಡಲಾಗಿದ್ದು, ದಾರಿ ಹೋಕರು ನೋಡಿ ಮಗನಿಗೆ ಫೋನ್ ಮಾಡಿ ವಿಷಯ ತಿಳಿಸಿದ್ದಾರೆ.

ಹತ್ಯೆಯಾದವರ ಮಗ ಪೊಲೀಸರ ಬಳಿ, ತಮ್ಮ ತಂದೆ ತಮ್ಮೂರಿನ ರಸ್ತೆಯಲ್ಲಿರುವ ಬಾರ್ ಬಳಿ ಕೆಲವು ಅಕ್ಕ ಪಕ್ಕದ ಗ್ರಾಮದ ಯುವಕರು ಕುಡಿದು ಗಲಾಟೆ ಮಾಡುತ್ತಿದ್ದರು. ಮೂರು ದಿನಗಳ ಹಿಂದೆ ಬೈದು ಬುದ್ದಿವಾದ ಹೇಳಿದ್ದರು. ಹಾಗಾಗಿ ಆ ಹುಡುಗರು ಕೊಲೆ ಮಾಡಿರಬಹುದು ಎಂದು ಶಂಕೆ ವ್ಯಕ್ತಪಡಿಸಿದ್ದಾನೆ.

ಸ್ಥಳಕ್ಕೆ ಚಿಕ್ಕಬಳ್ಳಾಪುರ ಎಸ್‌ಪಿ ಕುಶಾಲ್ ಚೌಕ್ಸಿ ಹಾಗೂ ಗ್ರಾಮಾಂತರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶ್ವಾನದಳ ಸೇರಿದಂತೆ ಸೋಕೋ ತಂಡ ಪರಿಶೀಲನೆ ನಡೆಸಿದೆ.

## ದೋಚಿ ಪರಾರಿ!

ಸುಮಾರು 30 ಲಕ್ಷ ರೂಪಾಯಿಗಳನ್ನು ದೋಚಿ ಪರಾರಿ

ಸುಲೈಮಾನ್ ಹಾಜಿ ಅವರು ಸಿಂಗಾರಿ ಬೀಡಿ ಸಂಸ್ಥೆಯನ್ನು ಅನೇಕ ವರ್ಷಗಳಿಂದ ನಡೆಸುತ್ತಿದ್ದಾರೆ. ಇವರ ಮನೆಗೆ ಇಡಿ ಅಧಿಕಾರಿಗಳು ಎಂದು ಹೇಳಿಕೊಂಡು ದಾಳಿ ಮಾಡಿದ್ದಾರೆ. ಅದನ್ನು ಉದ್ಯಮಿಯೂ ನಂಬಿದ್ದಾರೆ. ಸುಮಾರು ಎರಡು ಗಂಟೆಗಳ ಕಾಲ ತನಿಖೆ ನಡೆಸಿದ್ದಾರೆ. ಈ ವೇಳೆ ಮನೆಯಲ್ಲಿದ್ದ ಸುಮಾರು 30 ಲಕ್ಷ ರೂಪಾಯಿಗಳನ್ನು ದೋಚಿ ಪರಾರಿಯಾಗಿದ್ದಾರೆ.

**ಎರಡು ಗಂಟೆಗಳವರೆಗೆ ತನಿಖೆ:** ತಡರಾತ್ರಿ ಸುಲೈಮಾನ್ ಹಾಜಿ ಅವರ ಮನೆಗೆ ತಮಿಳುನಾಡು ಮೂಲದ ತಂಡ ಕಾರ್‌ನಲ್ಲಿ ಆಗಮಿಸಿದೆ. ತಾವು ಇಡಿ ಅಧಿಕಾರಿಗಳು ಎಂದು ನಂಬಿಸಿ ಸುಮಾರು ಎರಡು ಗಂಟೆಗಳವರೆಗೆ ತನಿಖೆ ನಡೆಸಿದ್ದಾರೆ. ಅವರನ್ನು ಇಡಿ ಅಧಿಕಾರಿಗಳೇ ಎಂದು ನಂಬಿದ ಉದ್ಯಮಿಯು ಸಹಕರಿಸಿದ್ದಾರೆ. ಈ ವೇಳೆ ಮನೆಯಲ್ಲಿದ್ದ ಸುಮರು 30 ಲಕ್ಷ ರೂಪಾಯಿಗಳನ್ನು ಎತ್ತಿಕೊಂಡು ಪರಾರಿಯಾಗಿದ್ದಾರೆ. ಬಂಟ್ವಾಳ ತಾಲ್ಲೂಕಿನ ವಿಟ್ಲ ಪೊಲೀಸ್ ಠಾಣೆ ವ್ಯಾಪ್ತಿಯ ಬೋಳಂತೂರು ಸಮೀಪ ನಡೆದಿದೆ.

ಈ ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಟ್ಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸಧ್ಯ ಸ್ಥಳಕ್ಕೆ ದ.ಕ್ಷಿಣ ಕನ್ನಡ ಜಿಲ್ಲಾ ಎಸ್ಪಿ ಯತೀಶ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಇಬ್ಬರ ಸಾವು

ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಮುಗಿಸಿ ತಡರಾತ್ರಿ ಬರುವ ವೇಳೆ ಅಪಘಾತ ಸಂಭವಿಸಿದೆ. ನಾಲ್ಕು ಜನ ವಿದ್ಯಾರ್ಥಿಗಳು ಮಾತ್ರ ಕಾರಿನಲ್ಲಿ ಪ್ರಯಾಣ ಮಾಡುತ್ತಿದ್ದರು. ಗ್ಯಾದರಿಂಗ್ ಡ್ಯಾನ್ಸ್ ಮುಗಿಸಿಕೊಂಡು ಜೋಶ್‌ನಲ್ಲಿ ವಾಪಸ್ ಆಗುತ್ತಿದ್ದರು. ಅತಿಯಾದ ವೇಗವೇ ಈ ದುರ್ಘಟನೆಗೆ ಕಾರಣ ಎನ್ನಲಾಗಿದೆ.

ಮೃತರ ದೇಹಗಳು ಹಾಗೂ ಓರ್ವ ಗಾಯಾಳು ಗದಗ ಜಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ. ಮತ್ತೋರ್ವ ಗಾಯಾಳು ವಿದ್ಯಾರ್ಥಿಯನ್ನು ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಡಿಕ್ಕಿ ರಭಸಕ್ಕೆ ಕಾರು ಸಂಪೂರ್ಣ ಜಖಂಗೊಂಡಿದೆ. ಸ್ಥಳಕ್ಕೆ ಗ್ರಾಮೀಣ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಗದಗ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಿಧನ

ವಿವಿಯ ಹಂಗಾಮಿ ಕುಲಪತಿಯಾಗಿ 2022ರಲ್ಲಿ ಕಾರ್ಯನಿರ್ವಹಿಸಿ ನಿವೃತ್ತರಾಗಿದ್ದರು.

ಉಡುಪಿ ಜಿಲ್ಲೆಯ ಶಿರ್ವ ಗ್ರಾಮದವರಾದ ಅಸ್ನಾದಿ ಅವರು ಮಂಗಳೂರು ವಿವಿಯಲ್ಲಿ ಸ್ನಾತಕೋತ್ತರ ಪದವಿ, ದೆಹಲಿಯ ಜೆಎನ್‌ಯು ವಿವಿಯಲ್ಲಿ ಎಂ.ಫಿಲ್ ಹಾಗೂ ಪಿಹೆಚ್.ಡಿ ಪದವಿ ಪಡೆದಿದ್ದರು. ಚಿಕಾಗೊ ವಿವಿಯಲ್ಲಿ ಪೋಸ್ಟ್ ಡಾಕ್ಟೊರಲ್ ಪದವಿ ಪಡೆದಿದ್ದರು.

ಬಾಣಂತಿಯರ ಸಾವು ಪ್ರಕರಣ

# ಕ್ರಮ ಕೈಗೊಳ್ಳಲು ಕೇಂದ್ರಕ್ಕೆ ಪತ್ರ ಬರೆದ ಸಂಸದ ಸುಧಾಕರ್

**ಚಿಕ್ಕಬಳ್ಳಾಪುರ:** ರಾಜ್ಯದಲ್ಲಿ ಹೆಚ್ಚುತ್ತಿರುವ ಬಾಣಂತಿಯರ ಸಾವಿಗೆ ನ್ಯಾಯ ಕೊಡಿಸಲು, ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು ಹಾಗೂ ಕೇಂದ್ರ ಸರ್ಕಾರದಿಂದ ಸಂಶೋಧನಾ ತಂಡವನ್ನು ಕಳುಹಿಸಿ ಪರಿಶೀಲಿಸಬೇಕೆಂದು ಸಂಸದ ಡಾ.ಕೆ ಸುಧಾಕರ್ ಅವರು ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಅವರಿಗೆ ಮನವಿ ಮಾಡಿದ್ದಾರೆ.



ಈ ಕುರಿತು ಅವರು ಸಚಿವರಿಗೆ ಪತ್ರ ಬರೆದಿರುವ ಸುಧಾಕರ್, ಕಳೆದ ಕೆಲವು ತಿಂಗಳಿಂದ ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರು ಮೃತಪಡುವ ಘಟನೆ ವರದಿಯಾಗುತ್ತಿದೆ. 2024ರ ನವೆಂಬರ್‌ವರೆಗೆ 348 ತಾಯಂದಿರು ಮೃತಪಟ್ಟಿದ್ದಾರೆ. ಆಗಸ್ಟ್‌ನಿಂದ ನವೆಂಬರ್‌ವರೆಗೆ ಕೇವಲ 4 ತಿಂಗಳಲ್ಲಿ 217 ಪ್ರಕರಣ ವರದಿಯಾಗಿದೆ. ಈ 217 ಪ್ರಕರಣಗಳಲ್ಲಿ 179 ಪ್ರಕರಣಗಳು ಸರ್ಕಾರಿ ಆಸ್ಪತ್ರೆಗಳಿಗೆ ಸಂಬಂಧಿಸಿದ್ದಾಗಿದೆ. ಹೆಚ್ಚಿನವು ಪಿಪಿಎಚ್ ಹಾಗೂ ಎಎಫ್‌ಇ, ಅನೀಮಿಯ ಹಾಗೂ ನಿರ್ವಹಣೆಯಲ್ಲಿ ಲೋಪಕ್ಕೆ ಸಂಬಂಧಿಸಿದೆ. ಆಂಟಿಬಯೋಟಿಕ್ ಕೊರತೆ, ತರಬೇತಿ ಹೊಂದಿರುವ ಸಿಬ್ಬಂದಿ ಕೊರತೆ ಮೊದಲಾದವು ಕೂಡ ಇದಕ್ಕೆ ಕಾರಣ ಎಂದು ಅವರು ಪತ್ರದಲ್ಲಿ ವಿವರಿಸಿದ್ದಾರೆ.

ಇದರಲ್ಲಿ ಲಿಂಜರ್ಸ್ ಲ್ಯಾಕ್ಟೇಟ್ ದ್ರಾವಣದಲ್ಲಿ ದೋಷ ಕೂಡ ಕಾರಣ ಎನ್ನಲಾಗುತ್ತಿದೆ. ಈ ಕುರಿತು ಸಮಗ್ರವಾದ ಪರಿಶೀಲನೆ ನಡೆಯುವ ಅಗತ್ಯವಿದೆ. ಮೊದಲಿಗೆ, ತಾಯಂದಿರ ಮರಣಕ್ಕೆ ಕಾರಣ ಪತ್ತೆ ಮಾಡಲು ತುರ್ತಾಗಿ ಕಾರ್ಯಯೋಜನೆ ರೂಪಿಸಬೇಕಿದೆ. ಜೊತೆಗೆ ಕೇಂದ್ರ ಸರ್ಕಾರದಿಂದ ಸಂಶೋಧನಾ ತಂಡವನ್ನು ಕಳುಹಿಸಿ, ಕಾರಣ ಪತ್ತೆ ಜೊತೆಗೆ, ಪರಿಹಾರ ಶಿಫಾರಸು ಮಾಡಬೇಕಿದೆ. ಗರ್ಭಿಣಿಯರ ಆರೈಕೆ ಹಾಗೂ ಹೆರಿಗೆ ಸಮಯದಲ್ಲಿ ಉತ್ತಮ ಸೇವೆ ನೀಡಲು ಸರ್ಕಾರಿ ಆಸ್ಪತ್ರೆ ಸಿಬ್ಬಂದಿಗೆ ಸೂಕ್ತ ತರಬೇತಿ ನೀಡಬೇಕಿದೆ. ಕಬ್ಬಿಣಾಂಶದ ಆಹಾರ ಸೇವನೆ, ತುರ್ತು ಆರೈಕೆ, ಪ್ರತಿ ದಿನ ಆರೋಗ್ಯ ತಪಾಸಣೆ ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಗರ್ಭಿಣಿಯರಿಗೆ ಮಾಹಿತಿ ನೀಡಿ ಅರಿವು ಮೂಡಿಸಬೇಕು ಎಂದು ಅವರು ಪತ್ರದಲ್ಲಿ ಕೋರಿದ್ದಾರೆ.

ದೇಶದ ಭವಿಷ್ಯದ ದೃಷ್ಟಿಯಿಂದ ನವಜಾತ ಶಿಶು ಹಾಗೂ ತಾಯಂದಿರ ಜೀವ ಕಾಪಾಡುವುದು ಬಹಳ ಅಗತ್ಯ. ಆದ್ದರಿಂದ ತಾವು ಈ ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಳ್ಳುವ ಮೂಲಕ ಕರ್ನಾಟಕದಲ್ಲಿ ಹಾಗೂ ಭಾರತದ ಯಾವುದೇ ಭಾಗದಲ್ಲಿ ತಾಯಂದಿರು ಮೃತಪಡದಂತೆ ಎಚ್ಚರ ವಹಿಸಲು ಸಾಧ್ಯವಾಗುತ್ತದೆ. ಈ ಎಲ್ಲ ಕಾರ್ಯಗಳಿಗೆ ನಾನು ಸಂಪೂರ್ಣ ಸಹಕಾರ ಹಾಗೂ ಬೆಂಬಲ ನೀಡುತ್ತೇನೆ ಎಂದು ಅವರು ಪತ್ರದಲ್ಲಿ ತಿಳಿಸಿದ್ದಾರೆ.

ಕಿಡ್ನ್ಯಾಪ್ ಕೇಸ್‌ಗೆ ಟ್ವಿಸ್ಟ್

# ಹೋಂವರ್ಕ್, ಟ್ಯೂಷನ್‌ನಿಂದ ತಪ್ಪಿಸಿಕೊಳ್ಳಲು ಕಥೆ ಕಟ್ಟಿದ ಬಾಲಕರು

**ಚಿತ್ರದುರ್ಗ:** ಟ್ಯೂಷನ್‌ಗೆ ಹೋಗುವುದರಿಂದ ತಪ್ಪಿಸಿಕೊಳ್ಳಲು 11 ವರ್ಷದ ಬಾಲಕರು ಸಿನಿಮಾ ಶೈಲಿಯಲ್ಲಿ ಕಿಡ್ನ್ಯಾಪ್ ಕಥೆ ಕಟ್ಟಿದ ಘಟನೆ ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲೂಕಿನ ಧರ್ಮಪುರ ಗ್ರಾಮದಲ್ಲಿ ನಡೆದಿದೆ.



ನಿತ್ಯ ಟ್ಯೂಷನ್‌ಗೆ ಹೋಗಿಬರುತ್ತಿದ್ದ ಇಬ್ಬರು ಮಕ್ಕಳು ಟ್ಯೂಷನ್‌ನಲ್ಲಿ ಕೊಟ್ಟಿದ್ದ ಹೋಂವರ್ಕ್ ಮಾಡಲಾಗದೇ, ಹೊಸ ಕಥೆಯೊಂದನ್ನು ಹೆಣೆದಿದ್ದಾರೆ. ಕಳೆದ ಎರಡು ದಿನಗಳ ಹಿಂದೆ ಟ್ಯೂಷನ್‌ಗೆ ತೆರಳಿದ್ದ ಇಬ್ಬರು ಬಾಲಕರು, ನಮ್ಮ ಅಪಹರಣಕ್ಕೆ ಕಳ್ಳರು ಯತ್ನಿಸಿದ್ರು. ಕಳೆದ 15 ದಿನಗಳಿಂದ ಈ ಮಕ್ಕಳ ಅಪಹರಣಕ್ಕೆ ನಾಲ್ವರ ತಂಡ ಸ್ಕೆಚ್ ಹಾಕಿದ್ದು, ಬಹಿರ್ದೆಸೆಗೆ ತೆರಳಿದ್ದವರನ್ನು ರಾಸಾಯನಿಕ ಸ್ಪ್ರೇ ಸಿಂಪಡಿಸಿ ಓಮ್ನಿ ಕಾರಲ್ಲಿ ಕಿಡ್ನಾಪ್ ಮಾಡಿದ್ದು, 10 ಕಿಲೋಮೀಟರ್ ದೂರದಲ್ಲಿ ಬಿಟ್ಟು ಎಸ್ಕೇಪ್ ಆದರು ಎಂದು ಎಲ್ಲರನ್ನು ನಂಬಿಸಿದ್ದರು. ಈ ಪ್ರಕರಣದಿಂದ ಆತಂಕಗೊಂಡ ಮಕ್ಕಳ ಪೋಷಕರು ಅಬ್ಬಿನಹೊಳೆ ಠಾಣೆಗೆ ದೂರು ನೀಡಿ, ಕೂಡಲೇ ಈ ಪ್ರಕರಣ ಭೇದಿಸಬೇಕು. ಇಂತಹ ಘಟನೆ ಮರುಕಳಿಸದಂತೆ ಅಪಹರಣಕಾರರನ್ನು ಬಂಧಿಸುವಂತೆ ಆಗ್ರಹಿಸಿದ್ದರು.

ಇನ್ನು ಈ ವಿಚಾರ ಕೇಳಿ ಬೆಚ್ಚಿಬಿದ್ದ ಹಿರಿಯೂರು ಡಿವೈಎಸ್ಪಿ ಶಿವಕುಮಾರ್ ಮತ್ತು ತಂಡ ಪ್ರಕರಣದ ಬೆನ್ನತ್ತಿದೆ. ಬಾಲಕರು ಓದುತಿದ್ದ ಶಾಲೆ ಹಾಗೂ ಟ್ಯೂಷನ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಧರ್ಮಪುರದಲ್ಲಿನ ಸಿಸಿಟಿವಿಗಳಲ್ಲಿ ತಲಾಶ್ ನಡೆಸಿದ್ದಾರೆ. ಆದರೆ ಬಾಲಕರು ಹೇಳಿದಂತೆ ಓಮ್ನಿ ಓಡಾಡಿರುವ ಕುರುಹು ಎಲ್ಲೂ ಪತ್ತೆಯಾಗಲಿಲ್ಲ. ಆಗ ಅಲರ್ಟ್ ಆದ ಪೊಲೀಸರು, ಈ ಪ್ರಕರಣದ ತನಿಖೆಗಾಗಿ ವಿಶೇಷ ತಂಡ ರಚಿಸಿ, ಬುದ್ಧಿವಂತಿಕೆಯಿಂದ ಮಕ್ಕಳ ವಿಚಾರಣೆ ನಡೆಸಿದಾಗ ಕಿಡ್ನ್ಯಾಪ್ ಕಹಾನಿಯ ಅಸಲಿ ಸತ್ಯವನ್ನು ಬಾಲಕರು ಬಾಯಿ ಬಿಟ್ಟಿದ್ದಾರೆ ಎಂದು ಚಿತ್ರದುರ್ಗ ಎಸ್ಪಿ ರಂಜಿತ್ ಕುಮಾರ್ ಬಂಡಾರು ತಿಳಿಸಿದ್ದಾರೆ.

# ಪ್ರೋಟೋಕಾಲ್ ಉಲ್ಲಂಘಿಸಿದ ಸರ್ಕಾರ: ಹೆಚ್‌ಡಿಕೆ ಬೇಸರ

**ಮಂಡ್ಯ:** ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಮತ್ತು ಕರ್ನಾಟಕ ಸರ್ಕಾರದ ನಡುವಿನ ಮುಸುಕಿನ ಗುದ್ದಾಟ ಮುಂದುವರೆದಿದೆ ಎಂಬ ಅನುಮಾನ ವ್ಯಕ್ತವಾಗಿದೆ. ಹೆಚ್.ಡಿ ಕುಮಾರಸ್ವಾಮಿ ರಾಜ್ಯ ಪ್ರವಾಸದ ವೇಳೆ ಸರ್ಕಾರ ಕೇಂದ್ರ ಸಚಿವರ ಪ್ರೋಟೋಕಾಲ್ ಪಾಲನೆ ಮಾಡದೆ ಎಡವಟ್ಟು ಮಾಡಿಕೊಂಡಿದೆ ಎನ್ನಲಾಗುತ್ತಿದೆ. ಹೆಚ್.ಡಿ ಕುಮಾರಸ್ವಾಮಿ ಎರಡು ದಿನ ರಾಜ್ಯ ಪ್ರವಾಸ ಕೈಗೊಂಡಿದ್ದಾರೆ. ಸರ್ಕಾರ ಹೆಚ್.ಡಿ ಕುಮಾರಸ್ವಾಮಿ ರಾಜ್ಯ ಪ್ರವಾಸಕ್ಕೆ ಸರ್ಕಾರ ಕಾರು ನೀಡದೆ ನಿರ್ಲಕ್ಷ್ಯ ತೋರಿದೆ ಎಂಬ ಆರೋಪ ಕೇಳಿಬಂದಿದೆ.



ಇದರಿಂದ ಅಸಮಾಧಾನಗೊಂಡಿರುವ ಹೆಚ್.ಡಿ ಕುಮಾರಸ್ವಾಮಿ, ರಾಜ್ಯ ಸರ್ಕಾರದ ನಡೆ ವಿರುದ್ಧ ಆಕ್ರೋಶಗೊಂಡಿದ್ದಾರೆ. ಇದೀಗ, ಹೆಚ್.ಡಿ ಕುಮಾರಸ್ವಾಮಿ ಕೇಂದ್ರ ಸರ್ಕಾರದ ವಾಹನದಲ್ಲೇ ಮಂಡ್ಯ, ಮೈಸೂರು ಜಿಲ್ಲೆ ಪ್ರವಾಸ ಮಾಡುತ್ತಿದ್ದಾರೆ. ರಾಜ್ಯ ಸರ್ಕಾರದ ನಡೆಗೆ ಮಂಡ್ಯದ ಕೆ.ಆರ್.ಪೇಟೆಯಲ್ಲಿ ಹೆಚ್.ಡಿ ಕುಮಾರಸ್ವಾಮಿ ಬೇಸರ ವ್ಯಕ್ತಪಡಿಸಿದ್ದಾರೆ.

'ರಾಜ್ಯ ಸರ್ಕಾರ ನನಗೆ ಇಲ್ಲಿವರೆಗೂ ಕಾರು ಕೊಟ್ಟಿಲ್ಲ. ಹೀಗಾಗಿ, ನಮ್ಮ ಕೇಂದ್ರ ಸರ್ಕಾರದ ವಾಹನ ಬಳಕೆ ಮಾಡುತ್ತಿದ್ದೇನೆ. ಬೃಹತ್ ಕೈಗಾರಿಕಾ ಇಲಾಖೆಯ ವಾಹನ ತರಿಸಿಕೊಂಡಿದ್ದೇನೆ'' ಎಂದು ಹೆಚ್.ಡಿ ಕುಮಾರಸ್ವಾಮಿ ಬೇಸರ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಹೆಚ್ ಡಿ ಕುಮಾರಸ್ವಾಮಿಯವರನ್ನು ನಿರ್ಲಕ್ಷ್ಯ ಮಾಡುತ್ತಿದೆ ಎಂಬ ವಿಚಾರವಾಗಿ ಮಾತನಾಡಿದ ಅವರು ''ಆ ಬಗ್ಗೆ ನನಗೆ ಏನು ಗೊತ್ತಿಲ್ಲ. ಈ ಬಗ್ಗೆ ಅವರನ್ನೇ ಕೇಳಬೇಕು'' ಎಂದರು.

**ಮೈಸೂರಿನಲ್ಲಿ ಕುಮಾರಸ್ವಾಮಿ ದಿಶಾ ಸಭೆ:** ಮುಖ್ಯಮಂತ್ರಿ ಸಿದ್ದರಾಮಯ್ಯ ತವರು ಜಿಲ್ಲೆ ಮೈಸೂರಿನಲ್ಲಿಂದು ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ನೇತೃತ್ವದಲ್ಲಿ ದಿಶಾ ಸಭೆ ನಡೆಯಲಿದೆ. ಮೈಸೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಬೆಳಗ್ಗೆ 11 ಗಂಟೆಗೆ ಸಭೆ ನಡೆಯಲಿದೆ. ಇಂದಿನ ದಿಶಾ ಸಭೆ ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ಏಕೆಂದರೆ ಜೆಡಿಎಸ್‌ನ ಹಿರಿಯ ಮುಖಂಡ, ಶಾಸಕ ಜಿಟಿ ದೇವೇಗೌಡ ಮುನಿಸು ಮರೆತು ಸಭೆಯಲ್ಲಿ ಭಾಗಿಯಾಗುತ್ತಾರಾ ಕಾದುನೋಡಬೇಕಿದೆ.

ದಿಶಾ ಸಭೆ ಬಳಿಕ ಹೆಚ್.ಡಿ ಕುಮಾರಸ್ವಾಮಿ ಸಂಜೆ 4 ಗಂಟೆಗೆ ಮೈಸೂರಿನ ಸಾರಾ ಕನ್ವೆಂಷನ್ ಹಾಲ್‌ನಲ್ಲಿ ಜೆಡಿಎಸ್ ಕಾರ್ಯಕರ್ತರ ಜೊತೆ ಸಭೆ ನಡೆಸಲಿದ್ದಾರೆ. ಹಳೇ ಮೈಸೂರು ಭಾಗದಲ್ಲಿ ಪಕ್ಷವನ್ನು ಸಂಘಟನೆಗೊಳಿಸಿ, ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಗದ್ದುಗೆ ಹಿಡಿಯಲು ತಯಾರಿ ನಡೆಸುತ್ತಿದ್ದಾರೆ ಎನ್ನಲಾಗುತ್ತಿದೆ.

## ಸಂಜೆಯವರೆಗೂ ಕುಗ್ಗದೇ ಮುಂದುವರೆದ ಬಂದ್ ಬಿಸಿ

# ಸಂಪೂರ್ಣ ಯಶಸ್ವಿ ಕಂಡ ಕೋಲಾರ ಬಂದ್



**ಕೋಲಾರ:** ಸಂವಿಧಾನಾತ್ಮಕವಾಗಿ ಕೇಂದ್ರಗೃಹಮಂತ್ರಿಯಾಗಿ ಆಯ್ಕೆಯಾಗಿ ಸಂವಿಧಾನಜನಕರನ್ನೇ ತುಚ್ಚೀಕರಿಸಿದ ವಿರುದ್ಧ ಶುಕ್ರವಾರದಂದು ನಡೆದ ಕೋಲಾರ ಬಂದ್ ಸಂಪೂರ್ಣ ಯಶಸ್ವಿಯಾಗಿದೆ.

ಅನೇಕ ವರ್ಷ ಕಾಲದಿಂದ ವಿವಿಧ ಸಂಘಟನೆಗಳಿಂದ ಅನೇಕ ಬಾರಿ ಬಂದ್ ಕಂಡಿದ್ದ ಕೋಲಾರದಲ್ಲಿ ಇದೇ ಮೊದಲಿಗೆ ಸಂಪೂರ್ಣ ಯಶಸ್ವಿ ಬಂದ್ ನಡೆದಿದೆ. ಸಂಜೆಯ ಕತ್ತಲು ಕವಿಯುವವರೆಗೂ ಬಂದ್ ಮುಂದುವರೆದಿದ್ದು ಈ ಬಾರಿಯ ವಿಶೇಷವೆನಿಸಿತ್ತು.

ಬೆಳಗಿನ ನಸುಕಿನಲ್ಲಿಯೇ ಆರು ಗಂಟೆಗೇ ಪ್ರತಿಭಟನಾಕಾರರು ನೂರಾರು ಸಂಖ್ಯೆಯಲ್ಲಿ ದ್ವಿಚಕ್ರ ವಾಹನಗಳಲ್ಲಿ ನಗರವಿಡೀ ಸಂಚರಿಸಿ ಪ್ರತಿಭಟನೆಯ ಸದುದ್ದೇಶವನ್ನು ಎಲ್ಲೆಡೆ ಮೂಡಿಸುತ್ತಿದ್ದರು. ಕಳೆದ ಒಂದು ವಾರದಿಂದಲೇ ಬಂದ್‌ಗೆ ಕರೆ ನೀಡಿದ್ದರಿಂದಾಗಿ, ಬಂದ್‌ಗೆ ಬೆಂಬಲವನ್ನು ವ್ಯಕ್ತಪಡಿಸಿ ನಗರದ ಸಂಪೂರ್ಣ ಎಲ್ಲಾ ಅಂಗಡಿಗಳ ಬಾಗಿಲನ್ನೇ ತೆರೆಯಲಿಲ್ಲ. ಮಧ್ಯಾಹ್ನದವರೆಗೂ ಸಾರ್ವಜನಿಕರೂ ಬೀದಿಗಿಳಿಯಲಿಲ್ಲ. ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಬಸ್‌ಗಳಿಲ್ಲದೇ, ಪ್ರಯಾಣಿಕರೂ ಇಲ್ಲದೇ ಬಿಕೋ ಎನ್ನುತ್ತಿತ್ತು.

ನಗರದ ಎಲ್ಲಾ ಸರ್ಕಾರಿ, ಖಾಸಗಿ ಶಾಲಾ-ಕಾಲೇಜುಗಳು ಸಹಾ ಬಂದ್‌ಗೆ ಬೆಂಬಲ ವ್ಯಕ್ತಪಡಿಸಿ ರಜೆ ಘೋಷಿಸಿದ್ದವು. ಖಾಸಗಿ ಬಸ್, ಆಟೋಗಳೂ ಸಹಾ ಸ್ವಯಂ ಪ್ರೇರಿತವಾಗಿ ಬೀದಿಗಿಳಿಯದೇ ಬಂದ್‌ಗೆ ಬೆಂಬಲ ತೋರಿದ್ದವು. ನಗರದ ಎಲ್ಲಾರಸ್ತೆಗಳು ಸಂಜೆಯವರೆಗೂ ಖಾಲಿ ಖಾಲಿಯೇ ಉಳಿದವು. ಅನೇಕ ವರ್ಷ ಕಾಲದಿಂದ ಯಾವುದೇ ಸಂಘಟನೆಗಳು ಕರೆದಿದ್ದ ಬಂದ್‌ಗೆ ಕಿವಿಗೊಡದೇ ತೆರೆದಿಡುತ್ತಿದ್ದ ಮುಸ್ಲಿಂ ಸಮುದಾಯದ ಯಾವೊಂದು ಅಂಗಡಿಯೂ ತೆರೆಯದಿದ್ದಿದ್ದು ಈ ಬಾರಿಯ ವಿಶೇಷವಾಗಿತ್ತು. ನಗರದ ಒಳ ರಸ್ತೆಗಳಲ್ಲಿದ್ದ ಚಿಕ್ಕ-ಪುಟ್ಟ ಅಂಗಡಿಗಳೂ ಬಾಗಿಲು ತೆರೆಯದೇ ತಮ್ಮ ವ್ಯವಹಾರವನ್ನು ಸಂಪೂರ್ಣ ಸ್ಥಗಿತಗೊಳಿಸಿದ್ದವು. ಬೀದಿಬದಿಯ ವ್ಯಾಪಾರಿಗಳೂ ಈ ಬಾರಿ ಬೀದಿಗಿಳಿದಿರಲಿಲ್ಲ. ಬಂಗಾರಪೇಟೆಯಿಂದ ನಗರ ಪ್ರವೇಶಿಸುವ ರಸ್ತೆ, ಬೆಂಗಳೂರು-ಮಾಲೂರಿನಿಂದ ನಗರ ಪ್ರವೇಶಿಸುವ ರಸ್ತೆ, ಚಿಂತಾಮಣಿ-ಶ್ರೀನಿವಾಸಪುರದಿಂದ ನಗರ ಪ್ರವೇಶೀಸುವ ರಸ್ತೆ ಹಾಗೂ ಚಿಕ್ಕಬಳ್ಳಾಪುರದಿಂದ ನಗರ ಪ್ರವೇಶೀಸುವ ರಸ್ತೆಗಳನ್ನು ನಸುಕಿನಲ್ಲಿಯೇ ಪ್ರತಿಭಟನಾಕಾರರು ಸುತ್ತುವರೆದಿದ್ದು, ಹೊರಗಡೆಯಿಂದ ಯಾವುದೇ ವಾಹನ ನಗರ ಪ್ರವೇಶಿಸಲು ಸಾಧ್ಯವಾಗಿರಲಿಲ್ಲ. ಆದರೆ ಮೆಡಿಕಲ್ ಸ್ಟೋರ್, ಕ್ಲಿನಿಕ್, ಆಸ್ಪತ್ರೆಗಳು ಮುಕ್ತವಾಗಿ ಬಾಗಿಲು ತೆರೆದಿದ್ದವು. ಆಗಾಗ್ಗೆ ಅಂಬ್ಯುಲೆನ್ಸ್‌ಗಳೂ ಟುಂಯ್‌ಗುಟ್ಟುತ್ತಾ ರಸ್ತೆಗಳಲ್ಲಿ ಸಾಗ ಹೊರಟ ದೃಶ್ಯಗಳು ಕಂಡು ಬಂದವು. ಕೇಂದ್ರಗೃಹಮಂತ್ರಿಯು ಸಂಸತ್ತಿನಲ್ಲಿ ಅಂಬೇಡ್ಕರ್ ಬಗ್ಗೆ ತೀರಾ ತುಚ್ಛವಾಗಿ ಮಾತನಾಡಿದ್ದೇ ಅಲ್ಲದೇ, ಅದನ್ನು ಸಮರ್ಥಿಸಿಕೊಂಡ ಬಗ್ಗೆ, ಈ ಕುರಿತು ರಾಷ್ಟ್ರವಿಡೀ ಜನ ಆಕ್ರೋಶ ವ್ಯಕ್ತಗೊಂಡ ಬೆನ್ನಲ್ಲೇ ತನ್ನದೇ ಪಕ್ಷದ ಕಾರ್ಯಕರ್ತ-ಪದಾಧಿಕಾರಿಗಳಿಂದ ಹೇಳಿಕೆಗಳನ್ನು ಕೊಡಿಸಿ ಎತ್ತಿಕಟ್ಟಿದ್ದು ಇನ್ನಷ್ಟು ಜನಾಕ್ರೋಶಕ್ಕೆ ಎಡೆಯಾಗಿತ್ತು. ಹೀಗಾಗಿ ಜನ ಬೀದಿಗಿಳಿದು ಪ್ರತಿಭಟಿಸಿ ಕೋಲಾರ ಬಂದ್ ಮಾಡಿಸಿದ್ದರು. ಇಡೀ ನಗರದಲ್ಲಿ ಅಂಬೇಡ್ಕರ್ ಭಾವಚಿತ್ರ, ಭಾವುಟಗಳನ್ನು ಹೊರತುಪಡಿಸಿ ಇನ್ನಿತರೆ ಯಾವುದೇ ರಾಜಕೀಯ ಪಕ್ಷಗಳ ನಾಯಕರ ಭಾವಚಿತ್ರ, ಭಾವುಟಗಳು ಎಲ್ಲಿಯೂ ಕಂಡು ಬರಲಿಲ್ಲ. ಹಿಂದು, ಮುಸ್ಲಿಂ, ಕ್ರಿಶ್ಚಿಯನ್ಸ್ ಎಂಬ ಯಾವುದೇ ಬೇಧ-ಭಾವವಿಲ್ಲದೇ ಎಲ್ಲಾ ಧರ್ಮ-ಜಾತಿಯ ನಾಯಕರೂ ಈ ಬಾರಿ ಪಕ್ಷಾತೀತವಾಗಿ ಬಂದ್‌ನಲ್ಲಿ ಭಾಗವಹಿಸಿದ್ದರು. ಅಲ್ಲಲ್ಲಿ ನಡೆದ ಭಾಷಣಗಳಲ್ಲಿಯೂ ಯಾವುದೇ ರಾಜಕೀಯ ಪಕ್ಷಗಳ ಸೊಲ್ಲಿರಲಿಲ್ಲ.

## ಚಾಮರಾಜನಗರ ವಿವಿಗೆ ಅಂಬೇಡ್ಕರ್ ವಿವಿ ಎಂದು ಮರುನಾಮಕರಣ ಮಾಡಿ



**ಚಾಮರಾಜನಗರ:** ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ವಿಶ್ವವಿದ್ಯಾನಿಲಯಎಂದು ಮರುನಾಮಕರಣ ಮಾಡಬೇಕುಎಂದುಜಿಲ್ಲಾಜನಹಿತಾಶಕ್ತಿ ಹೋರಾಟ ವೇದಿಕೆ ವತಿಯಿಂದಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾನಾಗ್ ಅವರ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

2010-11 ನೇ ಸಾಲಿನಲ್ಲಿ ಮೈಸೂರುವಿವಿನಿಲಯದಉಪಕೇಂದ್ರವಾಗಿಅಂಬೇಡ್ಕರ್ ಸ್ನಾತಕೋತ್ತರಕೇಂದ್ರ ಹೆಸರಿನಲ್ಲಿಆರಂಭಿಸಲಾಯಿತು.

ಅಂಬೇಡ್ಕರ್ ಸ್ನಾತಕೋತ್ತರಕೇಂದ್ರ 43ಎಕರೆ ವಿಸ್ತೀರ್ಣ ಹೊಂದಿದ್ದು,. ವಿಶಾಲವಾದ ಸುಸಜ್ಜಿತಕ್ಯಾಂಪಸ್ ಹೊಂದಿದೆ.ಈಗಾಗಲೇ ಕೇಂದ್ರದಲ್ಲಿಕನ್ನಡ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ರಸಾಯನ, ಭೌತ, ಜಾನಪದ, ಗ್ರಂಥಾಲಯ ವಿಜ್ಞಾನ. ಗಣಕಯಂತ್ರ, ಬಿ.ಎ. ಎಂ.ಎ.ಎಂಸಿಎ, ಎಂಕಾಂ ಸೇರಿದಂತೆ 13ವಿಷಯಗಳನ್ನು ಬೋಧಿಸಲಾಗುತ್ತಿದೆ.2023 ಮಾ.28ರಂದು ರಾಜ್ಯಸರ್ಕಾರಚಾಮರಾಜನಗರಕ್ಕೆ ಪ್ರತ್ಯೇಕ ವಿವಿನಿಲಯ ಮಂಜೂರು ಮಾಡಿದೆ.

ಕರ್ನಾಟಕದಲ್ಲಿ ಸ್ಥಾಪನೆಗೊಂಡಿರುವ ಬೇರೆಬೇರೆ ವಿವಿನಿಲಯಗಳು ಬೇರೆಬೇರೆಮಹನೀಯರ ಹೆಸರಿನಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿವೆ. ಅಂಬೇಡ್ಕರ್ ಹೆಸರಿನಲ್ಲಿಯಾವ ವಿಶ್ವವಿದ್ಯಾನಿಲಯವುಇಲ್ಲ. ಕಳೆದ 7 ವರ್ಷದಿಂದಅಂಬೇಡ್ಕರ್ ಹೆಸರಿನಲ್ಲಿಕಾರ್ಯನಿರ್ವಹಿಸುತ್ತಿರುವಅಂಬೇಡ್ಕರ್ ಸ್ನಾತಕೋತ್ತರಕೇಂದ್ರಕ್ಕೆಚಾಮರಾಜನಗರ ವಿಶ್ವವಿದ್ಯಾನಿಲಯಎಂದು ಹೆಸರಿಟ್ಟಿರುವುದು ಬೇಸರದ ಸಂಗತಿ.

ಶೇ 90ರಷ್ಟು ದಲಿತಸಮುದಾಯದವರು ವಾಸಮಾಡುವಚಾಮರಾಜನಗರ ಮೀಸಲು ಲೋಕಸಭೆಕ್ಷೇತ್ರವಾಗಿದೆ. ಮುಂಬರುವ ಫೆ.13 ರಂದುಜಿಲ್ಲೆಯ ಪ್ರಸಿದ್ಧ ಯಾತ್ರಾಸ್ಥಳ ಮಲೆಮಹದೇಶ್ವರ ಬೆಟ್ಟದಲ್ಲಿಆಯೋಜಿಸುವ ಸಚಿವ ಸಂಪುಟಸಭೆಯಲ್ಲಿಮುಖ್ಯಮಂತ್ರಿ ಸಿದ್ದರಾಮಯ್ಯಅವರು' ಜಿಲ್ಲೆಯಅಭಿವೃದ್ಧಿ ಕಾರ್ಯಕ್ರಮಗಳ ಪಟ್ಟಿಯಲ್ಲಿಚಾಮರಾಜನಗರ ವಿವಿನಿಲಯಕ್ಕೆಡಾ.ಬಿ.ಆರ್. ಅಂಬೇಡ್ಕರ್‌ವಿಶ್ವವಿದ್ಯಾನಿಲಯಎಂದು ಮರುನಾಮಕರಣ ಮಾಡಬೇಕುಎಂದುಜಿಲ್ಲೆಯ ಸಾರ್ವಜನಿಕರು, ದಲಿತರಪರವಾಗಿಜಿಲ್ಲಾಜನಹಿತಾಶಕ್ತಿ ಹೋರಾಟ ವೇದಿಕೆಅಧ್ಯಕ್ಷರಾಮಸಮುದ್ರಸುರೇಶ್ ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿಡಿಎಸ್‌ಎಸ್‌ಜಿಲ್ಲಾಸಂಚಾಲಕಯರಿಯೂರುರಾಜಣ್ಣ, ಸಾಹಿತಿ ಸೋಮ್ಮಶೇಖರ್ ಬಿಸಲ್ವಾಡಿ, ಜಿಲ್ಲಾಜನಹಿತಾಶಕ್ತಿ ಹೋರಾಟ ವೇದಿಕೆ ಪ್ರಧಾನ ಕಾರ್ಯದರ್ಶಿ ಕಾಡಹಳ್ಳಿ ನಾಗರಾಜು ಹಾಜರಿದ್ದರು.

## ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ ಸುಧಾಕರ್ ಅನಿಸಿಕೆ

# ನಂದಿಗಿರಿ ಧಾಮದಲ್ಲಿ ಸಂಪುಟ ಸಭೆಗೆ ಚಿಂತನೆ



**ಚಿಕ್ಕಬಳ್ಳಾಪುರ:** ನಂದಿ ಗಿರಿಧಾಮದಲ್ಲಿ ರಾಜ್ಯ ಸಚಿವ ಸಂಪುಟ ಸಭೆ ನೆಡಸುವಂತೆ ಕೋರಿ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದಾರಾಮಯ್ಯ ಅವರಿಗೆ ಮನವಿ ಮಾಡುತ್ತೇನೆ ಎಂದು ಉನ್ನತ ಶಿಕ್ಷಣ ಸಚಿವರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಸಿ ಸುಧಾಕರ್ ಅವರು ತಿಳಿಸಿದರು.

ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕಾಲೇಜು ಮತ್ತು ಶಿಕ್ಷಣ ಇಲಾಖೆ ಇವರ ಸಂಯುಕ್ತಾಶ್ರದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ನಡೆದ ನೂತನ ಕಟ್ಟಡದ ಶಂಕು ಸ್ಥಾಪನೆ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಾತ್ಮ ಗಾಂಧೀಜಿಯವರು 1927ರಲ್ಲಿ 45 ದಿನ ಮತ್ತು 1936 ರಲ್ಲಿ 20 ದಿನ ಒಟ್ಟು 65 ದಿನ ನಂದಿ ಬೆಟ್ಟದಲ್ಲಿ ವಾಸ್ತವ್ಯ ಮಾಡಿ ಆರೋಗ್ಯವನ್ನು ಸುಧಾರಿಸಿಕೊಂಡಿದ್ದರು. ಇಂತಹ ವಿಶ್ವವಿಖ್ಯಾತ ನಂದಿಗಿರಿಧಾಮದಲ್ಲಿ ಗಾಂಧೀಜಿಯವರ ಹೆಜ್ಜೆ ಗುರುತುಗಳಿರುವ ಜಾಗದಲ್ಲಿ ರಾಜ್ಯ ಸಚಿವ ಸಂಪುಟ ಸಭೆಯನ್ನು ನಡೆಸಬೇಕೆಂದು ಚಿಂತನೆ ಇದೆ. ಸದ್ಯದಲ್ಲೆ ಚಾಮರಾಜ ನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಯಲಿದೆ. ಅದೇ ರೀತಿ ನಮ್ಮ ಜಿಲ್ಲೆಯಲ್ಲಿಯೂ ಕೂಡ ಸಭೆ ನಡೆಯಬೇಕು. ನಂದಿ ಗಿರಿಧಾಮದ ರಾಜ್ಯದ ಏಕೈಕ ರೋಪ್ ವೇ ಕಾಮಗಾರಿಗೆ ವೇಗ ನೀಡಬೇಕು ಹಾಗೂ ಈ ಭಾಗದ ಸಮಸ್ಯೆಗಳ ಬಗ್ಗೆ ಹೆಚ್ಚಿನ ಗಮನ ಸೆಳೆಯುವ ನಿಟ್ಟಿನಲ್ಲಿ ಸಂಪುಟ ಸಭೆ ಸಹಕಾರಿಯಾಗಲಿದ್ದು ಈ ಕುರಿತು ಮುಖ್ಯಮಂತ್ರಿಗಳಿಗೆ ಮನವಿ ಮಾಡುತ್ತೇನೆ ಎಂದರು.

ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಮಹತ್ತರವಾದ ಸುಧಾರಣೆಗಳನ್ನು ಜಾರಿಗೊಳಿಸುವ ಉದ್ದೇಶಕ್ಕಾಗಿ ವಿಶ್ವ ಬ್ಯಾಂಕಿನಿಂದ 2500 ಕೋಟಿಗಳ ಸಾಲವನ್ನು ಪಡೆಯಲು ರಾಜ್ಯ ಸರ್ಕಾರ ಸಂಪುಟದ ಅನುಮತಿಯನ್ನು ಪಡೆಯಲಾಗಿದೆ. ಈ ಅನುದಾನವನ್ನು ಪರಿಣಾಮಕಾರಿಯಾಗಿ ಉಪಯೋಗಿಸಿಕೊಂಡು ಕೈಗಾರಿಕೆಗಳೊಂದಿಗೆ ಒಡಂಬಡಿಕೆ ಮಾಡಿಕೊಂಡು ಉದ್ಯೋಗ ಖಾತರಿಪಡಿಸುವಂತಹ ಮತ್ತಷ್ಟು ಕೋರ್ಸ್ ಗಳನ್ನು ಪ್ರಾರಂಭಿಸಲಾಗುವುದು, 2024-25ನೇಶೈಕ್ಷಣಿಕಸಾಲಿನಲ್ಲಿಆರಂಭಿಸಲಾಗಿರುವ ೦ಇಆಕ ಕೌಶಲ್ಯ ಆಧಾರಿತ ಪದವಿ ತರಗತಿಗಳಿಗೆ ರಾಜ್ಯದಲ್ಲಿ 1600 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದಾರೆ ಪದವಿ ಓದುತ್ತಿರುವ ವಿದ್ಯಾರ್ಥಿಗಳಿಗೂ ಸಹ ನೇರವಾಗಿ ಉದ್ಯೋಗದ ಅವಕಾಶಗಳನ್ನು ಕಲ್ಪಿಸಬೇಕು ಎನ್ನುವ ಉದ್ದೇಶದಿಂದ ರಾಜ್ಯ ಸರ್ಕಾರ 2024-25 ನೇ ಸಾಲಿನಲ್ಲಿ ಕೌಶಲ್ಯಾಧಾರಿತ ಶೈಕ್ಷಣಿಕ ಕೋರ್ಸುಗಳನ್ನು ಪರಿಚಯಿಸಿದೆ. ಬಿಕಾಂ ಲಾಜಿಸ್ಟಿಕ್, ಇ- ಕಾಮರ್ಸ್, ಬಿಕಾಂ ರೀಟೈಲ್ ಮತ್ತು ಃಈಖಖ ಕೋರ್ಸ್ ಗಳನ್ನು ಈ ವರ್ಷ ಆರಂಭಿಸಲಾಗಿದ್ದು ಈ ಕೋರ್ಸುಗಳನ್ನು ಆಯ್ಕೆ ಮಾಡಿಕೊಂಡು ಪದವಿಗೆ ಸೇರಿದ ವಿದ್ಯಾರ್ಥಿಗಳಿಗೆ ಪದವಿ ಜೊತೆಗೆ ಪ್ರತ್ಯೇಕ ಪಠ್ಯ ಚಟುವಟಿಕೆಗಳಲ್ಲಿ ತರಬೇತಿ ನೀಡಿ ಅಂತಿಮ ವರ್ಷದ ಐದು ಮತ್ತು ಆರನೇ ಸೆಮಿಸ್ಟರ್ ವೇಳೆಗೆ ನೇರವಾಗಿ ಕಂಪೆನಿಗಳಲ್ಲಿ ಉದ್ಯೋಗವಕಾಶಗಳನ್ನು ಶಿಷ್ಯವೇತನದೊಂದಿಗೆ ನೀಡಲಾಗುವುದು. ಶಿಷ್ಯವೇತನವು 8000 ದಿಂದ ಆರಂಭವಾಗಿ 20 ಸಾವಿರದ ವರೆಗೂ ಇರಲಿದೆ. ಈ ಮಾದರಿಯ ಶೈಕ್ಷಣಿಕ ವ್ಯವಸ್ಥೆಯನ್ನು ಜಾರಿಗೆ ತಂದು ಉದ್ಯೋಗಾಕಾಂಕ್ಷಿಗಳಿಗೆ ನೆರವಾಗಲು ಸರ್ಕಾರ ಮುಂದಾಗಿದೆ ಈ ನಿಟ್ಟಿನಲ್ಲಿ ಮತ್ತಷ್ಟು ಪರಿಣಾಮಕಾರಿ ಯುಕ್ತ ಕ್ರಮಗಳನ್ನು ಕೈಗೊಂಡು ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಅಮೂಲಾಗ್ರ ಬದಲಾವಣೆಯನ್ನು ತರಲು ಪ್ರಯತ್ನಿಸಲಾಗುವುದೆಂದು ತಿಳಿಸಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನೂತನ ಕಟ್ಟಡವನ್ನು 5.87 ಕೋಟಿಯಲ್ಲಿ ಹಾಗೂ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಹೆಚ್ಚುವರಿ ಕೊಠಡಿಗಳನ್ನು 3.18 ಕೋಟಿ ವೆಚ್ಚದಲ್ಲಿ ನಿರ್ಮಿಸಲು ಇಂದು ಶಂಕು ಸ್ಥಾಪನೆಯನ್ನು ನೆರವೇರಿಸಲಾಗಿದೆ. ಈ ನೂತನ ಕಟ್ಟಡಗಳನ್ನು ಖಾಸಗಿ ಕಾಲೇಜುಗಳನ್ನು ಮೀರಿಸುವಂತೆ ನಿರ್ಮಾಣ ಮಾಡಲಾಗುತ್ತದೆ. ಈ ಭಾಗದ ಕಾಲೇಜುಗಳಲ್ಲಿ ಮೂಲಭೂತವಾಗಿ ಅಗತ್ಯವಿರುವ ಸೌಕರ್ಯಗಳನ್ನು ಒದಗಿಸಲು ಅನುದಾನ ನೀಡಲಾಗುವುದು. ಈ ಕುರಿತು ಪ್ರಸ್ತಾವನೆ ಸಲ್ಲಿಸಲು ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ. ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ವಿಜ್ಞಾನ ವಿಭಾಗವನ್ನು ತೆರೆಯಲು ಚಿಂತಿಸಲಾಗಿದೆ ಎಂದು ತಿಳಿಸಿದರು.

**ಕನ್ನಡ ಭವನ ಉದ್ಘಾಟನೆ:** ಜಿಲ್ಲೆಯಲ್ಲಿ ಆಧುನಿಕ ರೀತಿಯಲ್ಲಿ ಸುಸಜ್ಜಿತವಾಗಿ ನಿರ್ಮಾಣವಾಗಿರುವ ಜಿಲ್ಲಾ ಕನ್ನಡ ಭವನವನ್ನು ಈ ತಿಂಗಳ ಅಂತ್ಯದೊಳಗೆ ಫೆಬ್ರವರಿ ಮಾಹೆಯಲ್ಲಿ ಉದ್ಘಾಟನೆ ಮಾಡಲು ತಯಾರಿ ಮಾಡಿಕೊಳ್ಳಲಾಗುತ್ತಿದೆ. ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಇದೇ ಭವನದಲ್ಲಿ ಆಯೋಜಿಸಲು ಯೋಜಿಸಲಾಗಿದೆ. ಅತ್ಯಂತ ಯೋಜಿತವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲು ಬೇಕಾಗುವಂತಹ ಎಲ್ಲಾ ವ್ಯವಸ್ಥೆಗಳನ್ನು ಈ ಭವನದಲ್ಲಿ ನಿರ್ಮಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರ ಸಭೆ ಅಧ್ಯಕ್ಷರಾದ ಎ. ಗಜೇಂದ್ರ, ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಮುನಿರಾಜು, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಚಂದ್ರಯ್ಯ ಹಾಗೂ ಬೋಧಕ ಬೋಧಕೇತರ ಆಡಳಿತ ವರ್ಗದವರು ವಿದ್ಯಾರ್ಥಿಗಳು, ಸಾರ್ವಜನಿಕರು ಹಾಜರಿದ್ದರು.

## ವಿಜಯಪುರ ಪಟ್ಟಣದಲ್ಲಿ ಧನುರ್ಮಾಸ ಭಜನೆ



**ವಿಜಯಪುರ;** ದೇವಾಲಯಗಳ ನಗರಿ ಎಂದೇ ಪ್ರಖ್ಯಾತವಾದ ವಿಜಯಪುರ ಪಟ್ಟಣದಲ್ಲಿ ಧನುರ್ಮಾಸ ಸಂದರ್ಭದಲ್ಲಿ ಹಿರಿಯರು ಕಿರಿಯರು ಎಲ್ಲರೂ ಸೇರಿ ಬೆಳಗಿನ ಜಾವ ಚುಮುಚುಮು ಚಳಿಯಲ್ಲಿ 5:00ಯಿಂದಲೇ ದೇವರ ನಾಮ ಸ್ಮರಣೆ ಮಾಡಿಕೊಂಡು ಪಟ್ಟಣದ ಎಲ್ಲಾ ದೇವಾಲಯಗಳಿಗೆ ತೆರಳಿ ಪೂಜೆ ಸಲ್ಲಿಸಿ ಆಯಾ ದೇವರುಗಳ ನಾಮಸ್ಮರಣೆಯನ್ನು ಮಾಡುವುದು ಸರಿಸುಮಾರು ನೂರು ವರ್ಷಗಳ ಕಾಲದಿಂದ ನಡೆದುಕೊಂಡು ಬಂದಿದೆ.

ಧಾರ್ಮಿಕ, ಆಧ್ಯಾತ್ಮಿಕ ನಗರಿ ವಿಜಯಪುರ ಪಟ್ಟಣದಲ್ಲಿ ಮಾಘ ಮಾಸ, ಧನುರ್ಮಾಸ, ಶ್ರಾವಣ ಮಾಸ ಮುಂತಾದ ಪ್ರತಿ ಮಾಸಗಳಲ್ಲಿಯೂ ಇರುವ ವಿಶೇಷತೆಗಳನ್ನು ಗುರುತಿಸಿ,ವಿಶೇಷ ದೇವರುಗಳನ್ನು ಪೂಜಿಸುವ ಕಾರ್ಯಕ್ರಮ ಇದ್ದು, ಧನುರ್ ಮಾಸದಲ್ಲಿ ಬೆಳಗಿನ ಜಾವ ಬಹಳಷ್ಟು ಮಂದಿ ಹೆಣ್ಣು ಮಕ್ಕಳು ಅಶ್ವತ ಕಟ್ಟೆಗಳಿಗೆ ಹೋಗಿ ಪೂಜೆ ಸಲ್ಲಿಸಿ ಬರುತ್ತಾರೆ.

ಅದೇ ರೀತಿಯಲ್ಲಿ ಸುಮಾರು ನೂರು ವರ್ಷಗಳ ಇತಿಹಾಸ ಹೊಂದಿರುವ ಶ್ರೀ ಲಕ್ಷ್ಮಿ ವೆಂಕಟರಮಣ ಸ್ವಾಮಿ ಭಜನಾ ಭಕ್ತ ಮಂಡಳಿಯವರು ಪ್ರತಿದಿನ ಬೆಳಗಿನ ಜಾವ, 8-10 ವರ್ಷಗಳ ಬಾಲಕರಿಂದ ಹಿಡಿದು 70-80 ವರ್ಷಗಳ ವೃದ್ಧರವರೆಗೂ ಬೆಳಗಿನ ಜಾವ ಐದು ಗಂಟೆಗೆ ಎದ್ದು ಕೊರೆಯುವ ಚಳಿಯಲ್ಲಿ ದೇವರ ಭಾವಚಿತ್ರಗಳನ್ನು ಹಿಡಿದು, ದೀಪ ಸ್ತಂಭಗಳೊಂದಿಗೆ ಭಜನೆ ಮಾಡುತ್ತ ಎಲ್ಲಾ ದೇವಾಲಯಗಳ ಬಳಿ ಹೋಗಿ ಸ್ತೋತ್ರ ಮಾಡಿ ಏಳು ಗಂಟೆಗೆ ಮುಕ್ತಾಯ ಹಾಡುತ್ತಾರೆ.

ಗಂಟಸಾಲ ಖ್ಯಾತಿಯ ಶ್ರೀ ಲಕ್ಷ್ಮಿ ವೆಂಕಟರಮಣ ಸ್ವಾಮಿ ದೇವಾಲಯದ ಮಾಜಿ ಅಧ್ಯಕ್ಷರಾದ ಸುಮಾರು 70 ವರ್ಷದ ಮಹಾತ್ಮಾಂಜನೇಯರವರು ಮಾತನಾಡುತ್ತ ನಾವು ಕಳೆದ 60 ವರ್ಷಗಳಿಂದ ನಿರಂತರವಾಗಿ ಧನುರ್ಮಾಸ ಭಜನಾ ಕಾರ್ಯಕ್ರಮ ನಡೆಸಿಕೊಂಡು ಬರುತ್ತಿದ್ದೇವೆ. ಇದಕ್ಕೆ ಮೊದಲು ನಮ್ಮ ತಂದೆ ಅವರಿಗೂ ಹಿರಿಯರುಗಳಾದ ಜೆಸಿ ರುದ್ರಪ್ಪ, ಯಜಮಾನ ಮರಿ ಚೆನ್ನಪ್ಪ ರವರುಗಳ ನೇತೃತ್ವದಲ್ಲಿ ಶ್ರೀ ಸೋಮೇಶ್ವರ ಸ್ವಾಮಿ ಭಜನಾ ಭಕ್ತ ಮಂಡಳಿಯವರು ಹಾಗೂ ಶ್ರೀ ಎಲ್ಲಮ್ಮ ತಾಯಿ ಭಜನಾ ಭಕ್ತ ಮಂಡಳಿಯವರು ಮತ್ತು ಮೇಷ್ಟು ತಿಮ್ಮಯ್ಯ ರವರುಗಳ ನೇತೃತ್ವದಲ್ಲಿ ಶ್ರೀ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿ ಭಜನಾ ಭಕ್ತ ಮಂಡಳಿಗಳವರು ನಾಲ್ಕಾರು ತಂಡಗಳಲ್ಲಿ ಬೆಳಗಿನ ಜಾವ ಐದು ಗಂಟೆಗೆ ಪಟ್ಟಣದಲ್ಲಿ ಮೆರವಣಿಗೆಯೊಂದಿಗೆ ಭಜನೆ ಮಾಡುತ್ತಿದ್ದುದ್ದನ್ನು ನೆನಪಿಸಿಕೊಂಡರು.

## ಸಾವಿತ್ರಿಬಾಯಿ ಫುಲೆ ಜಯಂತಿ



**ಹುಳಿಯಾರು:** ಸ್ವಾತಂತ್ರ್ಯ ಪೂರ್ವದಲ್ಲಿಯೇ ಮಹಿಳೆಯರ ಅವಕಾಶಕ್ಕಾಗಿ ಹೋರಾಡಿದ ದಿಟ್ಟ ಮಹಿಳೆ ಸಾವಿತ್ರಿಬಾಯಿ ಫುಲೆ ಅವರಾಗಿದ್ದು, ಆಕೆಯ ಹೆಸರು ಭಾರತದ ಇತಿಹಾಸ ಪುಟದಲ್ಲಿ ಅಚ್ಚಳಿಯದೆ ಉಳಿದಿದೆ ಎಂದು ಮುಖ್ಯಶಿಕ್ಷಕ ನಾಗರತ್ನಮ್ಮ ಬಣ್ಣಿಸಿದರು. ಹುಳಿಯಾರು ಹೋಬಳಿಯ ಗೋಪಾಲಪುರ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಶುಕ್ರವಾರ ಆಯೋಜಿಸಿದ್ದ ಜ್ಯೋತಿರಾವ್ ಫುಲೆ ಜಯಂತಿಯಲ್ಲಿ ಅವರು ಮಾತನಾಡಿದರು. ಸಾವಿತ್ರಿಬಾಯಿ ಫುಲೆ ಮಹಿಳಾ ಶಿಕ್ಷಣಕ್ಕೆ ಅಪಾರವಾಗಿ ಇಂಬು ನೀಡಿದವರು. ಹೆಣ್ಣು ಮಕ್ಕಳು ಶಿಕ್ಷಣ ಪಡೆಯಬೇಕೆಂಬ ಕನಸನ್ನು 19 ನೇ ಶತಮಾನದ ಪ್ರಾರಂಭದಲ್ಲೇ ಕಂಡು ಈ ಧ್ಯೇಯೋದ್ದೇಶಕ್ಕಾಗಿ ತಮ್ಮ ಪತಿ ಜ್ಯೋತಿಬಾ ಫುಲೆ ಅವರೊಂದಿಗೆ ನಿರಂತರ ಶ್ರಮಿಸಿದ ಮಹಾನ್ ತಾಯಿ ಈಕೆ ಎಂದರು. ಶಿಕ್ಷಕಿ ಎನ್. ಲಕ್ಷ್ಮೀಬಾಯಿ, ಶಿಕ್ಷಕ ಈಶ್ವರಪ್ಪ ಸೇರಿದಂತೆ ಮಕ್ಕಳು ಉಪಸ್ಥಿತರಿದ್ದರು.

## ಫೆಲೋಶಿಪ್‌ಗಾಗಿ ಅರ್ಜಿ

**ಮೈಸೂರು:** 2024-25 ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ), ಹಾಗೂ 3(ಬಿ)ಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಆನ್-ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಜನವರಿ 20 ಅರ್ಜಿ ಸಲ್ಲಿಸಬೇಕು. ಆಸಕ್ತ ಅಭ್ಯರ್ಥಿಗಳು ಇಲಾಖಾ ವೆಬ್‌ಸೈಟ್ https://bcwd.karnataka.gov.in ಮೂಲಕ ಮಾಹಿತಿಯನ್ನು ಪಡೆದುಕೊಳ್ಳಬಹುದಾಗಿದೆ. ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿದ್ದು, ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ), ಹಾಗೂ 3(ಬಿ) ಗೆ ಸೇರಿರಬೇಕು. ಪ್ರವರ್ಗ-1, ರೂ.4.50ಲಕ್ಷ 2(ಎ), 3(ಎ) ಹಾಗೂ 3(ಬಿ) ರೂ.3.50ಲಕ್ಷ ವಾರ್ಷಿಕ ಆದಾಯ ಮಿತಿಯನ್ನು ಹೊಂದಿರಬೇಕು. ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ ಶೇ.55 ಅಂಕಗಳನ್ನು ಪಡೆದಿರಬೇಕು, ಅಭ್ಯರ್ಥಿಗಳು ಪೂರ್ಣಾವಧಿ ಪಿ.ಎಚ್.ಡಿ ಅಧ್ಯಯನಕ್ಕಾಗಿ ಮಾಡಿಸುವ ನೋಂದಣಿ ದಿನಾಂಕವು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ವ್ಯಾಸಂಗ ವೇತನ/ಫೆಲೋಶಿಫ್ ಗಾಗಿ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೆ ಹಿಂದಿನ 2 ವರ್ಷದೊಳಗಿದ್ದು, ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಾಲಿನಿಂದ ಪ್ರಥಮ ವರ್ಷದ ಪಿಹೆಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂಖ್ಯೆ:8050770004 ನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ವಿಸ್ತರಣೆ

**ಮಂಡ್ಯ:** ನ್ಯಾಷನಲ್‌ಕೌನ್ಸಿಲ್ ಫಾರ್‌ಟೀಚಸ್ ೯ಎಜುಕೇಶನ್ ನಿಂದ ಮಾನ್ಯತೆ ಪಡೆದಿರುವ ಸರ್ಕಾರಿ, ಅರೆಸರ್ಕಾರಿ, ಅನುದಾನಿತ ಕಾಲೇಜುಗಳಲ್ಲಿ ಬಿ.ಎಡ್ ವ್ಯಾಸಂಗ ಮಾಡುತ್ತಿರುವಅಲ್ಪಸಂಖ್ಯಾತ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್,ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ವಿದ್ಯಾರ್ಥಿಗಳಿಗೆ 25,000 ವಿಶೇಷ ಪ್ರೋತ್ಸಾಹಧನಕ್ಕೆಅರ್ಜಿಆಹ್ವಾನಿಸಲಾಗಿದೆ. ಅರ್ಹ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳು ಜನವರಿ 6 ರೊಳಗೆ https://sevasindhu.karnataka.gov.in ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿಜಿಲ್ಲಾಅಲ್ಪಸಂಖ್ಯಾತರ ಅಧಿಕಾರಿಗಳ ಕಚೇರಿ ದೂ.ಸಂ.08232-297240 ತಾಲೂಕು ವಿಸ್ತರಣಾಧಿಕಾರಿ ಮಂಡ್ಯ ವಿಭಾಗ: 7259138868, ಪಾಂಡವಪುರತಾಲ್ಲೂಕು ಮಾಹಿತಿಕೇಂದ್ರ: 7353860464, ನಾಗಮಂಗಲ ತಾಲ್ಲೂಕು ಕೇಂದ್ರ:9663180791, ಶ್ರೀರಂಗಪಟ್ಟಣ ತಾಲ್ಲೂಕು ಮಾಹಿತಿ ಕೇಂದ್ರ:9036485386, ಮದ್ದೂರುತಾಲ್ಲೂಕು ಮಾಹಿತಿ ಕೇಂದ್ರ:9886786913, ಕೆ ಆರ್ ಪೇಟೆತಾಲ್ಲೂಕು ಮಾಹಿತಿ ಕೇಂದ್ರ:9035251834, ಮಳವಳ್ಳಿ ತಾಲ್ಲೂಕು ಮಾಹಿತಿ ಕೇಂದ್ರ:9986682921 ಅನ್ನು ಸಂಪರ್ಕಿಸಬಹುದುಎಂದು ಮಂಡ್ಯಅಲ್ಪಸಂಖ್ಯಾತರಕಲ್ಯಾಣ ಇಲಾಖೆ ಜಿಲ್ಲಾಅಧಿಕಾರಿಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ಯಾಂಕಿಂಗ್ ಹುದೆಗಳ ನೇಮಕಾತಿ ಪರೀಕ್ಷೆಗಳ ತರಬೇತಿಗೆ ಅರ್ಜಿ ಆಹ್ವಾನ

**ಮೈಸೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಎಸ್‌ಬಿಐ ಮತ್ತು ಇತರ ಬ್ಯಾಂಕ್ ಅಧಿಕಾರಿಗಳ ಮತ್ತು ಗುಮಾಸ್ತರ ಹುದ್ದೆಗಳಿಗೆ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 45 ದಿನಗಳ ತರಬೇತಿಯನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಜನವರಿ 8 ರೊಳಗೆ ಕಚೇರಿ ದೂ.ಸಂ: 0821-2515944 ನ್ನು ಸಂಪರ್ಕಿಸಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದು ಎಂದು ಕರಾಮುವಿ ಕುಲಸಚಿವರಾದ ಪ್ರೊ.ಕೆ.ಬಿ. ಪ್ರವೀಣ ತಿಳಿಸಿದ್ದಾರೆ.

## ಪಿಹೆಚ್‌ಡಿ ಪದವಿಗೆ ಅಂಗೀಕಾರ

**ಮೈಸೂರು:** ಮಂದಸ್ಮಿತ ಏನ್ ಅವರು ಡಾ. ಎ.ಎಸ್ ಗುರುದತ್ ಅವರ ಮಾರ್ಗದರ್ಶನದಲ್ಲಿ "Issues and Challenges in Marketing of Organic Products in Bengaluru District-A Perceptual Study" ಎಂಬ ಮಹಾ ಪ್ರಬಂಧವನ್ನು ವಾಣಿಜ್ಯಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿರುತ್ತಾರೆ ಮತ್ತು ಮಹಾ ಪ್ರಬಂಧವನ್ನು ಆಂಗ್ಲ ಭಾಷೆಯಲ್ಲಿ ಸಿದ್ಧಪಡಿಸುತ್ತಾರೆ.ಅಭ್ಯರ್ಥಿಯು ಸದರಿ ಪಿ.ಹೆಚ್.ಡಿ ಪದವಿಯನ್ನು ಮುಂದೆ ನಡೆಯುವ ವಾರ್ಷಿಕ ಘಟಿಕೋತ್ಸವದಲ್ಲಿ (ಖುದ್ದಾಗಿ/ಗೈರುಹಾಜರಿಯಲ್ಲಿ) ಪಡೆಯಬಹುದಾಗಿದೆ ಎಂದು ಮೈಸೂರು ವಿಶ್ವವಿದ್ಯಾಲಯದ ಕುಲಸಚಿವ(ಪರೀಕ್ಷಾಂಗ) ಪ್ರೊ. ಎನ್ ನಾಗರಾಜ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಹೆಚ್‌ಡಿ ಪದವಿಗೆ ಅಂಗೀಕಾರ

**ಮೈಸೂರು:** ಕಾರ್ತಿಕ್ ಪಿ ಅವರು ಡಾ.ಎ.ಎಸ್ ಗುರುದತ್ ಅವರ ಮಾರ್ಗದರ್ಶನದಲ್ಲಿ 'Investors' Behaviour Towards Systematic Investment Plan of Private Mutual Funds in Bengaluru - A study's ಎಂಬ ಮಹಾಪ್ರಬಂಧವನ್ನು ವಾಣಿಜ್ಯಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿರುತ್ತಾರೆ ಮತ್ತು ಮಹಾ ಪ್ರಬಂಧವನ್ನು ಆಂಗ್ಲ ಭಾಷೆಯಲ್ಲಿ ಸಿದ್ಧಪಡಿಸಿರುತ್ತಾರೆ.ಅಭ್ಯರ್ಥಿಯು ಸದರಿ ಪಿ.ಹೆಚ್. ಡಿ ಪದವಿಯನ್ನು ಮುಂದೆ ನಡೆಯುವ ವಾರ್ಷಿಕ ಘಟಿಕೋತ್ಸವದಲ್ಲಿ ( ಖುದ್ದಾಗಿ/ಗೈರುಹಾಜರಿಯಲ್ಲಿ) ಪಡೆಯಬಹುದಾಗಿದೆ ಎಂದು ಮೈಸೂರು ವಿಶ್ವವಿದ್ಯಾಲಯದ ಕುಲಸಚಿವ (ಪರೀಕ್ಷಾಂಗ) ಪ್ರೊ.ಎನ್ ನಾಗರಾಜ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಎಸ್‌ಆರ್‌ಟಿಸಿ ಬಸ್ ಸ್ಟ್ಯಾಂಡ್‌ಗೆ ಭೂಮಿ ಗುರುತಿಸಿ



**ಹುಳಿಯಾರು:** ಕೇಂದ್ರ ಸರ್ಕಾರದ ರಾಜ್ಯ ಸಚಿವ ವಿ.ಸೋಮಣ್ಣ ಅವರು ಹುಳಿಯಾರು ಹೋಬಳಿ ಮಟ್ಟದ ಸಾರ್ವಜನಿಕ ಕುಂದು ಕೊರತೆ ಸಭೆಯನ್ನು ಗುರುವಾರ ಹುಳಿಯಾರಿನ ಅಂಬೇಡ್ಕರ್ ಭವನದಲ್ಲಿ ನಡೆಸಿದರು. ಈ ಸಭೆಯಲ್ಲಿ ಹುಳಿಯಾರಿನ ಯುವಕರು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಮಾಡುವಂತೆ ಮನವಿ ಸಲ್ಲಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು ತಹಸೀಲ್ದಾರ್ ಕೆ.ಪುರಂದರ ಅವರಿಗೆ ಶೀಘ್ರ ಕನಿಷ್ಟ 1 ಎಕರೆ ಭೂಮಿ ಗುರುತಿಸಿ ಹಣ ಬಿಡುಗಡೆ ಮಾಡಿಸುತ್ತೇನೆ ಎಂದರು.

ಕೇಂದ್ರ ಸರ್ಕಾರದ ವಿಶ್ವಕರ್ಮ ಯೋಜನೆಯಲ್ಲಿ ಟ್ರೈನಿಂಗ್ ಪಡೆದಿದ್ದರೂ ಸಹ ಬ್ಯಾಂಕ್‌ಗಳು ಹಣಕಾಸಿನ ನೆರವು ನೀಡುತ್ತಿಲ್ಲ ಎಂದು ಫಲಾನುಭವಿಗಳು ದೂರಿದರು. ಇದಕ್ಕೆ ಸಚಿವರು ಈಗಾಗಲೇ ಜಿಲ್ಲಾಧಿಕಾರಿಗಳ ಸಭೆ ಮಾಡಿದ್ದು ತರಬೇತಿ ಪಡೆದ ಎಲ್ಲರಿಗೂ ಲೋನ್ ಕೊಡಿಸಲು ತಿಳಿಸಿದ್ದೇನೆ. ಇನ್ನೊಂದು ವಾರದಲ್ಲಿ ಸಮಸ್ಯೆ ಪರಿಹಾರವಾಗಲಿದೆ ಎಂದರು.

ರೈಲ್ವೆ ಇಲಾಖೆಯಲ್ಲಿ ಉದ್ಯೋಗಕ್ಕಾಗಿ ಅರ್ಜಿ ಹಾಕಿದ್ದೇನೆ. ಕೆಲಸ ಕೊಡಿಸಿ ಸಾರ್ ಎಂದು ಅನೇಕರು ತಮ್ಮ ಮಕ್ಕಳನ್ನು ಕರೆದುಕೊಂಡು ಬಂದು ಸಚಿವರಲ್ಲಿ ಮನವಿ ಮಾಡಿದರು. ರೈಲ್ವೆ ಇಲಾಖೆಯಲ್ಲಿ ಈಗ ಮೊದಲಿನಂತೆ ನೇರ ನೇಮಕಾತಿ ಇಲ್ಲ. ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ಆಯ್ಕೆ ಮಾಡಲಾಗುವುದು. ಕನ್ನಡದಲ್ಲೇ ಈಗ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಿದ್ದೇನೆ. ನಿಮ್ಮ ಮಕ್ಕಳನ್ನು ಚೆನ್ನಾಗಿ ಓದಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆಯಲು ಹೇಳಿ ಎಂದು ಸಚಿವರು ತಿಳಿಸಿದರು.

ಶಾಸಕ ಸಿ.ಬಿ.ಸುರೇಶ್ ಬಾಬು, ಉಪವಿಭಾಗಾಧಿಕಾರಿ ಸಪ್ತಶ್ರೀ, ತಹಸೀಲ್ದಾರ್ ಕೆ.ಪುರಂದರ, ತಾಪಂ ಇಒ ದೊಡ್ಡಸಿದ್ಧಯ್ಯ, ಪಪಂ ಅಧ್ಯಕ್ಷೆ ರತ್ನಮ್ಮ, ಉಪಾಧ್ಯಕ್ಷೆ ಕಾವ್ಯರಾಣಿ, ಸಹಾಯಕ ಕೃಷಿ ಅಧಿಕಾರಿ ಶಿವರಾಜ್ ಕುಮಾರ್, ಸಿಡಿಪಿಒ ಹೊನ್ನಪ್ಪ, ತೋಟಗಾರಿಗೆ ಸಹಾಯಕ ನಿರ್ದೇಶಕ ರಾಜಪ್ಪ, ಪಶು ಇಲಾಖೆಯ ಸಹಾಕಯ ನಿರ್ದೇಶಕ ರೆ.ಮಾ.ನಾಗಭೂಷಣ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

**ಇಸ್ವತ್ತು ಮಾಡಿಕೊಟ್ಟು ನನಗೆ ಫೋನ್ ಮಾಡಿ ಹೇಳಿ:** ಕೋರಗೆರೆ ಗ್ರಾಮ ಪಂಚಾಯ್ತಿಯ ಪಿಡಿಒ ಇ ಸ್ವತ್ತು ಮಾಡಿ ಕೊಡಲು ಸತಾಯಿಸುತ್ತಿದ್ದಾರೆ ಎಂದು ಅಲ್ಲಿನ ನಿವಾಸಿಯೊಬ್ಬರು ದೂರಿದರು. ತಕ್ಷಣ ಸಚಿವರು ಕೋರಗೆರೆ ಪಿಡಿಒ ಅವರನ್ನು ಕರೆದು ತಮ್ಮ ದೂರವಾಣಿ ನಂಬರ್ ಕೊಟ್ಟು ಸಬೂಬು ಹೇಳದೆ ಇ ಸ್ವತ್ತು ಮಾಡಿಕೊಟ್ಟು ನನಗೆ ಫೋನ್ ಮಾಡಿ ಹೇಳು ಎಂದರು. ಆದರೂ ಪಿಡಿಒ ಗ್ರಾಮ ಠಾಣಾ ನಕ್ಷೆ ಇಲ್ಲ ಎಂಬ ಕಾರಣ ಮುಂದಿಟ್ಟರು. ನೀವೆ ಎಲ್ಲಾ ನುಂಗಾಗಿ ಈಗ ಇಲ್ಲ ಎಂದರೆ ಹೇಗೆ. ಸುಮ್ಮನೆ ಮಾಡಿ ಕೊಡಿ ಎಂದರು. ಅಲ್ಲದೆ ಉಪವಿಭಾಗಾಧಿಕಾರಿ ಕಲ್ಪಶ್ರೀ ಅವರಿಗೆ ನೀನೇ ಈ ಕೇಸ್ ಅಟೆಂಟ್ ಮಾಡಮ್ಮ ಎಂದರು.

**ಸ್ಮಶಾನಕ್ಕೆ ಜಾಗ ಕೊಡದಿದ್ದರೆ ನನಗೆ ಕರೆ ಮಾಡಿ:** ಹನುಮಂತಪುರದ ಅಲೆಮಾರಿಗಳು ನಾವು ಸತ್ತರೆ ಹೂಳಲು ಜಾಗ ಇಲ್ಲ ಸ್ವಾಮಿ ಎಂದು ಸಚಿವರನ್ನು ಕೈ ಮುಗಿದು ಕೇಳಿಕೊಂಡರು. ತಕ್ಷಣ ತಹಸೀಲ್ದಾರ್‌ಗೆ ನಾಳೆಯೇ ಸ್ಮಶಾನಕ್ಕೆ ಜಾಗ ಗುರುತಿಸಿ ಕೊಡಿ ಎಂದು ಸೂಚಿಸಿದರಲ್ಲದೆ ಇವರು ಗುರುತಿಸಿಕೊಡದಿದ್ದರೆ ನನಗೆ ಫೋನ್ ಮಾಡಿ ಹೇಳಿ ಆಮೇಲೆ ನನ್ನ ಪವರ್ ತೋರಿಸುತ್ತೇನೆ ಎಂದು ಅಲೆಮಾರಿಗಳಿಗೆ ಹೇಳಿದರು. ನಂತರ ನಮ್ಮ ಮನೆ ಮುಂದೆ ಬೀದಿ ದೀಪ ಇಲ್ಲ ಸ್ವಾಮಿ ಎಂದರು ತಕ್ಷಣ ಬೆಸ್ಕಾಂ ಅಧಿಕಾರಿಗಳಿಗೆ ಲೈಟ್ ಹಾಕಲು ಸೂಚಿಸಿದರು.

**ಗ್ರಾಪಂ ಅಧ್ಯಕ್ಷರಿಂದ ಮನವಿ:** ಗಾಣಧಾಳು ಗ್ರಾಪಂ ಅಧ್ಯಕ್ಷ ಬಾಪುಗಿರೀಶ್ ಅವರು ನಮ್ಮ ಪಂಚಾಯ್ತಿಯ 5 ಹಳ್ಳಿಗಳಲ್ಲಿ ಜೆಜೆಎಂ ಕಾಮಗಾರಿ ಸ್ಥಗಿತವಾಗಿದ್ದು ತಕ್ಷಣ ಆರಂಭಿಸಲು ಮನವಿ ಸಲ್ಲಿಸಿದರು. ಕೆಂಕೆರೆ ಗ್ರಾಪಂ ಅಧ್ಯಕ್ಷ ಮಂಜುನಾಥ್ ಅವರು ಎಸ್‌ಸಿ, ಎಸ್‌ಟಿ ವಸತಿರಹಿತರಿಗೆ ನಿವೇಶನ ಕೊಡಲು ಜಾಗ ಗುರುತಿಸಿದ್ದು ಇಲ್ಲಿಯವರೆವಿಗೆ ಸರ್ವೆ ಮಾಡಿಸಿಕೊಟ್ಟಿಲ್ಲ ಎಂದು ದೂರಿದರು. ಜಿಪಂ ಮಾಜಿ ಸದಸ್ಯೆ ಲೋಹಿತಾಬಾಯಿ ಅವರು ತಮ್ಮ ಜಮೀನಿನ ದಾಖಲಾತಿ ತಿದ್ದುಪಡಿಗಾಗಿ ಮನವಿ ಸಲ್ಲಿಸಿದರು. ತಾಪಂ ಮಾಜಿ ಅಧ್ಯಕ್ಷೆ ಚೇತನಾಗಂಗಾಧರ್ ಅವರು ಟಿ.ತಾಂಡ್ಯದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಲು ಮನವಿ ಸಲ್ಲಿಸಿದರು.

## ಮನಸ್ಸಿದ್ದರೆ ಮಾರ್ಗ ಉಂಟು

**ಕೊಲನಪಾಕ:** ಸತ್ಯ ಮನುಷ್ಯನನ್ನು ಬದಲಿಸುತ್ತದೆ. ನಮ್ಮ ನಡೆ ನುಡಿಗಳು ಯಾವಾಗಲೂ ಸತ್ಯದ ಪರವಾಗಿರಬೇಕು. ಕೆಲಸ ಮಾಡಲು ಮನಸ್ಸಿದ್ದರೆ ಮಾರ್ಗಗಳು ಕಾಣುತ್ತವೆ. ಮನಸ್ಸಿಲ್ಲದಿದ್ದರೆ ನೂರಾರು ನೆಪಗಳು ಮುಂದೆ ಬರುತ್ತವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಶುಕ್ರವಾರ ಭುವನಗಿರಿ ತಾಲೂಕಿನಶ್ರೀ ಜಗದ್ಗುರು ರೇಣುಕಾಚಾರ್ಯರು ಅವತರಿಸಿದ ಕೊಲನಪಾಕ ಸ್ವಯಂಭು ಶ್ರೀ ಸೋಮೇಶ್ವರ ಕ್ಷೇತ್ರದಲ್ಲಿ ವಿಶೇಷ ಪೂಜಾ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನ ವ್ಯಕ್ತಿತ್ವ ಗಟ್ಟಿಗೊಳಿಸುವುದಕ್ಕೆ ಹೊಗಳಿಕೆಗಿಂತಲೂ ತೆಗಳಿಕೆಗೆ ಹೆಚ್ಚು ಗಮನಿಸಿದರೆ ಮಾಡಿದ ತಪ್ಪುಗಳು ತಿಳಿಯುತ್ತದೆ. ಯಾವುದೇ ಒಂದು ಒಳ್ಳೆಯ ಕೆಲಸ ಮಾಡುವಾಗ ತೊಡಕು ತೊಂದರೆಗಳು ಮಹಾತ್ಮರಿಗೂ ಬಿಟ್ಟಿಲ್ಲ. ಸಂಪತ್ತಿನ ಬದುಕಿನಲ್ಲಿ ಬಾಳುವ ಮನುಷ್ಯನಿಗೆ ಗುಣವಂತರ ಗುಣಾದರ್ಶಗಳು ಕಾಣಲಾರವು. ಅನ್ಯಾಯ ಅಸತ್ಯ ಹೇಳುವ ಜನರು ಹೆಚ್ಚಿರುವಾಗ ಸತ್ಯವಂತರು ಸುಮ್ಮನಿರುವ ಕಾಲ ಇದಾಗಿದೆ. ಜೀವನ ಹೂದೋಟದಲ್ಲಿ ಅರಳುವ ಹೂಗಳೆಷ್ಟೋ ಬಾಡುವ ಹೂಗಳೆಷ್ಟೋ ಹೇಳಲಾಗದು. ಭೌತಿಕ ಸಿರಿ ಸಂಪತ್ತು ಮನುಷ್ಯನಿಗೆ ನಿಜವಾದ ಸಂತೃಪ್ತಿ ತರಲಾರವು. ಇವುಗಳ ಜೊತೆಗೆ ಆಧ್ಯಾತ್ಮದ ಹಸಿವು ಇರಬೇಕೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಮಹಾಮುನಿ ಅಗಸ್ತ್ಯರನ್ನು ನಿಮಿತ್ಯ ಮಾಡಿ ಸಕಲರಿಗೂ ಬೋಧಿಸಿದ್ದಾರೆ. ಕೊಲನಪಾಕ ಸ್ವಯಂಭು ಶ್ರೀ ಸೋಮೇಶ್ವರ ಕ್ಷೇತ್ರ ಬಹಳ ಪ್ರಾಚೀನ ಇತಿಹಾಸವನ್ನು ಹೊಂದಿರುವುದಷ್ಟೇ ಅಲ್ಲ. ವೀರಶೈವ ಧರ್ಮ ಸಿದ್ಧಾಂತ ಸ್ಥಾಪಕರಾದ ಶ್ರೀ ಜಗದ್ಗುರು ರೇಣುಕಾಚಾರ್ಯರು ಆವಿರ್ಭವಿಸಿದ ಪಾವನ ಕ್ಷೇತ್ರವಾಗಿದೆ ಎಂದರು. ಮೇಹಕರ ಹಿರೇಮಠದ ರಾಜೇಶ್ವರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ಸತ್ಕ್ರಾಂತಿಯ ಬಗೆಗೆ ಉಪದೇಶಾಮೃತವನ್ನಿತ್ತರು. ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು, ಮಳಲಿ ಸಂಸ್ಥಾನಮಠದ ಡಾ|| ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು, ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯ ಸ್ವಾಮಿಗಳು, ಲಿಂಗಸುಗೂರು ಮಾತಾ ಮಾಣಿಕ್ಕೇಶ್ವರಿ ಆಶ್ರಮದ ನಂದಿಕೇಶ್ವರಿ ಅಮ್ಮನವರು ಉಪಸ್ಥಿತರಿದ್ದರು.

## ಅತಿಥಿ ಉಪನ್ಯಾಸಕ ಹುದ್ದೆ ಅರ್ಜಿ

**ಬೆಂಗಳೂರು:** ಬೆಂಗಳೂರಿನ ಕೆ.ಆರ್ ವೃತ್ತದಲ್ಲಿರುವ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದಲ್ಲಿ 2024-25ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಗಣಿತ, ಜೀವಶಾಸ್ತ್ರ ಮತ್ತು ಭಾರತದ ಸಂವಿಧಾನ ವಿಷಯಗಳನ್ನು ಬೋಧಿಸಲು ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಎಐಸಿಟಿಇ/ಯುಜಿಸಿ ನಿಯಮಗಳಿಗನುಸಾರ ಸೂಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್www.uvce.karnataka.gov.inನಿಂದ ನಿಗಧಿತ ನಮೂನೆಯನ್ನು ಡೌನ್ಲೋಡ್ ಮಾಡಿಕೊಂಡು ಅರ್ಜಿಯನ್ನು ಸಂಬಂಧಿತ ದಾಖಲೆಗಳ ಪ್ರತಿಗಳೊಂದಿಗೆ ಕುಲಸಚಿವರ ಕಛೇರಿ, ಯುವಿಸಿಇ, ಕೆ.ಆರ್ ವೃತ್ತ ಇಲ್ಲಿಗೆ ಜನವರಿ 13 ರೊಳಗೆ ಸಲ್ಲಿಸುವುದು. ನಿಗಧಿತ ದಿನಾಂಕದ ನಂತರ ಸ್ವೀಕರಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಸಮನ್ವಯಧಿಕಾರಿ, ತಾಂತ್ರಿಕೇತರ ವಿಷಯ, ಇವರನ್ನು ಸಂಪರ್ಕಿಸಬಹುದು. ಸಂದರ್ಶನದ ದಿನಾಂಕವನ್ನು ವೆಬ್‌ಸೈಟ್ ನಲ್ಲಿ ತಿಳಿಸಲಾಗುತ್ತದೆ ಅಥವಾ ಅರ್ಹ ಅಭ್ಯರ್ಥಿಗಳಿಗೆ ನೇರವಾಗಿ ತಿಳಿಸಲಾಗುತ್ತದೆ

## ಸಮಾಪನಾ ಸಹಕಾರ ಸಂಘಗಳ ಪುನಃಶ್ಚೇತನಕ್ಕೆಕೊನೆಯ ಅವಕಾಶ

**ಮಂಡ್ಯ:** ಮಂಡ್ಯಜಿಲ್ಲೆಯಲ್ಲಿ ದಿನಾಂಕ:30-11-2024 ರಅಂತ್ಯಕ್ಕೆ 43 ಸಮಾಪನಾ ಸಹಕಾರ ಸಂಘಗಳಿದ್ದು, ಈ ಸಂಘದಇರುವಿಕೆಯಿಂದ ಸಂಘದ ಸದಸ್ಯರಿಗಾಗಲೀಅಥವಾ ಸಾರ್ವಜನಿಕರಿಗಾಗಲೀಯಾವುದೇ ಪ್ರಯೋಜನವುದೊರೆಯದೇಇದ್ದು, ಪ್ರಸ್ತುತ ಈ ಸಂಘಗಳನ್ನು ಸಮಾಪನಾ ಸ್ಥಿತಿಯಲ್ಲಿ ಮುಂದುವರೆಸಿಕೊಂಡು ಹೋಗುವುದರಲ್ಲಿಯಾವುದೇ ಪ್ರಯೋಜನವಿಲ್ಲವೆಂದು ಭಾವಿಸಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 75 ರಡಿರದ್ದುಪಡಿಸಲು ಉದ್ದೇಶಿಸಲಾಗಿದೆ. ಆದ್ದರಿಂದ ಸಂಘದಲ್ಲಿನ ಹಿಂದಿನ ಯಾವುದೇ ಪದಾಧಿಕಾರಿಗಳಾಗಲೀ ಹಾಗೂ ಸದಸ್ಯರುಗಳಾಗಲೀ ಸಂಘವನ್ನು ಮುನ್ನಡೆಸಿಕೊಂಡು ಹೋಗಲು ಆಸಕ್ತಿ ಇದ್ದಲ್ಲಿ ಈ ಸಾರ್ವಜನಿಕ ಪ್ರಕಟಣೆಯನ್ನು ಹೊರಡಿಸಿದ ದಿನಾಂಕದಿಂದ 15 ದಿನದ ಒಳಗೆ ಈ ಕೆಳಗೆ ಸಹಿ ಮಾಡಿರುವ ಅಧಿಕಾರಿಗಳಿಗೆ ಕಛೇರಿಯ ವೇಳೆಯಲ್ಲಿ ಮನವಿಯನ್ನು ಸಲ್ಲಿಸತಕ್ಕದ್ದು.ಇಲ್ಲವಾದ್ದಲ್ಲಿ ಸಂಘದ ಪುನಃ ಶ್ಚೇತನಕ್ಕೆಯಾವುದೇರೀತಿಯ ಆಸಕ್ತಿ ಇಲ್ಲವೆಂದು ಪರಿಗಣಿಸಿ ಸಂಘವನ್ನು ಸಮಾಪನಾವಸ್ಥೆಯಲ್ಲಿ ಮುಂದುವರೆಸುವುದು ಸಮಂಜಸವಲ್ಲವೆಂದು ಪರಿಗಣಿಸಿ ಸಂಘದ ನೋಂದಣಿ ಸಂಖ್ಯೆಯನ್ನು ರದ್ದುಗೊಳಿಸಲಾಗುವುದೆಂದು ತಿಳಿಯತಕ್ಕದ್ದು. ಸಂಘದ ನೋಂದಣಿರದ್ದತಿಯ ನಂತರ ಬರುವಯಾವುದೇತಂಟೆ ತಕರಾರುಗಳಿಗೆ ಈ ಕೆಳ ಸಹಿದಾರರುಜವಾಬ್ದಾರರಾಗುವುದಿಲ್ಲ ಅಲ್ಲದೇ ಪ್ರಕಟಣೆಯತರುವಾಯ ಸಲ್ಲಿಸುವಆಕ್ಷೇಪಣೆಗೆ ಸೂಕ್ತ ಸಾಕ್ಷಾಧಾರಇಲ್ಲದೇಇದ್ದಲ್ಲಿ ಸಹ ಯಾವುದೇರೀತಿಯ ಮನ್ನಣೆಯನ್ನು ನೀಡಲುಬರುವುದಿಲ್ಲವೆಂದು ಮಂಡ್ಯ ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಮಾಪನೆಗೊಂಡಿರುವಸಂಘಗಳು ಹಾಗೂ ಸಮಾಪನಾಧಿಕಾರಿ ಹೆಸರು:- 1. ಪಾಂಡವಪುರಟೌನ್‌ಕ್ರೆಡಿಟ್ ಸಹಕಾರ ಸಂಘ ನಿ, ಪಾಂಡವಪುರ - ಸಮಾಪನಾಧಿಕಾರಿಸಹಕಾರಅಭಿವೃದ್ಧಿ ಅಧಿಕಾರಿ, ಪಾಂಡವಪುರ, 2. ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ಶಿಲ್ಪಾಪುರ, ನಾಗಮಂಗಲ ತಾಲ್ಲೂಕು - ಹೆಚ್.ಎಂ.ಶೋಭ ಸಹಕಾರ ಸಂಘಗಳ ಹಿರಿಯ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕನಿಬಂಧಕರಕಛೇರಿ, ಪಾಂಡವಪುರ, 3. ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಬಳಕೆದಾರರ ಸಹಕಾರ ಸಂಘ ನಿ, ಕೆ.ಆರ್.ಪೇಟೆತಾಲ್ಲೂಕು - ಶೋಭಾ ಹೆಚ್.ಎಂ. ಸಹಕಾರ ಸಂಘಗಳ ಹಿರಿಯ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕನಿಬಂಧಕರಕಛೇರಿ, ಪಾಂಡವಪುರ.

## ಪಿಎಚ್‌ಡಿ ಫೆಲೋಶಿಫ್‌ಗೆ ಅರ್ಜಿ

**ಮಂಡ್ಯ:** 2024-25ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿಅಧ್ಯಯನ ಪ್ರಾರಂಭಿಸಿರುವ(ದಿನಾಂಕ:10.01.2024 ಮತ್ತುಅದರ ನಂತರ ಪ್ರಥಮ ವರ್ಷದ ಪಿಎಚ್.ಡಿ ಪ್ರಾರಂಭಿಸಿರಬೇಕು) ಕರ್ನಾಟಕರಾಜ್ಯದ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿಆಹ್ವಾನಿಸಲಾಗಿದೆ. ಕರ್ನಾಟಕದ ಶಾಸನಬದ್ಧ ವಿಶ್ವ ವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿಎಚ್.ಡಿಅಧ್ಯಯನ ಮಾಡುತ್ತಿರುವ ಹೊಸ ಅಭ್ಯರ್ಥಿಗಳು ಮಾತ್ರಆಫ್-ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.ಅರ್ಜಿ ಸಲ್ಲಿಸಲುಜನವರಿ20 ಕೊನೆಯ ದಿನವಾಗಿದೆ. ಹೆಚ್ಚಿನಮಾಹಿತಿಗಾಗಿದೂ. ಸಂ: 8050770004ಹಾಗೂ ಇಲಾಖಾ ವೆಬ್ ಸೈಟ್ https://.bcwd.karnataka.gov.in ಅನ್ನು ಸಂಪರ್ಕಿಸಬಹುದುಎಂದುಮಂಡ್ಯ ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯಜಿಲ್ಲಾಅಧಿಕಾರಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ. ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ವಿದ್ಯಾರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ ಫೆಲೋಶಿಪ್‌ಗಾಗಿ ಆಫ್-ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇದೇ ಜನವರಿ 20 ಕೊನೆಯ ದಿನವಾಗಿದೆ. ಹೆಚ್ಚಿನ ವಿವರಗಳಿಗಾಗಿಸಹಾಯವಾಣಿ ಸಂಖ್ಯೆ: 080-8050770004ಸಂಪರ್ಕಿಸುವಂತೆ/ ಇಲಾಖಾ ವೆಬ್‌ಸೈಟ್-https://bcwd.karnataka.gov.inಅನ್ನು ನೋಡಬಹುದು. ಅಥವಾ ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ನಂ. 202, ಜಿಲ್ಲಾ ಪಂಚಾಯತ್ ಭವನ, 2ನೇ ಮಹಡಿ ಬಿ.ಎಂ ರಸ್ತೆ, ರಾಮನಗರ ಜಿಲ್ಲೆ, ರಾಮನಗರ ರವರ ಅರ್ಜಿ ಮತ್ತು ದಾಖಲಾತಿಗಳನ್ನುಕಚೇರಿ ಸಮಯದಲ್ಲಿಸಲ್ಲಿಸಬೇಕು.

### ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಶ್ಲಾಘನೆ

# ನಿಮ್ಹಾನ್ಸ್ ದೇಶದಲ್ಲಿಯೇ ಉತ್ಕೃಷ್ಟ ಸಂಸ್ಥೆ

**ಬೆಂಗಳೂರು:** ಮನುಷ್ಯ ಆರೋಗ್ಯಕರ ಮನಸ್ಸನ್ನು ಹೊಂದಿದ್ದಲ್ಲಿ ಸ್ವಾಸ್ಥ್ಯ ಸಮಾಜ ನಿರ್ಮಾಣವಾಗುವುದರಲ್ಲಿ ಸಂದೇಹವಿಲ್ಲ. ಆಧುನಿಕ ಮತ್ತು ಪಾರಂಪರಿಕ ವೈದ್ಯ ಪದ್ದತಿಗಳ ಮಿಶ್ರಣದಿಂದಾಗಿ ಮಾನವನ ಮಾನಸಿಕ ಕಾಯಿಲೆಗಳಿಗೆ ನೀಡುವ ಚಿಕಿತ್ಸೆ ಫಲಕಾರಿಯಾಗುವುದು ಎಂದು ಭಾರತದ ಗೌರವನ್ವಿತ ರಾಷ್ಟ್ರಪತಿಗಳಾದ ಶ್ರೀಮತಿ ದ್ರೌಪದಿ ಮುರ್ಮು ಅವರು ತಿಳಿಸಿದರು.

ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ (ನಿಮ್ಹಾನ್ಸ್)ನ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ನಿಮ್ಹಾನ್ಸ್ ಸುವರ್ಣ ಮಹೋತ್ಸವ ಆಚರಿಸುತ್ತಿರುವುದು ಹೆಮ್ಮೆ ತಂದಿದೆ. ಇಡೀ ದೇಶದಲ್ಲಿಯೇ ಇದು ಒಂದು ಉತ್ಕೃಷ್ಟ ಸಂಸ್ಥೆಯಾಗಿ ಹೆಸರು ಮಾಡಿದೆ ಎಂದರು.

ಶಿಕ್ಷಣ, ಸಂಶೋಧನೆ, ರೋಗಿಗಳ ಚಿಕಿತ್ಸೆ, ಪುರ್ನವಸತಿ ಕಲ್ಪಿಸುವ ನಿಟ್ಟಿನಲ್ಲಿ ನಿಮಾನ್ಸ್ ಸಂಸ್ಥೆಯು ನಿಸ್ವಾರ್ಥ ಸೇವೆಯನ್ನು ಸಲ್ಲಿಸುತ್ತಿದೆ. ದೇಶದಲ್ಲಿ 53 ಟೆಲಿ ಮಾನಸ್ ಸಹಾಯವಾಣಿ ಕಾರ್ಯ ನಿರ್ವಹಿಸುತ್ತಿದ್ದು, ಸಾರ್ವಜನಿಕರು ಇದರ ಪ್ರಯೋಜನ ಪಡೆಯುತ್ತಿದ್ದಾರೆ. ನಿಮ್ಹಾನ್ಸ್‌ಗೆ ವಿಶ್ವ ಆರೋಗ್ಯ ಸಂಸ್ಥೆಯಿಂದ ನೆಲ್ಸನ್ ಮಂಡೇಲಾ ಪ್ರಶಸ್ತಿ ಸಹ ಲಭಿಸಿರುವುದು ಸಂತೋಷಕರ ವಿಷಯವಾಗಿದೆ ಎಂದರು.

ಯೋಗ ಹಾಗೂ ಆಯುರ್ವೇದ ಪದ್ದತಿಗಳು ಮಾನಸಿಕ ವ್ಯಾಧಿಗಳನ್ನು ಹತೋಟಿಗೆ ತರುವಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿತ್ತಿವೆ. ನಾವು ಮನಸ್ಸನ್ನು ಸಮಚಿತ್ತದಿಂದ ಇಟ್ಟುಕೊಳ್ಳಬೇಕು. ಇಂದು ಗೃಹಣಿಯರು, ಉದ್ಯೋಗಸ್ಥರು, ವಿದ್ಯಾರ್ಥಿಗಳು, ವಯೋವೃದ್ಧರು ತಮ್ಮದೇ ಆದ ಮಾನಸಿಕ ಒತ್ತಡದಿಂದ ಬಳಲುತ್ತಿದ್ದಾರೆ. ಕೋವಿಡ್ ? 19ರ ನಂತರ ಜನರಿಗೆ ಮಾನಸಿಕ ಒತ್ತಡಗಳು ಹೆಚ್ಚಿವೆ. ನಿಮಾನ್ಸ್‌ನಲ್ಲಿ ಪದವಿ ಹಾಗೂ ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವವರಲ್ಲಿ ಹೆಚ್ಚು ಮಹಿಳೆಯರೇ ಇರುವುದು ಸಂತಸದ ಸಂಗತಿ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ನಿಮ್ಹಾನ್ಸ್‌ನಲ್ಲಿ ಕೇಂದ್ರೀಯ ಪ್ರಯೋಗಾಲಯ ಸಂಕೀರ್ಣ, ವಿಶೇಷ ಮನೋಶಾಸ್ತ್ರ ಬ್ಲಾಕ್, ಭೀಮಾ ಹಾಸ್ಟೆಲ್, ಅತ್ಯಾಧುನಿಕ ರೋಗ ಪತ್ತೆ ಸೌಲಭ್ಯಗಳ ಸುಧಾರಿತ ಐಟಿಎಂ, ಆರ್‌ಐ ಸ್ಕ್ಯಾನರ್ ಮತ್ತು ಅತ್ಯಾಧುನಿಕ ಡಿ.ಎನ್.ಎ ವ್ಯವಸ್ಥೆ ಘಟಕ ಮುಂತಾದುವುಗಳನ್ನು ಗೌರವಾನ್ವಿತ ರಾಷ್ಟ್ರಪತಿಗಳು ಉದ್ಘಾಟಿಸಿದರು.

**ಮಾನಸಿಕ ಆರೋಗ್ಯ ಹಾಗೂ ನರ ರೋಗಗಳ ಕ್ಷೇತ್ರದಲ್ಲಿ ನಿಮಾನ್ಸ್ ಸಂಸ್ಥೆಯಿಂದ ಅಪರಿಮಿತ ಸಾಧನೆ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ ನಿಮ್ಹಾನ್ಸ್ ಐದು ದಶಕಗಳಿಂದ ಮಾನಸಿಕ ಆರೋಗ್ಯ ಹಾಗೂ ನರರೋಗಗಳ ಕ್ಷೇತ್ರದಲ್ಲಿ ಅಪರಿಮಿತ ಸಾಧನೆ ಮಾಡಿದೆ, ನಿಮಾನ್ಸ್ ಮಾನಸಿಕ ಆರೋಗ್ಯ ಮತ್ತು ಶಿಕ್ಷಣಕ್ಕೆ ಮೀಸಲಾದ ಭಾರತದ ಪ್ರಪ್ರಥಮ ಸಂಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಮಾನಸಿಕ ರೋಗ, ರೋಗಿ ಹಾಗೂ ಆರೈಕೆಯ ಕುರಿತಾದ ಜನರ ನಕಾರಾತ್ಮಕ ದೃಷ್ಟಿಕೋನವನ್ನು ನಿವಾರಿಸುವಲ್ಲಿ ನಿಮಾನ್ಸ್ ಶ್ರಮಿಸುತ್ತಿದೆ ಎಂದು ತಿಳಿಸಿದರು.

ಮೆದುಳು, ನರಗಳ ಖಾಯಿಲೆಗಳಿಗೆ ಅತ್ಯುತ್ತಮ ಚಿಕಿತ್ಸೆ ನೀಡುವಲ್ಲಿ ನಿಮಾನ್ಸ್ ಸಂಸ್ಥೆ ಹೆಸರುವಾಸಿಯಾಗಿದೆ. ರಾಜ್ಯದಲ್ಲಿ ಟೆಲಿ ಮಾನಸ್ ಸಹಾಯವಾಣಿ ಯಶಸ್ವಿಯಾಗಿದ್ದು, ದೂರವಾಣಿ ಆಪ್ತ ಸಮಾಲೋಚನೆ ಮೂಲಕ ಸುಮಾರು 17 ಲಕ್ಷ ಜನರು ಪ್ರಯೋಜನ ಪಡೆದಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಸಹ ನರರೋಗ ಮತ್ತು ಇತರ ಕಾಯಿಲೆಗಳಿಗೆ ಚಿಕಿತ್ಸೆ ನೀಡಲು ತಜ್ಞರ ಸೇವೆಯನ್ನು ವಿಸ್ತರಿಸಲಾಗಿದೆ. ಸರ್ಕಾರವು ನಿಮ್ಹಾನ್ಸ್ ಸಂಸ್ಥೆಯ ಕಾರ್ಯನಿರ್ವಹಣೆಗಾಗಿ ಪ್ರತಿ ವರ್ಷ 137 ಕೋಟಿ ರೂಪಾಯಿಗಳನ್ನು ಒದಗಿಸುತ್ತಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಆಲದ ಮರ ಫೌಂಡೇಷನ್ ಸಹಯೋಗದಲ್ಲಿ ನಗರದ ಸಿ.ವಿ. ರಾಮನ್ ಆಸ್ಪತ್ರೆಯಲ್ಲಿ 25 ಹಾಸಿಗೆ ಸಾಮರ್ಥ್ಯದ ತುರ್ತು ಚಿಕಿತ್ಸೆ ಮತ್ತು ರಿಕವರಿ ಕೇಂದ್ರದಲ್ಲಿ ಮಾನಸಿಕ ಕಾಯಿಲೆಯಿಂದ ಬಳಲುತ್ತಿರುವ ಬಡವರಿಗೆ ಪುನರ್ವಸತಿ ಸ್ಥಾಪಿಸಲಾಗಿದೆ. ಜಿಲ್ಲಾ ಉಪ ಕೇಂದ್ರ, ಆಸ್ಪತ್ರೆಗಳಲ್ಲಿ ಮನೋ ಚೈತನ್ಯ ಮಾನಸಿಕ ಆರೋಗ್ಯ ಚಿಕಿತ್ಸಾ ಕಾರ್ಯಕ್ರಮಗಳ ಮೂಲಕ 146 ತಾಲ್ಲೂಕುಗಳ 5 ಲಕ್ಷ ಜನರು ಪ್ರಯೋಜನ ಪಡೆದಿದ್ದಾರೆ. ಒಟ್ಟನಲ್ಲಿ ಈ ಸಂಸ್ಥೆಯ ಸರ್ವತೋಮುಖ ಬೆಳವಣಿಗೆಗೆ ಸರ್ಕಾರ ಬದ್ದವಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು. ಕಾರ್ಯಕ್ರಮದಲ್ಲಿ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣ ಪ್ರಕಾಶ್ ರುದ್ರಪ್ಪ ಪಾಟೀಲ್, ಸಂಸದರಾದ ತೇಜಸ್ವಿ ಸೂರ್ಯ, ಯಧುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಪಿ.ಸಿ.ಮೋಹನ್, ಡಾ. ಸಿ.ಎನ್. ಮಂಜುನಾಥ್, ನಿಮ್ಹಾನ್ಸ್ ನಿರ್ದೇಶಕಿ ಡಾ. ಪ್ರತಿಮಾ ಮೂರ್ತಿ ಸೇರಿದಂತೆ ಗಣ್ಯರುಗಳು ಹಾಗೂ ನಿಮ್ಹಾನ್ಸ್ ಸಮಸ್ಥೆಯ ಹಿರಿಯ ಅಧಿಕಾರಿಗಳು, ವೈದ್ಯರುಗಳು ಉಪಸ್ಥಿತರಿದ್ದರು.




### ಜನರ ಮಾನಸಿಕ ರೋಗಕ್ಕೆ ಚಿಕಿತ್ತೆ ನೀಡುವಲ್ಲಿ ನಿಮಾನ್ಸ್ ಹೊಸ ಮೈಲುಗಲ್ಲು ಸೃಷ್ಟಿ

**ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ರಸಗೊಬ್ಬರ ಮತ್ತು ರಾಸಾಯನಿಕ ಖಾತೆ ಸಚಿವರಾದ ಜಗತ್ ಪ್ರಕಾಶ್ ನಡ್ಡಾ ಅವರು ಮಾತನಾಡಿ ನಿಮ್ಹಾನ್ಸ್ ಜನರಿಗೆ ಮಾನಸಿಕ ರೋಗ ಚಿಕಿತ್ಸೆಗೆ ಸಂಬಂಧಿಸಿದಂತೆ ಹೊಸ ಮೈಲುಗಲ್ಲು ಸೃಷ್ಟಿಸಿದೆ. ದೇಶದ ಉನ್ನತ ಮಟ್ಟದ 200 ಆಸ್ಪತ್ರೆಗಳಲ್ಲಿ ನಿಮಾನ್ಸ್ ಸಹ ಒಂದು ಸ್ಥಾನ ಅಲಂಕರಿಸಿದೆ. ಲಕ್ಷಾಂತರ ಜನರು ಇಲ್ಲಿ ಮಾನಸಿಕ ಖಾಯಿಲೆಗಳಿಗೆ ಚಿಕಿತ್ಸೆ ಪಡೆಯುತ್ತಿದ್ದಾರೆ. ಇಲ್ಲಿಯ ಉತ್ತಮ ಪ್ರಯೋಗಾಲಯ ಮತ್ತು ಅತ್ಯಾಧುನಿಕ ಚಿಕಿತ್ಸೆಗಳು ಜನರಿಗೆ ಲಭ್ಯವಾಗಿದೆ. ದೇಶದಲ್ಲಿಯೇ ಈ ಸಂಸ್ಥೆ ಹೆಸರು ಮಾಡಿದ್ದು, ಮುಂದೆ ಜಾಗತಿಕ ಮಟ್ಟದಲ್ಲೂ ಸಹ ಗುರುತಿಸಲ್ಪಡುತ್ತದೆ ಎಂದು ತಿಳಿಸಿದರು.**

### ಆತ್ಮೀಯವಾಗಿ ಬೀಳ್ಕೊಟ್ಟ ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು:** ಭಾರತದ ಗೌರವಾನ್ವಿತ ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಅವರು ಇಂದು ಜನವರಿ 03 ರಂದು ಕರ್ನಾಟಕ ಪ್ರವಾಸ ಕೈಗೊಂಡಿದ್ದು, ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ (ನಿಮಾನ್ಸ್) ಯಿಂದ ಆಯೋಜಿಸಲಾದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ವಾಯು ಸೇನೆಯ ವಿಶೇಷ ವಿಮಾನದ ಮೂಲಕ ಹೆಚ್.ಎ.ಎಲ್ ವಿಮಾನ ನಿಲ್ದಾಣದಿಂದ ಬೆಳಗಾವಿಗೆ ಪ್ರಯಾಣಿಸಿದರು.

ಗೌರವಾನ್ವಿತ ರಾಷ್ಟ್ರಪತಿಗಳನ್ನು ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆತ್ಮೀಯವಾಗಿ ಬೀಳ್ಕೊಟ್ಟರು

ಈ ಸಮಯದಲ್ಲಿ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ಏರ್ ಮಾರ್ಷಲ್ ನಾಗೇಶ್ ಕಪೂರ್, ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್, ಲೆಫ್ಟಿನೆಂಟ್ ಜನರಲ್ ಜಿತೇಂದ್ರ ಕುಮಾರ್ ಗೇರಾ, ಕರ್ನಾಟಕ ಪೊಲೀಸ್ ಮಹಾನಿರ್ದೇಶಕರಾದ ಡಾ. ಅಲೋಕ್ ಮೋಹನ್, ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಬಿ. ದಯಾನಂದ್, ಮತ್ತು ಬೆಂಗಳೂರು ನಗರ ಜಿಲ್ಲಾಧಿಕಾರಿಗಳಾದ ಜಗದೀಶ್. ಜಿ ಸೇರಿದಂತೆ ಇತರೆ ಗಣ್ಯರು, ಅಧಿಕಾರಿಗಳು ಉಪಸ್ಥಿತರಿದ್ದರು.



## 2024-25ನೇ ಸಾಲಿನ ಪೋಸ್ಟ್ ಮೆಟ್ರಿಕ್ ಶೈಕ್ಷಣಿಕ ಸಹಾಯಧನಕ್ಕೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಬೆಂಗಳೂರು:** ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ 2024-25ನೇ ಸಾಲಿನ ಪೋಸ್ಟ್ ಮೆಟ್ರಿಕ್ ಶೈಕ್ಷಣಿಕ ಸಹಾಯಧನ ಕೋರಿ ಅರ್ಜಿ ಸಲ್ಲಿಸುವ ಅವಧಿಯನ್ನು ವಿಸ್ತರಿಸುವಂತೆ ವಿವಿಧ ಕಾರ್ಮಿಕ ಸಂಘಟನೆಗಳು ಕೋರಿರುವ ಹಿನ್ನಲೆಯಲ್ಲಿ ಎಸ್.ಎಸ್.ಪಿ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಜನವರಿ 15 ರವರೆಗೆ ವಿಸ್ತರಿಸಲಾಗಿದೆ ಎಂದು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಕಾರ್ಯದರ್ಶಿ ಭಾರತಿ ಡಿ. ಅವರು ತಿಳಿಸಿದ್ದಾರೆ.

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಕಟ್ಟಡ ಕಾರ್ಮಿಕರ ಇಬ್ಬರು ಮಕ್ಕಳಿಗೆ ಶೈಕ್ಷಣಿಕ ಸಹಾಯಧನ ಸೌಲಭ್ಯವನ್ನು ನೀಡುತ್ತಿದ್ದು, 2023-24ನೇ ಸಾಲಿನ ಶೈಕ್ಷಣಿಕ ಸಹಾಯಧನದ ಅರ್ಜಿಗಳನ್ನು 2024ನೇ ಮಾರ್ಚ್ 15 ರಿಂದ ಮತ್ತು 2024-25ನೇ ಸಾಲಿನ ಶೈಕ್ಷಣಿಕ ಸಹಾಯಧನದ ಅರ್ಜಿಗಳನ್ನು 2024 ನೇ ಸೆಪ್ಟೆಂಬರ್ 25 ರಿಂದ ಎಸ್.ಎಸ್.ಪಿ ತಂತ್ರಾಂಶದ ಪ್ರಾರಂಭಿಸಲಾಗಿದ್ದು, ಅರ್ಜಿ ಸಲ್ಲಿಸಲು 2024ನೇ ಡಿಸೆಂಬರ್ 31 ರಂದು ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿತ್ತು. ಅದರನ್ವಯ ಮಂಡಳಿಯ 2023-24ನೇ ಸಾಲಿನ ಶೈಕ್ಷಣಿಕ ಸಹಾಯಧನದ ಅರ್ಜಿಗಳ ಸ್ವೀಕೃತಿಯನ್ನು ಮುಕ್ತಾಯಗೊಳಿಸಲಾಗಿತ್ತು. ವಿವಿಧ ಸಂಘಟನೆಗಳ ಕೋರಿಕೆಯಿಂದ ಅರ್ಜಿ ಸಲ್ಲಿಸುವ ಅವಧಿಯನ್ನು ವಿಸ್ತರಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿ ನೋಂದಾಯಿಸಿಕೊಳ್ಳಿ

**ರಾಮನಗರ:** ರಾಜ್ಯ ಸರ್ಕಾರವು 2024-25ನೇ ಸಾಲಿಗೆ ಯಶಸ್ವಿನಿ ಸಹಕಾರಿ ಆರೋಗ್ಯ ರಕ್ಷಣಾ ಯೋಜನೆಯನ್ನು ನವೀಕರಿಸುವ ಹಾಗೂ ಹೊಸದಾಗಿ ನೋಂದಣಿ 2024ರ ಡಿ. 1 ರಿಂದ ಪ್ರಾರಂಭವಾಗಿದ್ದು, ಈ ಯೋಜನೆಯ ಸದುಪಯೋಗವು 2025ರ ಏಪ್ರಿಲ್ 1 ರಿಂದ 2026ರ ಮಾರ್ಚ್ 31ರ ವರೆಗೂ ಚಿಕಿತ್ಸಾ ಅವಧಿ ಚಾಲ್ತಿಯಲ್ಲಿರುತ್ತದೆ.

ನೋಂದಾಯಿತ ಫಲಾನುಭವಿಗಳು ಸಂಬಂಧಪಟ್ಟ ಸಹಕಾರ ಸಂಘಗಳಲ್ಲಿ ನವೀಕರಿಸಿಕೊಳ್ಳಬೇಕು ಹಾಗೂ ಪರಿಷ್ಕೃತಮಾರ್ಗಸೂಚಿಗಳಂತೆ 30,000 ರೂ.ಗಳು ಹಾಗೂ ಅದಕ್ಕಿಂತ ಕಡಿಮೆ ವೇತನ ಪಡೆಯುವ ಸಹಕಾರ ಸಂಘಗಳ ನೌಕರರು ಹಾಗೂ ಖಾಸಗಿ ನೌಕರರು ಅವರ ಅರ್ಹ ಕುಟುಂಬ ಸದಸ್ಯರು ಸಹಾ ಯಶಸ್ವಿನಿ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. (ಸಹಕಾರ ಸಂಘದ ನೌಕರರು ಮೂರು ವರ್ಷ ಸೇವೆ ಮತ್ತು 30,000 ರೂ.ಗಳು ಮತ್ತು ಅದಕ್ಕಿಂತ ಕಡಿಮೆ ಒಟ್ಟು ವೇತನ ಪಡೆಯುತ್ತಿರುವ ಬಗ್ಗೆ ಸಹಕಾರ ಸಂಘದ ಆಡಳಿತ ಮಂಡಳಿ ಅನುಮೋದನೆಯ ದೃಢೀಕರಣ ಪತ್ರ ಲಗ್ತಿಸಬೇಕು) ನಗರ ಅಥವಾ ಗ್ರಾಮೀಣಪ್ರದೇಶದ ಯಾವುದೇ ಸಹಕಾರ ಸಂಘಗಳು ಅಥವಾ ಅದಕ್ಕೆ ಸಂಯೋಜಿಸಲ್ಪಟ್ಟ ಸ್ವಸಹಾಯ ಗುಂಪುಗಳ ಸದಸ್ಯರುಗಳು ಸಹ ಕನಿಷ್ಠ 3 ತಿಂಗಳ ಸದಸ್ಯರಾಗಿದ್ದಲ್ಲಿ ಯೋಜನೆಯ ಸೌಲಭ್ಯ ಪಡೆಯಬಹುದಾಗಿದೆ.

ಪರಿಶಿಷ್ಟ ಜಾತಿ ಮತ್ತು ಪಂಗಡದ ಸದಸ್ಯರು ಯಾವುದೇ ವಂತಿಗೆ ಹಣವನ್ನು ಪಾವತಿಸುವಂತಿರುವುದಿಲ್ಲ ಹಾಗೂ ವಂತಿಗೆಹಣವನ್ನು ಸರ್ಕಾರದಿಂದಲೇ ಭರಿಸಲಾಗುವುದು. ಹೊಸದಾಗಿ ಸದಸ್ಯತ್ವ ಪಡೆಯಲು ಹಾಗೂ ನವೀಕರಿಸಲು ಎಲ್ಲಾ ಸದಸ್ಯರು ಯೋಜನೆಯ ಸೌಲಭ್ಯ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ವಿವರಗಳಿಗೆ ಹತ್ತಿರದ ಸಹಕಾರ ಸಂಘಗಳನ್ನು ಅಥವಾ ಯಶಸ್ವಿನಿ ಕೋ ಆರ್ಡಿನೇಟರ್‌ನಂಜುಂಡಸ್ವಾಮಿ ಮೊ.ನಂ. 9740843844 ಅನ್ನು ಸಂಪರ್ಕಿಸುವಂತೆ ಚನ್ನಪಟ್ಟಣ ತಾಲ್ಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಸ್ಯ ಶಾಸ್ತ್ರೀಯ ತೋಟಕ್ಕೆ ಮಕ್ಕಳ ಭೇಟಿ

**ಮೈಸೂರು:** ಶ್ರೀ ರಂಗಾ ರಾಂ ಸ್ಮಾರಕ ವಿಶೇಷ ದೃಷ್ಟಿ ವಿಕಲಚೇತನ ಶಾಲೆಯ 8 ರಿಂದ 10 ನೇ ತರಗತಿಯ 40 ವಿದ್ಯಾರ್ಥಿನಿಯರು ಹಾಗೂ ಶಿಕ್ಷಕರು ಮೈಸೂರಿನಲ್ಲಿ ತೋಟಗಾರಿಕೆ ಇಲಾಖೆಯು ಅಭಿವೃದ್ಧಿ ಪಡಿಸಿದ ಲಿಂಗಾಂಬುದಿ ಸಸ್ಯ ಶಾಸ್ತ್ರೀಯ ತೋಟಕ್ಕೆ ಭೇಟಿ ನೀಡಿದರು.

ನಂತರ ಮಕ್ಕಳು DJ hybird ತೆಂಗು ಸಸಿಯನ್ನು ನೆಟ್ಟು, ನೀರುಣಿಸಿ ಆನಂದಿಸಿದರು. ಮಕ್ಕಳು ದೃಷ್ಟಿ ಹೀನತೆಯಿದ್ದರೂ ಕೂಡ ಸಸ್ಯ ಪ್ರಭೇದಗಳನ್ನು, ಹೂಗಳನ್ನು ಹಾಗೂ ಮರ ಗಿಡಗಳನ್ನು ಸ್ಪರ್ಶಿಸಿ, ಸುಗಂಧವನ್ನು ಯೋಚಿಸಿ ಕಲಿಕೆ ಅನುಭವಿಸಿದರು. ಅನೇಕ ಸಸ್ಯ ಪ್ರದೇಶಗಳ ಬ್ಲಾಕ್ ಗಳಾದ ರೋಸ್ ಗಾರ್ಡನ್, ಚಿಟ್ಟೆ ಪಾರ್ಕ್ ಹಾಗೂ ಟೋಪಿಯಂ ಪಾರ್ಕಿಗೂ ಕೂಡಾ ಭೇಟಿ ನೀಡಿ ಅನುಭವಿಸಿ ಆನಂದಿಸಿದರು. ಈ ಸಂದರ್ಭದಲ್ಲಿ ತೋಟಗಾರಿಕೆ ಇಲಾಖೆಯ ವಿಭಾಗೀಯ ಜಂಟಿ ನಿರ್ದೇಶರಾದ ಹೆ.ಎಂ ನಾಗರಾಜ, ತೋಟಗಾರಿಕೆ ಉಪನಿರ್ದೇಶಕರಾದ ಮಂಜುನಾಥ್ ಅಂಗಡಿಯವರು, ಎ.ಡಿ.ಹೆಚ್ ಗಳಾದ ಹೆಚ್. ನವೀನ್ ಕುಮಾರ್ ಹಾಗೂ ಮಂಜುನಾಥ್ ಅವರು ಉಪಸ್ಥಿತರಿದ್ದರು.



## ಬೆಳ್ಳಿ ಪದಕ ವಿಜೇತ ಮನುಕುಮಾರ್

**ಮಂಡ್ಯ:** ಮಂಡ್ಯಜಿಲ್ಲಾ ಗೃಹರಕ್ಷಕದಳದ ಶ್ರೀ ಮನುಕುಮಾರ್, ಪಿ.ಎಲ್.ಸಿ., ಪಾಂಡವಪುರಘಟಕ, ಮಂಡ್ಯಜಿಲ್ಲೆಇವರು ದಿನಾಂಕ 12-12-2024 ರಿಂದ 27-12-2024 ರವರೆಗೆಗೃಹರಕ್ಷಕ ಮತ್ತು ಪೌರರಕ್ಷಣಾಅಕಾಡೆಮಿ, ಬೆಂಗಳೂರು ಇಲ್ಲಿ ನಡೆದರಾಜ್ಯ ಮಟ್ಟದ ಪುರುಷಗೃಹರಕ್ಷಕ ಅಧಿಕಾರಿಗಳ ತರಬೇತಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ದ್ವಿತಿಯ ಸ್ಥಾನದಲ್ಲಿದ್ದು ಬೆಳ್ಳಿಯ ಪದಕ ಪಡೆದು ಮಂಡ್ಯಜಿಲ್ಲಾ ಗೃಹರಕ್ಷಕದಳಕ್ಕೆ ಕೀರ್ತಿತಂದಿರುತ್ತಾರೆ. ಮಂಡ್ಯಜಿಲ್ಲಾ ಗೃಹರಕ್ಷಕದಳದ ವತಿಯಿಂದ ಅಧಿಕಾರಿಗಳಾದ ಶ್ರೀ ಡಿ.ವಿನೋದ್‌ಖನ್ನಾಕಮಾಂಡೆಂಟ್ ಹಾಗೂ ಶ್ರೀ ಪುರುಷೋತ್ತಮ್ ರಾವ್ ಎ. ಡೆಪ್ಯೂಟಿಕಮಾಂಡೆಂಟ್, ಬೋಧಕ ವರ್ಗದವರು ಮತ್ತುಕಛೇರಿಯ ಸಿಬ್ಬಂದಿ ವರ್ಗದವರು, ಗೃಹರಕ್ಷಕ ಅಧಿಕಾರಿಗಳು ಹಾಗೂ ಗೃಹರಕ್ಷಕರು ಪದಕ ಪುರಸ್ಕೃತರನ್ನು ಪ್ರಶಂಸಿಸಿರುತ್ತಾರೆ ಎಂದು ಮಂಡ್ಯ ಗೃಹ ರಕ್ಷಕ ದಳದ ಸಮಾದೇಷ್ಟರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಜಿಲ್ಲಾ ಕೇಂದ್ರದಲ್ಲಿ 140 ಕೋಟಿ ವೆಚ್ಚದ ಹೈಟೆಕ್ ಹೂ ಮಾರುಕಟ್ಟೆ ನಿರ್ಮಿಸಲು ಚಿಂತನೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಜಿಲ್ಲೆ ವಿವಿಧ ಹೂ ಬೆಳೆಗಳಿಗೆ ಹೆಸರಾಗಿದ್ದು, ಜಿಲ್ಲೆಯ ಹೂ ಬೆಳೆಗಾರರು ಮತ್ತು ವ್ಯಾಪಾರಿಗಳ ಹಿತದೃಷ್ಟಿಯಿಂದ ಚಿಕ್ಕಬಳ್ಳಾಪುರ ತಾಲ್ಲೂಕಿನ ನಂದಿ ಬಳಿಯ ತೋಟಗಾರಿಕೆ ಇಲಾಖೆಗೆ ಸೇರಿದ 20 ಎಕರೆ ಪ್ರದೇಶದಲ್ಲಿ 140 ಕೋಟಿ ವೆಚ್ಚದ ಹೈಟೆಕ್ ಹೂ ಮಾರುಕಟ್ಟೆಯನ್ನು ನಿರ್ಮಿಸಲು ಉದ್ದೇಶಿಸಿದ್ದು, ಈ ವರ್ಷದ ಬಜೆಟ್‌ನಲ್ಲಿ ಹೈಟೆಕ್ ಹೂವಿನ ಮಾರುಕಟ್ಟೆಯನ್ನು ಮುಖ್ಯಮಂತ್ರಿಗಳು ಘೋಷಿಸುವ ವಿಶ್ವಾಸವಿದೆ ಎಂದು ಉನ್ನತ ಶಿಕ್ಷಣ ಸಚಿವರೂ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಕರೆದಿದ್ದ ಹೂವಿನ ವ್ಯಾಪಾರಸ್ಥರು ಮತ್ತು ಹೂ ಬೆಳೆಗಾರರ ಸಭೆಯಲ್ಲಿ ಜಿಲ್ಲಾ ಕೇಂದ್ರದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಹೈಟೆಕ್ ಹೂವಿನ ಮಾರುಕಟ್ಟೆಯ ನೀಲ ನಕ್ಷೆಯ ಕುರಿತು ಮಾಹಿತಿ ನೀಡುವ ಜೊತೆಗೆ ಅಭಿಪ್ರಾಯಗಳನ್ನು ಸಂಗ್ರಹಿಸಿ ಮಾತನಾಡಿದರು.

ಈಗಾಗಲೇ ತೋಟಗಾರಿಕೆ ಇಲಾಖೆಗೆ ಸೇರಿದ 20 ಎಕರೆ ಜಮೀನು ಹೂವಿನ ಮಾರುಕಟ್ಟೆಗೆ ಉಚಿತವಾಗಿ ಮಂಜೂರಾಗಿದೆ. ಜಿಲ್ಲಾ ಕೇಂದ್ರದ ಬೆಳವಣಿಗೆಯ ದೂರದೃಷ್ಟಿಯನ್ನು ಇಟ್ಟುಕೊಂಡು ಈ ಹೈಟೆಕ್ ಹೂವಿನ ಮಾರುಕಟ್ಟೆಯನ್ನು ನಿರ್ಮಿಸಲಾಗುವುದು. ಹೂವಿನ ಮಾರುಕಟ್ಟೆಗಾಗಿ 140 ಕೋಟಿ ರೂಪಾಯಿ ಅಂದಾಜು ವೆಚ್ಚದ ಪ್ರಸ್ತಾವನೆಯನ್ನು ಸಿದ್ದಪಡಿಸಲಾಗಿದೆ. ಶೀಘ್ರದಲ್ಲಿಯೇ ಮುಖ್ಯಮಂತ್ರಿಗಳಿಗೆ ಈ ಪ್ರಸ್ತಾವನೆಯನ್ನು ಮುಖ್ಯಮಂತ್ರಿಗಳಿಗೆ ಸಲ್ಲಿಸಲಿದ್ದು, ಇದೇ ವರ್ಷದ ಬಜೆಟ್ ನಲ್ಲಿ ಘೋಷಿಸುವಂತೆಯೂ ಮನವಿ ಮಾಡಲಾಗುವುದು. ಇದೇ ಬಜೆಟ್ ನಲ್ಲಿ ಘೋಷಣೆಯಾಗುವ ವಿಶ್ವಾಸವೂ ತಮಗಿದೆ ಎಂದು ತಿಳಿಸಿದರು. ಹೂವಿನ ಮಾರುಕಟ್ಟೆಯಲ್ಲಿ ಇ-ಹರಾಜು ವಿಭಾಗ, ಸುಸಜ್ಜಿತ ವಾಹನ ನಿಲುಗಡೆ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳು ಇರಲಿವೆ. ಈಗಾಗಲೇ ಜಿಲ್ಲೆಯ ಶಿಡ್ಲಘಟ್ಟ ತಾಲ್ಲೂಕಿನಲ್ಲಿ 200 ಕೋಟಿ ರೂಪಾಯಿ ವೆಚ್ಚದಲ್ಲಿ ಹೈಟೆಕ್ ರೇಷ್ಮೆ ಮಾರುಕಟ್ಟೆಯನ್ನು ನಿರ್ಮಿಸಲು ಹಣ ಮಂಜೂರಾಗಿದೆ. ಸ್ಥಳವೂ ಆಗಿರುವುದರಿಂದ ಶೀಘ್ರದಲ್ಲಿಯೇ ಟೆಂಡರ್ ಪ್ರಕ್ರಿಯೆಗೂ ಚಾಲನೆ ನೀಡಲಾಗುವುದು. ಇನ್ನು ಒಂದು ಅಥವಾ ಎರಡು ತಿಂಗಳ ಒಳಗಾಗಿ ಮುಖ್ಯಮಂತ್ರಿಗಳು ಈ ಹೈಟೆಕ್ ರೇಷ್ಮೆ ಮಾರುಕಟ್ಟೆಗೆ ಭೂಮಿಪೂಜೆ ನೆರವೇರಿಸಲಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಶಾಸಕ ಬಿ.ಎನ್.ರವಿಕುಮಾರ್, ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ, ಜಿಲ್ಲಾ ಪಂಚಾಯತ್ ಸಿಇಒ ಪ್ರಕಾಶ್ ನಿಟ್ಟಾಲಿ, ಚಿಕ್ಕಬಳ್ಳಾಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಆರ್.ಉಮಾ, ಸಹಾಯಕ ನಿರ್ದೇಶಕಿ ವಿನುತಾ, ಕೃಷಿ ಇಲಾಖೆಯ ಅಭಿಯಂತರರು, ಹೂವಿನ ವರ್ತಕರು, ರೈತರು ಹಾಜರಿದ್ದರು.




## ಸಾವಿತ್ರಿ ಬಾಯಿ ಫುಲೆ ಮೊದಲು ಅಕ್ಷರ ಬಿತ್ತಿದ ಅಕ್ಷರದವ್ವ

**ಹುಳಿಯಾರು:** ಭಾರತದ ಮೊದಲ ಶಿಕ್ಷಕಿ ಸಾವಿತ್ರಿ ಬಾಯಿ ಪುಲೆಯವರ 193 ನೇ ಜನ್ಮ ದಿನಾಚರಣೆಯನ್ನು ಹುಳಿಯಾರು ಪಟ್ಟಣ ಪಂಚಾಯ್ತಿಯ ಸೋಮಜ್ಜನಪಾಳ್ಯ ಶಾಲೆಯಲ್ಲಿ ಶುಕ್ರವಾರ ಆಚರಣೆ ಮಾಡಲಾಯಿತು.

ಶಾಲಾ ಹಿರಿಯ ಶಿಕ್ಷಕಿಯಾದ ಓಂಕಾರಮ್ಮ ಹೆಚ್ ಸಿ ರವರು ಮಾತನಾಡಿ, ಸಾವಿತ್ರಿ ಬಾಯಿ ಪುಲೆಯವರು ಹೆಣ್ಣು ಮಕ್ಕಳಿಗೆ ಮೊದಲು ಅಕ್ಷರ ಬಿತ್ತಿದ ಅಕ್ಷರದವ್ವ. ತಳಸಮುದಾಯ ಹೆಣ್ಣು ಮಕ್ಕಳಿಗೆ 18 ಶಾಲೆಗಳನ್ನು ತೆರೆದು ಮೇಲುಜಾತಿ ಗಂಡಸರಿಗೆ ಮಾತ್ರ ಮೀಸಲಾಗಿದ್ದ ವಿದ್ಯೆಯನ್ನು ಹೆಣ್ಣು ಮಕ್ಕಳಿಗೆ ತಲುಪಿಸಿದವರು ಎಂದು ಹೇಳಿದರು.

ಕೆಸರು, ಸಗಣಿ ಎರಚಿ ಕೇಕೆ ಹಾಕಿದ ಜನರೆದುರು ಹಠವಾದಿಯಾಗಿ ಅಕ್ಷರ ಕಾಯಕ ಮಾಡಿದರು. ಮುಸ್ಲಿಂ, ದಲಿತ, ಹಿಂದುಳಿದ ಹಾಗೂ ಬ್ರಾಹ್ಮಣ ವಿಧವೆಯರ ಮಕ್ಕಳಿಗೂ ಶಿಕ್ಷಣದ ಹಕ್ಕು ದೊರಕಿಸಿ ಕೊಡಲು ಮುನ್ನುಡಿ ಬರೆದ ಮಹಾ ತಾಯಿ. ಅಂದು ಪ್ಲೇಗ್ ಪೀಡಿತ ಪ್ರದೇಶದಲ್ಲಿ ರಕ್ಷಣಾ ಕಾರ್ಯದಲ್ಲಿ ತೊಡಗಿದ್ದಾಗ ಅದೇ ರೋಗಕ್ಕೆ ತುತ್ತಾಗಿ ಅಸುನೀಗಿದರು. ಇವರ ಹೋರಾಟಕ್ಕೆ ಬೆಂಬಲವಾಗಿ ನಿಂತವರು ಅವರ ಪತಿ ಜ್ಯೋತಿ ಬಾಪುಲೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಚಿಕ್ಕಣ್ಣ, ಜ್ಞಾನೇಶ್ವರಿ ಎಸ್ ಎಸ್, ಅಂಗನವಾಡಿ ಶಿಕ್ಷಕಿ ನಾಗರತ್ನಮ್ಮ, ಭವ್ಯ, ಅಡುಗೆಯವರಾದ ಉಮಾದೇವಿ, ನೀಲಮ್ಮ ಭಾಗವಹಿಸಿದ್ದರು.



**ಹುಳಿಯಾರು ಪಟ್ಟಣ ಪಂಚಾಯ್ತಿಯ ಸೋಮಜ್ಜನ ಪಾಳ್ಯ ಶಾಲೆಯಲ್ಲಿ ಶುಕ್ರವಾರ ಸಾವಿತ್ರಿ ಬಾಯಿ ಪುಲೆಯವರ 193 ನೇ ಜನ್ಮ ದಿನಾಚರಣೆ ಯನ್ನು ಆಚರಿಸ ಲಾಯಿತು.**

# ನೂತನ ಬಡಾವಣೆ ನಿರ್ಮಾಣಕ್ಕೆ ಸಮಸ್ಯೆ ಇಲ್ಲ

**ರಾಮನಗರ:** ಜಿಲ್ಲೆಯಲ್ಲಿ ನಿಯಮ ಬದ್ಧವಾಗಿನೂತನಬಡಾವಣೆನಿರ್ಮಾಣಕ್ಕೆ ಯಾವುದೇ ಸಮಸ್ಯೆ ಎದುರಾಗುವುದಿಲ್ಲಎಂದು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ತಿಳಿಸಿದರು.

ಅವರು ಜ.2ರ ಗುರುವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪರಿತ್ಯಾಜ್ಯನ ಪತ್ರ, ಸೇಲ್ ಸರ್ಟಿಫಿಕೇಟ್, ಕೋರ್ಟ್ ಆದೇಶದಂತೆ ಇ ಖಾತೆಗಳಿಗೆ ಸಂಬಂಧಿಸಿದಂತೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಡಾವಣೆನಿರ್ಮಾಣಕ್ಕೆ ಅನುಮತಿ, ನೋಂದಣಿ, ನೀಲಿ ನಕ್ಷೆ ಅನುಮೋದನೆ ಹಾಗೂ ಖಾತಾ ಬದಲಾವಣೆ ಮಾಡಲು ಯಾವುದೇ ಸಮಸ್ಯೆ ಇರುವುದಿಲ್ಲ, ಲೇಔಟ್ ನಿರ್ಮಾಣ ಮಾಡುವಾಗ ಸಲ್ಲಿಸಿದ್ದ ನೀಲಿ ನಕ್ಷೆಯಂತೆ ಲೇಔಟ್ ನಿರ್ಮಿಸಬೇಕು. ನಿರ್ಮಾಣದಲ್ಲಿ ಯಾವುದೇ ವ್ಯತ್ಯಾಸ ಕಂಡು ಬಂದಲ್ಲಿ ಕಾನೂನು ರೀತ್ಯಾ ಕ್ರಮವಹಿಸಲಾಗುವುದು ಎಂದು ತಿಳಿಸಿದರು. ಗ್ರಾಮ ಬಡಾವಣೆಗಳು ಹಾಗೂ ಜಿಲ್ಲೆಯಲ್ಲಿ ಉಪ



ಗ್ರಾಮವೆಂದು ಘೋಷಿಸಲು ಅರ್ಹ ಇರುವ ಬಡಾವಣೆಗಳು ಮತ್ತು ಗ್ರಾಮ ಠಾಣೆಗಳನ್ನು ಉಪಗ್ರಾಮಗಳಾಗಿ ಬದಲಾಯಿಸಲು ಅಗತ್ಯ ದಾಖಲಾತಿಗಳೊಂದಿಗೆ ಪ್ರಸ್ತಾವನೆಯನ್ನು ಸಂಬಂಧಿಸಿದ ಇಲಾಖೆಗೆ ಸಲ್ಲಿಸುವಂತೆ ತಿಳಿಸಿದರು.

ಗುಂಡುತೋಪು ಮತ್ತು ಅರಣ್ಯ ಪ್ರದೇಶಗಳಲ್ಲಿ ಮನೆಗಳನ್ನು ನಿರ್ಮಿಸಿದ್ದಲ್ಲಿ ಅವುಗಳಿಗೆ ಖಾತೆ ಮಾಡಿಕೊಡಲು ಬರುವುದಿಲ್ಲ ಅವುಗಳನ್ನು ಅನುಭವದಾರರೆಂದು ಪರಿಗಣಿಸುವಂತೆ ತಿಳಿಸಿದರು.

ಡೆವಲಪರ್ಸ್ ಅಸೋಸಿಯೇಷನ್ ಪದಾಧಿಕಾರಿಗಳು ಮಾತನಾಡಿ, ನಮಗೆ ಜಿಲ್ಲೆಯಲ್ಲಿ ಬಡಾವಣೆಗಳ ನಿರ್ಮಾಣಕ್ಕೆ ಸಂಬಂಧಿಸಿದಂತೆ ನೋಂದಣಿ, ಅನುಮತಿ ಸೇರಿದಂತೆ ಯಾವುದೇ ರೀತಿಯ ಸಮಸ್ಯೆ ಇರುವುದಿಲ್ಲವೆಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಉಪ ವಿಭಾಗಾಧಿಕಾರಿ ಬಿನೋಯ್, ಉಪ ಕಾರ್ಯದರ್ಶಿ ಶಿವಕುಮಾರ್, ಭೂ ದಾಖಲೆಗಳ ಉಪ ನಿರ್ದೇಶಕ ಹನುಮೇಗೌಡ, ಯೋಜನಾ ನಿರ್ದೇಶಕ ಚಿಕ್ಕಸುಬ್ಬಯ್ಯ ಹಾಗೂ ಎಲ್ಲಾ ತಹಶೀಲ್ದಾರುಗಳು, ತಾಲ್ಲೂಕು ಕಾರ್ಯನಿರ್ವಹಕಾಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಇತರರು ಉಪಸ್ಥಿತರಿದ್ದರು.

# ಬಾಲಕ ಪತ್ತೆಗೆ ಮನವಿ

**ರಾಮನಗರ:** ಹಾರೋಹಳ್ಳಿ ತಾಲ್ಲೂಕಿನ ಸೊಂಟೇನಹಳ್ಳಿ ಗ್ರಾಮದ ನಿವಾಸಿಚಿರು (12) ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ದಾಖಲಾಗಿದೆ.



ಬಾಲಕನ ಚಹರೆಯ ವಿವರ:- 4.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ದುಂಡುಮುಖ,ಎಣ್ಣೆಗೆಂಪು ಮೈಬಣ್ಣ, ಇವರು ಕಾಣೆಯಾಗುವಾಗ ಕೇಸರಿ ಬಣ್ಣದ ಟೀ-ಶರ್ಟ್ ಹಾಗೂ ಸಿಮೆಂಟ್ ಬಣ್ಣದ ನಿಕ್ಕರ್ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ನಿರೀಕ್ಷಕರು, ಹಾರೋಹಳ್ಳಿ ಪೊಲೀಸ್ ಠಾಣೆ, ರಾಮನಗರ ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

# ಕರ್ನಾಟಕ ಸ್ಟೇಟ್ ಮಿನರಲ್ ಕಾರ್ಪೋರೇಷನ್ ಲಿಮಿಟೆಡ್ ಸಂಸ್ಥೆಯ ನೂತನ ಕ್ಯಾಲೆಂಡರ್, ಡೈರಿ ಬಿಡುಗಡೆ



**ಬೆಂಗಳೂರು :** ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಹೆಚ್ಚಿನ ಲಾಭಾಂಶ ಗಳಿಸುವಲ್ಲಿ ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ಸಂಸ್ಥೆ ಮುಂಚೂಣಿಯಲ್ಲಿದ್ದು, ಮುಂದಿನ ದಿನಗಳಲ್ಲಿ ಕಾರ್ಯ ಚಟುವಟಿಕೆಗಳನ್ನು ವಿಸ್ತರಿಸಿ ಇನ್ನು ಹೆಚ್ಚಿನ ಲಾಭಾಂಶಗಳನ್ನು ಗಳಿಸುವ ದೃಷ್ಟಿಯಿಂದ ಹೊಸ ಗಣಿಗುತ್ತಿಗೆಗಳ ಅನುಮೋದನೆಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸ್ಥಗಿತಗೊಂಡಿರುವ ಕೆಲವು ಗಣಿಗಳ ಪುನರ್ ಪ್ರಾರಂಭಕ್ಕೆ ಕ್ರಮವಹಿಸಲಾಗಿದೆ ಎಂದು ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಇಲಾಖೆ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ ಅವರು ತಿಳಿಸಿದರು.

ವಿಧಾನಸೌಧದ 3ನೇ ಮಹಡಿಯ ಕೊಠಡಿ ಸಂಖ್ಯೆ 305ರಲ್ಲಿ ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ಸಂಸ್ಥೆಯ 2025ನೇ ವರ್ಷದ ನೂತನ ಕ್ಯಾಲೆಂಡರ್ ಹಾಗೂ ಟೇಬಲ್ ಕ್ಯಾಲೆಂಡರ್ ಅನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಮಾನವ ಸಂಪನ್ಮೂಲ ಕೊರತೆಯನ್ನು ನೀಗಿಸಲು ಮತ್ತು ಪುನರ್ ಪ್ರಾರಂಭವಾಗುತ್ತಿರುವ ಗಣಿಗಳ ಅವಶ್ಯಕತೆಯಂತೆ ಹೊಸದಾಗಿ ಉದ್ಯೋಗಿಗಳ ನೇಮಕಕ್ಕೆ ಕ್ರಮವಹಿಸಿರುತ್ತದೆ ಎಂದರು.

ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ (ಏಖಒಅಐ) (ಹಿಂದಿನ ಒಒಐ) ಒಂದು ಸರ್ಕಾರಿ ಸ್ವಾಮ್ಯದ ಸಂಸ್ಥೆಯಾಗಿದ್ದು, ರಾಜ್ಯದಲ್ಲಿ ದೊರೆಯುವ ವಿವಿಧ ಅದಿರು ಮತ್ತು ಅಲಂಕಾರಿಕ ಗ್ರಾನೈಟ್ ಉತ್ಪಾದನೆ ಮತ್ತು ಮಾರಾಟದಲ್ಲಿ ತೊಡಗಿರುತ್ತದೆ. ಸಂಸ್ಥೆಯು 2003-2004 ನೇ ಸಾಲಿನಿಂದ ಸತತವಾಗಿ ಲಾಭಾಂಶದಲ್ಲಿ ತೊಡಗಿದ್ದು 2021-22ನೇ ಸಾಲಿನಲ್ಲಿ ಅತ್ಯಧಿಕ ವಹಿವಾಟು ರೂ. 1610.00 ಕೋಟಿಗಳಾಗಿದ್ದು ತೆರಿಗೆ ನಂತರ ನಿವ್ವಳ ಲಾಭ ರೂ. 787.00 ಕೋಟಿಗಳಾಗಿರುತ್ತದೆ. ಕಳೆದ ಸಾಲಿನಲ್ಲಿ ರೂ. 1473.00 ಕೋಟಿಗಳ ವಹಿವಾಟು ಮಾಡಿರುತ್ತದೆ ಎಂದು ತಿಳಿಸಿದರು.

ಪ್ರತಿ ವರ್ಷ ತನ್ನ ಲಾಭಾಂಶದ 30% ಮೊತ್ತವನ್ನು ಹಾಗೂ ಕಳೆದ ಸಾಲಿನಿಂದ ಲಭ್ಯವಿರುವ ಹೆಚ್ಚುವರಿ ಮೊತ್ತದ ಮೇಲೆ 30% ವಿಶೇಷ ಡಿವಿಡೆಂಡ್ ಮೊತ್ತವಾಗಿ ಸರ್ಕಾರಕ್ಕೆ ಪಾವತಿ ಮಾಡಲಾಗುತ್ತಿರುತ್ತದೆ. ಅಲ್ಲದೆ ವಾರ್ಷಿಕವಾಗಿ ಮುಖ್ಯಮಂತ್ರಿಯವರ ಪರಿಹಾರ ನಿಧಿಗೆ ರೂ. 15 ರಿಂದರೂ. 20.00 ಕೋಟಿ ನೀಡುತ್ತಿದ್ದು, ಲಾಭಾಂಶದಲ್ಲಿ 2% ಅನ್ನು ಸಿಎಸ್ ಆರ್‌ಗೆ ಉಪಯೋಗಿಸಲಾಗುತ್ತಿದೆ ಎಂದರು.

ಸಂಸ್ಥೆಯು ಗಣಿ ಚಟುವಟಿಕೆಗಳ ಜೊತೆ ಇತರೆ ಚಟುವಟಿಕೆಗಳಿಗೆ ಬಂಡವಾಳ ಹೂಡಿಕೆಯಲ್ಲಿ ತೊಡಗಿದ್ದು ಇತ್ತೀಚೆಗೆ ರೇಷ್ಮೆ ಇಲಾಖೆಯ ಜೊತೆ ಜಂಟಿ ಸಹಭಾಗಿತ್ವದಲ್ಲಿ ರೂ. 666.00 ಕೋಟಿಗಳಲ್ಲಿ ಕಟ್ಟಡ ನಿರ್ಮಾಣ ಮಾಡಲು ಮತ್ತು ಹಾಸನದಲ್ಲಿ ಸಂಸ್ಥೆಯು ಹೊಂದಿರುವ 14.00 ಎಕರೆ ಪ್ರದೇಶದಲ್ಲಿ ಸುಮಾರು ರೂ. 200.00 ಕೋಟಿ ಹೂಡಿಕೆ ಮಾಡಿ ಐಟಿ ಪಾರ್ಕ್ ನಿರ್ಮಾಣ ಮಾಡಲು ಕ್ರಮವಹಿಸಿರುತ್ತದೆ.

ಸಂಸ್ಥೆಯ ವಹಿವಾಟು ಮತ್ತು ಲಾಭಾಂಶಗಳನ್ನು ಆಧಾರವಾಗಿಟ್ಟುಕೊಂಡು ಸರ್ಕಾರವು 2017 -18 ನೇ ಸಾಲಿನಿಂದ ಸತತವಾಗಿ ಮುಖ್ಯಮಂತ್ರಿಯವರ ವಾರ್ಷಿಕ ರತ್ನ ಪ್ರಶಸ್ತಿಯನ್ನು ನೀಡುತ್ತಾ ಬಂದಿರುತ್ತದೆ. ಗಣಿಗಾರಿಕೆಯಲ್ಲಿ ಉತ್ತಮ ಪರಿಸರ ನಿರ್ವಹಣೆ ಮಾಡಿರುವ ಪ್ರಯುಕ್ತ 2023 ಮತ್ತು 2024ನೇ ಸಾಲಿನ ಪ್ರತಿಷ್ಠಿತ SKOCH Award ಪಡೆದಿರುತ್ತದೆ. ಚಾಲ್ತಿ ಸಾಲಿನ ವರ್ಷದಿಂದ ISO ಪ್ರಮಾಣಪತ್ರವನ್ನು ಪಡೆದಿರುತ್ತದೆ ಎಂದು ತಿಳಿಸಿದರು.

## ಗ್ರಾಮಪಂಚಾಯತಿ ಅಧ್ಯಕ್ಷರಾದ ಕೃಷ್ಣಪ್ಪ ಅಧ್ಯಕ್ಷತೆ

# ನರಸಾಪುರದಲ್ಲಿ ಗ್ರಾಮ ಸಭೆ

**ಕೋಲಾರ:** ಕೋಲಾರ ತಾಲ್ಲೂಕಿನ ನರಸಾಪುರ ಗ್ರಾಮ ಪಂಚಾಯತಿಯಲ್ಲಿ 2024-25 ಸಾಲಿನ ಗ್ರಾಮ ಸಭೆ ಗ್ರಾಮಪಂಚಾಯತಿ ಅಧ್ಯಕ್ಷರಾದ ಕೃಷ್ಣಪ್ಪ ರವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಿತು. ವಿಶೇಷವಾಗಿ ಗ್ರಾಮ ಸಭೆಯೊಂದಿಗೆ ಮಹಿಳಾ ಗ್ರಾಮಸಭೆ ,ವಿಶೇಷ ಚೇತನರ ಗ್ರಾಮಸಭೆ ,ಮಕ್ಕಳಗ್ರಾಮ ಸಭೆ ಮತ್ತು ಟಿಬಿ ಮುಕ್ತ ಅಭಿಯಾನ ನಡೆಯಿತು. ನರಸಾಪುರ ಪಂಚಾಯತಿಯ ಪಿಡಿಓ ಮುನಿರಾಜು ಮಾತನಾಡಿ ಗ್ರಾಮ ಸಭೆಯ ಉದ್ದೇಶ ಪ್ರತೀವರ್ಷದಂತೆ ಸಾರ್ವಜನಿಕರ ವಿಚಾರಗಳು ಮತ್ತು ಗ್ರಾಮಗಳ ಅಭಿವೃದ್ಧಿಗಾಗಿ ತೆಗೆದುಕೊಳ್ಳುವ ನಿರ್ಣಯಗಳು ಮತ್ತು ಅಭಿವೃದ್ಧಿ ಕಾರ್ಯಗಳ ಬಗ್ಗೆ ಸವಿಚಾರವಾಗಿ ಚರ್ಚಿಸಿ ತೀರ್ಮಾನಗಳನ್ನು ತೆಗುದುಕೊಳ್ಳುವಂತಹ ಮತ್ತು ಸರಿಪಡಿಸಿಕೊಳ್ಳುವ ಸಭೆಯಾಗಿರುತ್ತದೆ ಹಾಗೆಯೇ ಎಲ್ಲಾ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡು ನಿಮ್ಮ ಪ್ರಶ್ನೆಗಳಿಗೆ ಉತ್ತರ ಮತ್ತು ಸಂಬಂಧಪಟ್ಟ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ಮುಕ್ತ ಕಾರ್ಯಕ್ರಮವಾಗಿದೆ ಎಂದರು .




ವೆಂಕಟಕೋಟಿ ಬೆಸ್ಕಾಂ ಪರವಾಗಿ ಉತ್ತರಿಸಲು ನಿಂತಾಗ ಕುರ್ಕಿ ಗ್ರಾಮ ಮತ್ತು ನರಸಾಪುರದ ವಿದ್ಯುತ್ ಕಂಬಗಳ ದುರಸ್ಥಿ ಬಗ್ಗೆ ಬಿಸಿ ಬಿಸಿ ಚರ್ಚೆಯಾಯಿತು ತುರ್ತಾಗಿ ಕಾರ್ಯಪ್ರವೃತ್ತರಾಗಿ ಎಂದು ಗೋಪಿನಾಥ್ ಆಗ್ರಹಿಸಿದರು. ಜಿಲ್ಲಾ ಆರೋಗ್ಯ ಇಲಾಖೆಯ ಪ್ರೇಮ ರವರು ಮಾತನಾಡಿ 9 ರಿಂದ 4-30 ರವರೆಗೆ ವೈದಾಧಿಕಾರಿಗಳು ನಿಯೋಜಿತ ಸ್ಥಳಗಳಲ್ಲೇ ಕಾರ್ಯ ನಿರ್ವಹಿಸುತ್ತಾರೆ ಮತ್ತು ತರಭೇತಿ ಹೊಂದಿರುವ ಶುಶ್ರೂಕಿಯರು ನಿಮ್ಮ ಸೇವೆಗೆ ಲಭ್ಯವಿರುತ್ತಾರೆಂದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಸದಸ್ಯರು ನರಸಾಪುರದಲ್ಲಿ ನಖಲೀ ಕ್ಲಿನಿಕ್ ಗಳ ಹಾವಳಿ ಹೆಚ್ಚಾಗಿದ್ದು ಕ್ರಮಕ್ಕೆ ಒತ್ತಾಯಿಸಿದರು. ಗ್ರಾಮೀಣ ಕುಡಿಯುವ ನೀರಿನ ಇಲಾಖೆಯ ವೇಣು ರವರು ಮಾತನಾಡಿ ನೀರಿನ ಕಾರ್ಯಗಳಿಗೆ ಸಂಬಂಧಿಸಿದಂತೆ ಜೆಜೆಎಂ ಕೆಲಸಗಳು ನಡೆಯುತ್ತಿದೆ ಎರಡು ಓವರ್ಹೆಡ್ ಟ್ಯಾಂಕ್ಗಳು ನಿರ್ಮಾಣವಾಗುತ್ತಿದ್ದು ನೀರಿನಸವ ಸ್ಯೆಬಗೆಹರಿಸಲಾಗುವುದೆಂದರು .ಗ್ರಾಮಸ್ಥರು ಮಾತನಾಡಿ ಆಗಿದಿರುವ ರಸ್ತೆಗಳು ಮತ್ತು ಕಾಮಗಾರಿ ನಡೆಯುತ್ತಿರುವ ಜಾಗಗಳಲ್ಲಿ ಸೂಚನಾ ಫಲಕಗಳನ್ನು ಅಳವಡಿಸಲು ಸೂಚಿಸಿದರು.ಡಾಕ್ಟರ್ ಮಂಜುನಾಥ್ ಪಶುವೈದ್ಯರು ಮಾತನಾಡಿ ಕಾಲುಬಾಯಿ ರೋಗ ಚರ್ಮಕಾಯಿಲೆಗಳಿಗೆ ಲಸಿಕೆಗಳನ್ನು ನೀಡುತ್ತಿದ್ದು ರೈತರು ತಮ್ಮ ರಾಸುಗಳಿಗೆ ಇದರ ಪ್ರಯೋಜನವನ್ನು ಪಡೆದುಕೊಳ್ಳಿ ಎಂದರು .

ರಮ್ಯಾ ಗ್ರಾಮ ಆಡಳಿತ ಇಲಾಖೆ ರವರು ಮಾತನಾಡಿ ನಮ್ಮ ಇಲಾಖೆಯಲ್ಲಿ ಸಿಗುವ ಮಾಹಿತಿ ಮತ್ತುಸಲಹೆಪಟ್ಟಿಗಳನ್ನು ಸೂಚನಾ ಫಲಕದಲ್ಲಿ ಹಾಕಲಾಗಿದ್ದು ನಮ್ಮಲ್ಲಿಗೆ ಬರುವ ಅರ್ಜಿಗಳನ್ನು ಮೇಲಾಧಿಕಾರಿಗಳಿಗೆ ರವಾನಿಸಲಾಗುವುದು ಮತ್ತು ನಮ್ಮಲ್ಲಿ ಯಾವುದೇ ಅರ್ಜಿಗಳು ಬಾಕಿಯಿರುವುದಿಲ್ಲ ಎಂದರು .

ಸಭೆಯಲ್ಲಿ ಗ್ರಾಮ ಪಂಚಾಯತಿ ಸದಸ್ಯರು ,ಕೆಪಿಎಸ್ ಶಾಲೆಯ ನಾರಾಯಣಸ್ವಾಮಿ ,ಗೋಪಿನಾಥ್ ರವರು ,ಆರೋಗ್ಯ ಇಲಾಖೆಯ ಗೀತಾ ರವರು ,ಗ್ರಾಮ ಆಡಳಿತಾಧಿಕಾರಿ ರಮ್ಯ ಶ್ರೀ, ಪೊಲೀಸ್ ಸಿಬ್ಬಂದಿ ಹಾಗೂ ಪಂಚಾಯತಿಗೆ ಒಳಪಡುವ ಗ್ರಾಮಸ್ಥರಿದ್ದರು.

# ಸಾರ್ವಜನಿಕ ಶೌಚಾಲಯಗಳ ಸಮಸ್ಯೆಗಳ ಬಗ್ಗೆ ಗಮನಹರಿಸುತ್ತಿಲ್ಲ

**ಚಿತ್ರದುರ್ಗ:** ಸಾರ್ವಜನಿಕ ಶೌಚಾಲಯಗಳು ಜನರಿಗೆ ಸಾಕಷ್ಟು ಅನುಕೂಲಕರ ಮಾಡಿಕೊಟ್ಟಿದ್ದರು ಸಹ, ಅವುಗಳು ಸಮಸ್ಯೆಗಳಿಂದ ಮುಕ್ತವಾಗಿಲ್ಲ, ಸಾರ್ವಜನಿಕ ಶೌಚಾಲಯ ಬಳಕೆದಾರರಿಂದ ಹಿಡಿದು, ಅದಕ್ಕೆ ಅನುಮತಿ ನೀಡುವ ನಗರ ಸಭೆಯವರಿಗೂ ಸಹ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿರುವ ಸಾರ್ವಜನಿಕ ಶೌಚಾಲಯದ ಮಾಲೀಕರಿಗೆ ಮತ್ತು ನೌಕರರಿಗೆ, ಅವುಗಳನ್ನ ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡಲು ಪ್ರೋತ್ಸಾಹಿಸುವುದು ಅಗತ್ಯವಿದೆ, ನಗರದ ಬಹುಭಾಗದಲ್ಲಿ ಸಾರ್ವಜನಿಕ ಶೌಚಾಲಯಗಳು ಸಮಸ್ಯೆಗಳನ್ನು ಎದುರಿಸಿಕೊಳ್ಳುತ್ತಲೇ, ಮುನ್ನಡೆಯುತ್ತಿವೆ, ಹಾಗಾಗಿ ಇವುಗಳ ಸಮಸ್ಯೆಗಳನ್ನು ನಿವಾರಿಸುವ ಕಡೆ ಸಾರ್ವಜನಿಕರು ಮತ್ತು ಜಿಲ್ಲಾಡಳಿತ ಹೆಚ್ಚಿನ ಆದ್ಯತೆ ನೀಡಬೇಕೆಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ವಿನಂತಿಸಿಕೊಂಡಿದ್ದಾರೆ.

ಸಾರ್ವಜನಿಕ ಶೌಚಾಲಯ ನಿರ್ವಹಣೆ ಮಾಡುವವರಿಗೆ ಮೊದಲು ಕಾಡುತ್ತಿರುವ ಸಮಸ್ಯೆ ಏನೆಂದರೆ ಅದಕ್ಕೆ ನೀಡುವ ಬಾಡಿಗೆ, ಅದನ್ನ ನಿರ್ವಹಣೆ ಮಾಡಲು ಬಳಕೆ ಮಾಡುವ ನೀರಿನ ಸರಬರಾಜು ಮತ್ತು ಸಾರ್ವಜನಿಕರು ಶೌಚಾಲಯವನ್ನು ಸರಿಯಾದ ರೀತಿಯಲ್ಲಿ ಬಳಕೆ ಮಾಡಿ, ಸ್ವಚ್ಛತೆಯಿಂದ ಕಾಪಾಡಿಕೊಂಡರೆ ಮಾತ್ರ ಸಾರ್ವಜನಿಕ ಶೌಚಾಲಯ ನಿರ್ವಹಣೆ ಮಾಡುವಂತಹ ಮಾಲೀಕರಿಗೆ ಮತ್ತು ನೌಕರರಿಗೆ ಅನುಕೂಲಕರವಾಗುತ್ತದೆ. ಇಲ್ಲದಿದ್ದರೆ ನೀರಿನ ಸಮಸ್ಯೆ, ಬಾಡಿಗೆ ಸಮಸ್ಯೆ, ನೌಕರರ ಸಂಬಳದ ಸಮಸ್ಯೆ ಮತ್ತು ಕುಡಿದು ಬಂದು ತೊಂದರೆ ನೀಡುವಂತಹ ಸಾರ್ವಜನಿಕರ ಸಮಸ್ಯೆ, ಮುಂತಾದವುಗಳ ಪಟ್ಟಿಯನ್ನೇ ಮಾಡಬಹುದು ಎಂದರು.

ತಿಂಗಳಿಗೆ ಮೂವತ್ತು ಮೂವತ್ತೈದು ಸಾವಿರ ರೂಪಾಯಿ ಬಾಡಿಗೆ ನೀಡಿ, ನಗರ ಸಭೆಯವರಿಂದ ಅನುಮತಿ ಪಡೆದು, ನೀರು ಪಡೆಯಲು ಹಣ ಪಾವತಿಸಿ, ಸಾರ್ವಜನಿಕ ಶೌಚಾಲಯಗಳನ್ನು ನಿರ್ವಹಣೆ ಮಾಡುತ್ತಿರುವವರಿಗೆ, ಬಹಳಷ್ಟು ಸಾರಿ ನೀರಿನ ಸಮಸ್ಯೆ ಕಾಡುತ್ತದೆ. ಒಂದೆರಡು ತಿಂಗಳು ಅವರಿಗೆ ಚೆನ್ನಾಗಿ ನೀರನ್ನು ಸರಬರಾಜು ಮಾಡಿ, ನಂತರ ಅವುಗಳನ್ನು ನಿಲುಗಡೆ ಮಾಡಿ, ಅವರು ನಿರ್ವಹಣೆ ಮಾಡಲಾರದೆ, ಟ್ಯಾಂಕರ್ ಗಳಲ್ಲಿ ನೀರನ್ನ ಹೊಡಿಸುವುದು, ಇಲ್ಲ ಅಕ್ಕಪಕ್ಕದವರಿಂದ ನೀರು ಸಾಲ ಪಡೆದು, ಸಾರ್ವಜನಿಕ ಶೌಚಾಲಯಗಳನ್ನು ನಿರ್ವಹಣೆ ಮಾಡುತ್ತಿರುತ್ತಾರೆ. ಇದರ ಆಳವಾಗಿರುವ ಸಮಸ್ಯೆಗಳು ಸಾರ್ವಜನಿಕರಿಗೆ ಮತ್ತು ಅಧಿಕಾರಿಗಳಿಗೆ ಅರ್ಥವಾಗದೆ, ನಾವು ಮೇಲ್ನೋಟದಲ್ಲಿ ಸಾರ್ವಜನಿಕ ಶೌಚಾಲಯಗಳು ಹೆಚ್ಚು ಲಾಭದಿಂದ ನಡೆಯುತ್ತಿವೆ ಎಂದುಕೊಳ್ಳುತ್ತೇವೆ. ಕೆಲವೊಂದಿಷ್ಟು ಹೆಚ್ಚು ಲಾಭದಿಂದ ನಡೆಯುತ್ತಿದ್ದರು ಸಹ, ಬಹಳಷ್ಟು ಸಮಸ್ಯೆಗಳಿಂದಲೇ ಬಳಲುತ್ತಿವೆ ಎಂದರು.

# ಜಾನುವಾರುಗಣತಿ: ಮೊಬೈಲ್‌ಅಪ್ಲಿಕೇಷನ್‌ನಲ್ಲಿ ಮಾಹಿತಿ ಸಂಗ್ರಹ

**ಮಂಡ್ಯ:** ಜಾನುವಾರು ಸಾಕಾಣಿಕೆಯು ಭಾರತದಆರ್ಥಿಕತೆಯಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ. ಜಾನುವಾರುಗಣತಿಯು ಪ್ರತಿಐದು ವರ್ಷಗಳಿಗೊಮ್ಮೆ ನಡೆಯುವಅತ್ಯಂತ ಪ್ರಾಮುಖ್ಯತೆಯುಳ್ಳ ರಾಷ್ಟ್ರೀಯಕಾರ್ಯಕ್ರಮವಾಗಿರುತ್ತದೆ. ಜಾನುವಾರುಗಣತಿಯು 1919 ರಲ್ಲಿ ಪ್ರಾರಂಭವಾಗಿದ್ದು, ಇಲ್ಲಿಯವರೆಗೆ 20 ಜಾನುವಾರುಗಣತಿಯನ್ನು ನಡೆಸಲಾಗಿದೆ. ಭಾರತ ಸರ್ಕಾರವುಅಕ್ಟೋಬರ್ 2024 ರಿಂದ ಫೆಬ್ರವರಿ 2024ರ ಅವಧಿಯಲ್ಲಿ21ನೇ ಜಾನುವಾರುಗಣತಿಯನ್ನುಏಕಕಾಲದಲ್ಲಿ ಹಮ್ಮಿಕೊಂಡಿದ್ದು, ಗಣತಿಯನ್ನು ಮೊಬೈಲ್‌ಅಪ್ಲಿಕೇಷನ್‌ತಂತ್ರಾಂಶದ ಮೂಲಕ ಕೈಗೊಳ್ಳಲಾಗುತ್ತಿದೆ. ಗಣತಿಯದತ್ತಾಂಶವುಜಾನುವಾರು ವಲಯನ್ನುಅಭಿವೃದ್ಧಿಪಡಿಸಲು, ಕಾರ್ಯಕ್ರಮಗಳ ಯೋಜನೆರೂಪಿಸಲು, ಅನುಷ್ಠಾನಗೊಳಿಸಲು ಪ್ರಮುಖ ಪಾತ್ರ ವಹಿಸುತ್ತದೆ. ಜಿಲ್ಲಾ ಮಟ್ಟದಲ್ಲಿಉಪನಿರ್ದೇಶಕರು (ಆಡಳಿತ), ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ರವರುಜಿಲ್ಲಾ ನೋಡಲ್ ಅಧಿಕಾರಿಗಳಾಗಿರುತ್ತಾರೆ. 21ನೇ ಜಾನುವಾರುಗಣತಿಕಾರ್ಯಕ್ಕಾಗಿ ಇಲಾಖೆಯತಾಂತ್ರಿಕ ಸಿಬ್ಬಂದಿ/ಅಧಿಕಾರಿಗಳು/ಪಶುಸಖಿಯರನ್ನುಗಣತಿದಾರರ ನ್ನಾಗಿ ಹಾಗೂ ವ್ಯಾಪ್ತಿಯ ಪಶುವೈದ್ಯಾಧಿಕಾರಿಗಳನ್ನು ಮೇಲ್ವಿಚಾರಕರನ್ನಾಗಿಗುರುತಿಸಲಾಗಿದೆ. ಜಿಲ್ಲೆಯಲ್ಲಿ ಸದರಿಗಣತಿಕಾರ್ಯಕ್ಕೆಒಟ್ಟು 144 ಗಣತಿದಾರರನ್ನು ಹಾಗೂ 30 ಮೇಲ್ವಿಚಾರಕರನ್ನು ನೇಮಿಸಲಾಗಿದೆ.ಜಿಲ್ಲೆಯಿಂದ ಮೂರುಜನ ಮಾಸ್ಟರ್ ಟ್ರೇನರ್ಸ್‌ಗಳಿಗೆ ರಾಜ್ಯ ಮಟ್ಟದಲ್ಲಿತರಬೇತಿಯನ್ನು ನೀಡಲಾಗಿರುತ್ತದೆ. ಗಣತಿದಾರರು ಹಾಗೂ ಮೇಲ್ವಿಚಾರಕರುಗಳಿಗೆ ಜಾನುವಾರುಗಣತಿಕಾರ್ಯ ಹಾಗೂ ತಂತ್ರಾಂಶದ ಬಳಕೆ ಕುರಿತು ಈಗಾಗಲೇ ತರಬೇತಿಯನ್ನು ನೀಡಲಾಗಿರುತ್ತದೆ.ಗಣತಿದಾರರಕ್ಕೆಪಿಡಿ ಮತ್ತುಗುರುತಿನಚೀಟಿಯನ್ನು ಸಹ ನೀಡಲಾಗಿರುತ್ತದೆ.ಗಣತಿಕಾರ್ಯದಲ್ಲಿ ಪ್ರತಿ ಮನೆಗೆ ಭೇಟಿ ನೀಡಿರುವ ಬಗ್ಗೆ ಖಚಿತಪಡಿಸಿಕೊಳ್ಳಲು ಪ್ರತಿ ಮನೆಗೆ ಸ್ಟಿಕ್ಕರ್ಸ್‌ಗಳನ್ನು ಅಂಟಿಸಲಾಗುತ್ತಿದೆ. ಕಾರ್ಯಕ್ರಮದ ಬಗ್ಗೆ ವ್ಯಾಪಕ ಪ್ರಚಾರ ಮಾಡಲು ಪೋಸ್ಟರ್‌ಗಳನ್ನು ನೀಡಲಾಗಿರುತ್ತದೆ. ಜಾನುವಾರುಗಣತಿಕಾರ್ಯದಲ್ಲಿ ಪ್ರತಿಗ್ರಾಮ/ಪಟ್ಟಣ ಪ್ರದೇಶದಎಲ್ಲಾ ಕುಟುಂಬಗಳು, ಕೌಟುಂಬಿಕ ಉದ್ಯಮಗಳು, ಕುಟುಂಬೇತರ ಉದ್ಯಮಗಳು, ಗೋಶಾಲೆಗಳು ಹಾಗೂ ಸರ್ಕಾರಿ/ಸರ್ಕಾರೇತರ ಸಂಸ್ಥೆಗಳಿಗೆ ಭೇಟಿ ನೀಡಿಎಣಿಕೆಕಾರ್ಯನಡೆಸಲಾಗುತ್ತದೆ. ಗಣತಿಕಾರ್ಯದಲ್ಲಿ ಸಾಕುಪ್ರಾಣಿ (ಜಾನುವಾರು)ಗಳಾದದನ, ಎಮ್ಮೆ, ಕುರಿ, ಮೇಕೆ, ಹಂದಿ, ನಾಯಿ, ಕುದುರೆ, ಹೇಸರಗತ್ತೆ, ಕತ್ತೆ, ಮೊಲ, ಆನೆ, ಕುಕ್ಕುಟಗಳು(ಕೋಳಿ), ಬಾತುಕೋಳಿಗಳು ಹಾಗೂ ವಾಣಿಜ್ಯ ಕುಕ್ಕುಟಗಳ ಸಂಖ್ಯೆ, ಲಿಂಗ, ವಯಸ್ಸು, ತಳಿ ಹಾಗೂ ಇತರೆ ವಿವರಗಳನ್ನು ದಾಖಲಿಸಲಾಗುವುದು. ಇದರಜೊತೆಗೆ ಪ್ರತಿಗ್ರಾಮ/ನಗರ ವಾರ್ಡ್‌ಗಳಲ್ಲಿರುವ ಬಿಡಾಡಿ ದನಗಳು, ಬೀದಿನಾಯಿಗಳು, ವಧಾಗಾರಗಳು, ಕಸಾಯಿಖಾನೆಗಳು, ಮಾಂಸ ಸಂಸ್ಕರಣಾ ಘಟಕಗಳು, ಗೋಶಾಲೆಗಳು ಮತ್ತು ಪಶುಪಾಲನೆಯಲ್ಲಿಯಾಂತ್ರೀಕರಣದ ಬಗ್ಗೆ ಮಾಹಿತಿಯನ್ನುದಾಖಲಿಸಲಾಗುತ್ತದೆ. ಗಣತಿದಾರರುತಮ್ಮ ಮನೆ/ಉದ್ಯಮ/ಫಾರ್ಮ್/ಸಂಸ್ಥೆಗಳಿಗೆ ಭೇಟಿ ನೀಡಿದಾಗಅವರುಕೋರುವ ಮಾಹಿತಿಯನ್ನು ನೀಡಿಗಣತಿಕಾರ್ಯದಲ್ಲಿ ಭಾಗವಹಿಸಿ ಜಾನುವಾರುಗಣತಿಯನ್ನುಯಶಸ್ವಿಗೊಳಿಸಲು ಮಂಡ್ಯಪಶುಪಾಲನಾ ಇಲಾಖೆಯಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಕ್ಸಿಂಗ್, ಹಾಕಿ, ಸೇಲಿಂಗ್ ತರಬೇತಿ ಪ್ರಕ್ರಿಯೆ

**ಮೈಸೂರು:** Army Boys Sports Company, Madras Engineer Group & Center, Bangalore ಇವರ ವತಿಯಿಂದ Kendriya Vidyalaya MEG & Center, Sports Ground, Bangalore ಇಲ್ಲಿ ನುರಿತ ತರಬೇತುದಾರರುಗಳಿಂದ 08 ರಿಂದ 14 ವರ್ಷದೊಳಗಿನ ಬಾಲಕ/ಬಾಲಕಿಯರಿಗೆ ಬಾಕ್ಸಿಂಗ್, ಹಾಕಿ, ಸೇಲಿಂಗ್ ಮತ್ತು ಈಜು ಕ್ರೀಡೆಗಳಲ್ಲಿ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗುವುರಿಂದ ಸದರಿ ಕ್ರೀಡೆಗಳ ಆಯ್ಕೆ ಪ್ರಕ್ರಿಯೆಯಲ್ಲಿ ಆಸಕ್ತ ಮೈಸೂರು ಜಿಲ್ಲೆಯ ಬಾಲಕ/ಬಾಲಕಿಯರು ಭಾಗವಹಿಸಬಹುದಾಗಿದೆ. 8 ರಿಂದ 14 ವರ್ಷದೊಳಗಿರಬೇಕು, 8 ವರ್ಷದೊಳಗಿನವರು ಕನಿಷ್ಟ 3ನೇ ತರಗತಿ ಮತ್ತು 14 ವರ್ಷದೊಳಗಿನವರು ಕನಿಷ್ಟ 8ನೇ/9ನೇ ತರಗತಿ ತೇರ್ಗಡೆ ಹೊಂದಿರಬೇಕು, ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವವರು ಜನನ ಪ್ರಮಾಣಪತ್ರ ಮತ್ತು ಜಾತಿ ಪ್ರಮಾಣ ಪತ್ರ, ವಿದ್ಯಾಭ್ಯಾಸ ಪ್ರಮಾಣಪತ್ರ ಮತ್ತು ನಡತೆ ಪ್ರಮಾಣ ಪತ್ರ,ವಾಸಸ್ಥಳ ದೃಢೀಕರಣ ಪತ್ರ ಸಲ್ಲಿಸಬೇಕು,. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ 06 ಭಾವಚಿತ್ರ.,. ಆಧಾರ್ ಕಾರ್ಡ್, ಕ್ರೀಡಾ ಪ್ರಮಾಣ ಪತ್ರ ಸಲ್ಲಿಸಬೇಕು, ಭಾಗವಹಿಸುವವರು ಆಯಾ ಕ್ರೀಡೆಗೆ ಸಂಬಂಧಿಸಿದ ಕ್ರೀಡಾ ಕಿಟ್ ಅನ್ನು ತರಬೇಕು. 08 ವರ್ಷದವರು 134 ಸಿ.ಎಂ. ಎತ್ತರ ಹಾಗೂ 29 ಕೆ.ಜಿ ತೂಕವನ್ನು ಹೊಂದಿರಬೇಕು, 09 ವರ್ಷದವರು 139 ಸಿ.ಎಂ. ಎತ್ತರ ಹಾಗೂ 31 ಕೆ.ಜಿ. ತೂಕವನ್ನು ಹೊಂದಿರಬೇಕು, 10 ವರ್ಷದವರು 143 ಸಿ.ಎಂ. ಎತ್ತರ ಹಾಗೂ 34 ಕೆ.ಜಿ. ತೂಕವನ್ನು ಹೊಂದಿರಬೇಕು, 11 ವರ್ಷದವರು 150 ಸಿ.ಎಂ. ಎತ್ತರ ಮತ್ತು 37 ಕೆ.ಜಿ. ತೂಕವನ್ನು ಹೊಂದಿರಬೇಕು, 12 ವರ್ಷದವರು 153 ಸಿ.ಎಂ. ಎತ್ತರ ಹಾಗೂ 40 ಕೆ.ಜಿ. ತೂಕವನ್ನು ಹೊಂದಿರಬೇಕು, 13 ವರ್ಷದವರು 155 ಸಿ.ಎಂ. ಎತ್ತರ ಮತ್ತು 42 ಕೆ.ಜಿ. ತೂಕವನ್ನು ಹೊಂದಿರಬೇಕು, ಮತ್ತು 14 ವರ್ಷದವರು 160 ಸಿ.ಎಂ. ಎತ್ತರ ಹಾಗೂ 47 ಕೆ.ಜಿ. ತೂಕವನ್ನು ಹೊಂದಿರಬೇಕು, ಹೆಚ್ಚಿನ ಮಾಹಿತಿಗಾಗಿ ಬಾಕ್ಸಿಂಗ್ ಕ್ರೀಡೆಯ ದೂ.ಸಂ:7892766021, ಹಾಕಿ:7204793183, ಸೇಲಿಂಗ್: 9867088865 ಮತ್ತು ಈಜು: 9567345347 ನ್ನು ಸಂಪರ್ಕಿಸಿ.

# ಯುವನಿಧಿ ಯೋಜನೆಯ ವಿಶೇಷ ನೋಂದಣಿಅಭಿಯಾನ

**ಮಂಡ್ಯ:** ಕರ್ನಾಟಕರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿಯೋಜನೆಯಾದ ''ಯುವನಿಧಿ'' ಯೋಜನೆಯಲ್ಲಿ 2022-23 ಮತ್ತು 2023-24ನೇ ಸಾಲಿನಲ್ಲಿ ಸ್ನಾತಕ ಪದವಿ/ ಸ್ನಾತಕೋತ್ತರ ಪದವಿ ಮತ್ತುಡಿಪ್ಲಮೊ ಪದವಿಯಲ್ಲಿತೇರ್ಗಡೆಯಾಗಿಉದ್ಯೋಗ ಸಿಗದ ಅರ್ಹ ಅಭ್ಯರ್ಥಿಗಳುhttps://sevasindhugs.karnataka.gov.in ಸೇವಾಸಿಂಧು ವೆಬ್‌ಪೋರ್ಟಲ್ ನಲ್ಲಿತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಲು ಜನವರಿ 06ರಿಂದ 20ರವರೆಗೆ ವಿಶೇಷ ನೋಂದಣಿಅಭಿಯಾನ '' ವನ್ನುಮಂಡ್ಯ ಉದ್ಯೋಗ ವಿನಿಮಯಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಅರ್ಹ ಫಲಾನುಭವಿಗಳು ಈ ಸದಾವಕಾಶವನ್ನು ಉಪಯೋಗಿಸಿಕೊಂಡು ಇದರ ಪ್ರಯೋಜನವನ್ನು ಪಡೆದುಕೊಳ್ಳಬಹುದಾಗಿದೆ.ಪದವೀಧರರಿಗೆ ಪ್ರತಿ ತಿಂಗಳು ರೂ.3000/- ಹಾಗೂ ಡಿಪ್ಲಮೊ ಪದವಿಧರರಿಗೆ ರೂ.1500/- ನಿರುದ್ಯೋಗಿ ಭತ್ಯೆಯನ್ನು ನೀಡಲಾಗುತ್ತದೆ. ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿ ಹೆಸರನ್ನು ನೊಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ.ನಂತರ ಪ್ರತಿ ತಿಂಗಳು ಯುವನಿಧಿ ಯೋಜನೆಯ ಪ್ರಯೋಜನವನ್ನು ಪಡೆಯಬೇಕಿದ್ದರೆ, ಸೇವಾ ಸಿಂಧು ಪೋರ್ಟಲ್‌ನಲ್ಲಿ ಮಾಹೆಯಾನತಾನು ನಿರುದ್ಯೋಗಿಯೆಂದು, ಉನ್ನತ ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂಉದ್ಯೋಗಿಯಲ್ಲವೆಂದು ಪ್ರತಿ ತಿಂಗಳ 25ನೇ ತಾರೀಖಿನೊಳಗಾಗಿ ಸ್ವಯಂಘೋಷಣೆಯನ್ನು ಮಾಡಬೇಕಾಗಿರುವುದುಕಡ್ಡಾಯವಾಗಿರುತ್ತದೆ.ಸ್ವಯಂಘೋಷಣೆಆಧಾರದ ಮೇಲೆ ಅಭ್ಯರ್ಥಿಗಳು ಮುಂದಿನ ಪಾವತಿಯನ್ನು ಸ್ವೀಕರಿಸಲಾಗುವುದು. ಅಭ್ಯರ್ಥಿಗಳು ಕರ್ನಾಟಕಒನ್/ ಗ್ರಾಮಒನ್ ಮತ್ತು ಬಾಪೂಜಿ ಕೇಂದ್ರಗಳಲ್ಲಿ ಯುವನಿಧಿ ಯೋಜನೆಗೆಅರ್ಜಿ ಸಲ್ಲಿಸಬಹುದು.ಅರ್ಜಿ ಸಲ್ಲಿಸುವ ಸಂದರ್ಭದಲ್ಲಿಕಡ್ಡಾಯವಾಗಿಆಧಾರ್ ಸೀಡೆಡ್ ಬ್ಯಾಂಕ್ ಖಾತೆ ಹಾಗೂ ಆಧಾರ್ ಲಿಂಕ್ಡ್ ಮೊಬೈಲ್ ನಂಬರ್‌ನ್ನು ಹೊಂದಿರತಕ್ಕದ್ದು.ಅರ್ಜಿ ಸಲ್ಲಿಸಿದ ನಂತರ ಸೇವಾ ಸಿಂಧು ಪೋರ್ಟಲ್‌ನಲ್ಲಿತಮ್ಮಅರ್ಜಿಯುಯಾವ ಹಂತದಲ್ಲಿದೆಎಂಬುದನ್ನು ಪರಿಶೀಲಿಸಿಕೊಂಡು, ಒಂದು ವೇಳೆ ಅರ್ಜಿಯುಅಪ್ರೂವ್‌ಆಗದ ಸಂದರ್ಭದಲ್ಲಿ ಸೂಚಿಸಲ್ಪಟ್ಟಇಲಾಖೆಯ ಕಚೇರಿಗಳಿಗೆ ತಮ್ಮಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿಅಪ್ರೂವ್ ಮಾಡಿಸಿಕೊಳ್ಳಬೇಕಾಗಿರುತ್ತದೆ ಎಂದು ಈ ಮೂಲಕ ತಿಳಿಯಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿದೂ. ಸಂ: 08232-295124 ಹಾಗೂ ಮಂಡ್ಯಜಿಲ್ಲಾಉದ್ಯೋಗ ವಿನಿಮಯಕಚೇರಿಯಉದ್ಯೋಗಾಧಿಕಾರಿಯನ್ನುಸಂಪರ್ಕಿಸಬಹುದುಎಂದು ಮಂಡ್ಯಜಿಲ್ಲಾಧಿಕಾರಿಡಾಕುಮಾರಅವರು ತಿಳಿಸಿದ್ದಾರೆ.

# ಅರ್ಜಿ ಸಲ್ಲಿಕೆಅವಧಿ ವಿಸ್ತರಣೆ

**ಮಂಡ್ಯ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಂಡ್ಯಜಿಲ್ಲೆಯಲ್ಲಿ ಖಾಲಿ ಇರುವಅಂಗನವಾಡಿಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳಿಗೆ ಗೌರವಧನಆಧಾರದ ಮೇಲೆ photo, signature, documents and esignಪೂರ್ಣಗೊಳಿಸಲು ಬಾಕಿ ಇರುವಅಂಗನವಾಡಿಕಾರ್ಯಕರ್ತೆ ಹುದ್ದೆಯ 421 ಮತ್ತು ಸಹಾಯಕಿ ಹುದ್ದೆಯ 304 ಅಭ್ಯರ್ಥಿಗಳ ಬಾಕಿ ಇರುವ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಜನವರಿ 05 ರವರೆಗೆ ಅವಕಾಶ ಕಲ್ಪಿಸಲಾಗಿದ್ದು, ಅನ್ ಲೈನ್ ವೆಬ್ ಸೈಟ್ https://karnemakaone.kar.nic.in/abcd/ ಮೂಲಕ ಅರ್ಜಿಗಳನ್ನು ಪೂರ್ಣಗೊಳಿಸಲು ಅವಕಾಶ ಕಲ್ಪಿಸಲಾಗಿದೆಎಂದು ಮಂಡ್ಯಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಇಲಾಖೆಯಉಪನಿರ್ದೇಶಕರು ತಿಳಿಸಿದ್ದಾರೆ.

# ಸಮಜಾಯಿಸಿ ದಾಖಲೆ ಸಲ್ಲಿಸಲುಕೊನೆಯ ಅವಕಾಶ

**ಮಂಡ್ಯ:** ಬೀರೋಉರಂಗ್,ಕ್ಲೀನರ್, ಮದ್ದೂರು ಉಪವಿಭಾಗ-1, ಆದ ನೀವು ದಿನಾಂಕ 01-07-2022 ರಿಂದ ನಿಮ್ಮ ಮೇಲಾಧಿಕಾರಿಗಳಿಂದಗ ಯಾವುದೇ ಪೂರ್ವಅನುಮತಿ ಪಡೆಯದೆ ಕೆಲಸಕ್ಕೆ ಗೈರುಹಾಜರಾಗಿರುತ್ತೀರಿ, ಈ ದೀರ್ಘಕಾಲದ ಕೈ ರಾಜರಿಗೆ ನಿಮ್ಮನ್ನು ಏಕೆ ಸೇವೆಯಿಂದ ವಜ ಮಾಡಬಾರದುಎಂಬುದಕ್ಕೆ ಸಮಜಾಯಿಸಿ ಇದ್ದರೆ ಸೂಕ್ತ ದಾಖಲಾತಿಗಳೊಡನೆ ಇನ್ನು 7 ದಿನಗಳೊಳಗಾಗಿ ಹಾಜರಾಗುವಂತೆ ತಿಳಿಸಲಾಗಿತ್ತು, ಆದರೂ ಸಹ ನೀವು ಇಲ್ಲಿಯವರೆಗೆ ಸೂಕ್ತ ದಾಖಲೆಗಳೊಂದಿಗೆ ಹಾಜರಾಗಿರುವುದಿಲ್ಲ, ಆದುದರಿಂದ ಈ ಪ್ರಕಟಣೆಯನ್ನು ಹೊರಡಿಸಿದ ಪತ್ರಿಕ ಪ್ರಕಟಣೆಯ ದಿನಾಂಕದಿಂದ ಏಳು ದಿನಗಳೊಳಗೆ ನಿಮ್ಮಅನಧಿಕೃತಗೈರು ಹಾಜರಿಗೆ ಸೂಕ್ತ ದಾಖಲೆಗಳೊಂದಿಗೆ ಈ ಕಚೇರಿಗೆ ಹಾಜರಾಗಿ ಇಲಾಖೆ ವಿಚಾರಣೆಯಲ್ಲಿ ಭಾಗವಹಿಸುವುದುಇಲ್ಲದಿದ್ದಲ್ಲಿ ನಿಮಗೆ ಕೆಲಸದಲ್ಲಿ ಮುಂದುವರೆಯಲು ಆಸಕ್ತಿ ಇಲ್ಲವೆಂದು ಪರಿಗಣಿಸಿ ಯಾವ ಮುನ್ಸೂಚನೆಯೂ ನೀಡದೆ ನಿಗಮದ ಸೇವೆಯಿಂದ ವಜಗೊಳಿಸಲಾಗುವುದು.

# ಕಾಣೆಯಾದವರ ಪತ್ತೆಗಾಗಿ

**ಮಂಡ್ಯ:** ಮಂಡ್ಯ ಅನ್ನಪೂರ್ಣೇಶ್ವರಿ ನಗರದ ನಿವಾಸಿ ಅನಂತಪದ್ಮನಾಭ (56) ಎಂಬ ವ್ಯಕ್ತಿಕಾಣೆಯಾಗಿದ್ದರೆಎಂದು ಮಂಡ್ಯಗ್ರಾಮಾಂತರ ಪೊಲೀಸ್ ಠಾಣೆಯಲ್ಲಿದೂರುದಾಖಲಾಗಿರುತ್ತದೆ. ಕಾಣೆಯಾದ ವ್ಯಕ್ತಿಯು 5.8 ಅಡಿ ಎತ್ತರ, ಗೋದಿ ಮೈಬಣ್ಣ, ಬಲಮುಂಗೈಯಲ್ಲಿ 3 ಸೆ.ಮೀ. ಉದ್ದದಗಾಯದ ಬಿಳಿಯ ಮಚ್ಚೆಯಿದ್ದುಕಪ್ಪುತಲೆಗೂದಲು ಸಾಧಾರಣ ಮೈಕಟ್ಟು ಮನೆಯಿಂದ ಹೊರಡುವಾಗ ಬಿಳಿ ಹೂ ಮಿಶ್ರಿತ ಕೆಂಪು ಅಂಗಿ, ಕಪ್ಪು ಪ್ಯಾಂಟ್ ಧರಿಸಿರುತ್ತಾರೆ, ಇವರ ಸುಳಿವು ಸಿಕ್ಕಲ್ಲಿ ದೂ.ಸಂ: 94080804800/08232-224200/9480804808 ನ್ನು ಸಂಪರ್ಕಿಸಬಹುದುಎಂದು ಮಂಡ್ಯಗ್ರಾಮಾಂತರ ಪೊಲೀಸ್ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಕ್ತಿ ಕೇಂದ್ರಗಳ ಕಟ್ಟಡದ ಸೌಂದರ್ಯಕ್ಕೆ ಪ್ರವಾಸಿ ತಾಣಗಳ ಛಾಯಾಚಿತ್ರಗಳ ಮೆರಗು

**ಬೆಂಗಳೂರು:** ಪ್ರವಾಸೋದ್ಯಮ ಇಲಾಖೆ ವತಿಯಿಂದ ವಿಧಾನಸೌಧ ಮತ್ತು ವಿಕಾಸಸೌಧದಲ್ಲಿ ರಾಜ್ಯದ ಪ್ರಮುಖ ಪ್ರವಾಸಿ ತಾಣಗಳ ಛಾಯಾಚಿತ್ರಗಳನ್ನು ಅಳವಡಿಸಲಾಗುತ್ತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರವಾಸೋದ್ಯಮ ಹಾಗೂ ಸಂಸದೀಯ ವ್ಯವಹಾರಗಳ ಸಚಿವರಾದ ಹೆಚ್ ಕೆ ಪಾಟೀಲ್ ಅವರು ವಿಧಾನಸೌಧದ ಕ್ಯಾಬಿನೆಟ್ ಹಾಲ್ ಮುಂಭಾಗ ಕಳೆದ ವರ್ಷ ಯುನೆಸ್ಕೋ ಪಟ್ಟಿಗೆ ಸೇರಿದ ಚೆನ್ನಕೇಶವ ದೇವಾಲಯ, ಸೋಮನಾಥಪುರ ಹಾಗೂ ವಿಷ್ಣು ಮೂರ್ತಿ, ಗುಹಾಂತರ ದೇವಾಲಯ ಬಾದಾಮಿಯ ಛಾಯಾಚಿತ್ರಗಳನ್ನು ಗುರುವಾರ ಅನಾವರಣಗೊಳಿಸಿದರು.



ವಿಧಾನಸೌಧದಲ್ಲಿ ವಿಜಯಪುರದ ಗೋಲಗುಮ್ಮಟ, ವೀರನಾರಾಯಣ ದೇವಾಲಯ, ಗದಗ, ಪಟ್ಟದಕಲ್ಲು, ಹಂಪಿ, ಮೈಸೂರು ದಸರಾ, ಮೈಸೂರು ಅರಮನೆಯ ದರ್ಬಾರ್ ಹಾಲ್, ಜೋಗಜಲಪಾತ, ಕಬಿನಿ,ಯಕ್ಷಗಾನ, ಕಂಬಳ ಮತ್ತು ಕರ್ನಾಟಕ ರಾಜ್ಯದ Geographical Indication (G I) ಉತ್ಪನ್ನಗಳ ಛಾಯಾಚಿತ್ರಗಳನ್ನು ಅಳವಡಿಸಲಾಗುತ್ತಿದೆ.

ವಿಧಾನಸೌಧ ಹಾಗೂ ವಿಕಾಸಸೌಧ ಕಟ್ಟಡಗಳ ಸೌಂದರ್ಯವನ್ನು ಹೆಚ್ಚಿಸಲು ಹಾಗೂ ನಮ್ಮ ರಾಜ್ಯದ ಪ್ರಖ್ಯಾತ ಪ್ರವಾಸಿ ತಾಣಗಳು, ಶಿಲ್ಪಕಲೆ, ಪಾಕಶೈಲಿ ಮತ್ತು ಸಂಸ್ಕೃತಿಯನ್ನು ಪ್ರಚಾರಪಡಿಸುವ ಹಿತದೃಷ್ಟಿಯಿಂದ ಪ್ರವಾಸೋದ್ಯಮ ಇಲಾಖಾ ವತಿಯಿಂದ ಛಾಯಾಚಿತ್ರಗಳನ್ನು ಅಳವಡಿಸಲಾಗುವುದು.

ಕರ್ನಾಟಕ ಸರಕಾರದ ಮುಖ್ಯ ಕಾರ್ಯದರ್ಶಿಗಳ ನಿರ್ದೇಶನದ ಅನ್ವಯ ಪ್ರವಾಸಿ ತಾಣಗಳ ಛಾಯಾಚಿತ್ರಗಳನ್ನು ಅಳವಡಿಸಲಾಗುತ್ತಿದೆ.

ಇದೇ ಸಂದರ್ಭದಲ್ಲಿ ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಹಾಗೂ ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆಗಳ ನೂತನ ವರ್ಷದ ಕ್ಯಾಲೆಂಡರ್‌ಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರವಾಸೋದ್ಯಮ ಹಾಗೂ ಸಂಸದೀಯ ವ್ಯವಹಾರಗಳ ಸಚಿವರಾದ ಹೆಚ್ ಕೆ ಪಾಟೀಲ್ ಹಾಗೂ ಕರ್ನಾಟಕ ಸರಕಾರದ ಮುಖ್ಯ ಕಾರ್ಯದರ್ಶಿಗಳಾದ ಶಾಲಿನಿ ರಜನೀಶ್ ಅವರು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿಗಳಾದ ಸಲ್ಮಾ ಕೆ ಫಹೀಂ, ಪ್ರವಾಸೋದ್ಯಮ ಇಲಾಖೆ ನಿರ್ದೇಶಕರಾದ ಡಾ.ಕೆ.ವಿ.ರಾಜೇಂದ್ರ, ಹಾಗೂ ಇಲಾಖೆಯ ಇತರೆ ಹಿರಿಯ ಅಧಿಕಾರಿಗಳು ಹಾಜರಿದ್ದರು.

# ವಿಶ್ವಕರ್ಮ ಜಯಂತಿ, ವಿಶ್ವಮಾನವ ಜಯಂತಿ ಅರ್ಥಪೂರ್ಣವಾಗಿ ಆಚರಿಸಿ

**ಮಂಡ್ಯ:** ಜಿಲ್ಲೆಯಲ್ಲಿ ವಿಶ್ವಕರ್ಮಜಯಂತಿ ಹಾಗೂ ವಿಶ್ವಮಾನವಜಯಂತಿಯನ್ನು ಯಶಸ್ವಿಯಾಗಿ ಆಚರಿಸಲು ಜಿಲ್ಲಾಡಳಿತ ತೀರ್ಮಾನಿಸಿದ್ದು, 2 ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಿ ಎಂದುಅಪರಜಿಲ್ಲಾಧಿಕಾರಿ ಬಿ ಸಿ ಶಿವಾನಂದಮೂರ್ತಿ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ವಿಶ್ವಕರ್ಮಜಯಂತಿ ಮತ್ತು ವಿಶ್ವಮಾನವಜಯಂತಿಆಚರಣೆ ಸಂಬಂಧ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ವಿಶ್ವಕರ್ಮಜಯಂತಿಯನ್ನುಜನವರಿ 18 ರಂದು ಬೆಳಿಗ್ಗೆ 11 ಗಂಟೆಗೆ ನಗರದಕಲಾಮಂದಿರದಲ್ಲಿಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಸುಮಾರು 400ಕ್ಕೂ ಹೆಚ್ಚು ಜನರು ಭಾಗವಹಿಸಲಿದ್ದು, ಕಾರ್ಯಕ್ರಮದಲ್ಲಿ ವಿಶೇಷಉಪನ್ಯಾಸಕಾರ್ಯಕ್ರಮ ವ್ಯವಸ್ಥೆಯನ್ನು ಜಿಲ್ಲಾಡಳಿತ ಕಲ್ಪಿಸಲಾಗುವುದುಎಂದು ತಿಳಿಸಿದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ವಿಶ್ವಕರ್ಮ ಸಮುದಾಯದಒಟ್ಟು 40 ಜನರಿಗೆಜಿಲ್ಲೆಯ 7 ತಾಲ್ಲೂಕಿನಿಂದಒಂದುತಾಲ್ಲೂಕಿಗೆತಲಾ 5 ಜನರಂತೆಆಯ್ಕೆ ಮಾಡಿ ಸನ್ಮಾನಿಸಿ ಅಭಿನಂದನಾ ಪತ್ರವನ್ನು ನೀಡಿಗೌರವಿಸಲಾಗುವುದುಎಂದರು. ವಿಶ್ವಕರ್ಮಜಯಂತಿಯನ್ನು , ಏಳು ತಾಲೂಕಿನಿಂದ ವಿವಿಧ ಬಗೆಯ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿಶ್ವಕರ್ಮ ಸಮುದಾಯಕ್ಕೆ ಸೇರಿದ 5 ಜನರನ್ನು ಗುರುತಿಸಿ ಸನ್ಮಾನಿಸಲಾಗುವುದು, ಸನ್ಮಾನ ನಡೆಸಿ ಪ್ರಶಸ್ತಿ ಪ್ರಮಾಣ ಪತ್ರ ನೀಡಲಾಗುತ್ತದೆಎಂದು ಹೇಳಿದರು.

**ವಿಶ್ವ ಮಾನವಜಯಂತಿ:** ವಿಶ್ವಮಾನವಜಯಂತಿಯನ್ನುಆಚರಿಸುವ ಸಂಬಂಧ ಸಂಸ್ಥೆಯ ಮುಖಂಡರು ಹಾಗೂ ಸದಸ್ಯರೊಂದಿಗೆ ಚರ್ಚಿಸಿ ಶೀಘ್ರದಲ್ಲೇ ಸೂಕ್ತ ದಿನಾಂಕವನ್ನು ನಿಗದಿ ಪಡಿಸಲಾಗುವುದು. ವಿಶ್ವ




ಮಾನವಜಯಂತಿಯನ್ನು ಅಂಗವಾಗಿ ನಗರದರೈತ ಸಭಾಂಗಣದ ಮುಂದೆಇರುವ ಕುವೆಂಪು ಅವರಪುತ್ಥಳಿಗೆ ಮಾಲಾರ್ಪಣೆ ಮಾಡಿಅಲ್ಲಿಂದಜಾಥಾ ಮೂಲಕ ಕಲಾ ಮಂದಿರಕ್ಕೆತಲುಪುವುದಾಗಿ ತಿಳಿಸಿದರು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 10 ಜನ ಸಾಧಕರಿಗೆ ಸನ್ಮಾನ ನಡೆಸಲಾಗುವುದು.ಕಾರ್ಯಕ್ರಮದಲ್ಲಿ ಹೆಚ್ಚು ವಿದ್ಯಾರ್ಥಿಗಳ ಭಾಗವಹಿಸುವಂತೆ ವ್ಯವಸ್ಥೆಯನ್ನುಕಲ್ಪಿಸಲಾಗುವುದುಎಂದು ತಿಳಿಸಿದರು.

ಸಭೆಯಲ್ಲಿ ಸಮುದಾಯದ ಮುಖಂಡರುಗಳಾದ ಧರಣೇಂದ್ರಯ್ಯ, ಎಲ್ಆನಂದ್, ನಾಗರಾಜಚಾರ್, ಎಮ್ ಬಿ ರಮೇಶ್, ಅನುಪಮ ಸಿ ಎಸ್, ಶಿವಬಸವಚಾರಿ, ವೈ.ಡಿ ಶ್ರೀನಿವಾಸಮೂರ್ತಿ ಕೆ ಎಚ್ ಗೋವಿಂದಾಚಾರ್ ಸೇರಿದಂತೆಇನ್ನಿತರರು ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ಐಪಿಓ ಮೂಲಕ 650 ಕೋಟಿವರೆಗೆ ಸಂಗ್ರಹಿಸಲು ಸೆಬಿಯಲ್ಲಿ ಡಿ ಆರ್‌ಎಚ್‌ಪಿ ಸಲ್ಲಿಸಿದಎ- ಒನ್ ಸ್ಟೀಲ್ಸ್ ಇಂಡಿಯಾ ಲಿಮಿಟೆಡ್

**ಮೈಸೂರು:** ಕಚ್ಚಾ ಉಕ್ಕಿನ ಸಾಮರ್ಥ್ಯದ ವಿಷಯದಲ್ಲಿ ದಕ್ಷಿಣ ಭಾರತದ ಅಗ್ರಗಣ್ಯ ಐದು ಉಕ್ಕಿನ ಉತ್ಪಾದಕರಲ್ಲಿ ಒಬ್ಬರಾಗಿರುವ ಮತ್ತು 10 ಸ್ಟೀಲ್ ಉತ್ಪನ್ನಗಳು ಮತ್ತು ಕೈಗಾರಿಕಾ ಉತ್ಪನ್ನಗಳನ್ನು ತಯಾರಿಸುವ ಏಕೈಕ ಕಂಪನಿ ಆಗಿರುವ ಎ- ಒನ್ ಸ್ಟೀಲ್ಸ್ ಇಂಡಿಯಾ ಲಿಮಿಟೆಡ್ (ಮೂಲ: ಸಿ.ಆರ್.ಎಸ್.ಐ.ಎಲ್ ವರದಿ) ಸಂಸ್ಥೆಯು ಐಪಿಓ ಉದ್ದೇಶದಿಂದ ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಆಂಡ್ ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ದಲ್ಲಿ ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಅನ್ನು ಸಲ್ಲಿಕೆ ಮಾಡಿದೆ. ಕಂಪನಿಯು ಒಟ್ಟು 65,000 ಲಕ್ಷಗಳ 650 ಕೋಟಿ ವರೆಗಿನ ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಗಳ ಮೂಲಕ ಹಣವನ್ನು ಸಂಗ್ರಹಿಸಲು ಯೋಜನೆ ಹಾಕಿಕೊಂಡಿದೆ. ಒಟ್ಟು ಕೊಡುಗೆಯ ಗಾತ್ರವು 60,000 ಲಕ್ಷಗಳವರೆಗೆ ಒಟ್ಟುಗೂಡಿಸಲಾದ ಈಕ್ವಿಟಿ ಷೇರುಗಳ ಹೊಸ ಸಂಚಿಕೆಯನ್ನು ಒಳಗೊಂಡಿರುತ್ತದೆ 600 ಕೋಟಿ ಮತ್ತು ಮಾರಾಟ ಮಾಡುವ ಷೇರುದಾರರಿಂದ 5000 ಲಕ್ಷಗಳವರೆಗಿನ 50 ಕೋಟಿ ಮಾರಾಟದ ಕೊಡುಗೆ ಹೊಂದಿದೆ. ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ನೀಡಲಾಗುವ ಈಕ್ವಿಟಿ ಷೇರುಗಳನ್ನು ಬಿಎಸ್‌ಇ ಲಿಮಿಟೆಡ್ ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್‌ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ನಲ್ಲಿ ಪಟ್ಟಿ ಮಾಡಲು ಪ್ರಸ್ತಾಪಿಸಲಾಗಿದೆ. ಪಿಎಲ್ ಕ್ಯಾಪಿಟಲ್ ಮಾರ್ಕೆಟ್ಸ್ ಪ್ರೈವೇಟ್ ಲಿಮಿಟೆಡ್ ಮತ್ತು ಖಿಂಬಟ್ಟಾ ಸೆಕ್ಯುರಿಟೀಸ್ ಲಿಮಿಟೆಡ್ ಈ ಸಂಚಿಕೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್ ಗಳಾಗಿರುತ್ತಾರೆ.

## ನಿಮಗಿದು ಗೊತ್ತೇ?

ಎಂ. ವೆಂಕಟೇಶ್ ಶೇಷಾದ್ರಿ

4. ಹೊತ್ತಿತೋ ಹೊತ್ತಿತು ಕನ್ನಡದ ದೀಪ ಮುಗಿಯಿತೋ ಮುಗಿಯಿತು ಶತಮಾನಗಳ ಶಾಪ.. ಈ ಗೀತೆ ರಚಿಸಿದವರು ಯಾರು ?

[illegible]

# ತರಕಾರಿ ಸಾಗು

## ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬೀನ್ಸ್- ಸಣ್ಣಗೆ ಹೆಚ್ಚಿದ್ದು ಒಂದು ಸಣ್ಣ ಬಟ್ಟಲು, ಕ್ಯಾರೆಟ್- ಸಣ್ಣಗೆ ಹೆಚ್ಚಿದ್ದು ಒಂದು ಸಣ್ಣ ಬಟ್ಟಲು, ಬಟಾಣಿ- ಸಣ್ಣಗೆ ಹೆಚ್ಚಿದ್ದು ಒಂದು ಸಣ್ಣ ಬಟ್ಟಲು, ಹೂಕೋಸು- ಸಣ್ಣಗೆ ಹೆಚ್ಚಿದ್ದು ಒಂದು ಸಣ್ಣ ಬಟ್ಟಲು, ಆಲೂಗಡ್ಡೆ - ಸಣ್ಣಗೆ ಹೆಚ್ಚಿದ್ದು ಒಂದು ಸಣ್ಣ ಬಟ್ಟಲು, ಉಪ್ಪು-ರುಚಿಗೆ ತಕ್ಕಷ್ಟು, ಈರುಳ್ಳಿ- 1, ಟೊಮೆಟೋ- 2, ಗೋಡಂಬಿ-ಸ್ವಲ್ಪ, ಬೆಳ್ಳುಳ್ಳಿ- ಸ್ವಲ್ಪ, ಹಸಿಮೆಣಸಿನ ಕಾಯಿ-6-6, ಹುರಿಗಡಲೆ- 4 ಚಮಚ, ದನಿಯಾ ಅಥವಾ ದನಿಯಾ ಪುಡಿ- 1 ಚಮಚ, ಶುಂಠಿ-ಸ್ವಲ್ಪ, ಗಸಗಸೆ-ಸ್ವಲ್ಪ, ಪುದೀನಾ-ಸ್ವಲ್ಪ, ಕೊತ್ತಂಬರಿ ಸೊಪ್ಪು-ಸ್ವಲ್ಪ, ಚಕ್ಕ,ಲವಂಗ- ಸ್ವಲ್ಪ, ಏಲಕ್ಕಿ-1-2, ಪಲಾವ್ ಎಲೆ- 1, ಎಣ್ಣೆ-ಸ್ವಲ್ಪ

## ಮಾಡುವ ವಿಧಾನ

ಮೊದಲಿಗೆ ಪಾತ್ರೆಯೊಂದಕ್ಕೆ ಸ್ವಲ್ಪ ನೀರು, ಉಪ್ಪು ಹಾಗೂ ತರಕಾರಿಗಳನ್ನು ಹಾಕಿ ಚೆನ್ನಾಗಿ ಬೇಯಿಸಿಕೊಳ್ಳಬೇಕು.

ನಂತರ ಮಿಕ್ಸಿ ಜಾರ್‌ಗೆ ಅರ್ಧ ಈರುಳ್ಳಿ, 1 ಟೊಮೆಟೋ, ಗೋಡಂಬಿ, ಬೆಳ್ಳುಳ್ಳಿ, ಹಸಿಮೆಣಸಿನ ಕಾಯಿ, ಹುರಿಗಡಲೆ, ದನಿಯಾ ಅಥವಾ ದನಿಯಾ ಪುಡಿ, ಶುಂಠಿಸ ಗಸಗಸೆ, ಪುದೀನಾ, ಕೊತ್ತಂಬರಿ ಸೊಪ್ಪು, ಚಕ್ಕ,ಲವಂಗ, ಏಲಕ್ಕಿ, ಪಲಾವ್ ಎಲೆ ಸ್ವಲ್ಪ ನೀರು ಹಾಕಿ ನುಣ್ಣಗೆ ರುಬ್ಬಿಕೊಳ್ಳಬೇಕು.

ನಂತರ ಒಲೆಯ ಮೇಲೆ ಬಾಣಲೆ ಇಟ್ಟು ಇದಕ್ಕೆ ಸ್ವಲ್ಪ ಎಣ್ಣೆ ಹಾಕಿ ಕಾದ ನಂತರ ಉಳಿದ ಈರುಳ್ಳಿ ಹಾಗೂ ಟೊಮೆಟೋವನ್ನು ಸಣ್ಣಗೆ ಕತ್ತರಿಸಿಕೊಂಡು ಕಾದ ಎಣ್ಣೆಗೆ ಹಾಕಿ ಕೆಂಪಗೆ ಹುರಿದುಕೊಳ್ಳಬೇಕು. ನಂತರ ರುಬ್ಬಿಕೊಂಡ ಮಸಾಲೆಯನ್ನು ಹಾಕಿ 10 ನಿಮಿಷ ಕುದಿಸಿಕೊಳ್ಳಬೇಕು. ಇದಕ್ಕೆ ಸ್ವಲ್ಪ ಅರಿಶಿಣದ ಪುಡಿ ಹಾಗೂ ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಬಳಿಕ ಈಗಾಗಲೇ ಬೇಯಿಸಿಕೊಂಡ ತರಕಾರಿಗಳನ್ನು ಹಾಕಿ 5 ನಿಮಿಷ ಕುದಿಸಿದರೆ ರುಚಿಕರವಾದ ತರಕಾರಿ ಸಾಗು ಸವಿಯಲು ಸಿದ್ಧ.

# ತಮನ್ನಾಗೆ ಬಿಗ್ ಶಾಕ್!



ಬಾಲಿವುಡ್ ನಟ ವಿಜಯ್ ವರ್ಮಾ ಅವರ ಹುಟ್ಟೂರು ಹೈದರಾಬಾದ್. ನಾನಿ ಅಭಿನಯದ ಎಂಸಿಎ ಸಿನಿಮಾದಲ್ಲಿ ವಿಲನ್ ಆಗಿ ಇಂಪ್ರೆಸ್ ಮಾಡಿದ್ದ ವಿಜಯ್ ವರ್ಮಾ ಈಗ ಬಾಲಿವುಡ್ ನಲ್ಲೂ ಮಿಂಚುತ್ತಿದ್ದಾರೆ. ಹಲವು ಸೂಪರ್ ಹಿಟ್ ಸಿನಿಮಾಗಳು ಮತ್ತು ವೆಬ್ ಸೀರೀಸ್ ಗಳಲ್ಲಿ ನಟಿಸಿ ಸ್ಟಾರ್ ನಟರಾಗಿ ಗುರುತಿಸಿಕೊಂಡರು. ಮಿರ್ಜಾಪುರ್ ವೆಬ್ ಸಿರೀಸ್, ಗಲ್ಲಿ ಬಾಯ್ಸ್, ಡಾರ್ಲಿಂಗ್ ಮುಂತಾದ ಹಿಂದಿ ಚಿತ್ರಗಳಲ್ಲಿ ವಿಜಯ್ ತಮ್ಮ ಅಭಿನಯದ ಮೂಲಕ ಬಾಲಿವುಡ್ ಪ್ರೇಕ್ಷಕರನ್ನು ಆಕರ್ಷಿಸಿದರು. ಆದರೆ ಚಲನಚಿತ್ರಗಳು ಮತ್ತು ವೆಬ್ ಸರಣಿಗಳಿಗಿಂತ ಹೆಚ್ಚಾಗಿ, ವಿಜಯ್ ವರ್ಮಾ ಹೆಚ್ಚು ಸುದ್ದಿಯಲ್ಲಿರುವುದು ಮಿಲ್ಕಿ ಬ್ಯೂಟಿ ತಮನ್ನಾ ಭಾಟಿಯಾ ಅವರೊಂದಿಗಿನ ಸಂಬಂಧದ ಕಾರಣಕ್ಕಾಗಿ. ಆದರೆ ಇದೀಗ ಅವರು ತಮ್ಮ ಆರೋಗ್ಯದ ಸಮಸ್ಯೆಯನ್ನು ಬಹಿರಂಗಪಡಿಸುವ ಮೂಲಕ ಎಲ್ಲರಿಗೂ ಶಾಕ್ ನೀಡಿದ್ದಾರೆ. ಸಂದರ್ಶನವೊಂದರಲ್ಲಿ ವಿಜಯ್ ಅವರು ಅನಾರೋಗ್ಯದಿಂದ ಬಳಲುತ್ತಿದ್ದಾರೆ ಎಂದು ಹೇಳಿದ್ದಾರೆ. ಅಪರೂಪದ ತ್ವಚೆಯ ಸಮಸ್ಯೆಯಿಂದ ಬಳಲುತ್ತಿದ್ದು, ಅದನ್ನು ಮೇಕಪ್ ಕಾಸ್ಮೆಟಿಕ್ಸ್ ನಿಂದ ಮುಚ್ಚಿಟ್ಟಿದ್ದೇನೆ ಎಂದಿದ್ದಾರೆ..

ಇತ್ತೀಚೆಗಷ್ಟೇ ವೆಬ್ ಸೀರೀಸ್ ಒಂದರ ಪ್ರಚಾರದ ವೇಳೆ ಮಾತನಾಡಿದ ವಿಜಯ್ ವರ್ಮಾ ವಿಟಲಿಗೋ ಎಂಬ ಚರ್ಮದ ಸಮಸ್ಯೆಯಿಂದ ಬಳಲುತ್ತಿರುವುದಾಗಿ ಹೇಳಿದ್ದಾರೆ. ಇದು ಅವರ ಮುಖದ ಮೇಲೆ ಬಿಳಿ ಕಲೆಗಳನ್ನು ಉಂಟುಮಾಡುತ್ತಿದ್ದು, ಅದನ್ನು ಮರೆಮಾಡಲು ಅವರು ಮೇಕಪ್ ಪ್ರಾಡಕ್ಟ್‌ಗಳನ್ನು ಬಳಸಬೇಕಾಗುತ್ತದೆ ಎಂದು ನಟ ಬಹಿರಂಗಪಡಿಸಿದ್ದಾರೆ.. ಆರಂಭದಲ್ಲಿ ಇದರ ಬಗ್ಗೆ ತುಂಬಾ ಭಯವಿತ್ತು, ಆದರೆ ಯಶಸ್ಸು ಸಿಕ್ಕ ನಂತರ ಅದರ ಬಗ್ಗೆ ಯೋಚಿಸುವುದನ್ನು ನಿಲ್ಲಿಸಿದ್ದೇನೆ.. ಎಂದು ವಿಜಯ್ ಹೇಳಿದ್ದಾರೆ..

ಇನ್ನು ಈ ವಿಟಲಿಗೋವನ್ನು ಬಿಳಿ ಚುಕ್ಕೆ ರೋಗ ಎಂದೂ ಕರೆಯುತ್ತಾರೆ. ಇದೊಂದು ಅಪರೂಪದ ಕಾಯಿಲೆ. ಇದು ದೇಹದಲ್ಲಿ ಎಲ್ಲಿಯಾದರೂ ಸಂಭವಿಸಬಹುದು. ಚರ್ಮವು ಬಣ್ಣಕ್ಕೆ ತಿರುಗುತ್ತದೆ ಮತ್ತು ಬಿಳಿ ತೇಪೆಗಳು ರೂಪುಗೊಳ್ಳುತ್ತವೆ. ವೈದ್ಯರ ಪ್ರಕಾರ, ದೇಹದಲ್ಲಿ ಮೆಲನೋಸೈಟ್ಸ್ ಎಂಬ ಮೆಲನಿನ್ ಕೋಶಗಳ ಮಟ್ಟ ಕಡಿಮೆಯಾದಾಗ ಚರ್ಮದ ಮೇಲೆ ಬಿಳಿ ಕಲೆಗಳು ಕಾಣಿಸಿಕೊಳ್ಳುತ್ತವೆ. ಇದನ್ನು ವಿಟಲಿಗೋ ಎಂದು ಕರೆಯಲಾಗುತ್ತದೆ. ಇದು ಸಾಂಕ್ರಾಮಿಕವಲ್ಲ. ಒಬ್ಬರಿಂದ ಒಬ್ಬರಿಗೆ ಹರಡುವುದಿಲ್ಲ. ಆದರೆ ಈ ವಿಟಲಿಗೋಗೆ ಯಾವುದೇ ನಿರ್ದಿಷ್ಟ ಚಿಕಿತ್ಸೆ ಇಲ್ಲ. ಲಭ್ಯವಿರುವ ಕೆಲವು ಚಿಕಿತ್ಸೆಗಳು ಮಾತ್ರ ಅದರ ಹರಡುವಿಕೆಯನ್ನು ನಿಲ್ಲಿಸುತ್ತವೆ. ವಿಟಲಿಗೋದ ಪ್ರಾಥಮಿಕ ರೋಗಲಕ್ಷಣಗಳನ್ನು ಔಷಧಿಗಳು ಮತ್ತು ಕ್ರೀಮ್ಗಳೊಂದಿಗೆ ಚಿಕಿತ್ಸೆ ನೀಡಬಹುದು. ಇದಕ್ಕಾಗಿ ಲೇಸರ್ ಚಿಕಿತ್ಸೆಯನ್ನು ಸಹ ಬಳಸಲಾಗುತ್ತದೆ.

ಲವ್ ಬರ್ಡ್ಸ್ ತಮನ್ನಾ ಭಾಟಿಯಾ ಮತ್ತು ವಿಜಯ್ ವರ್ಮಾ ಸಂಬಂಧದಲ್ಲಿದ್ದಾರೆ ಎಂದು ಎಲ್ಲರಿಗೂ ತಿಳಿದಿದೆ. ಇಬ್ಬರೂ ಅನೇಕ ಸಂದರ್ಶನಗಳಲ್ಲಿ ಇದನ್ನು ಒಪ್ಪಿಕೊಂಡಿದ್ದಾರೆ. ಕೆಲವು ವರದಿಗಳ ಪ್ರಕಾರ, ವಿಜಯ್ ಮತ್ತು ತಮನ್ನಾ ಕೂಡ 2025 ರಲ್ಲಿ ಮದುವೆ ಯಾಗಲಿದ್ದಾರೆ. ಆದರೆ ಅಧಿಕೃತ ಘೋಷಣೆ ಇನ್ನಷ್ಟೇ ಬರಬೇಕಿದೆ.

# ಬಾಯಿ ಹುಣ್ಣು ಮನೆಮದ್ದು

## ಹೆಲ್ತ್ ಟಿಪ್ಸ್



ರಾಗಿಯ ಆರೋಗ್ಯ ಪ್ರಯೋಜನಗಳು

ರಾಗಿ ಮುದ್ದೆ, ನಾಟಿ ಕೋಳಿ ಸಾರು ಎಂದರೆ ನಮ್ಮ ಕನ್ನಡಿಗರು ಹೆಚ್ಚಿನವರು ಬಾಯಿ ಚಪ್ಪರಿಸುವರು. ಇದು ತುಂಬಾ ರುಚಿಕರ ಮಾತ್ರವಲ್ಲದೆ, ಆರೋಗ್ಯಕ್ಕೂ ಒಳ್ಳೆಯದು. ಕರ್ನಾಟಕದ ಕೆಲವೊಂದು ಭಾಗಗಳಲ್ಲಿ ರಾಗಿ ಮುದ್ದೆಯನ್ನು ಪ್ರತಿನಿತ್ಯವೂ ಆಹಾರ ಕ್ರಮದಲ್ಲಿ ಬಳಕೆ ಮಾಡುವರು.

ಇನ್ನು ಕೆಲವರು ರಾಗಿಯ ರೊಟ್ಟಿ ಮಾಡಿಕೊಂಡು ಅದನ್ನು ಬಳಸುವರು. ರಾಗಿ ದೋಸೆ ಕೂಡ ತುಂಬಾ ಜನಪ್ರಿಯವಾಗಿದೆ. ರಾಗಿಯಲ್ಲಿ ಇರುವಂತಹ ಹಲವಾರು ರೀತಿಯ ಪೋಷಕಾಂಶಗಳು ದೇಹಕ್ಕೆ ತುಂಬಾ ಒಳ್ಳೆಯದು ಇದು ನಮ್ಮ ಆರೋಗ್ಯ ಕಾಪಾಡಲು ತುಂಬಾ ಲಾಭಕಾರಿ.

**ಕ್ಯಾಲ್ಸಿಯಂನ ಆಗರ:** ಬೇರೆ ಯಾವುದೇ ಧಾನ್ಯಗಳಲ್ಲಿ ಇಲ್ಲದೆ ಇರುವಂತಹ ಕ್ಯಾಲ್ಸಿಯಂ ಅಂಶವು ರಾಗಿಯಲ್ಲಿದ್ದು, ಇದು ಅಸ್ಥಿರಂಧ್ರತೆ ಸಮಸ್ಯೆಯನ್ನು ಕಡಿಮೆ ಮಾಡುವುದು. ಮಕ್ಕಳಿಗೆ ಆಹಾರ ಕ್ರಮದಲ್ಲಿ ರಾಗಿ ನೀಡಿದರೆ ಅದರಿಂದ ಮೂಳೆಗಳು ಬಲಗೊಳ್ಳುವುದು ಮತ್ತು ಹಲ್ಲುಗಳು ಕೂಡ ಬಲಿಷ್ಠವಾಗುವುದು.

**ಅಧಿಕ ನಾರಿನಾಂಶ:** ಜೀರ್ಣಕ್ರಿಯೆ ಸಮಸ್ಯೆಗಳನ್ನು ನಿವಾರಣೆ ಮಾಡಲು ರಾಗಿಯಲ್ಲಿ ಇರುವಂತಹ ನಾರಿನಾಂಶವು ನೆರವಾಗಲಿದೆ. ಅಕ್ಕಿ ಮತ್ತು ಬೇರೆ ಧಾನ್ಯಗಳಿಗೆ ಹೋಲಿಕೆ ಮಾಡಿದರೆ ಇದರಲ್ಲಿ ಆಹಾರದ ನಾರಿನಾಂಶವು ಹೆಚ್ಚಾಗಿದೆ.ಇದರಿಂದ ಜೀರ್ಣಕ್ರಿಯೆ ಸಂಬಂಧಿ ಸಮಸ್ಯೆಗಳೂ ದೂರವಾಗುವುದು. ರಾಗಿ ತಿಂದರೆ ಅದು ಹೊಟ್ಟೆ ತುಂಬಿದಂತೆ ಮಾಡುವುದು ಹಾಗೂ ಪದೇ ಪದೇ ತಿನ್ನುವುದನ್ನು ಇದು ಕಡಿಮೆ ಮಾಡುವುದು. ಪಾಲಿಫೆನಾಲ್ ಅಂಶವು ರಾಗಿಯಲ್ಲಿದ್ದು, ಇದು ಮಧುಮೇಹಿಗಳಿಗೆ ಒಳ್ಳೆಯದು.

**ಅಮಿನೋ ಆಮ್ಲ:** ಲೆಸಿಥಿನ್ ಮತ್ತು ಮೆಥಿಯೋನಿನ್ ಎನ್ನುವ ಅಮಿನೋ ಆಮ್ಲವು ಇದರಲ್ಲಿದ್ದು, ದೇಹದಲ್ಲಿನ ಕೊಲೆಸ್ಟ್ರಾಲ್ ಮಟ್ಟವನ್ನು ಇದು ತಗ್ಗಿಸುವುದು ಹಾಗೂ ಯಕೃತ್ ಗೆ ಕೊಬ್ಬು ಕರಗಿಸಲು ನೆರವಾಗುವುದು. ಟ್ರೈಪ್ಟೋಫಾನ್ ಎನ್ನುವ ಮತ್ತೊಂದು ಅಮಿನೋ ಆಮ್ಲವು ಹಸಿವು ತಗ್ಗಿಸುವುದು.

# ತ್ವಚೆಯ ಸೌಂದರ್ಯದ ರಹಸ್ಯ

## ಬ್ಯೂಟಿ ಟಿಪ್ಸ್



ಮುಖ ಕಾಂತಿಯುತವಾಗಲು ಸಾವಿರಾರು ಖರ್ಚು ಮಾಡಿ ಫೇಶಿಯಲ್ ಮಾಡಿ ಬ್ಲೀಚಿಂಗ್ ಮಾಡಿದರೂ ನೈಸರ್ಗಿಕ ಮಾರ್ಗದ ಮೂಲಕ ತ್ವಚೆಗೆ ಸಿಗುವ ಹೊಳಪು ಮಾತ್ರ ನಿಜವಾದ ಸೌಂದರ್ಯ ಎನ್ನಬಹುದು. ನಿಮ್ಮ ತ್ವಚೆಯನ್ನು ಹೊಳೆಯುವಂತೆ ಮಾಡಲು ನೀವು ಹಲವು ಮಾರ್ಗಗಳನ್ನು ಪ್ರಯತ್ನಿಸುತ್ತಿದ್ದರೆ, ಆ ಪಟ್ಟಿಗೆ ಹಣ್ಣುಗಳನ್ನು ಸೇರಿಸಿ.

ಹಣ್ಣುಗಳು ವಿವಿಧ ಪೋಷಕಾಂಶಗಳು ಮತ್ತು ವಿಟಮಿನ್ಗಳಲ್ಲಿ ಸಮೃದ್ಧವಾಗಿವೆ. ಅವು ಉತ್ಕರ್ಷಣ ನಿರೋಧಕಗಳ ಉತ್ತಮ ಮೂಲವಾಗಿದೆ. ಹಣ್ಣಿನಲ್ಲಿರುವ ವಿವಿಧ ಪೋಷಕಾಂಶಗಳು ಕಾಂತಿಯುತ ಚರ್ಮವನ್ನು ಪಡೆಯಲು, ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡಲು, ಚರ್ಮದ ಉರಿಯೂತವನ್ನು ಕಡಿಮೆ ಮಾಡಲು ಮತ್ತು ಚರ್ಮದ ಅಂಗಾಂಶವನ್ನು ಸರಿಪಡಿಸಲು ಸಹಾಯ ಮಾಡುತ್ತದೆ. ಕಿತ್ತಳೆಯಲ್ಲಿ ಸಮೃದ್ಧವಾಗಿರುವ ವಿಟಮಿನ್ ಸಿ ರೋಗನಿರೋಧಕ ಶಕ್ತಿಗೆ ಮಾತ್ರವಲ್ಲದೆ ಚರ್ಮಕ್ಕೂ ಒಳ್ಳೆಯದು. ಇದು ಸುಕ್ಕುಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಕಿತ್ತಳೆಯಲ್ಲಿರುವ ವಿಟಮಿನ್ ಸಿ ಕಾಲಜನ್ ಉತ್ಪಾದನೆಗೆ ಸಹಕಾರಿಯಾಗಿದೆ.

ಪಪ್ಪಾಯಿ ವಿಟಮಿನ್ ಎ, ಬಿ ಮತ್ತು ಸಿ ಯ ಅತ್ಯುತ್ತಮ ಮೂಲವಾಗಿದೆ. ಇದು ಆಂಟಿ-ವೈರಲ್, ಆಂಟಿ ಬ್ಯಾಕ್ಟೀರಿಯಾ ಮತ್ತು ಆ?ಯಂಟಿ ಫಂಗಲ್ ಗುಣಲಕ್ಷಣಗಳನ್ನು ಹೊಂದಿದ್ದು, ಮೊಡವೆಗಳು, ಚರ್ಮದ ತುರಿಕೆ, ಹುಣ್ಣುಗಳಂತಹ ಚರ್ಮದ ಸಮಸ್ಯೆಗಳನ್ನು ಗುಣಪಡಿಸಲು ಸಹಾಯ ಮಾಡುತ್ತದೆ. ಪ್ರತಿದಿನ ಒಂದು ಬೌಲ್ ಪಪ್ಪಾಯಿಯನ್ನು ತಿನ್ನುವುದು ಅಥವಾ ಅದನ್ನು ಫೇಸ್ ಪ್ಯಾಕ್ ಆಗಿ ಹಚ್ಚಿಕೊಳ್ಳುವುದು ಉತ್ತಮ ಫಲಿತಾಂಶವನ್ನು ನೀಡುತ್ತದೆ.

# ಬೆಂಗಳೂರಿನಲ್ಲಿ 'ಸಮಷ್ಟಿ' ತಂಡದ ನಾಟಕ ಪ್ರದರ್ಶನ ಮುಕ್ಕಾಂ ಪೋಸ್ಟ್ ಬೊಂಬಿಲವಾಡಿ



'ಸಮಷ್ಟಿ' ಕನ್ನಡ ರಂಗತಂಡವು ''ಮುಕ್ಕಾಂ ಪೋಸ್ಟ್ ಬೊಂಬಿಲವಾಡಿ''(ವಿನ್ಯಾಸ ಮತ್ತು ನಿರ್ದೇಶನ ? ರವೀಂದ್ರ ಪೂಜಾರಿ) ಎನ್ನುವ ಕನ್ನಡ ನಾಟಕವನ್ನು ಶನಿವಾರ, ಜನವರಿ, 4 2024 ರಂದು ರಂಗಶಂಕರದಲ್ಲಿ ಸಂಜೆ 3.30 ಮತ್ತು 7.30 ಕ್ಕೆ ಪ್ರದರ್ಶಿಸಲಿದೆ. ಈ ನಾಟಕದ ರಚನೆ ಪರೇಶ್ ಮೊಕಾಶಿ (ಮರಾಠಿ) ಮತ್ತು ಕನ್ನಡಕ್ಕೆ ಅನುವಾದ ಕೆ ಆರ್ ಓಂಕಾರ್.

**ಮುಕ್ಕಾಂ ಪೋಸ್ಟ್ ಬೊಂಬಿಲವಾಡಿ:** ಇದೊಂದು ಕಾಲ್ಪನಿಕ ಕತೆಯಾಗಿದ್ದು, ಅಣುಬಾಂಬ್ ತಯಾರಿಕೆಯ ಸೂತ್ರಗಳನ್ನು ಪಡೆಯಲು ಜಪಾನ್ ಗೆ ಹೋದ ಹಿಟ್ಲರ್, ವಾಪಸ್ ಬರುವಾಗ ಪ್ರಮಾದವಶಾತ್ ಬೊಂಬಿಲವಾಡಿಯಲ್ಲಿಇಳಿಯುತ್ತಾನೆ. ಅಲ್ಲಿನ ಪೊಲೀಸ್ ಸ್ಟೇಷನ್ನ ವಯರ್ಲೆಸ್ ಫೋನ್ ಬಳಸಲು ಹೋಗಿ ಹೊರ ಬರಲಾರದೆ ನಾಟಕ ತಂಡವೊಂದಕ್ಕೆ ರವಾನಿಸಲ್ಪಡುತ್ತಾನೆ. ಹಿಟ್ಲರ್ ನನ್ನು ಬಚ್ಚಿಟ್ಟನೆಂಬ ಆರೋಪದಿಂದ ಬಂಧಿತನಾದ ನಾಟಕ ತಂಡದ ಮುಖ್ಯಸ್ಥನನ್ನು ಬಿಡಿಸಲು ತಂಡದ ಸದಸ್ಯರು ಬೇರೆ ಬೇರೆ ವೇಷದಲ್ಲಿ ಹರಸಾಹಸಪಟ್ಟು ಕಡೆಗೂ ತಮ್ಮ ನಾಟಕದ ಪ್ರದರ್ಶನವನ್ನು ಮುಗಿಸುತ್ತಾರೆ.

ಆದಿಯಿಂದ ಅಂತ್ಯದವರೆಗೂ ಹಾಸ್ಯಲೇಪಿತ ದೃಶ್ಯಗಳನ್ನು ಹೊಂದಿರುವ ಈ ನಾಟಕವು, ನಾಟಕ ತಯಾರಿ ಹಾಗೂ ಪ್ರದರ್ಶನದ ಗೊಂದಲ, ನಾಟಕಪ್ರೇಮಿ ಬ್ರಿಟೀಷ್ ಪೋಲೀಸ್ ಅಧಿಕಾರಿ ಮತ್ತು ಅಲ್ಲಿನ ಭಾರತೀಯ ಪೇದೆಯ ಪೇಚಾಟ ಮತ್ತು ಮರಳಿ ಜರ್ಮನಿಗೆ ಹೋಗಲು ಹಿಟ್ಲರನು ಪಡುವ ಪರದಾಟಗಳನ್ನು ಹಾಸ್ಯಮಯವಾಗಿ ಚಿತ್ರಿಸುತ್ತದೆ.

**ಪ್ರದರ್ಶನ:** ಶನಿವಾರ, ಜನವರಿ 4, 2024 ರಂದು ರಂಗಶಂಕರದಲ್ಲಿ ಸಂಜೆ 3.30 ಮತ್ತು 7.30 ಕ್ಕೆ.

**ಪರೇಶ್ ಮೊಕಾಶಿ :** ಪೂನಾದಲ್ಲಿ ಹುಟ್ಟಿ ಬೆಳೆದ ಮೊಕಾಶಿಯವರು ಖ್ಯಾತ ಮರಾಠಿ ಬರಹಗಾರ ಡಿ ಬಿ ಮೊಕಾಶಿಯವರ ಮೊಮ್ಮಗ. ಆರಂಭದಲ್ಲಿ ನೇಪಥ್ಯ ಕೆಲಸಗಳನ್ನು ಮಾಡಿಕೊಂಡು ನಂತರ ತನ್ನದೇ ಆದ ''ಮಾಯಾಸಭಾ ಪ್ರೊಡಕ್ಷನ್ಸ್'' ಅನ್ನುವ ನಾಟಕ ತಂಡವನ್ನು ಕಟ್ಟಿ ತನ್ನದೇ ನಾಟಕಗಳನ್ನು ಆಡಿಸಲಾರಂಭಿಸಿದರು. ಇವರು ಬರೆದ ಮುಖ್ಯ ಮರಾಠಿ ನಾಟಕಗಳೆಂದರೆ, ''ಸಂಗೀತ್ ದೆಬುಚ್ಯಾ ಮುಲೀ'', ''ಮಂಗಳ್ವಾರ್ಚೆ ಮುಂಡಾಕೆ'', ''ಸಂಗೀತ್ ಲಗ್ನಕಲ್ಲೋಲ್'', ''ಸಮುದ್ರ'', ''ಹರಿಶ್ಚಂದ್ರಾಚಿ ಫ್ಯಾಕ್ಟರಿ'', ''ಎಲಿಜಬೆತ್ ಏಕಾದಶಿ'', ''ಚಿ ವಾ ಚಿ ಸೌ ಕಾ'' ಮುಂತಾದುವು. ಸಧ್ಯ ಮುಂಬೈನಲ್ಲಿ ಚಲನಚಿತ್ರ ಮತ್ತು ಸಾಕ್ಷ್ಯಚಿತ್ರಗಳಲ್ಲಿ ತೊಡಗಿಸಿಕೊಂಡಿರುವ ಇವರು, ಈ ವಿಭಾಗದಲ್ಲಿ ಹಲವಾರು ರಾಷ್ಟ್ರೀಯ ಮತ್ತು ಅಂತರ್‌ರಾಷ್ಟ್ರೀಯ ಪ್ರಶಸ್ತಿಗಳನ್ನು ಪಡೆದಿರುತ್ತಾರೆ.

**ಕೆ ಆರ್ ಓಂಕಾರ್:** ರಾಷ್ಟ್ರೀಯ ನಾಟಕ ಶಾಲೆಯ ಪದವೀಧರರಾದ ಇವರು ನೀನಾಸಂ ರಂಗಶಿಕ್ಷಣ ಕೇಂದ್ರದಿಂದಲೂ ಶಿಕ್ಷಣವನ್ನು ಪಡೆದಿರುತ್ತಾರೆ. ರಂಗವಿನ್ಯಾಸ ಮತ್ತು ನಿರ್ದೇಶನದಲ್ಲಿ ಪರಿಣತರಾದ ಇವರು ನಿರ್ದೇಶಿಸಿರುವ ಮುಖ್ಯ ನಾಟಕಗಳು ''ಎ ಮಿಡ್ ಸಮ್ಮರ್ ನೈಟ್ಸ್ ಡ್ರೀಮ್ಸ್'', ''ಚೆರ್ರಿ ಆರ್ಚರ್ಡ್'', ''ಮುಕ್ಕಾಂ ಪೋಸ್ಟ್ ಬೊಂಬಿಲವಾಡಿ'', ''ಡಂಬ್ ಡ್ಯಾನ್ಸರ್'', ''ನಿರೋಬ್ ಕಥಾ'', ''ಎ ಡಾಲ್ಸ್ ಹೌಸ್'', ''ಎ ಟೈಗರ್ ಆಫ್ ಮಾಲ್ಗುಡಿ'', ''ಅಂಧ ಯುಗ್'', ''ಅಧೇ ಅಧೂರೆ'' ಇತ್ಯಾದಿ. ಇದುವರೆಗೆ ಇವರು ಕನ್ನಡಕ್ಕಾಗಿ ಎರಡು ಮರಾಠಿ ನಾಟಕ ಮತ್ತು ಆರ್ ಕೆ ನಾರಾಯಣ್ರವರ ''ಎ ಟೈಗರ್ ಫಾರ್ ಮಾಲ್ಗುಡಿ'' ಕೃತಿಯನ್ನು ರೂಪಾಂತರಿಸಿದ್ದಾರೆ.

**ರಂಗಭೂಮಿ ಪ್ರಶಸ್ತಿ:** ರಂಗಭೂಮಿ (ರಿ) ಉಡುಪಿ, ಕಳೆದ 39 ವರ್ಷಗಳಿಂದ ಪ್ರತೀ ವರ್ಷ ರಾಜ್ಯ ಮಟ್ಟದ ನಾಟಕೋತ್ಸವ ಮತ್ತು ನಾಟಕ ಸ್ಪರ್ಧೆಯನ್ನು ನಡೆಸುತ್ತಾ ಬಂದಿದ್ದು, 2018 ರ ಸಾಲಿನ ಸ್ಪರ್ಧೆಯಲ್ಲಿ ಮುಕ್ಕಾಂ ಪೋಸ್ಟ್ ಬೊಂಬಿಲವಾಡಿ ನಾಟಕವು ಪ್ರಥಮ ಬಹುಮಾನ ಪಡೆಯುವುರ ಜೊತೆಗೆ ಇತರ 9 ವೈಯುಕ್ತಿಕ ಬಹುಮಾನಗಳನ್ನು ಪಡೆದಿರುತ್ತದೆ.

**ತಂಡದ ಬಗ್ಗೆ :** ಸಮಷ್ಟಿ ತಂಡವು 2000 ದಲ್ಲಿ ಹುಟ್ಟಿಕೊಂಡ ತಂಡ. ಹೊಸ ಪ್ರತಿಭೆಗಳನ್ನು ಹುಡುಕಿ ಅವರಲ್ಲಿ ರಂಗಾಸಕ್ತಿಯನ್ನು ಬೆಳೆಸುವುದು ಇದರ ಉದ್ದೇಶ.

ಈವರೆಗೆ ಇದು 'ಆಷಾಡದ ಒಂದು ದಿನ', 'ಸಾಂಬಶಿವ ಪ್ರಹಸನ', 'ಮೃಚ್ಛಕಟಿಕ', 'ಹದ್ದು ಮೀರಿದ ಹಾದಿ', 'ಅಲೆಗಳಲ್ಲಿ ರಾಜಹಂಸಗಳು', 'ಹರಿಣಾಭಿಸರಣ', 'ಕಥನ', 'ಮಿಸ್. ಸದಾರಮೆ' 'ಕಥೆ ಹೇಳತೀವಿ' 'ಸಾಫಲ್ಯ', 'ಅವಾಂತರ', 'ಶಾಂಡಿಲ್ಯ ಪ್ರಹಸನ' 'ನಾಯೀಕತೆ', 'ಪ್ರಮೀಳಾರ್ಜುನೀಯಂ', 'ಚಿರಕುಮಾರ ಸಭಾ', 'ವಿಶಾಕೇ', 'ಚಿತ್ರಪಟ', 'ನೀರು ಕುಡಿಸಿದ ನೀರೆಯರು', 'ಕಂತು' ಮುಂತಾದ ನಾಟಕಗಳನ್ನು ಯಶಸ್ವಿಯಾಗಿ ರಂಗಕ್ಕೆ ತಂದಿದೆ. ನಿರಂತರ ಕಲಿಕೆಯ ಸಲುವಾಗಿ ವಾಚಿಕಾಭಿನಯ, ಪ್ರಸಾಧನ, ಮೂಕಾಭಿನಯ, ರಂಗಸಜ್ಜಿಕೆ, ರಂಗಪರಿಕರ ಮತ್ತು ಯಕ್ಷಗಾನ ಇವೇ ಮುಂತಾದ ವಿಷಯಗಳ ಬಗ್ಗೆ ಶಿಬಿರಗಳನ್ನು ರಂಗಾಸಕ್ತರಿಗೆ ಆಯೋಜಿಸಿರುತ್ತದೆ.

ತಂಡದ 'ಚಿತ್ರಪಟ' ನಾಟಕಕ್ಕೆ ಒಇಖಿಂ 2015 ನಾಟಕೋತ್ಸವದಲ್ಲಿ 3 ರಾಷ್ಟ್ರೀಯ ಪ್ರಶಸ್ತಿಗಳನ್ನು ಪಡೆದುದಲ್ಲದೆ, ಹಲವಾರು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ನಾಟಕೋತ್ಸವದಲ್ಲಿ ಪಾಲ್ಗೊಂಡಿದೆ.

ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ದೂರವಾಣಿ : 98451 63380

ಅಂತರ್ಜಾಲ : www.samashti.com

# ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಕೌಟುಂಬಿಕ ವಿಚಾರಗಳಲ್ಲಿ ಪ್ರಗತಿ, ಆರೋಗ್ಯದಲ್ಲಿ ಸುಧಾರಣೆ, ಮೇಲಾಧಿಕಾರಿಗಳಿಂದ ಮೆಚ್ಚುಗೆ.

**ವೃಷಭ:** ನಡೆಯಬೇಕಾದ ಕಾರ್ಯದಲ್ಲಿ ವಿಳಂಬ, ಕೆಲವು ನಿರ್ಧಾರಗಳಿಂದ ಹತಾಶೆ ಉಂಟಾಗಬಹುದು, ಕಳೆದು ಹೋದ ಅಮೂಲ್ಯ ವಸ್ತು ಸಿಗುವ ಸಾಧ್ಯತೆ.

**ಮಿಥುನ:** ವ್ಯವಹಾರ ಉದ್ಯೋಗದಲ್ಲಿ ಸಫಲತೆ, ವಾಸ ಸ್ಥಳ ಬದಲಾವಣೆ, ಅತಿಯಾದ ಸ್ವಾಭಿಮಾನ ಸಲ್ಲದು.

**ಕರ್ಕಾಟಕ:** ದಾಂಪತ್ಯದಲ್ಲಿ ಪರಸ್ಪರ ಸಹಕಾರ, ಆಸ್ತಿವಿಚಾರದಲ್ಲಿ ಬಂಧುಗಳಿಂದ ವಿರೋಧ, ಗುರುಹಿರಿಯರ ಮಾರ್ಗದರ್ಶನ ಅವಶ್ಯ.

**ಸಿಂಹ:** ಪಾಲುದಾರರೊಂದಿಗೆ ತಾಳ್ಮೆಯಿಂದಿರಿ, ಹೈನುಗಾರಿಕೆ ಜೇನು ವ್ಯವಸಾಯಗಾರರಿಗೆ ಆದಾಯ, ಹಣಕಾಸಿನ ವಿಚಾರದಲ್ಲಿ ಹಿಡಿತ ಅಗತ್ಯ.

**ಕನ್ಯಾ:** ಸಹೋದ್ಯೋಗಿಗಳೊಂದಿಗೆ ವೈಮನಸ್ಸು, ವಿದ್ಯಾರ್ಥಿಗಳಿಗೆ ಅಭ್ಯಾಸದಲ್ಲಿ ಆಸಕ್ತಿ, ಸ್ಥಿರಾಸ್ತಿ ಖರೀದಿ ಯೋಗ.

**ತುಲಾ:** ವಿವಾಹ ಪ್ರಯತ್ನದಲ್ಲಿ ಯಶಸ್ಸು, ಆರೋಗ್ಯದಲ್ಲಿ ಕೊಂಚ ಏರುಪೇರು, ನಕಾರಾತ್ಮಕ ಯೋಚನೆಗಳಿಂದ ದೂರವಿರಿ.

**ವೃಶ್ಚಿಕ:** ಮಾನಸಿಕ ಕಿರಿಕಿರಿ, ಸಹೋದರನೊಂದಿಗೆ ಜಗಳ, ಅತಿಯಾದ ಮಾತಿನಿಂದ ಅವಮಾನ.

**ಧನಸ್ಸು:** ಸಮಸ್ಯೆಗಳಿಗೆ ಆತ್ಮವಿಶ್ವಾಸದಿಂದ ಪರಿಹಾರ, ಆದಾಯಕ್ಕೆ ತಕ್ಕ ವೆಚ್ಚ, ಉದ್ಯೋಗದಲ್ಲಿ ಬದಲಾವಣೆ.

**ಮಕರ:** ಜೀವನದಲ್ಲಿ ಅಭದ್ರತೆಯಿಂದ ಮಾನಸಿಕ ಒತ್ತಡ, ನೂತನ ಗೃಹ ನಿರ್ಮಾಣಕ್ಕೆ ಚಾಲನೆ, ಉನ್ನತ ವ್ಯಾಸಂಗದಲ್ಲಿ ಪ್ರಗತಿ.

**ಕುಂಭ:** ಒತ್ತಡ ಜೀವನದಿಂದ ಬಿಡುವು ದೊರೆಯಲಿದೆ, ನೂತನ ಕೆಲಸ ಆರಂಭಿಸಲು ಸಕಾಲ, ಪ್ರತಿಭೆಗೆ ತಕ್ಕ ಪುರಸ್ಕಾರ.

**ಮೀನ:** ಕುಟುಂಬ ಸದಸ್ಯರ ಜೊತೆ ಕಾಲಹರಣ, ದೈಹಿಕ ಶ್ರಮ ಹೆಚ್ಚಾಗಲಿದೆ, ದೈವಾನುಗ್ರಹದಿಂದ ಅಂದುಕೊಂಡ ಕೆಲಸ ಸುಲಭ.

# ವಿಶ್ವ ಬ್ರೈಲ್ ಡೇ



ದೃಷ್ಟಿ ವಿಶೇಷ ಚೇತನರರು ಓದಲು ಮತ್ತು ಬರೆಯಲು ಈ ಬ್ರೈಲ್ ಲಿಪಿ(ಭಾಷೆ)ಯನ್ನು ಬಳಸುತ್ತಾರೆ. ಬ್ರೈಲ್ ಲಿಪಿಯ ಸಂಶೋಧಕ ಲೂಯಿಸ್ ಬ್ರೈಲ್ ಅವರ ಜನ್ಮದಿನ ಪ್ರಯುಕ್ತ ಪ್ರತಿವರ್ಷ ಜನವರಿ 4ರಂದು ವಿಶ್ವದಾದ್ಯಂತ ವಿಶ್ವ ಬ್ರೈಲ್ ಡೇ ಆಚರಿಸಲಾಗುತ್ತದೆ.

ಲೂಯಿಸ್ ಬ್ರೈಲ್ ಅವರು ಫ್ರಾನ್ಸ್‌ನಲ್ಲಿ ಜನವರಿ 4, 1809 ರಂದು ಜನಿಸಿದರು. 3 ನೇ ವಯಸ್ಸಿನಲ್ಲಿ ಅವರು ಆಕಸ್ಮಿಕವಾಗಿ ದೃಷ್ಟಿಕಳೆದುಕೊಂಡಿದ್ದರು. ದೃಷ್ಟಿಹೀನತೆ ಹೊರತಾಗಿಯೂ ಸರಿಯಾಗಿ ಓದುವುದು ಮತ್ತು ಬರೆಯಲು ಬಹಳ ಉತ್ಸಾಹ ಹೊಂದಿದ್ದರು. 15 ನೇ ವಯಸ್ಸಿನಲ್ಲಿ, ಶಾಲೆಯಲ್ಲಿ ಒಂದು ತುಂಡು ಕಾಗದದ ಮೇಲೆ ಚುಕ್ಕೆಗಳನ್ನು ಮಾಡುವ ಮೂಲಕ ಈ ಬ್ರೈಲ್ ಲಿಪಿಯನ್ನು ಅಭಿವೃದ್ಧಿಪಡಿಸಿದರು. ಅಂಧರ ಬದುಕಿನ ಇವತ್ತಿನ ಆತ್ಮವಿಶ್ವಾಸ ಮತ್ತು ಅವರ ಸಾಧನೆಗಳ ಹಿಂದೆ ಲೂಯಿ ಬ್ರೈಲ್ರ ಪರಿಶ್ರಮವಿದೆ. ಬ್ರೈಲ್ ನ ಬದುಕು ಮತ್ತು ಆತ ಮಾಡಿದ ಸಾಧನೆ, ಅನೇಕ ದೃಷ್ಟಿಹೀನರ ಬದುಕಿಗೆ ಸ್ಪೂರ್ತಿಯ ಸೆಲೆಯಾಗಿದೆ. ದೃಷ್ಟಿ ವಿಶೇಷ ಚೇತನರು ಇಂದು ಸಮಾಜದಿಂದ ಯಾವುದೇ ರೀತಿಯ ಅನುಕಂಪ ನಿರೀಕ್ಷಿಸದೆ ಸಹಜ ರೀತಿಯಿಂದ ಬದುಕು ನಡೆಸುತ್ತಿದ್ದಾರೆ. ಅಂಗವೈಕಲ್ಯವನ್ನು ಮರೆತು ಅನೇಕ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ. ಅಮೆರಿಕದ ಲೇಖಕಿ ಹೆಲನ್ ಕೆಲ್ಲರ್, ಕವಿ ಜಾನ್ ಮಿಲ್ಟನ್, ಕಾರ್ಟೂನಿಸ್ಟ್ ಜೆಮ್ಸ್? ಟರ್ಬರ್, ಹುಟ್ಟು ಅಂಧರಾಗಿ ಸಂಗೀತ ಕ್ಷೇತ್ರದಲ್ಲಿ ಬಹುದೊಡ್ಡ ಸಾಧನೆ ಮಾಡಿದ ಪುಟ್ಟರಾಜ ಗವಾಯಿಗಳು ಈ ಎಲ್ಲರೂ ತಮ್ಮ ದೈಹಿಕ ವೈಕಲ್ಯವನ್ನು ಮರೆತು ಮಾಡಿದ ಸಾಧನೆ ಮತ್ತು ಪಡೆದ ಯಶಸ್ಸು ಅಪಾರ. ದೃಷ್ಟಿಹೀನ ವ್ಯಕ್ತಿಗಳು ಎದುರಿಸುತ್ತಿರುವ ಸವಾಲುಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಅವರಿಗೆ ಆರ್ಥಿಕ ಮತ್ತು ಸಾಮಾಜಿಕ ಅವಕಾಶಗಳನ್ನು ಸೃಷ್ಟಿಸಲು ಪ್ರಪಂಚದಾದ್ಯಂತ ಸರ್ಕಾರೇತರ ಸಂಸ್ಥೆಗಳು ಈ ದಿನವನ್ನು ಆಚರಿಸುತ್ತದೆ.

ಸಂಜೆ ಮುಗಿಲು
ಶನಿವಾರ
4.1.2025



# ಆಸ್ಟರ್ ವಾಲಂಟಿಯರ್ಸ್ 50ನೇ ಸಂಚಾರಿ ವೈದ್ಯಕೀಯ ಚಿಕಿತ್ಸಾಲಯಕ್ಕೆ ಚಾಲನೆ




**ನವದೆಹಲಿ:** ಆಸ್ಟರ್ ಡಿಎಂ ಹೆಲ್ತ್ ಕೇರ್‌ನ ಜಾಗತಿಕ ಸಿಎಸ್‌ಆರ್ (ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿ) ಅಂಗವಾದ ಆಸ್ಟರ್ ವಾಲಂಟಿಯರ್ಸ್, ಶ್ರೀನಗರ, ಜಮ್ಮು ಮತ್ತು ಕಾಶ್ಮೀರ ಮತ್ತು ಕರ್ನಾಟಕದ ಕಲಬುರಗಿಯಲ್ಲಿ ಕಡಿಮೆ ಜನಸಂಖ್ಯೆಯಿರುವ ಪ್ರದೇಶಗಳಲ್ಲಿ ಉಚಿತ ವೈದ್ಯಕೀಯ ಸೇವೆ ಒದಗಿಸಲು ಟೆಲಿ-ಮೆಡಿಸಿನ್‌ನೊಂದಿಗೆ ಎರಡು ಐಓಟಿ-ವರ್ಧಿತ ಮೊಬೈಲ್ ವೈದ್ಯಕೀಯ ಚಿಕಿತ್ಸಾಲಯಗಳನ್ನು ಪ್ರಾರಂಭಿಸಿದೆ. ಇದು ಆಸ್ಟರ್ ವಾಲಂಟಿಯರ್ಸ್‌ನ ಒಟ್ಟು ಮೊಬೈಲ್ ಚಿಕಿತ್ಸಾಲಯಗಳ ಸಂಖ್ಯೆಯನ್ನು 50 ಕ್ಕೆ ಏರಿಸಿದೆ.

ಭಾರತದ ಗೌರವಾನ್ವಿತ ಉಪರಾಷ್ಟ್ರಪತಿ ಶ್ರೀ ಜಗದೀಪ್ ಧನ್ಕರ್, ಆಸ್ಟರ್ ಡಿಎಂ ಹೆಲ್ತ್ ಕೇರ್‌ನ ವ್ಯವಸ್ಥಾಪಕ ನಿರ್ದೇಶಕಿ ಮತ್ತು ಗ್ರೂಪ್ ಸಿಇಒ ಅಲಿಶಾ ಮೂಪೆನ್, ಆಸ್ಟರ್ ಡಿಎಂ ಹೆಲ್ತ್ ಕೇರ್ ಲಿಮಿಟೆಡ್‌ನ ನಿರ್ದೇಶಕ ಶ್ರೀ ಅನೂಪ್ ಮೂಪೆನ್ ಮತ್ತು ಆಸ್ಟರ್ ಡಿಎಂ ಹೆಲ್ತ್ ಕೇರ್ ಲಿಮಿಟೆಡ್‌ನ ಕಾರ್ಪೊರೇಟ್ ಆಡಳಿತದ ಕಾರ್ಯನಿರ್ವಾಹಕ ನಿರ್ದೇಶಕ ಮತ್ತು ಗ್ರೂಪ್ ಹೆಡ್ ಶ್ರೀ ಟಿ.ಜೆ.ವಿಲ್ಸನ್ ಅವರ ಉಪಸ್ಥಿತಿಯಲ್ಲಿ ಘಟಕಗಳನ್ನು ಉದ್ಘಾಟಿಸಲಾಯಿತು. ಸ್ವಯಂಸೇವಕರಾಗಿ ಕಾರ್ಯನಿರ್ವಹಿಸಲು ಒಪ್ಪಿರುವ ಭಾರತೀಯ ಲಾನ್ ಟೆನಿಸ್ ಸಂಸ್ಥೆಯ ಉಪಾಧ್ಯಕ್ಷ ಮತ್ತು ದೆಹಲಿಯ ಮಿಶ್ರ ಸಮರ ಕಲೆಗಳ ಅಧ್ಯಕ್ಷರಾದ ಪ್ರಬಲ್ ಪ್ರತಾಪ್ ಸಿಂಗ್ ತೋಮರ್, ಈ ಯೋಜನೆ ದೇಶಾದ್ಯಂತ ಗ್ರಾಮೀಣ ಪ್ರದೇಶಗಳನ್ನು ತಲುಪಲು ಮತ್ತಷ್ಟು ಸಹಾಯ ಮಾಡಲು ತಮ್ಮ ಬೆಂಬಲ ನೀಡಲಿದ್ದಾರೆ.

ಉತ್ತರ ಭಾರತ ಮತ್ತು ಅದರಾಚೆಗಿನ ಅಂಚಿನಲ್ಲಿರುವ ಸಮುದಾಯಗಳಿಗೆ ವೈದ್ಯಕೀಯ ಆರೈಕೆ ಒದಗಿಸುವ ಗುರಿ ಹೊಂದಿರುವ ಆಸ್ಟರ್ ವಾಲಂಟಿಯರ್ಸ್‌ನ ಈ ದೀರ್ಘಕಾಲೀನ ಯೋಜನೆಯ ಆರಂಭ ಒಂದು ಪ್ರಮುಖ ಹೆಜ್ಜೆಯಾಗಿದೆ.

ಹೊಸ ಮೊಬೈಲ್ ಘಟಕಗಳನ್ನು ಅಶೋಕ್ ಲೇಲ್ಯಾಂಡ್ ಮಿಟರ್ 7 ಮೀಟರ್ ಉದ್ದದ ಚೇಸ್‌ಗಳ ಮೇಲೆ ಅಗತ್ಯಕ್ಕೆ ಅನುಗುಣವಾಗಿ ನಿರ್ಮಿಸಲಾಗಿದ್ದು, ಐಓಟಿ-ಇಂಟಿಗ್ರೇಟೆಡ್ ಟೆಲಿಮೆಡಿಸಿನ್ ಸೇವೆಗಳನ್ನು ಹೊಂದಿದೆ. ರೋಗಿಗಳು ಕಾಯಲು ಜಾಗ ಮತ್ತು ನೋಂದಣಿ ಡೆಸ್ಕ್, ಪ್ರಮುಖ ದತ್ತಾಂಶ ಸಂಗ್ರಹಣಾ ಡೆಸ್ಕ್, ಶೈತ್ಯೀಕರಿಸಿದ ಶೇಖರಣೆ ವ್ಯವಸ್ಥೆಯುಳ್ಳ ಮಿನಿ ಲ್ಯಾಬ್, ಔಷಧಗಳ ಸುರಕ್ಷಿತ ಸಂಗ್ರಹಣೆ ಮತ್ತು ವಿತರಣಾ ಸೌಲಭ್ಯ, ಜನರಲ್ ಪ್ರಾಕ್ಟೀಶನರ್‌ಗಳಿಗೆ ಸಮಾಲೋಚನೆ ಕೊಠಡಿ, ಸ್ಪೆಷಲಿಸ್ಟ್ ಮತ್ತು ಸೂಪರ್-ಸ್ಪೆಷಲಿಸ್ಟ್ ಟೆಲಿ-ಕನ್ಸಲ್ಟೇಷನ್ ಸೌಲಭ್ಯ (ಐಓಟಿ ಇಂಟಿಗ್ರೇಟೆಡ್), ಆರೋಗ್ಯ ಶಿಕ್ಷಣ ಮತ್ತು ಜಾಗೃತಿ ಕಾರ್ಯಕ್ರಮಗಳಿಗಾಗಿ ದೊಡ್ಡ ಗಾತ್ರದ ಟಿವಿ ಮತ್ತು ನೆರಳಿಗಾಗಿ ವಿಸ್ತರಿಸಬಹುದಾದ ಹೊರಾಂಗಣ, ಆರೋಗ್ಯ ಸೌಕರ್ಯದ ಲಭ್ಯತೆಯನ್ನು ಹೆಚ್ಚಿಸುತ್ತವೆ. ಸಂಚಾರಿ ಚಿಕಿತ್ಸಾಲಯಗಳು ಹವಾನಿಯಂತ್ರಣ, ಸೋಂಕು ನಿಯಂತ್ರಣ ಸೌಲಭ್ಯ ಮತ್ತು ವೈ-ಫೈ ಸಂಪರ್ಕವನ್ನೂ ಹೊಂದಿವೆ. ಇದು ದೂರದ ಹಳ್ಳಿಯ ರಸ್ತೆಗಳಲ್ಲಿಯೂ ಸಂಚರಿಸುವ ಸಾಮರ್ಥ್ಯ ಹೊಂದಿದೆ. ಆ ಮೂಲಕ ಅಂಚಿನಲ್ಲಿರುವ ಸಮುದಾಯಗಳನ್ನು ಸುಲಭವಾಗಿ ತಲುಪಬಹುದು. ಈ ಸಂಚಾರಿ ಚಿಕಿತ್ಸಾಲಯಗಳು ಭಾರತದಲ್ಲಿ ಆಸ್ಟರ್ ಡಿಎಂ ಹೆಲ್ತ್ ಕೇರ್ ಸಿಎಸ್‌ಆರ್ ಪ್ರಯತ್ನಗಳ ಭಾಗವಾಗಿದ್ದು, ಅಶೋಕ್ ಲೇಲ್ಯಾಂಡ್‌ನೊಂದಿಗೆ ಕಾರ್ಯತಂತ್ರದ ಸಹಭಾಗಿತ್ವದಲ್ಲಿ ಜಾರಿಗೆ ತರಲಾಗುತ್ತಿದೆ.

ಈ ಮಹತ್ವದ ಸಂದರ್ಭದಲ್ಲಿ, ಗೌರವಾನ್ವಿತ ಉಪರಾಷ್ಟ್ರಪತಿ ಶ್ರೀ ಜಗದೀಪ್ ಧನ್ಕರ್ ಮಾತನಾಡಿ, ಈ ಸಂಚಾರಿ ವೈದ್ಯಕೀಯ ಚಿಕಿತ್ಸಾಲಯಗಳ ಪ್ರಾರಂಭ ನಿರ್ಲಕ್ಷಿತ ಜನರಿಗೆ ಆರೋಗ್ಯ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಒಂದು ಗಮನಾರ್ಹ ಯೋಜನೆ. ಇದು ಇಂದಿನ ಅಗತ್ಯವಾಗಿದೆ. ಈ ಯೋಜನೆ ಅಗತ್ಯ ವೈದ್ಯಕೀಯ ಸೇವೆಗಳನ್ನು ಒದಗಿಸುವ ಜೊತೆಗೆ, ನಮ್ಮ ದೇಶದಲ್ಲಿ ಮತ್ತು ಅದರಾಚೆಗೂ ಆರೋಗ್ಯ ರಕ್ಷಣೆಯನ್ನು ಹೆಚ್ಚಿಸುವ ವಿಶಾಲ ಗುರಿ ಮತ್ತು ಅದು ಉಂಟುಮಾಡುವ ಪರಿಣಾಮದಿಂದಾಗಿ ಗಮನಸೆಳೆಯುತ್ತದೆ. ತಂತ್ರಜ್ಞಾನದೊಂದಿಗೆ ಚಲನಶೀಲತೆಯ ಸಂಯೋಜನೆ, ಅತ್ಯಂತ ದೂರದ ಸ್ಥಳಗಳಲ್ಲಿಯೂ ಉತ್ತಮ-ಗುಣಮಟ್ಟದ ಚಿಕಿತ್ಸೆ ಒದಗಿಸುತ್ತಿರುವುದು ನಿಜಕ್ಕೂ ಪ್ರಶಂಸನೀಯ. ಸಹಾನುಭೂತಿ ಮತ್ತು ಜವಾಬ್ದಾರಿಯ ಮೌಲ್ಯಗಳನ್ನು ಪ್ರತಿಬಿಂಬಿಸುವ ಈ ಪ್ರಯತ್ನದ ಹಿಂದೆ ಆಸ್ಟರ್ ಡಿಎಂ ಹೆಲ್ತ್ ಕೇರ್‌ನ ಜಾಗತಿಕ ಸಿಎಸ್ ಆರ್ ಅಂಗವಾದ ಆಸ್ಟರ್ ವಾಲಂಟಿಯರ್ಸ್‌ನ ದೂರದೃಷ್ಟಿ ಮತ್ತು ಸಮರ್ಪಣಾ ಭಾವನೆಯನ್ನು ನಾನು ಪ್ರಶಂಸಿಸುತ್ತೇನೆ ಎಂದು ಹೇಳಿದರು.

# ಇಸ್ರೋದ ಸರ್ವ ಬಾಲಕಿಯರ ಮೂನ್ ಮಿಷನ್ ಮುಂದಿನ ವರ್ಷ ಉಡಾವಣೆ

**ಹೊಸದಿಲ್ಲಿ:** ವಿಶ್ವದ 108 ದೇಶಗಳ 1200ಕ್ಕೂ ಹೆಚ್ಚು ಮಂದಿ ಪ್ರತಿಭಾವಂತ ಬಾಲಕಿಯರನ್ನು ಒಳಗೊಂಡ ಇಸ್ರೋದ ಸರ್ವ ಬಾಲಕಿಯರ ಮೂನ್ ಮಿಷನ್ ಶಕ್ತಿಸ್ಯಾಟ್ ಅನ್ನು ಮುಂದಿನ ವರ್ಷದ ಉಡಾಯಿಸಲು ಉದ್ದೇಶಿಸಲಾಗಿದೆ. 2026ರ ಸೆಪ್ಟೆಂಬರ್ ನಲ್ಲಿ ಇಸ್ರೋದ ಪೋಲಾರ್ ಸ್ಯಾಟಲೈಟ್ ಲಾಂಚ್ ವೆಹಿಕಲ್ ಈ ಮಿಷನ್ ಉಡಾಯಿಸಲಿದೆ. ಈ ಮಿಷನ್ ಅಭಿವೃದ್ಧಿಯಲ್ಲಿ ಬೋಟ್ಸ್ವಾನಾ, ಗ್ರೀಸ್, ಕೋಸ್ಟರಿಕ, ಯುಎಇ ಹಾಗೂ ಕ್ಯಾಮರೂನ್ ಸೇರಿದಂತೆ ಹಲವು ದೇಶಗಳ ಬಾಲಕಿಯರು ಇದ್ದಾರೆ. ಚಂದ್ರಯಾನ ಮಿಷನ್ ಅಧಿಕೃತವಾಗಿ ಜನವರಿ 16 ಅಥವಾ 22ರಂದು ಘೋಷಣೆಯಾಗಲಿದೆ ಎಂದು ಶಕ್ತಿಸ್ಯಾಟ್ ನಿರ್ದೇಶಕಿ ಶ್ರೀಮತಿ ಕೇಸನ್ ಹೇಳಿದ್ದಾರೆ. ಮಹಿಳೆಯರು ಬಾಹ್ಯಾಕಾಶ ವಲಯದ ಉದ್ಯೋಗದಲ್ಲಿ ಕೇವಲ ಶೇಕಡ 20ರಷ್ಟು ಪಾಲು ಹೊಂದಿದ್ದಾರೆ. ಮಹಿಳೆಯರನ್ನು ತೊಡಗಿಸಿಕೊಳ್ಳುವ ಮೂಲಕ ಈ ಅಂತರವನ್ನು ಕಡಿಮೆ ಮಾಡುವುದು ಮಾತ್ರವಲ್ಲದೇ ಬಳಕೆ ಮಾಡಿಕೊಳ್ಳದ ಪ್ರತಿಭೆಗಳನ್ನು ವಿಶ್ವಕ್ಕೆ ಅನಾವರಣಗೊಳಿಸುವ ಯೋಜನೆ ಇದಾಗಿದೆ ಎಂದು ಅವರು ಬಣ್ಣಿಸಿದ್ದಾರೆ. ಕಳೆದ ತಿಂಗಳು ಚೆನ್ನೈ ಮೂಲದ ಸ್ಪೇಸ್ ಕಿಡ್ಸ್ ಇಂಡಿಯಾ (ಎಸ್‌ಕೆಐ) ಮತ್ತು ಇನ್-ಸ್ಪೇಸ್‌ಇ ಶಕ್ತಿಸ್ಯಾಟ್ ಯೋಜನೆಗೆ ಸಂಬಂಧಿಸಿದಂತೆ ಒಪ್ಪಂದ ಮಾಡಿಕೊಂಡಿದ್ದವು. ಭಾರತ ಸರ್ಕಾರ ರಚಿಸಿರುವ ಇನ್-ಸ್ಪೇಸ್‌ಇ ಸಂಸ್ಥೆಯ ಮುಖ್ಯ ಪಾತ್ರವೆಂದರೆ, ಭಾರತದ ಬಾಹ್ಯಾಕಾಶ ಕಾರ್ಯಕ್ರಮಗಳಲ್ಲಿ ಖಾಸಗಿ ವಲಯದ ಸಹಭಾಗಿತ್ವಕ್ಕೆ ಅವಕಾಶ ಮಾಡಿಕೊಡುವುದು. 2017ರಲ್ಲಿ ವಿಶ್ವದ ಅತ್ಯಂತ ಪುಟ್ಟ ಕಲಮ್ ಸ್ಯಾಟ್ ಉಡಾಯಿಸುವ ಮೂಲಕ ಮತ್ತು ನಾಸಾ ಸ್ಪರ್ಧೆಯಲ್ಲಿ ಜಯ ಸಾಧಿಸುವ ಮೂಲಕ ಎಸ್ ಕೆಐ ಸುದ್ದಿ ಮಾಡಿತ್ತು.

# ಬೈಡನ್ ವಿರುದ್ಧ ಟ್ರಂಪ್ ವಾಗ್ದಾಳಿ

**ನ್ಯೂಯಾರ್ಕ್:** ಜೋ ಬೈಡನ್ ಅಮೆರಿಕದ ಇತಿಹಾಸದಲ್ಲೇ ಅತ್ಯಂತ ಕೆಟ್ಟ ಅಧ್ಯಕ್ಷ ಎಂದು ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶುಕ್ರವಾರ ಹಾಲಿ ಅಧ್ಯಕ್ಷರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಸಾಮಾಜಿಕ ಮಾಧ್ಯಮ ಪ್ಲಾಟ್ ಫಾರ್ಮ್ ಎಕ್ಸ್‌ನಲ್ಲಿ ಸರಣಿ ಪೋಸ್ಟ್ ಮಾಡಿರುವ ಅವರು, ಅಮೆರಿಕದ ಸ್ಥಿತಿ ಇಂದು ವಿಪತ್ತಿನಲ್ಲಿದೆ ಮತ್ತು ದೇಶವು ವಿಶ್ವದಲ್ಲಿ ನಗೆಪಾಟಲಿಗೀಡಾಗಿದೆ ಎಂದು ವ್ಯಂಗ್ಯವಾಡಿದ್ದಾರೆ.



ರಾಷ್ಟ್ರೀಯ ಭದ್ರತೆ, ಸುರಕ್ಷತೆ ಮತ್ತು ನಾಯಕತ್ವದ ಕುಸಿತಕ್ಕೆ ಅಧ್ಯಕ್ಷ ಬೈಡನ್ ಅವರೇ ಕಾರಣ ಎಂದು ಟ್ರಂಪ್ ದೂಷಿಸಿದ್ದಾರೆ. ಅಧ್ಯಕ್ಷ ಬೈಡನ್ ಅವರ 'ಮುಕ್ತ ಗಡಿ ನೀತಿ'ಯಿಂದ ವಿನಾಶಕಾರಿ ಪರಿಣಾಮ ಎದುರಾಗುತ್ತಿವೆ ಎಂದು ಅಭಿಪ್ರಾಯ ಪಟ್ಟಿರುವ ಟ್ರಂಪ್ ಇದೇ ವಿಷಯವನ್ನು ಕೇಂದ್ರೀಕರಿಸಿ ಬೈಡನ್ ವಿರುದ್ಧ ಟೀಕೆ ಮಾಡಿದ್ದಾರೆ. ಮುಕ್ತ ಗಡಿ ನೀತಿಯಿಂದಾಗಿ ಅಮೆರಿಕದಲ್ಲಿ ಇಸ್ಲಾಮಿಕ್ ಭಯೋತ್ಪಾದನೆ ಮತ್ತು ಹಿಂಸಾತ್ಮಕ ಅಪರಾಧಗಳ ಮಟ್ಟ ಹೆಚ್ಚಾಗುತ್ತಿದೆ ಎಂದು ಎಚ್ಚರಿಸಿದ ಅವರು, ಈ ಹಿಂದೆಂದಿಗಿಂತಲೂ ಈಗ ದೇಶ ಕೆಟ್ಟ ಸಮಯವನ್ನು ದಾಟುತ್ತಿದೆ ಎಂದು ಹೇಳಿದರು. ಅವರು ಮತ್ತು ಅವರ ಚುನಾವಣಾ ಹಸ್ತಕ್ಷೇಪದ ದುಷ್ಕರ್ಮಿಗಳ ಗುಂಪು ನಮ್ಮ ದೇಶಕ್ಕೆ ಏನು ಮಾಡಿದೆಯೋ ಅದನ್ನು ಬೇಗ ಮರೆಯಲಾಗುವುದಿಲ್ಲ! ಎಂದು ಅವರು ಹೇಳಿದರು. ನ್ಯಾಯಾಂಗ ಇಲಾಖೆ (ಡಿಒಜೆ), ಫೆಡರಲ್ ಬ್ಯೂರೋ ಆಫ್ ಇನ್ವೆಸ್ಟಿಗೇಷನ್ (ಎಫ್‌ಬಿಐ) ಮತ್ತು ಡೆಮಾಕ್ರಟಿಕ್ ಸರ್ಕಾರಿ ಅಧಿಕಾರಿಗಳು ಸೇರಿದಂತೆ ವಿವಿಧ ಯುಎಸ್ ಸಂಸ್ಥೆಗಳು ತಮ್ಮ ಕರ್ತವ್ಯ ನಿರ್ವಹಿಸುವಲ್ಲಿ ವಿಫಲವಾಗಿವೆ ಎಂದು ಟ್ರಂಪ್ ಆರೋಪಿಸಿದರು

# ಸಿಪಿಐ(ಎಂ) ಕಾರ್ಯಕ್ರಮಕ್ಕೆ ಬಾಂಗ್ಲಾ ಗಾಯಕಿಗೆ ಆಹ್ವಾನ; ಭುಗಿಲೆದ್ದ ವಿವಾದ

**ಕೋಲ್ಕತಾ:** ಈ ತಿಂಗಳು ಪಶ್ಚಿಮ ಬಂಗಾಳದ ರಾಜಧಾನಿ ಕೋಲ್ಕತಾದ ಉತ್ತರ ಹೊರವಲಯದಲ್ಲಿರುವ ನ್ಯೂ ಟೌನ್‌ನಲ್ಲಿ ಜ್ಯೋತಿ ಬಸು ಸೆಂಟರ್ ಫಾರ್ ಸೋಶಿಯಲ್ ಸ್ಟಡೀಸ್ ಅಂಡ್ ರಿಸರ್ಚ್ ಆಯೋಜಿಸಿರುವ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಬಾಂಗ್ಲಾದೇಶದ ಜನಪ್ರಿಯ ಗಾಯಕಿಯನ್ನು ಆಹ್ವಾನಿಸಲು ಸಿಪಿಐ(ಎಂ) ನಿರ್ಧರಿಸಿದ್ದು ಓ ಬಗ್ಗೆ ಭಾರೀ ವಿವಾದಗಳು ಹುಟ್ಟಿಕೊಂಡಿವೆ

ಜನವರಿ 17ರಿಂದ ಜನವರಿ 19ರವರೆಗೆ ಸಿಪಿಐ(ಎಂ)ನ ಪ್ರಮುಖ ಕೇಂದ್ರ ಸಮಿತಿ ಸಭೆಯು ನ್ಯೂ ಟೌನ್‌ನಲ್ಲಿ ನಿಗದಿಯಾಗಿದೆ. ಇದರಲ್ಲಿ ಸಿಪಿಐ(ಎಂ)ನ ರಾಷ್ಟ್ರೀಯ ಪೊಲಿಟ್ಬ್ಯೂರೋ ಸಂಯೋಜಕ ಪ್ರಕಾಶ್ ಕಾರಟ್ ಭಾಗವಹಿಸಲಿದ್ದಾರೆ. ಆ ಸಂದರ್ಭದಲ್ಲಿ, ಭಾರತೀಯ ಮಾರ್ಕ್ಸ್ವಾದಿ ಮತ್ತು ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿ ದಿವಂಗತ ಜ್ಯೋತಿ ಬಸು ಅವರ ಹೆಸರಿನ ಈ ಸಂಸ್ಥೆಯು ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಿದೆ. ಅಲ್ಲಿ ಪಕ್ಷವು ಜನಪ್ರಿಯ ಬಾಂಗ್ಲಾದೇಶದ ಗಾಯಕಿ ರೆಜ್ವಾನಾ ಚೌಧರಿ ಬನ್ಯಾ ಅವರನ್ನು ಪ್ರದರ್ಶನಕ್ಕೆ ಆಹ್ವಾನಿಸಿದ್ದು, ಈ ಬಗ್ಗೆ ವಿವಾದದ ಕಿಡಿ ಹೊತ್ತಿಕೊಂಡಿದೆ. ಪ್ರತಿಪಕ್ಷಗಳು ಸಿಪಿಐ(ಎಂ) ಮೇಲೆ ಮುಗಿಬಿದ್ದಿವೆ.



ಬಾಂಗ್ಲಾದೇಶದಲ್ಲಿ ಭಾರತ ವಿರೋಧಿ ಘೋಷಣೆಗಳು ನಿರಂತರವಾಗಿ ಕೇಳಿಬರುತ್ತಿರುವ ಸಂದರ್ಭದಲ್ಲಿ, ಆ ದೇಶದ ಕಲಾವಿದರನ್ನು ಆಹ್ವಾನಿಸುವ ನಿರ್ಧಾರವು ಸರಿಯಿಲ್ಲ ಎಂದು ಬಿಜೆಪಿಯ ಮಾಜಿ ರಾಷ್ಟ್ರೀಯ ಉಪಾಧ್ಯಕ್ಷ ಮತ್ತು ಪಕ್ಷದ ಮಾಜಿ ಲೋಕಸಭಾ ಸದಸ್ಯ ದಿಲೀಪ್ ಘೋಷ್ ಸಿಪಿಐ(ಎಂ) ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ''ಭಾರತೀಯ ಕಮ್ಯುನಿಸ್ಟರಿಗೆ ದೇಶದಲ್ಲಿ ಯಾವುದೇ ಸಮರ್ಥ ಕಲಾವಿದರು ಸಿಗಲಿಲ್ಲವೇ ಎಂಬುದು ನನ್ನ ಪ್ರಶ್ನೆ. ಅಂತಹ ನಿರ್ಧಾರದ ಅಗತ್ಯವಿರಲಿಲ್ಲ'' ಎಂದು ಘೋಷ್ ಹೇಳಿದರು.

ಕಳೆದ ವರ್ಷ ಏಪ್ರಿಲ್‌ನಲ್ಲಿ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾದ ಬನ್ಯಾ ಅವರನ್ನು ಆಹ್ವಾನಿಸುವುದರ ಹಿಂದೆ ಸಿಪಿಐ(ಎಂ) ನಾಯಕತ್ವಕ್ಕೆ ತನ್ನದೇ ಆದ ತರ್ಕವಿದೆ ಎಂದು ಸಿಪಿಐ(ಎಂ) ಸದಸ್ಯರೊಬ್ಬರು ಹೇಳಿದ್ದಾರೆ. ''ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ರಾಜಕೀಯ ಬಿಕ್ಕಟ್ಟಿನ ಬಗ್ಗೆ ದೇಶದಲ್ಲಿ ಧಾರ್ಮಿಕ ವಿಭಜನೆಯನ್ನು ಸೃಷ್ಟಿಸುವ ಪ್ರಯತ್ನ ನಡೆಯುತ್ತಿದೆ. ಆದರೆ ಅವರ ಸಂಬಂಧವು ಸಾಂಪ್ರದಾಯಿಕವಾಗಿ ಭಾರತದೊಂದಿಗೆ ಸೌಹಾರ್ದಯುತವಾಗಿದೆ. ಸಾಂಸ್ಕೃತಿಕ ವಿನಿಮಯದ ಮೂಲಕ ಏಕತೆಯ ಮನೋಭಾವವನ್ನು ಕಾಪಾಡಿಕೊಳ್ಳುವುದು ನಮ್ಮ ಉದ್ದೇಶವಾಗಿದೆ'' ಎಂದಿದ್ದಾರೆ.

# ಚೀನಾದಲ್ಲಿ ಹೊಸ ವೈರಸ್ ಪತ್ತೆ; ಭಾರತದಲ್ಲೂ ಮುನ್ನೆಚ್ಚರಿಕೆ ಕ್ರಮ

**ನವದೆಹಲಿ:** ಕೋವಿಡ್ ಸಾಂಕ್ರಾಮಿಕ ರೋಗವು 5 ವರ್ಷಗಳ ಹಿಂದೆ ಇಡೀ ಜಗತ್ತನ್ನೇ ಆತಂಕಕ್ಕೆ ದೂಡಿತ್ತು. ಜನರು ತತ್ತರಿಸಿ ಹೋಗಿದ್ದರು. ಕೋವಿಡ್ ವೈರಾಣು ಜಗತ್ತನ್ನು ಕಾಡಿದ 5 ವರ್ಷಗಳ ನಂತರ ಈಗ ಚೀನಾದಲ್ಲಿ ಮತ್ತೊಂದು ನಿಗೂಢ ವೈರಾಣು ಕಂಡು ಬಂದಿದ್ದು, ಎಲ್ಲರಲ್ಲೂ ಆತಂಕ ಹೆಚ್ಚಿದೆ

ಈ ಮಧ್ಯೆ ಭಾರತವು ದೇಶದಲ್ಲಿನ ಉಸಿರಾಟ ಮತ್ತು ಇನ್ನಿತರ ಅನಾರೋಗ್ಯ ಪ್ರಕರಣಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಶುಕ್ರವಾರ ಮೂಲಗಳು ತಿಳಿಸಿವೆ. ಕೇಂದ್ರ ಆರೋಗ್ಯ ಸಚಿವಾಲಯದ ಅಡಿಯಲ್ಲಿ ಕಾರ್ಯ ನಿರ್ವಹಿಸುವ ರಾಷ್ಟ್ರೀಯ ರೋಗ ನಿಯಂತ್ರಣ ಕೇಂದ್ರ, ಅಂತಾರಾಷ್ಟ್ರೀಯ ಏಜೆನ್ಸಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದೆ ಎಂಬ ಮಾಹಿತಿಯಿದೆ. ''ನಾವು ಪರಿಸ್ಥಿತಿಯನ್ನು ಹತೋಟಿಗೆ ತರುತ್ತೇವೆ.



ಒಂದಷ್ಟು ಕ್ರಮಗಳನ್ನು ಈಗಲೇ ಕೈಗೊಳ್ಳುತ್ತೇವೆ. ಸಾಂಕ್ರಾಮಿಕ ರೋಗದ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಸಂಗ್ರಹಿಸುತ್ತಿದ್ದೇವೆ ಎಂದು ಸಚಿವಾಲಯ ತಿಳಿಸಿದೆ

ಹ್ಯೂಮನ್ ಮೆಟಾಪ್ನ್ಯೂಮೊ ವೈರಸ್ ಈ ಬಾರಿ ಚೀನಾದಲ್ಲಿ ಕಾಣಿಸಿಕೊಂಡಿರುವ ಹೊಸ ವೈರಾಣು ಆಗಿದ್ದು, ನೆರೆಯ ರಾಷ್ಟ್ರ ಮತ್ತೊಮ್ಮೆ ಹೊಸ ವೈರಾಣುವಿನಿಂದ ಪಾರಾಗಲು ಸ್ಕ್ರೀನಿಂಗ್, ಪತ್ತೆ ಮತ್ತು ಪ್ರತ್ಯೇಕತೆಯ ಪ್ರೋಟೋಕಾಲ್‌ಗಳ ಮೊರೆ ಹೋಗಿದೆ. ತುರ್ತು ಪರಿಸ್ಥಿತಿಯನ್ನೂ ಘೋಷಿಸಿದೆ. ಚೀನಾದಲ್ಲಿ ಊಹೆಗಿಯ ವೈರಾಣು ಸೋಂಕು ಪ್ರಕರಣಗಳು ಹೆಚ್ಚುತ್ತಿದ್ದು, ಉತ್ತರ ಪ್ರಾಂತ್ಯಗಳಲ್ಲಿ 14 ವರ್ಷದೊಳಗಿನವರನ್ನು ಈ ವೈರಾಣು ಹೆಚ್ಚು ಬಾಧಿಸುತ್ತಿದೆ ಎಂದು ಅಧಿಕಾರಿಗಳು ಹೇಳಿರುವುದು ವರದಿಯಾಗಿದೆ. COVIDಮಾದರಿಯ ಸ್ಥಿತಿ ಎದುರಾಗದಂತೆ ತಡೆಗಟ್ಟಲು ಚೀನಾ ಸರ್ಕಾರ ವೈರಸ್ ಅನ್ನು ನಿಭಾಯಿಸಲು ಪ್ರಯತ್ನ ಪಡುತ್ತಿದೆ. ಚೀನಾದಲ್ಲಿ ಎಚ್‌ಎಂಪಿವಿ ಪ್ರಕರಣಗಳು ಹೆಚ್ಚಾಗಿ ವರದಿಯಾಗಿವೆ ಮತ್ತು ರೈನೋವೈರಸ್‌ನಂತಹ ಇತರ ಸಾಂಕ್ರಾಮಿಕ ರೋಗಗಳನ್ನು ಹರಡುವ ಅಪಾಯದಲ್ಲಿದೆ ಎಂದು ಹೇಳಲಾಗಿದೆ.

# ಬೃಹತ್ HMPV ಜ್ವರದ ವರದಿ ತಳ್ಳಿಹಾಕಿದ ಚೀನಾ

**ನವದೆಹಲಿ:** ದೇಶದಲ್ಲಿ ಭಾರಿ ಪ್ರಮಾಣದಲ್ಲಿ ಜ್ವರ ಹರಡುತ್ತಿದೆ ಎಂಬ ವರದಿಗಳನ್ನು ಚೀನಾ ಶುಕ್ರವಾರ ತಳ್ಳಿಹಾಕಿದ್ದು, ಚಳಿಗಾಲದಲ್ಲಿ ಸಂಭವಿಸುವ ಉಸಿರಾಟದ ಕಾಯಿಲೆಗಳ ಪ್ರಕರಣಗಳು ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಕಡಿಮೆ ತೀವ್ರವಾಗಿವೆ ಎಂದು ಹೇಳಿದೆ. ವಿದೇಶಿಯರು ಚೀನಾಕ್ಕೆ ಪ್ರಯಾಣಿಸುವುದು ಸುರಕ್ಷಿತವಾಗಿದೆ ಎಂದು ಇಲ್ಲಿನ ವಿದೇಶಾಂಗ ಸಚಿವಾಲಯ ತಿಳಿಸಿದೆ.

ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿರುವ ವೀಡಿಯೊಗಳು ಆಸ್ಪತ್ರೆಗಳು ಕಿಕ್ಕಿರಿದಿರುವುದನ್ನು ತೋರಿಸುತ್ತವೆ. ''ಹಿಂದಿನ ವರ್ಷಕ್ಕೆ ಹೋಲಿಸಿದರೆ ರೋಗಗಳು ಕಡಿಮೆ ತೀವ್ರತೆಯನ್ನು ಹೊಂದಿವೆ ಮತ್ತು ಸಣ್ಣ ಪ್ರಮಾಣದಲ್ಲಿ ಹರಡುತ್ತವೆ'' ಎಂದು ಅವರು ಹೇಳಿದರು. ''ಚೀನಾದಲ್ಲಿರುವ ಚೀನೀ ನಾಗರಿಕರು ಮತ್ತು ವಿದೇಶಿಯರ ಆರೋಗ್ಯದ ಬಗ್ಗೆ ಚೀನಾ ಸರ್ಕಾರ ಕಾಳಜಿ ವಹಿಸುತ್ತದೆ ಎಂದು ನಾನು ನಿಮಗೆ ಭರವಸೆ ನೀಡಬಲ್ಲೆ. ಚೀನಾದಲ್ಲಿ ಪ್ರಯಾಣಿಸುವುದು ಸುರಕ್ಷಿತವಾಗಿದೆ'' ಎಂದು ಅವರು ಹೇಳಿದರು.

ಚಳಿಗಾಲದಲ್ಲಿ ಉಸಿರಾಟದ ಕಾಯಿಲೆಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕೆ ಸಂಬಂಧಿಸಿದಂತೆ ಚೀನಾದ ರಾಷ್ಟ್ರೀಯ ರೋಗ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಆಡಳಿತ ಹೊರಡಿಸಿದ ಮಾರ್ಗಸೂಚಿಗಳನ್ನು ಅವರು ಉಲ್ಲೇಖಿಸಿದರು.

ಕಳೆದ ಕೆಲವು ದಿನಗಳಿಂದ, ಚೀನಾದಲ್ಲಿ ಭಾರಿ ಜ್ವರದ ವರದಿಗಳು ವಿದೇಶಗಳಲ್ಲಿ, ವಿಶೇಷವಾಗಿ ಭಾರತ ಮತ್ತು ಇಂಡೋನೇಷ್ಯಾದಲ್ಲಿ ಹರಿದಾಡುತ್ತಿವೆ. ಆದಾಗ್ಯೂ, ಚಳಿಗಾಲದಲ್ಲಿ ಏಕಾಏಕಿ ವಾರ್ಷಿಕ ಘಟನೆಯಾಗಿದೆ ಎಂದು ಆರೋಗ್ಯ ಅಧಿಕಾರಿಗಳು ಹೇಳುತ್ತಾರೆ. ಕಳೆದ ಕೆಲವು ತಿಂಗಳುಗಳಿಂದ ಚೀನಾ ತೀವ್ರ ಶೀತ ಹವಾಮಾನವನ್ನು ಅನುಭವಿಸುತ್ತಿದೆ.



# 12 ಜನರನ್ನು ಕೊಂದು ತಲೆಗೆ ಗುಂಡು ಹಾರಿಸಿಕೊಂಡ ಬಂದೂಕುಧಾರಿ

**ಪೊಡ್ಗೊರಿಕಾ (ಮಾಂಟೆನೆಗ್ರೊ):** ಮಾಂಟೆನೆಗ್ರೊದಲ್ಲಿ ಇಬ್ಬರು ಮಕ್ಕಳು ಸೇರಿದಂತೆ ಕನಿಷ್ಠ 12 ಜನರನ್ನು ಭೀಕರವಾಗಿ ಗುಂಡಿಕ್ಕಿ ಕೊಂದ ನಂತರ ಆತ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ. ಪಶ್ಚಿಮ ಪಟ್ಟಣ ಸೆಟಿಂಜೆಯಲ್ಲಿ ಬುಧವಾರ ಬಾರ್‌ವೊಂದರಲ್ಲಿ ನಡೆದ ಜಗಳದ ನಂತರ ನಡೆದ ಈ ಗುಂಡಿನ ದಾಳಿಯಲ್ಲಿ ಕನಿಷ್ಠ ನಾಲ್ವರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗುಂಡು ಹಾರಿಸಿದ ವ್ಯಕ್ತಿಯನ್ನು 45 ವರ್ಷದ ಅಕೊ ಮಾರ್ಟಿನೊವಿಕ್ ಎಂದು ಗುರುತಿಸಲಾಗಿದ್ದು, ಬಾರ್ ಮಾಲೀಕ, ಬಾರ್ ಮಾಲೀಕನ ಮಕ್ಕಳು ಮತ್ತು ಅವರ ಕುಟುಂಬ ಸದಸ್ಯರನ್ನು ಹತ್ಯೆ ಮಾಡಲಾಗಿದೆ ಎಂದು ಗೃಹ ಸಚಿವ ಡ್ಯಾನಿಲೊ ಸರಾನೊವಿಕ್ ತಿಳಿಸಿದ್ದಾರೆ.ಹಿಂಸಾಚಾರದ ನಂತರ ಪರಾರಿಯಾಗಿದ್ದ ದಾಳಿಕೋರನನ್ನು ಪತ್ತೆ ಹಚ್ಚಿದ ಪೊಲೀಸರು ಆತನನ್ನು ಸುತ್ತುವರೆದಿದ್ದರು. ಈ ಸಂದರ್ಭದಲ್ಲಿ ಆತ ತಲೆಗೆ ಗುಂಡು ಹಾರಿಸಿಕೊಂಡು ಆತ ಮೃತಪಟ್ಟಿದ್ದಾನೆ ಎಂದು ಸರನೋವಿಕ್ ಹೇಳಿದರು. ರಾಜಧಾನಿ ಪೊಡ್ಗೋರಿಕಾದಿಂದ ವಾಯುವ್ಯಕ್ಕೆ 30 ಕಿಲೋಮೀಟರ್ ದೂರದಲ್ಲಿರುವ ಸೆಟಿಂಜೆ ಪಟ್ಟಣದಲ್ಲಿ ದಾಳಿಕೋರನನ್ನು ಹುಡುಕಲು ಪೊಲೀಸರು ವಿಶೇಷ ತಂಡಗಳನ್ನು ಕಳುಹಿಸಿದ್ದರು. ಪೊಲೀಸರು ಬೀದಿ ಬೀದಿಗಳಲ್ಲಿ ಪತ್ತೆ ಕಾರ್ಯಾಚರಣೆ ನಡೆಸಿ ಹಂತಕನನ್ನು ಪತ್ತೆ ಮಾಡಿದ್ದರು. ಗುಂಡು ಹಾರಿಸಿಕೊಂಡು ಗಾಯಗೊಂಡಿದ್ದ ಮಾರ್ಟಿನೊವಿಕ್ ನನ್ನು ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗ ಮಧ್ಯೆ ಮೃತಪಟ್ಟಿದ್ದಾನೆ ಎಂದು ಸರನೊವಿಕ್ ಹೇಳಿದರು.

# ಬಾಂಗ್ಲಾದಲ್ಲಿ ಹಿಂದೂಗಳ ಮೇಲೆ ದೌರ್ಜನ್ಯ ನಿಲ್ಲುವವರೆಗೂ ವಿಶೇಷ ಪ್ರಾರ್ಥನೆ; ಇಸ್ಕಾನ್

**ಢಾಕಾ:** ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲೆ ನಿರಂತರ ದೌರ್ಜನ್ಯ ನಡೆಯುತ್ತಿದೆ. ಈ ಬಗ್ಗೆ ಕೋಲ್ಕತಾದ ಇಸ್ಕಾನ್ ಅಸಮಾಧಾನ ವ್ಯಕ್ತಪಡಿಸಿ, ಹಿಂದೂಗಳು ಮತ್ತು ಇತರ ಧಾರ್ಮಿಕ ಅಲ್ಪಸಂಖ್ಯಾತರು ದೌರ್ಜನ್ಯವನ್ನು ಎದುರಿಸುತ್ತಿರುವ ಬಾಂಗ್ಲಾದೇಶದಲ್ಲಿ ಸಹಜ ಸ್ಥಿತಿಗೆ ಮರಳುವವರೆಗೆ ನಾವು ಪ್ರಾರ್ಥನೆ ನಡೆಸುತ್ತೇವೆ ಎಂದು ಶುಕ್ರವಾರ ಹೇಳಿಕೆ ನೀಡಿದೆ.

ಕೋಲ್ಕತ್ತಾದ ಇಂಟರ್ನ್ಯಾಷನಲ್ ಸೊಸೈಟಿ ಫಾರ್ ಕೃಷ್ಣ ಕಾನ್ಶಿಯಸ್ನೆಸ್ ಬಾಂಗ್ಲಾದೇಶದ ಧಾರ್ಮಿಕ ಅಲ್ಪಸಂಖ್ಯಾತರ ಸುರಕ್ಷತೆ ಮತ್ತು ಭದ್ರತೆಗಾಗಿ ಹಾಗೂ ಜೈಲಿನಲ್ಲಿರುವ ಹಿಂದೂ ಆಧ್ಯಾತ್ಮಿಕ ನಾಯಕ ಚಿನ್ಮಯ್




ಕೃಷ್ಣ ದಾಸ್ ಅವರ ಬಿಡುಗಡೆಗಾಗಿ ಒಂದು ತಿಂಗಳಿನಿಂದ ಆಲ್ಬರ್ಟ್ ರೋಡ್ ಕೇಂದ್ರದಲ್ಲಿ ದೈನಂದಿನ ಪ್ರಾರ್ಥನೆಗಳನ್ನು ನಡೆಸುತ್ತಿದೆ. ಈ ಬಗ್ಗೆ ಮಾತನಾಡಿದ ಕೋಲ್ಕತ್ತಾ ಇಸ್ಕಾನ್ ವಕ್ತಾರ ರಾಧರಾಮ್ ದಾಸ್ ''ಬಾಂಗ್ಲಾದೇಶದ ಸಾಮಾನ್ಯ ಸ್ಥಿತಿಗೆ ಮರಳುವವರೆಗೆ ನಾವು ಅಲ್ಪಸಂಖ್ಯಾತರಿಗಾಗಿ ನಮ್ಮ ದೈನಂದಿನ ಪ್ರಾರ್ಥನೆಯನ್ನು ಮುಂದುವರಿಸುತ್ತೇವೆ'' ಎಂದು ಹೇಳಿದ್ದಾರೆ.

ಚಿನ್ಮಯ್ ದಾಸ್ ಅವರ ಬಗ್ಗೆ ಮಾತನಾಡಿದ ಅವರು ಚಿತ್ತಗಾಂಗ್ ನ್ಯಾಯಾಲಯದಲ್ಲಿ ಜಾಮೀನು ಸಿಗದಿದ್ದಕ್ಕೆ ಬೇಸರ ವ್ಯಕ್ತಪಡಿಸಿ, ಬಾಂಗ್ಲಾದ ಹೈಕೋರ್ಟ್‌ನಲ್ಲಿ ಜಮೀನು ಸಿಗುವ ನಿರೀಕ್ಷೆ ಇದೆ ಎಂದು ಹೇಳಿದ್ದಾರೆ.

ಬಾಂಗ್ಲಾದೇಶದಲ್ಲಿ ಶೇಖ್ ಹಸೀನಾ ಸರ್ಕಾರದ ಪತನದ ನಂತರ ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರ ಬಂದಿದೆ. ಅಲ್ಲಿಂದ ಇಲ್ಲಿಯವರೆಗೆ ಅಲ್ಪ ಸಂಖ್ಯಾತ ಸಮುದಾಯವಾದ ಹಿಂದೂಗಳ ಮೇಲೆ ದೌರ್ಜನ್ಯ ಎಸಗಲಾಗುತ್ತಿದೆ.

# ನಟ ಅಲ್ಲು ಅರ್ಜುನ್‌ಗೆ ಜಾಮೀನು ಮಂಜೂರು

**ಚನ್ನೈ:** 'ಪುಷ್ಪ 2: ದಿ ರೂಲ್' ಚಿತ್ರದ ಪ್ರದರ್ಶನದ ವೇಳೆ ಸಂಧ್ಯಾ ಥಿಯೇಟರ್‌ನಲ್ಲಿ ಸಂಭವಿಸಿದ ಕಾಲ್ತುಳಿತ ಘಟನೆಗೆ ಸಂಬಂಧಿಸಿದಂತೆ ದಕ್ಷಿಣ ಚಿತ್ರರಂಗದ ಖ್ಯಾತ ನಟ ಅಲ್ಲು ಅರ್ಜುನ್ ಅವರಿಗೆ ನಾಂಪಲ್ಲಿ ನ್ಯಾಯಾಲಯವು ಸಾಮಾನ್ಯ ಜಾಮೀನು ಮಂಜೂರು ಮಾಡಿದೆ. ಭಾರಿ ಜನಸಂದಣಿಯಿಂದಾಗಿ ಸಂಭವಿಸಿದ ಕಾಲ್ತುಳಿತದಲ್ಲಿ 35 ವರ್ಷದ ಮಹಿಳೆ ಸಾವನಪ್ಪಿ, ಅವರ ಮಗ ತೀವ್ರವಾಗಿ ಗಾಯಗೊಂಡಿದ್ದ. ಆತನಿಗೆ ಚಿಕಿತ್ಸೆ ಮುಂದುವರಿದಿದೆ. ಈ ಹಿಂದೆ ತನ್ನ ತೀರ್ಪನ್ನು ಜನವರಿ 3ಕ್ಕೆ ಕಾಯ್ದಿರಿಸಿದ್ದ ನ್ಯಾಯಾಲಯ ಅಂತಿಮವಾಗಿ ಇಂದು ತನ್ನ ಆದೇಶ ಪ್ರಕಟಿಸಿದ್ದು, ನಟನಿಗೆ ರಿಲೀಫ್ ನೀಡಿದೆ. ಚಿಕ್ಕಡಪಲ್ಲಿ ಪೊಲೀಸರು ಜಾಮೀನು ಮನವಿಯನ್ನು ಬಲವಾಗಿ ವಿರೋಧಿಸಿದ್ದರು. ಕಾರ್ಯಕ್ರಮದ ಸುರಕ್ಷತಾ ಕ್ರಮಗಳನ್ನು ಪ್ರಶ್ನಿಸಿ ಕೌಂಟರ್-ಅಫಿಡವಿಟ್ ಸಲ್ಲಿಸಿದ್ದರು. ಜನಸಂದಣಿ ನಿರ್ವಹಣೆಯಲ್ಲಿ ಲೋಪವಾಗಿದೆ ಎಂದು ಆರೋಪಿಸಿದ್ದರು.



ಅಲ್ಲು ಅರ್ಜುನ್ ಅವರ ಕಾನೂನು ತಂಡ ಈ ಮೇಲೆ ತಿಳಿಸಲಾದ ಆರೋಪಗಳನ್ನು ಎದುರಿಸಿತು. ನಟ ನೇರವಾಗಿ ಘಟನೆಯಲ್ಲಿ ಭಾಗಿಯಾಗಿಲ್ಲ ಮತ್ತು ಅವರ ವಿರುದ್ಧದ ಆರೋಪಗಳು ಬಿಎಸ್‌ಎನ್ ಸೆಕ್ಷನ್ 105ರ ಅಡಿ ಬರುವುದಿಲ್ಲ ಎಂದು ವಾದಿಸಿದರು. ಆದರೆ ತನಿಖೆಯೊಂದಿಗೆ ಅವರ ಸಹಕಾರ ಮತ್ತು ನ್ಯಾಯವನ್ನು ಖಚಿತಪಡಿಸಿಕೊಳ್ಳಲು ಅವರು ಹೊಂದಿರುವ ಬದ್ಧತೆಯನ್ನು ಒತ್ತಿ ಹೇಳಿದರು. ಎರಡೂ ಕಡೆಯ ವಾದಗಳನ್ನು ಆಲಿಸಿದ ನ್ಯಾಯಾಲಯವು ನಟನಿಗೆ ರೆಗ್ಯುಲರ್ ಬೇಲ್ ಮಂಜೂರು ಮಾಡಿತು. ಕಸ್ಟಡಿ ಇಲ್ಲದೇ ತನಿಖೆ ಮುಂದುವರಿಸಬಹುದು ಎಂದು ಸೂಚಿಸಿತು.

# ಶಬರಿಮಲೆ ಯಾತ್ರೆ ವೇಳೆ ಮಸೀದಿಗಳಿಗೆ ಭೇಟಿ ನೀಡಬೇಡಿ: ಶಾಸಕ ರಾಜಾ ಸಿಂಗ್ ಮನವಿ

**ನವದೆಹಲಿ:** ಕೇರಳದ ಶಬರಿಮಲೆಗೆ ಭೇಟಿ ನೀಡುವ ಅಯ್ಯಪ್ಪ ಭಕ್ತರು ತಮ್ಮ ತೀರ್ಥಯಾತ್ರೆಯ ಸಮಯದಲ್ಲಿ ಯಾವುದೇ ಮಸೀದಿಗಳಿಗೆ ಹೋಗಬಾರದು ಎಂದು ತೆಲಂಗಾಣದ ಬಿಜೆಪಿ ಶಾಸಕ ರಾಜಾ ಸಿಂಗ್ ಶುಕ್ರವಾರ ಒತ್ತಾಯಿಸಿದ್ದಾರೆ

ಭಕ್ತರು 'ಅಯ್ಯಪ್ಪ ದೀಕ್ಷೆ'ಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಮತ್ತು ಅವರು ಮಸೀದಿಗೆ (ವಾವರ್) ಹೋದರೆ ಅವರು ಅಶುದ್ಧರಾಗುತ್ತಾರೆ ಎಂದು ಸಿಂಗ್ ಸುದ್ದಿಗಾರರಿಗೆ ತಿಳಿಸಿದರು.

ಭಕ್ತರನ್ನು ಮಸೀದಿಗೆ ಭೇಟಿ ನೀಡುವಂತೆ ಮಾಡುವುದು ಪಿತೂರಿ ಎಂದು ಗೋಶಾಮಹಲ್ ಶಾಸಕರು ಹೇಳಿದರು.

ತೆಲಂಗಾಣ ಮತ್ತು ಆಂಧ್ರಪ್ರದೇಶದ ಮುಖ್ಯಮಂತ್ರಿಗಳಾದ ಎ.ರೇವಂತ್ ರೆಡ್ಡಿ ಮತ್ತು ಎನ್.ಚಂದ್ರಬಾಬು ನಾಯ್ಡು ಅವರು ಭಕ್ತರಿಗೆ ವಸತಿ ನಿರ್ಮಿಸಲು 10 ಎಕರೆ ಭೂಮಿಯನ್ನು ಕೋರಿ ಕೇರಳ ಸರ್ಕಾರಕ್ಕೆ ಪತ್ರ ಬರೆಯಬೇಕು ಎಂದು ಅವರು ಒತ್ತಾಯಿಸಿದರು



# ಮಹಾಕುಂಭಕ್ಕೆ 17 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿದೆ 84 ಕಂಬಗಳು

**ನವದೆಹಲಿ:** ಉತ್ತರ ಪ್ರದೇಶದ ಪ್ರಯಾಗ್‌ರಾಜ್ ನಲ್ಲಿ 12 ವರ್ಷಗಳ ನಂತರ ನಡೆಯಲಿರುವ ಮಹಾಕುಂಭದ ಸಿದ್ಧತೆಗಳು ಭರದಿಂದ ಸಾಗಿವೆ. ಈ ಸರಣಿಯ ಅಡಿಯಲ್ಲಿ, ಉತ್ತರ ಪ್ರದೇಶ ಸರ್ಕಾರವು ವಿಮಾನ ನಿಲ್ದಾಣಕ್ಕೆ ಹೋಗುವ ರಸ್ತೆಯಲ್ಲಿ 84 ಪಿಲ್ಲರ್‌ಗಳನ್ನು ಸ್ಥಾಪಿಸುತ್ತಿದೆ. ಕೆಂಪು ಮರಳುಗಲ್ಲಿನಿಂದ ಮಾಡಿದ ಈ ಕಂಬಗಳಿಗೆ 'ಪಿಲ್ಲರ್ಸ್ ಆಫ್ ಫೇತ್' ಎಂದು ಹೆಸರಿಸಲಾಗಿದೆ. ಸುಮಾರು 17 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಈ ಕಂಬಗಳ ಮೇಲೆ ಶಿವನ 108 ನಾಮಗಳನ್ನು ಬರೆಯಲಾಗಿದೆ. ಹಾಗೆಯೇ ಸನಾತನದ ಪ್ರತೀಕವಾದ ಕಲಶವನ್ನು ಸಹ ಎಲ್ಲಾ ಕಂಬಗಳ ಮೇಲೆ ಇರಿಸಲಾಗಿದೆ. ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅಮೃತ್ ಅಭಿಜತ್ ಪ್ರಕಾರ, ''ರಾಜಸ್ಥಾನದ ಬನ್ಸಿ ಪಹಾರ್ ಪುರದಲ್ಲಿ ಈ ಕಂಬಗಳನ್ನು ನಿರ್ಮಿಸಲಾಗಿದೆ ಮತ್ತು ಪ್ರತಿಯೊಂದಕ್ಕೂ ಸುಮಾರು 20 ಲಕ್ಷ ರೂಪಾಯಿ ವೆಚ್ಚವಾಗಿದೆ. ಯಾವುದೇ ವ್ಯಕ್ತಿ ಈ



ಕಂಬಗಳಿಗೆ ಪ್ರದಕ್ಷಿಣೆ ಹಾಕಿದಾಗ, ಅವರು 84 ಲಕ್ಷ ಜನ್ಮಗಳ ಯಾತ್ರೆಯನ್ನು ಪೂರ್ಣಗೊಳಿಸಿದ ಅನುಭವವನ್ನು ಹೊಂದುತ್ತಾರೆ'' ಎಂದು ಹೇಳಿದ್ದಾರೆ. ಮಹಾಕುಂಭದಿಂದ ವಿಮಾನ ನಿಲ್ದಾಣಕ್ಕೆ ಹೋಗುವ ಮಾರ್ಗದಲ್ಲಿ ಈ ಕಂಬಗಳನ್ನು ಅಳವಡಿಸಿರುವ ಸಂಸ್ಥೆಯ ಅಧಿಕಾರಿಗಳ ಪ್ರಕಾರ, ಈ ಕಂಬಗಳನ್ನು ಜೋಡಿಸುವುದರಲ್ಲಿ ನಿಜವಾದ ಕುಶಲತೆ ಇದೆ.84 ಕಂಬಗಳು ವಾಸ್ತವವಾಗಿ ಈ 84 ಕಂಬಗಳನ್ನು ನಾಲ್ಕು ಭಾಗಗಳಲ್ಲಿ ಅಳವಡಿಸಲಾಗುತ್ತಿದೆ. ಈ ನಾಲ್ಕು ಭಾಗಗಳು ಸನಾತನ ಧರ್ಮದ ನಾಲ್ಕು ವೇದಗಳು, ನಾಲ್ಕು ಆಶ್ರಮಗಳು, ನಾಲ್ಕು ವರ್ಣಗಳು ಮತ್ತು ನಾಲ್ಕು ದಿಕ್ಕುಗಳನ್ನು ಪ್ರತಿನಿಧಿಸುತ್ತವೆ. ಇಂತಹ ಪರಿಸ್ಥಿತಿಯಲ್ಲಿ ಒಮ್ಮೆ ಈ ಕಂಬಗಳ ಪ್ರದಕ್ಷಿಣೆ ಮುಗಿದರೆ 84 ಲಕ್ಷ ಜನ್ಮಗಳ ಯಾತ್ರೆ ಪೂರ್ಣಗೊಳ್ಳಲಿದೆ. ಪ್ರತಿ ಕಂಬದ ಮೇಲೆ ಶಿವನ 108 ಹೆಸರುಗಳನ್ನು ದಾಖಲಿಸಲಾಗಿದೆ ಮತ್ತು ಈ ಹೆಸರುಗಳನ್ನು ನಾಲ್ಕು ಭಾಗಗಳಲ್ಲಿ ಬರೆಯಲಾಗಿದೆ ಎಂದು ಹೇಳಲಾಗುತ್ತದೆ. ಹೀಗಾಗಿ ಈ 84 ಸ್ತಂಭಗಳ ಕ್ರಾಂತಿ ಬ್ರಹ್ಮಾಂಡದ ಕ್ರಾಂತಿಗೆ ಸಮಾನವಾಗಿರುತ್ತದೆ.

**ಈ ಕಂಬಗಳು ಆತ್ಮದ ಚಲನೆಯನ್ನು ಪ್ರತಿನಿಧಿಸುತ್ತವೆ:** ವಾಸ್ತವವಾಗಿ, ಆತ್ಮವು ಯಾವಾಗಲೂ ತನ್ನದೇ ಆದ ಅಸ್ತಿತ್ವವನ್ನು ಹುಡುಕುತ್ತದೆ. ಇದಕ್ಕಾಗಿ ಅವರು ವಿವಿಧ ಅವತಾರಗಳಲ್ಲಿ 84 ಲಕ್ಷ ಬಾರಿ ಭೂಮಿಗೆ ಬರಬೇಕು. ಪುರಾಣದ ನಂಬಿಕೆಗಳ ಪ್ರಕಾರ, ಈ ಸಂಪೂರ್ಣ ಚಕ್ರವನ್ನು 21 ಲಕ್ಷದ ನಾಲ್ಕು ವರ್ಗಗಳಾಗಿ ವಿಂಗಡಿಸಲಾಗಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಮಂಜುಮ್ಮಲ್ ಬಾಯ್ಸ್' ನಿರ್ದೇಶಿಸಿದ್ದ ಚಿದಂಬರಂ ಜೊತೆ ಕೆವಿಎನ್ ಪ್ರೊಡಕ್ಷನ್ಸ್ ಹೊಸ ಚಿತ್ರ

ಕೆವಿಎನ್ ಪ್ರೊಡಕ್ಷನ್ಸ್ ಮತ್ತು ತೆಸ್ಪಿಯನ್ ಫಿಲ್ಮ್ಸ್ ಒಂದು ಹೊಸ ಚಿತ್ರಕ್ಕಾಗಿ ಕೈ ಜೋಡಿಸಿದ್ದಾರೆ. ಈ ಮಹತ್ವಾಕಾಂಕ್ಷೆಯ ಚಿತ್ರವನ್ನ ಹೊಸ ಶೈಲಿಯ ಚಿತ್ರಗಳಿಂದ ಇಂದಿನ ಯುವ ಸಮುದಾಯದ ಮನ ಗೆದ್ದಿರುವ ನಿರ್ದೇಶಕ ಚಿದಂಬರಂ ಮತ್ತು ಜೀತು ಮಾಧವನ್ ಜೊತೆಯಾಗಿ ಹೊಸ ಸಿನಿಮಾಗಾಗಿ ಸಾಥ್ ನೀಡಿದ್ದಾರೆ.

ತೆಸ್ಪಿಯನ್ ಫಿಲ್ಮ್ಸ್ ಸಂಸ್ಥೆಯ ರೂವಾರಿ ಶ್ರೀಮತಿ ಶೈಲಜಾ ದೇಸಾಯಿ ಜೊತೆಗೆ ಕೈ ಜೋಡಿಸಿರುವ ಏಗಿಓ ಪ್ರೊಡಕ್ಷನ್ಸ್‌ನ ರೂವಾರಿ ವೆಂಕಟ್ ಕೆ. ನಾರಾಯಣ ಅವರು ಸಂತಸ ವ್ಯಕ್ತಪಡಿಸಿದ್ದಾರೆ. 'ಮಂಜುಮ್ಮಲ್ ಬಾಯ್ಸ್' ನಿರ್ದೇಶಿಸಿದ್ದ ಚಿದಂಬರಂ ಜೊತೆಗೆ, ಇತ್ತೀಚೆಗೆ ಎಲ್ಲರ ಮನಗೆದ್ದಿದ್ದ 'ಆವೇಶಮ್' ಖ್ಯಾತಿಯ ನಿರ್ದೇಶಕ ಜಿತು ಮಾಧವನ್ ಈ ಹೊಸ ಯೋಜನೆಗೆ ಜೊತೆಯಾಗಲಿದ್ದಾರೆ.

ಅಷ್ಟೇ ಅಲ್ಲ ಈ ಚಿತ್ರದಲ್ಲಿ ನುರಿತ ತಂತ್ರಜ್ಞರ ದೊಡ್ಡ ಪಡೆಯೇ ಕೆಲಸ ಮಾಡಲಿದ್ದಾರೆ. ಛಾಯಾಗ್ರಹಣಕ್ಕೆ ಶೈಜು ಖಾಲೆದ್, ಸಂಗೀತ ನೀಡಲು ಸುಶಿನ್ ಶ್ಯಾಮ್ ಆಯ್ಕೆಯಾದರೆ ಎಡಿಟಿಂಗ್ ಜವಾಬ್ದಾರಿ ವಿವೇಕ್ ಹರ್ಷನ್ ಹೆಗಲಿಗೇರಿದೆ.

ಕೆವಿಎನ್ ಪ್ರೊಡಕ್ಷನ್ಸ್ ಸಂಸ್ಥಾಪಕ ವೆಂಕಟ ಕೆ ನಾರಾಯಣ ಅವರು ಮಾತನಾಡಿ, ನಾವು ನಮ್ಮ ಸಂಸ್ಥೆಯಿಂದ ಭಿನ್ನ ಬಗೆಯ, ಸದಭಿರುಚಿಯ



ಮನರಂಜನಾತ್ಮಕ ಸಿನಿಮಾಗಳನ್ನ ಕೊಡೋ ದೃಷ್ಟಿಯಿಂದ ಕೆಲಸ ಮಾಡುತ್ತೇವೆ. ಅದರಂತೆ ಇಂಥ ಹೊಸ ಬಗೆಯ ಚಿಂತನೆಯುಳ್ಳ, ನಿರ್ದೇಶಕರಿಂದ ಜನರ ಮನರಂಜಿಸುವ ಕೆಲಸಕ್ಕೆ ಕೈ ಹಾಕಿರೋದೆ ಒಂದು ಮೈನವಿರೇಳಿಸೊ ಪ್ರಯತ್ನ. ಇಂತಹ ತಂಡದ ಜೊತೆಗೆ ಸಿನಿಮಾ ಮಾಡೋ ಮೂಲಕ ಮಲಯಾಳಂ ಚಿತ್ರರಂಗಕ್ಕೆ ಕಾಲಿಡುತ್ತಿರುವ ನಮಗೆ ಹೆಮ್ಮೆ ತಂದಿದೆ.

ಒಂದು ಕಥೆಯನ್ನ ತೆರೆ ಮೇಲೆ ತರೊ ಪ್ರಕ್ರಿಯೆನೇ ರೋಮಾಂಚಕ. ನನ್ನಂತೆಯೇ ಒಳ್ಳೆಯ ಕಥೆಗೆ, ಸ್ಕ್ರಿಪ್ಟ್‌ಗೆ ಒತ್ತು ಕೊಡುವ ತಂಡದ ಜೊತೆ ಕೆಲಸ ಮಾಡ್ತಿರೋದು ನಿಜಕ್ಕೂ ಹೆಮ್ಮೆಯ ವಿಷಯ. ಇದು ನನ್ನ ಹೃದಯಕ್ಕೆ ಹತ್ತಿರವಾದ ಕಥೆಯಾಗಿದೆ. ಸಿನಿಮಾ ಕೃಷಿಯ ಬಗ್ಗೆ ಇಷ್ಟೊಂದು ಗಾಢ ಪ್ರೀತಿಯುಳ್ಳ ತಂಡದ ಜೊತೆ ಕೆಲಸ ಮಾಡೋದೆ ಒಂದು ದೊಡ್ಡ ಖುಷಿ ಅಂತ ಅಭಿಪ್ರಾಯಪಟ್ಟರು.

ಕೆವಿಎನ್ ಪ್ರೊಡಕ್ಷನ್ಸ್ ಪಾಲಿಗೆ 2025 ಸುವರ್ಣ ಸಮಯವಾಗಲಿದೆ. ಈಗಾಗಲೇ ಯಶ್ ಜೊತೆ ಟಾಕ್ಸಿಕ್, ತಮಿಳಿನ ದಳಪತಿ ಜೊತೆ 'ತಳಪತಿ 69' ಸಿನಿಮಾ, ಹಿಂದಿಯಲ್ಲಿ ಪ್ರಿಯದರ್ಶನ್ ಜೊತೆ ಒಂದು ಸಸ್ಪೆನ್ಸ್ ಥ್ರಿಲ್ಲರ್ ಸಿನಿಮಾ, ಹಾಗೆಯೇ ಧ್ರುವ ಸರ್ಜಾ ಜೊತೆ 'ಕೆಡಿ' ಸಿನಿಮಾವಿದೆ. ಇದೀಗ ಮಲಯಾಳಂ ಚಿತ್ರರಂಗಕ್ಕೆ ಹೀಗೆ ನುರಿತರೊಂದಿಗೆ ಕಾಲಿಡ್ತಿದ್ದು, ಮುಂದಿನ ದಿನಗಳಲ್ಲಿ ಇನ್ನೂ ದೊಡ್ಡ ದೊಡ್ಡ ಯೋಜನೆಗಳನ್ನ ಹಾಕಿಕೊಂಡಿರೋ ಸೂಚನೆ ಕೆವಿಎನ್ ಸಂಸ್ಥೆ ಕೊಡುತ್ತಿದೆ.



# ಮುತ್ತು ಕೊಡೋ ಸ್ಪರ್ಧೆಯಲ್ಲಿ ಮದುವೆ ಆದ ಧನರಾಜ್‌ನೇ ಸೋಲಿಸಿದ ಬ್ಯಾಚುಲರ್ಸ್

ಬಿಗ್ ಬಾಸ್ ಮನೆಯಲ್ಲಿ ನಿತ್ಯ ಹೊಸ ಹೊಸ ಟಾಸ್ಕ್ ಗಳನ್ನು ನೀಡಲಾಗುತ್ತದೆ. ಇದನ್ನು ಸ್ಪರ್ಧಿಗಳು ಯಾವ ರೀತಿಯಲ್ಲಿ ಆಡುತ್ತಾರೆ ಅನ್ನೋದು ಮುಖ್ಯವಾಗುತ್ತದೆ. ಇದು ಅವರ ಭವಿಷ್ಯವನ್ನು ಕೂಡ ನಿರ್ಧರಿಸುತ್ತದೆ. ನೋಡೋಕೆ ಆಟ ಸಿಂಪಲ್ ಆಗಿ ಕಂಡ ಹೊರತಾಗಿಯೂ ಸ್ಪರ್ಧಿಗಳು ಸಾಕಷ್ಟು ಸಮಯ ತೆಗೆದುಕೊಂಡ ಉದಾಹರಣೆ ಇದೆ. ಈಗ ದೊಡ್ಮನೆಯಲ್ಲಿ ಹಾಗೆಯೇ ಆಗಿದೆ. ಮುತ್ತು ಕೊಡೋ ಸ್ಪರ್ಧೆಯಲ್ಲಿ ಧನರಾಜ್ ನ ಇಬ್ಬರು ಬ್ಯಾಚುಲರ್ಸ್ ಸೋಲಿಸಿದ್ದಾರೆ.

ಈ ವಾರದ ಕ್ಯಾಪ್ಟನ್ಸಿ ಓಟಕ್ಕೆ ಆಯ್ಕೆ ಆಗಲು ಟಾಸ್ಕ್ ಒಂದನ್ನು ನೀಡಲಾಗಿತ್ತು. ಈ ಟಾಸ್ಕ್ ನ ಚೈತ್ರಾ, ಹನುಮಂತ ಹಾಗೂ ಧನರಾಜ್ ಆಡಬೇಕಿತ್ತು. ಧನರಾಜ್ ಅವರು ವಿವಾಹ ಆದವರು. ಚೈತ್ರಾ ಹಾಗೂ ಹನುಮಂತ ಮದುವೆ ಫಿಕ್ಸ್ ಆಗಿದ್ದು, ದೊಡ್ಮನೆಯಿಂದ ಹೊರ ಹೋದ ಬಳಿಕ ಅವರು ವಿವಾಹ ಆಗಲಿದ್ದಾರೆ. ಇವರಿಬ್ಬರು ಗೆದ್ದು ಧನರಾಜ್ ನ ಸೋಲಿಸಿರೋದು ಸಾಕಷ್ಟು ಚರ್ಚೆಗೆ ಕಾರಣ ಆಗಿದೆ.

ತುಟಿಗೆ ಲಿಪ್ ಸ್ಟಿಕ್ ಹಚ್ಚಿಕೊಂಡು ಖಾಲಿ ಹಾಳೆಯ ಮೇಲೆ ಮುತ್ತು



ಕೊಡಬೇಕಿತ್ತು. ಈ ಸ್ಪರ್ಧೆಯಲ್ಲಿ ಹನುಮಂತ 70 ಮುತ್ತುಗಳು, ಚೈತ್ರಾ 77 ಮುತ್ತನ್ನು ಕೊಟ್ಟು ಟಾಸ್ಕ್ ವಿನ್ ಆಗಿದ್ದಾರೆ. ಧನರಾಜ್ ಅವರು ಮುತ್ತಿನ ಸಂಖ್ಯೆ 51 ಮಾತ್ರ. ಈ ಮೂಲಕ ಅವರು ಟಾಸ್ಕ್ ನಲ್ಲಿ ಸೋತರು. ಈ ಬಗ್ಗೆ ಕೆಲವರು ಟೀಕೆ ಮಾಡಿದ್ದಾರೆ.

ಈ ಬಗ್ಗೆ ಮಾತನಾಡಿದ ತ್ರಿವಿಕ್ರಂ, 'ಇಬ್ಬರು ಬ್ಯಾಚುಲರ್ಸ್ ಸೇರಿ ಒಬ್ಬ ವಿವಾಹಿತನನ್ನು ಸೋಲಿಸಿದರಲ್ಲ, ಇವರಿಗೆ ಬೇಕು ಬೇಕು ಎನ್ನುವ ಹಂಬಲ ಇದೆ. ಧನರಾಜ್ ಗೆ ಸಾಕು ಸಾಕೆನಿಸಿದೆ' ಎಂದು ಪೋಲಿ ಮಾತುಗಳನ್ನು ಆಡಿದರು. 'ನನ್ನ ಪತ್ನಿ ರೊಮ್ಯಾಂಟಿಕ್ ಆಗಿ ಇರು ಎಂದು ಯಾಕೆ ಹೇಳುತ್ತಿದ್ದರು ಈಗ ಗೊತ್ತಾಗಿದೆ' ಎಂದರು ಧನರಾಜ್.

ಕೊನೆಯ ವಾರಗಳಲ್ಲಿ ಕ್ಯಾಪ್ಟನ್ ಆಗೋದು ತುಂಬಾನೇ ಮುಖ್ಯವಾಗುತ್ತದೆ. ಈ ಬಾರಿ ರಜತ್ ಅವರು ಕ್ಯಾಪ್ಟನ್ ಆಗಿದ್ದಾರೆ. ಅವರ ಆಡಳಿತದಲ್ಲಿ ಮನೆ ಸಾಗಲಿದೆ. ಈಗ ಅವರು ಕ್ಯಾಪ್ಟನ್ ಆಗಿರುವುದರಿಂದ ಮುಂದಿನ ವಾರದ ಎಲಿಮಿನೇಷನ್ ನಿಂದ ಅವರು ಬಚಾವ್ ಆಗಿದ್ದಾರೆ. ಕ್ಯಾಪ್ಟನ್ ಆಗುವ ಕನಸು ಕೂಡ ಈಡೇರಿದೆ.

# ಕನ್ನಡದ ಹೊಸ ಸಿನಿಮಾದಲ್ಲಿ 'ಜೇಮ್ಸ್' ನಟಿ ಪ್ರಿಯಾ ಆನಂದ್

ಸೌತ್ ಬ್ಯೂಟಿ ಪ್ರಿಯಾ ಆನಂದ್ ಕನ್ನಡದ ಸಿನಿಮಾಗಳಲ್ಲಿ ನಟಿಸುತ್ತಾ ಕನ್ನಡವರಾಗಿ ಪ್ರೇಕ್ಷಕರ ಮನಗೆದ್ದಿದ್ದಾರೆ. ಇದೀಗ ಕನ್ನಡ ಸಿನಿಪ್ರೇಕ್ಷಕರಿಗೆ ಅವರು ಗುಡ್ ನ್ಯೂಸ್ ಕೊಟ್ಟಿದ್ದಾರೆ. ಸ್ಯಾಂಡಲ್‌ವುಡ್‌ನಲ್ಲಿ ನಟಿಸಲು ಮತ್ತೆ 'ಜೇಮ್ಸ್' ನಟಿ ಪ್ರಿಯಾ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ.



ರಾಜಕುಮಾರ, ಜೇಮ್ಸ್, ಆರೆಂಜ್, ಕರಟಕ ದಮನಕ ಸಿನಿಮಾಗಳಲ್ಲಿ ನಟಿಸಿ ಪ್ರಿಯಾ ಸೈ ಎನಿಸಿಕೊಂಡಿದ್ದಾರೆ. ಇದೀಗ ವಿನೋದ್ ಪ್ರಭಾಕರ್‌ಗೆ ನಾಯಕಿಯಾಗಿ ಬಲರಾಮನ ಅಡ್ಡಾಗೆ ಅವರು ಎಂಟ್ರಿ ಕೊಟ್ಟಿದ್ದಾರೆ. ಪವರ್‌ಫುಲ್ ಪಾತ್ರದಲ್ಲಿ ಅವರು ಕಾಣಿಸಿಕೊಳ್ಳಲಿದ್ದಾರೆ.

ವಿನೋದ್ ಪ್ರಭಾಕರ್ ನಟನೆಯ 25ನೇ ಚಿತ್ರಕ್ಕೆ 'ಬಲರಾಮನ ದಿನಗಳು' ಎಂದು ಟೈಟಲ್ ಫಿಕ್ಸ್ ಆಗಿದೆ. ಈ ಚಿತ್ರದಲ್ಲಿ ಪ್ರಿಯಾ ನಾಯಕಿಯಾಗಿದ್ದು, ಈಗಾಗಲೇ ಚಿತ್ರೀಕರಣ ಶುರುವಾಗಿದೆ. ಈ ಕುರಿತು ಚಿತ್ರತಂಡ ಕೂಡ ಅಧಿಕೃತವಾಗಿ ತಿಳಿಸಿದೆ. 80ರ ಕಾಲಘಟ್ಟದ ಭೂಗತಲೋಕದ ಹಿನ್ನೆಲೆಯುಳ್ಳ ವಿಭಿನ್ನ ಕಥೆ ಇದಾಗಿದೆ. ಇದಕ್ಕೆ 'ಆ ದಿನಗಳು' ನಿರ್ದೇಶಕ ಕೆ.ಎಂ ಚೈತನ್ಯ ನಿರ್ದೇಶನ ಮಾಡಲಿದ್ದಾರೆ. ಅಂದಹಾಗೆ, 'ರಾಜಕುಮಾರ' ಮತ್ತು 'ಜೇಮ್ಸ್' ಈ ಎರಡು ಸಿನಿಮಾಗಳಲ್ಲಿ ಪುನೀತ್ ರಾಜ್‌ಕುಮಾರ್‌ಗೆ ಪ್ರಿಯಾ ನಾಯಕಿಯಾಗಿದ್ರು. ಈ ಹಿಂದೆ ಹಲವು ಸಂದರ್ಶನಗಳಲ್ಲಿ ನನ್ನ ನೆಚ್ಚಿನ ನಟ ಅಪ್ಪು ಎಂದು ನಟಿ ಹೇಳಿದ್ದರು. ಅಪ್ಪು ಮೇಲಿನ ಅವರು ತೋರೋ ಗೌರವ ಮತ್ತು ಕನ್ನಡ ಸಿನಿಮಾ ಮೇಲಿನ ಅವರ ಪ್ರೀತಿಗೆ ಫ್ಯಾನ್ಸ್ ಮೆಚ್ಚುಗೆ ವ್ಯಕ್ತಪಡಿಸಿದ್ದರು.

# ಸಿದ್ಧಗಂಗಾ ಮಠಕ್ಕೆ ನಟ ಡಾಲಿ ಧನಂಜಯ್ ಭೇಟಿ



ತುಮಕೂರಿನ ಸಿದ್ದಗಂಗಾ ಮಠಕ್ಕೆ ನಟ ಡಾಲಿ ಧನಂಜಯ್ ಭೇಟಿ ನೀಡಿದ್ದಾರೆ. ವಿವಾಹ ಸಮಾರಂಭಕ್ಕೆ ಆಗಮಿಸುವಂತೆ ಸಿದ್ದಗಂಗಾ ಶ್ರೀಗಳಿಗೆ ಡಾಲಿ ಆಹ್ವಾನ ನೀಡಿದ್ದಾರೆ.

ಮಠಕ್ಕೆ ಭೇಟಿ ನೀಡಿದ ನಟ, ಮೊದಲು ಶಿವಕುಮಾರ ಶ್ರೀಗಳ ಗದ್ದಿಗೆಗೆ ಪೂಜೆ ಸಲ್ಲಿಸಿದರು. ಲಗ್ನ ಪತ್ರಿಕೆ ಪೂಜೆ ಮಾಡಿಸಿದರು. ಬಳಿಕ ಸಿದ್ದಗಂಗಾ ಮಠಾಧ್ಯಕ್ಷ ಸಿದ್ದಲಿಂಗ ಸ್ವಾಮಿಗಳ ಆಶೀರ್ವಾದ ಪಡೆದರು. ಈ ವೇಳೆ ಸ್ನೇಹಿತರು ಜೊತೆಗಿದ್ದರು.

ಇದೇ ಫೆ.16ಕ್ಕೆ ವೈದ್ಯೆ ಧನ್ಯತಾ ಅವರೊಂದಿಗೆ ಸ್ಯಾಂಡಲ್‌ವುಡ್ ನಟ ಡಾಲಿ ಧನಂಜಯ್ ಹಸೆಮಣೆ ಏರಲಿದ್ದಾರೆ. ಕಳೆದ ವರ್ಷ ನ.17 ರಂದು ವೈದ್ಯೆಯೊಂದಿಗೆ ಸರಳವಾಗಿ ನಟ ನಿಶ್ಚಿತಾರ್ಥ ಮಾಡಿಕೊಂಡಿದ್ದರು.

ಮಾಜಿ ಪಿಎಂ ಹೆಚ್.ಡಿ.ದೇವೇಗೌಡ, ಮಾಜಿ ಸಿಎಂ ಯಡಿಯೂರಪ್ಪ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಅನೇಕ ಗಣ್ಯರಿಗೆ ನಟ ವಿವಾಹಕ್ಕೆ ಆಹ್ವಾನ ನೀಡಿದ್ದಾರೆ. ಮೈಸೂರಿನಲ್ಲಿ ಮದುವೆ ಸಮಾರಂಭ ನಡೆಯಲಿದೆ.

## ಟೀಮ್ ಇಂಡಿಯಾಗೆ 4 ರನ್ ಗಳ ಮುನ್ನಡೆ

# ಆಸ್ಟ್ರೇಲಿಯಾ ಆಲೌಟ್

ಸಿಡ್ನಿ ಕ್ರಿಕೆಟ್ ಗ್ರೌಂಡ್ ನಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯಾ ವಿರುದ್ಧದ 5ನೇ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್ ನಲ್ಲಿ ಟೀಮ್ ಇಂಡಿಯಾ ಬೌಲರ್ ಗಳು ಪರಾಕ್ರಮ ಮೆರೆದಿದ್ದಾರೆ. ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಭಾರತ ತಂಡ 185 ರನ್ ಗಳಿಗೆ ಆಲೌಟ್ ಆದರೆ, ಅತ್ತ ಆಸ್ಟ್ರೇಲಿಯಾ ತಂಡವು ಮೊದಲ ಇನಿಂಗ್ಸ್ ನಲ್ಲಿ 181 ರನ್ ಬಾರಿಸಿ ಸರ್ವಪತನ ಕಂಡಿದೆ. ಈ ಮೂಲಕ ಭಾರತ ತಂಡವು ಮೊದಲ ಇನಿಂಗ್ಸ್ ನಲ್ಲಿ 4 ರನ್ ಗಳ ಮುನ್ನಡೆ ಪಡೆದುಕೊಂಡಿದೆ.

ಶುಕ್ರವಾರ ಶುರುವಾದ ಈ ಪಂದ್ಯದಲ್ಲಿ ಟಾಸ್ ಗೆದ್ದ ಭಾರತ ತಂಡದ ನಾಯಕ ಜಸ್ ಪ್ರೀತ್ ಬುಮ್ರಾ ಬ್ಯಾಟಿಂಗ್ ಆಯ್ದುಕೊಂಡಿದ್ದರು. ಅದರಂತೆ ಇನಿಂಗ್ಸ್ ಆರಂಭಿಸಿದ ಟೀಮ್ ಇಂಡಿಯಾ ನಿರೀಕ್ಷಿತ ಪ್ರದರ್ಶನ ನೀಡಿರಲಿಲ್ಲ.



ಭಾರತ ತಂಡದ ಅಗ್ರ ಕ್ರಮಾಂಕದ ಬ್ಯಾಟರ್ ಗಳಾದ ಯಶಸ್ವಿ ಜೈಸ್ವಾಲ್ (10), ಕೆಎಲ್ ರಾಹುಲ್ (4), ಶುಭ್ ಮನ್ ಗಿಲ್ (20) ಹಾಗೂ ವಿರಾಟ್ ಕೊಹ್ಲಿ (17) 72 ರನ್ ಆಗುವಷ್ಟರಲ್ಲಿ ವಿಕೆಟ್ ಒಪ್ಪಿಸಿದ್ದರು.

ಈ ಹಂತದಲ್ಲಿ ಕಣಕ್ಕಿಳಿದ ರಿಷಭ್ ಪಂತ್ 40 ರನ್ ಬಾರಿಸಿದರೆ, ರವೀಂದ್ರ ಜಡೇಜಾ 26 ರನ್ ಗಳ ಕೊಡುಗೆ ನೀಡಿದರು. ಆದರೆ ಆ ಬಳಿಕ ಬಂದ ನಿತೀಶ್ ರೆಡ್ಡಿ (0) ಶೂನ್ಯಕ್ಕೆ ಔಟಾದರೆ, ವಾಷಿಂಗ್ಟನ್ ಸುಂದರ್ 14 ರನ್ ಗಳಿಸಲಷ್ಟೇ ಶಕ್ತರಾದರು. ಇದಾಗ್ಯೂ ಕೆಳ ಕ್ರಮಾಂಕದಲ್ಲಿ ಜಸ್ ಪ್ರೀತ್ ಬುಮ್ರಾ 22 ರನ್ ಬಾರಿಸಿ ತಂಡದ ಮೊತ್ತವನ್ನು 185 ಕ್ಕೆ ತಂದು ನಿಲ್ಲಿಸಿದರು.

**ಆಸ್ಟ್ರೇಲಿಯಾ ಪ್ರಥಮ ಇನಿಂಗ್ಸ್:** ಟೀಮ್ ಇಂಡಿಯಾ ಆಲೌಟ್ ಆದ ಬೆನ್ನಲ್ಲೇ ಪ್ರಥಮ ಇನಿಂಗ್ಸ್ ಆರಂಭಿಸಿದ ಆಸ್ಟ್ರೇಲಿಯಾ ತಂಡಕ್ಕೆ ಜಸ್ ಪ್ರೀತ್ ಬುಮ್ರಾ ಆರಂಭಿಕ ಆಘಾತ ನೀಡಿದ್ದರು. ಮೊದಲ ದಿನದಾಟದಲ್ಲೇ ಉಸ್ಮಾನ್ ಖ್ವಾಜಾ (2) ರನ್ನು ಔಟ್ ಮಾಡಿದ ಬುಮ್ರಾ ದ್ವಿತೀಯ ದಿನದಾಟದ ಆರಂಭದಲ್ಲೇ ಮಾರ್ನಸ್ ಲಾಬುಶೇನ್ (2) ವಿಕೆಟ್ ಪಡೆದರು.

ಈ ಹಂತದಲ್ಲಿ ಬುಮ್ರಾಗೆ ಉತ್ತಮ ಸಾಥ್ ನೀಡಿದ ಮೊಹಮ್ಮದ್ ಸಿರಾಜ್, ಸ್ಯಾಮ್ ಕೊನ್ ಸ್ಟಾಸ್ (23) ಹಾಗೂ ಟ್ರಾವಿಸ್ ಹೆಡ್ (4) ವಿಕೆಟ್ ಕಬಳಿಸಿದರು. ಇದರ ನಡುವೆ ಪ್ರಸಿದ್ಧ್ ಕೃಷ್ಣ, ಸ್ಟೀವ್ ಸ್ಮಿತ್ (33) ವಿಕೆಟ್ ಪಡೆದರು.

ಈ ವೇಳೆ ಬ್ಯಾಟಿಂಗ್ ಗೆ ಇಳಿದ ಬ್ಯೂ ವೆಬ್ ಸ್ಟರ್ ಜವಾಬ್ದಾರಿಯುತ ಬ್ಯಾಟಿಂಗ್ ನೊಂದಿಗೆ ಅರ್ಧಶತಕ ಪೂರೈಸಿದರು. ಆದರೆ ಮತ್ತೊಂದೆಡೆ ಅಲೆಕ್ಸ್ ಕ್ಯಾರಿ (21) ಯನ್ನು ಬೌಲ್ಡ್ ಮಾಡಿದ ಪ್ರಸಿದ್ಧ್ ಕೃಷ್ಣ ಭಾರತಕ್ಕೆ ಮತ್ತೊಂದು ಯಶಸ್ಸು ತಂದುಕೊಟ್ಟರು.

ಇನ್ನು ಪ್ಯಾಟ್ ಕಮಿನ್ಸ್ (10) ಹಾಗೂ ಮಿಚೆಲ್ ಸ್ಟಾರ್ಕ್ (1) ವಿಕೆಟ್ ಕಬಳಿಸುವ ಮೂಲಕ ನಿತೀಶ್ ಕುಮಾರ್ ರೆಡ್ಡಿ ಆಸ್ಟ್ರೇಲಿಯಾಗೆ ಬ್ಯಾಕ್ ಟು ಬ್ಯಾಕ್ ಆಘಾತ ನೀಡಿದ್ದರು. ಇದಾಗ್ಯೂ ಒಂದೆಡೆ ಕ್ರೀಸ್ ಕಚ್ಚಿ ನಿಂತಿದ್ದ ಬ್ಯೂ ವೆಬ್ ಸ್ಟರ್ (57) ರನ್ನು ಔಟ್ ಮಾಡುವಲ್ಲಿ ಕೊನೆಗೂ ಪ್ರಸಿದ್ಧ್ ಕೃಷ್ಣ ಯಶಸ್ವಿಯಾದರು.

ಅಂತಿಮವಾಗಿ ಸ್ಕಾಟ್ ಬೋಲ್ಯಾಂಡ್ (9) ರನ್ನು ಮೊಹಮ್ಮದ್ ಸಿರಾಜ್ ಕ್ಲೀನ್ ಬೌಲ್ಡ್ ಮಾಡಿದರು. ಇದರೊಂದಿಗೆ ಆಸ್ಟ್ರೇಲಿಯಾ ತಂಡವು ಮೊದಲ ಇನಿಂಗ್ಸ್ ನಲ್ಲಿ 181 ರನ್ ಗಳಿಗೆ ಆಲೌಟ್ ಆಗಿದೆ.

ಟೀಮ್ ಇಂಡಿಯಾ ಪರ ಕನ್ನಡಿಗ ಪ್ರಸಿದ್ಧ್ ಕೃಷ್ಣ ಹಾಗೂ ಮೊಹಮ್ಮದ್ ಸಿರಾಜ್ ತಲಾ 3 ವಿಕೆಟ್ ಪಡೆದರೆ, ನಿತೀಶ್ ಕುಮಾರ್ ರೆಡ್ಡಿ ಹಾಗೂ ಜಸ್ ಪ್ರೀತ್ ಬುಮ್ರಾ ತಲಾ 2 ವಿಕೆಟ್ ಕಬಳಿಸಿ ಮಿಂಚಿದ್ದಾರೆ.

# ಕಾಂಗ್ರೆಸ್‌ನವರು ಬರೀ ಸುಳ್ಳು ಹೇಳ್ತಾರೆ, ನಿರ್ಲಜ್ಜರು

**ಹುಬ್ಬಳ್ಳಿ:** ಕರ್ನಾಟಕದಲ್ಲಿ ಗ್ಯಾರಂಟಿಗಳ ಹೆಸರಿನಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂತು. ಆದರೆ ಈಗ ನಿತ್ಯದ ಜೀವನಕ್ಕೆ ಬೇಕಾದ ಎಲ್ಲ ದರಗಳು ಹೆಚ್ಚಾಗಿವೆ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ವಾಗ್ದಾಳಿ ನಡೆಸಿದರು. ಕೆಎಸ್ ಆರ್‌ಟಿಸಿ ಬಸ್ ಟಿಕೆಟ್ ದರ ಹೆಚ್ಚಳ ಖಂಡಿಸಿ ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ದೇಶದಲ್ಲಿ ಸುಳ್ಳು ಗ್ಯಾರಂಟಿ ಕೊಟ್ಟಿತ್ತು. ಅದು ಈಗ ಎಕ್ಸ್‌ಪೋಸ್ ಆಗುತ್ತಿದೆ. ಉಚಿತ ವಿದ್ಯುತ್ ಎಂದರು, ಈಗ ವಿದ್ಯುತ್ ದರ ಹೆಚ್ಚಳವಾಗಿದೆ. ಕಾಕಾಸಾಹೇಬ್ ಪಾಟೀಲ್, ಮಹದೇವಪ್ಪ ನಿನಗೂ ಫ್ರೀ ಅಂದರು. ಹಾಲು, ಪೆಟ್ರೋಲ್, ಡಿಸೇಲ್‌ಗೆ ಸೆಸ್ ಹಾಕಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಆಸ್ತಿ ನೋಂದಣಿ ದರ ಹೆಚ್ಚಳವಾಗಿದೆ. ಮದ್ಯದ ದರ ಹೆಚ್ಚಳವಾಗಿದೆ. ಈಗ ಸರ್ಕಾರ ಬಸ್ ಟಿಕೆಟ್ ದರ ಕೂಡ ಹೆಚ್ಚಳ ಮಾಡಿದೆ. ಹಿಮಾಚಲ ಪ್ರದೇಶದಲ್ಲಿ ಗ್ಯಾರಂಟಿಗಳನ್ನು ನಿಲ್ಲಿಸಲು ಹೊರಟಿದ್ದಾರೆ. ಅಧಿಕಾರಕ್ಕಾಗಿ ಯಾವ ಕೀಳುಮಟ್ಟಕ್ಕೂ ಇಳಿಯಲು ಕಾಂಗ್ರೆಸ್‌ನವರು ಹಿಂದೆ ಸರಿಯಲ್ಲ. ಕಾಂಗ್ರೆಸ್ ನವರು ಬರೀ ಸುಳ್ಳು ಹೇಳುತ್ತಾರೆ, ನಿರ್ಲಜ್ಜರು ಎಂದು ವಾಗ್ದಾಳಿ ನಡೆಸಿದರು.

**ಕಾಂಗ್ರೆಸ್ ಸರ್ಕಾರದ ಬಳಿ ಸಂಬಳ ನೀಡಲು ಹಣವಿಲ್ಲ:** ಸಾರಿಗೆ ಸಂಸ್ಥೆ 2,000 ಕೋಟಿ ರೂಪಾಯಿ



ಸಾಲ ಮಾಡುವ ಹಂತಕ್ಕೆ ಬಂದಿದೆ. ಕಾಂಗ್ರೆಸ್ ಸರ್ಕಾರದಲ್ಲಿ ನೌಕರರಿಗೆ ಸಂಬಳ ನೀಡಲು ಹಣ ಇಲ್ಲ. ಸಿದ್ದರಾಮಯ್ಯ ಸರ್ಕಾರ ದಿವಾಳಿ ಆಗಿದೆ ಎಂದು ಜೋಶಿ ವಾಗ್ದಾಳಿ ನಡೆಸಿದರು.

**ಬಿಜೆಪಿ ಪ್ರತಿಭಟನೆ:** ಕೆಎಸ್‌ಆರ್‌ಟಿಸಿ ಬಸ್ ದರವನ್ನು ಶೇಕಡ 15ರಷ್ಟು ಹೆಚ್ಚಿಸುವ ಪ್ರಸ್ತಾವನೆಗೆ ಕರ್ನಾಟಕ ಸಚಿವ ಸಂಪುಟ ಗುರುವಾರ ಅನುಮೋದನೆ ನೀಡಿತ್ತು. ಇದನ್ನು ಪ್ರತಿಪಕ್ಷ ಬಿಜೆಪಿ ಖಂಡಿಸಿದೆ. ಅಲ್ಲದೆ, ರಾಜ್ಯದಾದ್ಯಂತ ಇಂದು ಪ್ರತಿಭಟನೆ ನಡೆಸುತ್ತಿದೆ. ಬೆಂಗಳೂರಿನಲ್ಲಿ ಪ್ರತಿಭಕ್ಷ ನಾಯಕ ಆರ್ ಅಶೋಕ್ ನೇತೃತ್ವದಲ್ಲಿ ತೀವ್ರ ಪ್ರತಿಭಟನೆ ನಡೆಯಿತು.

ಈ ಮಧ್ಯೆ, ಸರ್ಕಾರಿ ಬಸ್ ಟಿಕೆಟ್ ದರ ಏರಿಕೆಗೆ ಸಾರ್ವಜನಿಕ ವಲಯದಿಂದ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ. ಹೆಣ್ಣು ಮಕ್ಕಳಿಗೆ ಉಚಿತ ಉಚಿತ ಎಂದುಕೊಂಡು, ಗಂಡಸರ ಜೇಬಿಗೆ ಸರ್ಕಾರ ಕತ್ತರಿ ಹಾಕುತ್ತಿದೆ ಎಂದು ಪ್ರಯಾಣಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಸ್ವೇಚ್ಛಾಚಾರದ ಸರ್ಕಾರ: ಕುಮಾರಸ್ವಾಮಿ:** ದರ ಏರಿಕೆ ಬಗ್ಗೆ ಪ್ರತಿಕ್ರಿಯಿಸಿದ ಮತ್ತೊಬ್ಬ ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ, ಬೆಲೆ ಏರಿಕೆಗೆ ಸಿದ್ಧರಾಗಿ ಎಂಬ ಬಗ್ಗೆ ಸರ್ಕಾರ ಈಗಾಗಲೇ ಸೂಚನೆ ಕೊಟ್ಟಿದೆ. ಹಲವಾರು ಬಾರಿ ಬೆಲೆ ಏರಿಕೆ ಮಾಡಿದೆ. ಜನರು ಕೂಡ ಅಷ್ಟೇ, ಒಂದೆರಡು ದಿನ ವಿರೋಧ ವ್ಯಕ್ತಪಡಿಸಿ ಮರೆತುಬಿಡುತ್ತಾರೆ ಎಂದಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸರ್ಕಾರ ಇದೆ ಎಂಬುದೇ ಅನಿಸುತ್ತಿಲ್ಲ. ಸ್ವೇಚ್ಛಾಚಾರವಾಗಿ ಆಡಳಿತ ನಡೆಯುತ್ತಿದೆ. ಹೇಳೋರು ಕೇಳೋರು ಯಾರು ಇಲ್ಲ ಎಂಬ ಸ್ಥಿತಿ ನಿರ್ಮಾಣವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಏನು ಮಾಡಬೇಕೆಂದು ನನಗೆ ಗೊತ್ತಿದೆ

# ನಿವೃತ್ತಿಯಾಗುತ್ತಿಲ್ಲ ಎಂದ ರೋಹಿತ್ ಶರ್ಮಾ

ಟೀಮ್ ಇಂಡಿಯಾ ನಾಯಕ ರೋಹಿತ್ ಶರ್ಮಾ ಅವರ ಟೆಸ್ಟ್ ಕೆರಿಯರ್ ಖತಂ ಎಂಬ ಸುದ್ದಿಗಳ ನಡುವೆ ಹಿಟ್ ಮ್ಯಾನ್ ನೀಡಿರುವ ಹೇಳಿಕೆ ಇದೀಗ ಭಾರೀ ಚರ್ಚೆಗೆ ಕಾರಣವಾಗಿದೆ. ಅದು ಸಹ ನಾನು ನಿವೃತ್ತಿಯಾಗುತ್ತಿಲ್ಲ ಎಂದು ಬಹಿರಂಗವಾಗಿ ಹೇಳಿಕೆ ನೀಡುವ ಮೂಲಕ ಎಂಬುದು ವಿಶೇಷ. ಸಿಡ್ನಿ ಟೆಸ್ಟ್ ಪಂದ್ಯದಿಂದ ಹೊರಗುಳಿದಿರುವ ರೋಹಿತ್ ಶರ್ಮಾ 2ನೇ ದಿನದಾಟದ ಭೋಜನಾ ವಿರಾಮದ ವೇಳೆಗೆ ಸ್ಟಾರ್ ಸ್ಪೋರ್ಟ್ಸ್ ಚಾನೆಲ್ ಜೊತೆ ಚಿಟ್ ಚಾಟ್ ನಡೆಸಿದ್ದರು. ಈ ವೇಳೆ ಮಾತನಾಡಿದ ರೋಹಿತ್ ಶರ್ಮಾ, ಸಿಡ್ನಿ ಟೆಸ್ಟ್ ಪಂದ್ಯದಿಂದ ಹೊರಗುಳಿಯುವ ನಿರ್ಧಾರವನ್ನು ನಾನೇ ಖುದ್ದು ತೆಗೆದುಕೊಂಡಿದ್ದು. ಏಕೆಂದರೆ ನನ್ನ ಬ್ಯಾಟ್ ಈಗ ಸದ್ದು ಮಾಡುತ್ತಿಲ್ಲ ಎಂಬುದು ನನಗೆ ಚೆನ್ನಾಗಿ ಗೊತ್ತಿದೆ.



ನಾನು 2 ಮಕ್ಕಳ ತಂದೆ, ಹಾಗಾಗಿ ನಾನು ಸಹ ಸಂವೇದನಾಶೀಲ, ಪ್ರಬುದ್ಧ, ಯಾವಾಗ ಏನು ಮಾಡಬೇಕೆಂದು ನನಗೆ ತಿಳಿದಿದೆ. ಔಟ್ ಆಫ್ ಫಾರ್ಮ್ ನಲ್ಲಿರುವ ನಾನು ಇಂತಹ ಮಹತ್ವದ ಪಂದ್ಯವನ್ನು ಆಡಬಾರದು. ಆಡಲು ಅವಕಾಶ ಸಿಗಬಾರದು. ಹೀಗಾಗಿ ಸಿಡ್ನಿ ಟೆಸ್ಟ್ ಪಂದ್ಯದಿಂದ ಹೊರಗುಳಿಯಲು ನಿರ್ಧರಿಸಿದೆ ಎಂದು ರೋಹಿತ್ ಶರ್ಮಾ ಹೇಳಿದ್ದಾರೆ. ನಾನು ಸಿಡ್ನಿ ಟೆಸ್ಟ್ ಪಂದ್ಯದಿಂದ ಮಾತ್ರ ಹೊರಗುಳಿದಿದ್ದೇನೆ. ನನ್ನ ಟೆಸ್ಟ್ ಕೆರಿಯರ್ ಅನ್ನು ಅಂತ್ಯಗೊಳಿಸಿಲ್ಲ. ಈಗ ರನ್‌ಗಳು ಬರುತ್ತಿಲ್ಲ ನಿಜ. ಆದರೆ 5 ತಿಂಗಳು ಕಳೆದರೂ ಬರುವುದಿಲ್ಲ ಎಂಬುದನ್ನು ನಾನು ನಂಬಲ್ಲ. ನಾನಂತು ಕಠಿಣ ಅಭ್ಯಾಸ ಮಾಡುತ್ತೇನೆ. ಈ ಮೂಲಕ ಫಾರ್ಮ್ ಗೆ ಮರಳಲಿದ್ದೇನೆ ಎಂದು ರೋಹಿತ್ ಶರ್ಮಾ ಹೇಳಿದ್ದಾರೆ.

## ಬಸ್ ಟಿಕೆಟ್ ದರ ಏರಿಕೆ

# ಸರ್ಕಾರದ ವಿರುದ್ಧ ಅಶೋಕ್ ಆಕ್ರೋಶ

**ಬೆಂಗಳೂರು:** ನಾಲ್ಕು ನಿಗಮಗಳ ಪ್ರಯಾಣ ದರ ಏರಿಕೆ ಖಂಡಿಸಿ, ಬೆಂಗಳೂರಿನ ಮೆಜೆಸ್ಟಿಕ್ ಬಸ್ ನಿಲ್ದಾಣದಲ್ಲಿ ವಿಪಕ್ಷ ನಾಯಕ ಆರ್.ಅಶೋಕ್ ಪ್ರಯಾಣಿಕರಿಗೆ ಗುಲಾಬಿ ಹೂ ನೀಡಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ.

ಈ ವೇಳೆ ಮಾತನಾಡಿದ ಅವರು, ಬಡವರಿಗೆ ಬಿಜೆಪಿ ಫ್ರೀ ಕೊಟ್ಟಿರಲಿಲ್ಲ. ಕಾಂಗ್ರೆಸ್ ಫ್ರೀ ಕೊಟ್ಟು ದರ ಏರಿಕೆ ಮಾಡಿದೆ. ಹಾಲಿನಲ್ಲಿ ಕಲ್ಲು ಹಾಕಿದ ದುರುಳರು ಇವರು. ಮದ್ಯದ ದರವೂ ಏರಿಕೆ ಮಾಡಿದ್ದೀರಿ. ವಿದ್ಯುತ್, ನೋಂದಣಿ ದರವೂ ಏರಿಕೆ ಮಾಡಿದ್ದೀರಿ. ಈ ಸರ್ಕಾರ ಎಲ್ಲದಕ್ಕೂ ಟ್ಯಾಕ್ಸ್ ಹಾಕಿದೆ. ಬಸ್ ದರ ಏರಿಕೆ ಮೂಲಕ ಬಡ ಜನರಿಗೆ ಸಿಎಂ ಒಳ್ಳೆದು ಮಾಡಿದ್ದಾರೆ. ನಾವು ಪ್ರಯಾಣಿಕರಿಗೆ ಗುಲಾಬಿ ಕೊಡುತ್ತೇವೆ. ನಮ್ಮನ್ನು ಕ್ಷಮಿಸಿ ಬಿಡಿ ಎಂದು ಗುಲಾಬಿ ಕೊಡುತ್ತೇವೆ. ಕಂದಾಯ, ಮನೆ ಬಾಡಿಗೆ ಎಲ್ಲವೂ ದರ ಏರಿಕೆಯಾಗಿದೆ. ನಾನು ಸಾರಿಗೆ ಸಚಿವ ಇದ್ದಾಗ 1 ಸಾವಿರ ಕೋಟಿ ಲಾಭ ಇತ್ತು ಎಂದು ವಾಗ್ದಾಳಿ ನಡೆಸಿದರು.

ಇನ್ನು ಇದೇ ವೇಳೆ ಪ್ರಯಾಣಿಕರಿಗೆ ಹೂ ಕೊಡಲು ಹೋದಾಗ ಅಶೋಕ್ ಅವರನ್ನು ಪೊಲೀಸರು ತಡೆದಿದ್ದಾರೆ. ಈ ಸಂದರ್ಭ ಅಶೋಕ್ ಹಾಗೂ ಪೊಲೀಸರ ನಡುವೆ ಕೆಲಕಾಲ ವಾಗ್ವಾದ



ನಡೆಯಿತು. ಪೊಲೀಸ್ ದೌರ್ಜನ್ಯ ಬೇಡ. ರೈಟಿಂಗ್ ನಲ್ಲಿ ಪ್ರತಿಭಟನೆ ಮಾಡಬಾರದು ಎಂದು ಕೊಡಿ. ಸರ್ಕಾರ ಇದೇ ಇರೋದಿಲ್ಲ. ನಾಟಕ ಆಡುತ್ತಿದ್ದೀರಾ ನೀವು ಎಂದು ಪೊಲೀಸರಿಗೆ ಎಚ್ಚರಿಕೆ ನೀಡಿದರು. ಈ ವೇಳೆ ಅಶೋಕ್ ಜೊತೆ ಬಿಜೆಪಿ ನಾಯಕರು, ಕಾರ್ಯಕರ್ತರು ಉಪಸ್ಥಿತರಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com